ಸಂಪುಟ: 21, ಸಂಚಿಕೆ: 333, ಪುಟಗಳು: 8, ಮಂಗಳವಾರ, 10 ಸೆಪ್ಟೆಂಬರ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ಸುಭಾಷಿತ

ಕ್ಷಮಿಸುವುದರಿಂದ ಮನಸ್ಸಿಗೆ ನೆಮ್ಮದಿ ಸಿಗುತ್ತದೆ.

। ಗೌತಮ ಬುದ್ಧ

**ಪಂಚಾಂಗ**

(ಮಂಗಳವಾರ 10, ಸೆಪ್ಟೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು
- ಭಾದ್ರಪದ ಮಾಸ, ಶುಕ್ಲ ಪಕ್ಷ,
- ಸಪ್ತಮಿ, ಅನುರಾಧ ನಕ್ಷತ್ರ
- ರಾಹುಕಾಲ : 3:24 ರಿಂದ 4:56
- ಗುಳಿಕಕಾಲ : 12:20 ರಿಂದ 1:52
- ಯಮಗಂಡಕಾಲ: 9.16 ರಿಂದ 10.48




### ಬಗೆದಷ್ಟು ಬಯಲಾಗುತ್ತಿದೆ ಮಂಡ್ಯ ಭ್ರೂಣ ಪತ್ತೆ, ಹತ್ಯೆ ಪ್ರಕರಣ

# ಮತ್ತೆ ಮೂವರು ಅರೆಸ್ಟ್

**ಮಂಡ್ಯ:** ಮಂಡ್ಯ ಜಿಲ್ಲೆಯಲ್ಲಿ ಬೆಳಕಿಗೆ ಬಂದಿದ್ದ ಹೆಣ್ಣುಭ್ರೂಣ ಪತ್ತೆ ಹಾಗೂ ಹತ್ಯೆ ಪ್ರಕರಣ ಇಡೀ ರಾಜ್ಯವನ್ನೇ ಬೆಚ್ಚಿಬೀಳಿವಂತೆ ಮಾಡಿತ್ತು. ಹೆಣ್ಣುಭ್ರೂಣ ಹತ್ಯೆಯ ಕರಾಳ ದಂಧೆಯ ಅನೇಕ ಸಂಗತಿಗಳು ಬಗೆದಷ್ಟು ಬಯಲಾಗುತ್ತಲೇ ಇದೆ. ಭ್ರೂಣಲಿಂಗ ಪತ್ತೆ ಹಾಗೂ ಹತ್ಯೆ ಪ್ರಕರಣದಲ್ಲಿ ಮತ್ತೆ ಮೂವರು ಆರೋಪಿಗಳನ್ನು ಮಂಡ್ಯ ಪೊಲೀಸರು ಬಂಧಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ 15 ಜನರನ್ನ ಪೊಲೀಸರು ಅರೆಸ್ಟ್ ಮಾಡಿದ್ದು ಇದೀಗ ಮತ್ತೆ ಮೂವರು ಬಲೆಗೆ ಬಿದ್ದಿದ್ದಾರೆ.



ಈ ಮೂಲಕ ಬಂಧಿತರ ಸಂಖ್ಯೆ 18ಕ್ಕೆ ಏರಿಕೆಯಾಗಿದೆ. ಈ ಪ್ರಕರಣದಲ್ಲಿ ಇನ್ನು ಹಲವು ಆರೋಪಿಗಳು ಭಾಗಿಯಾಗಿರುವ ಬಗ್ಗೆ ಶಂಕೆ ವ್ಯಕ್ತಪಡಿಸಲಾಗಿತ್ತು. ತನಿಖೆ ಮುಂದುವರೆಸಿದ್ದ ಪೊಲೀಸರು ಈಗ ಮತ್ತೆ ಮೂವರನ್ನ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಪೊಲೀಸರಿಗೆ ಕಣ್ತಪ್ಪಿಸಿ ತಲೆಮರೆಸಿಕೊಂಡಿದ್ದ ಆರೋಪಿಗಳನ್ನು ಪತ್ತೆ ಮಾಡಿ ಬಂಧಿಸಲಾಗಿದೆ. ಬಂಧಿತರಿಂದ ಒಂದು ಕಾರು ವಶಕ್ಕೆ ಪಡೆಯಲಾಗಿದೆ.

ಪಾಂಡವಪುರ ತಾಲೂಕಿನ ಹಿರೇಮರಳಿ ಗ್ರಾಮದ ನವೀನ್, ಹರಳಹಳ್ಳಿಯ ಜಬ್ಬರ್‌ಬಾಬು, ಕೆ.ಆರ್.ನಗರದ ಶಂಕರ ಬಂಧಿತ ಆರೋಪಿಗಳು. ಮೇಲುಕೋಟೆ, ಪಾಂಡವಪುರ, ಬೆಳ್ಳೂರು ಠಾಣೆಗಳಲ್ಲಿ ಪ್ರಕರಣ ದಾಖಲಾಗಿದ್ದು ಮಂಡ್ಯ ಪೊಲೀಸರು ಮತ್ತಷ್ಟು ತನಿಖೆ ಮುಂದುವರಿಸಿದ್ದಾರೆ.

ಪುಟ 2

### ಚಿಕ್ಕಮಗಳೂರು ಅರಣ್ಯ ವಲಯದ ಹೋಂಸ್ಟೇ

# ರೆಸಾರ್ಟ್‌ಗಳಿಗೆ ಅರಣ್ಯ ಇಲಾಖೆ ನೋಟಿಸ್

**ಚಿಕ್ಕಮಗಳೂರು:** ಅಂಕೋಲಾದ ಶಿರೂರು, ಶಿರಾಡಿ ಘಾಟ ಭೂಕುಸಿತ ಹಾಗೂ ವಯನಾಡಿನ ದುರ್ಘಟನೆ ಬಳಿಕ ಎಚ್ಚೆತ್ತ ರಾಜ್ಯ ಸರ್ಕಾರ ಪಶ್ಚಿಮಘಟ್ಟ ಪ್ರದೇಶದಲ್ಲಿ ನಿರ್ಮಿಸಲಾಗಿರುವ ರೆಸಾರ್ಟ್ ಅಥವಾ ಹೋಂಸ್ಟೇಗಳಿಗೆ ನೋಟಿಸ್ ನೀಡಿದೆ. ಅನಧಿಕೃತವಾಗಿ ನಡೆಯುತ್ತಿರುವ ಹೋಂಸ್ಟೇ ಅಥವಾ ರೆಸಾರ್ಟ್ ಗಳನ್ನು ಪತ್ತೆ ಹಚ್ಚಲು ಮುಂದಾಗಿದೆ.

ಚಿಕ್ಕಮಗಳೂರು ಅರಣ್ಯ ವಲಯ ವ್ಯಾಪ್ತಿಯಲ್ಲಿನ ಮುಳ್ಳಯ್ಯನಗಿರಿ, ಇನಾಂ ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ, ಚಂದ್ರದ್ರೋಣ ಪರ್ವತದ ಸುತ್ತಮುತ್ತ ನಿರ್ಮಾಣವಾಗಿರುವ ಹೋಂಸ್ಟೇ, ರೆಸಾರ್ಟ್ ಮಾಲಿಕರು ತಮ್ಮ ಹೋಂಸ್ಟೇಗೆ ಸಂಬಂಧಿಸಿದ ಕಂದಾಯ ದಾಖಲಾತಿಗಳನ್ನು ಕಚೇರಿಗೆ ಸಲ್ಲಿಸುವಂತೆ ಡಿಎಫ್ ಒ ರಮೇಶ್ ಬಾಬು ಅವರು ನೋಟಿಸ್ ಹೊರಡಿಸಿದ್ದಾರೆ.

ಸಾಲು ಸಾಲು ದುರ್ಘಟನೆ ಬಳಿಕ ಎಚ್ಚತ್ತ ಅರಣ್ಯ ಇಲಾಖೆ




ಚಿಕ್ಕಮಗಳೂರು ಅರಣ್ಯ ವಲಯದಲ್ಲಿ ನಿರ್ಮಿಸಲಾಗಿರುವ ಅನಧಿಕೃತ ಹೋಂಸ್ಟೇ ಅಥವಾ ರೆಸಾರ್ಟ್‌ಗಳ ಸ್ಥಳ ಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿತ್ತು.

ಪುಟ 2

## ಸಂಕ್ಷಿಪ್ತ ಸುದ್ದಿ

### ಜಿಮ್ ಟ್ರೇನರ್ ಪ್ರಶಾಂತ್ ಪೂಜಾರಿ ಮೇಲಿನ ಹಲ್ಲೆ ಪ್ರಕರಣ; ಧ್ರುವ ಸರ್ಜಾ ಮ್ಯಾನೇಜರ್ ವಿಚಾರಣೆ



**ಬೆಂಗಳೂರು:** ಸ್ಯಾಂಡಲ್‌ವುಡ್‌ನಲ್ಲಿ ಒಂದಾದಮೇಲೆ ಒಂದರಂತೆ ಶಾಕಿಂಗ್ ಬೆಳವಣಿಗೆಗಳು ನಡೆಯುತ್ತಿವೆ. ಇತ್ತೀಚೆಗೆ ರೇಣುಕಾ ಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಹಾಗೂ ಅವರ ಆಪ್ತರು ಅರೆಸ್ಟ್ ಆದರು. ಈಗ ಜಿಮ್ ಟ್ರೈನರ್ ಪ್ರಶಾಂತ್ ಪೂಜಾರಿ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿ ಧ್ರುವ ಸರ್ಜಾ ಮ್ಯಾನೇಜರ್ ಅಶ್ವಿನ್ ಬಂಧನ ಆಗಿದೆ ಎನ್ನಲಾಗಿದೆ. ಬನಶಂಕರಿ ಪೊಲೀಸರು ಆರೋಪಿ ಅಶ್ವಿನ್‌ನ ಬಂಧಿಸಿದ್ದಾರೆ ಎನ್ನಲಾಗಿತ್ತು. ಆದರೆ, ಅವರು ಕಳೆದ ಕೆಲ ದಿನಗಳ ಹಿಂದೆ ವಿಚಾರಣೆ ಎದುರಿಸಿ ಬಂದಿದ್ದಾರೆ ಎನ್ನಲಾಗಿದೆ. ಮೇ.26 ರಂದು ರಾತ್ರಿ ಪ್ರಾಶಾಂತ್ ಪೂಜಾರಿ ಮೇಲೆ ಹಲ್ಲೆ ನಡೆದಿತ್ತು. ಹರ್ಷ ಮತ್ತು ಸುಭಾಷ್ ಎಂಬುವವರು ಪ್ರಶಾಂತ್ ಮೇಲೆ ಹಲ್ಲೆ ಮಾಡಿದ್ದರು.

ಪುಟ 2

### ಕ್ಲೈಮ್ಯಾಕ್ಸ್ ಹಂತದಲ್ಲಿ ಪ್ರಾಸಿಕ್ಯೂಷನ್ ವಾರ್! ಗುರುವಾರ ಏನಾಗಲಿದೆ ಸಿಎಂ ಭವಿಷ್ಯ?



**ಬೆಂಗಳೂರು:** ಮುಡಾ ಸೈಟ್ ಹಂಚಿಕೆ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯನವರಿಗೆ ಮತ್ತೆ ಮೂರು ದಿನ ರಿಲೀಫ್ ಸಿಕ್ಕಿದೆ. ಆದರೆ ಈ ಮೂರೇ ಮೂರು ದಿನದಲ್ಲಿ ಸಿಎಂ ಸಿದ್ದರಾಮಯ್ಯನವರ ಸೀಟಿನ ಭವಿಷ್ಯವೂ ನಿರ್ಧಾರವಾಗಲಿದೆ. ಏಕಂದರೆ ಆಗಸ್ಟ್ 31ರಂದು ವಿಚಾರಣೆ ಮುಂದೂಡಿದ್ದ ಹೈಕೋರ್ಟ್ ಮತ್ತೆ ರಾಜ್ಯಪಾಲರು ನೀಡಿದ್ದ ಪ್ರಾಸಿಕ್ಯೂಷನ್ ಅನುಮತಿಯ ಬಗೆಗಿನ ವಿಚಾರಣೆಯನ್ನು ಕೈಗೆತ್ತಿಕೊಂಡಿತ್ತು. ರಾಜ್ಯ ಸರ್ಕಾರದ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಹೈಕೋರ್ಟ್‌ನಲ್ಲಿ ಸಿಎಂ ಪರವಾಗಿ ವಾದ ಮಂಡಿಸಿದರು. ಬಳಿಕ ಅಭಿಷೇಕ್ ಮನು ಸಿಂಘ್ವಿ ಹಾಗೂ ಪ್ರೊ. ರವಿವರ್ಮಕುಮಾರ್ ಕೂಡ ಸಿಎಂ ಪರ ಮರುವಾದಕ್ಕೆ ಮನವಿ ಮಾಡಿದರು. ಆದರೆ, ಸೆಪ್ಟೆಂಬರ್ 12ಕ್ಕೆ ಎಲ್ಲರೂ ವಾದ ಮುಗಿಸಬೇಕು,

ಪುಟ 2

### 350ಕ್ಕೂ ಹೆಚ್ಚು ಪ್ರಭಾವಿ ಅಧಿಕಾರಿಗಳಿಗೆ ಸೈಟ್ ಹಂಚಿಕೆ ಆರೋಪ

# 18 ಅಧಿಕಾರಿಗಳಿಗೆ ನೋಟಿಸ್

**ಮೈಸೂರು:** 350ಕ್ಕೂ ಹೆಚ್ಚು ಪ್ರಭಾವಿ ಅಧಿಕಾರಿಗಳಿಗೆ ಮುಡಾ ನಿವೇಶನ ಹಂಚಿಕೆ ಆರೋಪ ಪ್ರಕರಣದಲ್ಲಿ ಮುಡಾದ 18 ಅಧಿಕಾರಿಗಳಿಗೆ ಮೈಸೂರು ಲೋಕಾಯುಕ್ತ ನೋಟಿಸ್ ನೀಡಿದೆ. ಮುಡಾ ಸೂಪರಿಂಟೆಂಡೆಂಟ್ ಇಂಜಿನಿಯರ್ ಕಾರ್ಯದರ್ಶಿ ಸೇರಿದಂತೆ 2017ರಲ್ಲಿ ಕರ್ತವ್ಯ ನಿರ್ವಹಿಸಿದ್ದ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ.

ಮೈಸೂರು ತಾಲೂಕಿನ ಹಿನಕಲ್ ಗ್ರಾ.ಪಂ. ವ್ಯಾಪ್ತಿಯಲ್ಲಿ ಸೈಟ್ ಹಂಚಿಕೆ ಮಾಡಲಾಗಿತ್ತು. ಹಿನಕಲ್ ಸರ್ವೇ ನಂಬರ್ 89ರಲ್ಲಿ ಅಧಿಕಾರಿಗಳಿಗೆ ನಿವೇಶನ ಹಂಚಿಕೆ ಮಾಡಲಾಗಿತ್ತು. ಮುಡಾದ 7.18 ಗುಂಟೆ ಜಮೀನಿನಲ್ಲಿ ನಿವೇಶನ ಮಾಡಿ 350ಕ್ಕೂ ಹೆಚ್ಚು ಪ್ರಭಾವಿ ಅಧಿಕಾರಿಗಳಿಗೆ ಹಂಚಿರುವ ಆರೋಪ ಕೇಳಿಬಂದಿದೆ.

ನಿವೇಶನ ಹಂಚಿಕೆ ಆರೋಪಕ್ಕೆ ಸಂಬಂಧಿಸಿ ಆರ್ ಟಿಐ ಕಾರ್ಯಕರ್ತ ಗಂಗರಾಜು 2017ರಲ್ಲಿ ದೂರು ನೀಡಿದ್ದರು. ಈ ಸಂಬಂಧ 2022ರಲ್ಲಿ ಮೈಸೂರು ಲೋಕಾಯುಕ್ತ ಪ್ರಕರಣ ದಾಖಲಿಸಿಕೊಂಡಿತ್ತು. ಸರ್ಕಾರದ ಅನುಮತಿ ಪಡೆದು ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು.

ಪುಟ 2




### ಎಸ್‌ಎಂವಿಟಿ ರೈಲು ನಿಲ್ದಾಣದಲ್ಲಿ ಹೊಸ ನಿಯಮ ಜಾರಿ ಪ್ರಯಾಣಿಕರಿಗೆ ಸಂಕಷ್ಟ

**ಬೆಂಗಳೂರು:** ಬೆಂಗಳೂರಿನ ಬೈಯ್ಯಪ್ಪನಹಳ್ಳಿ ರೈಲ್ವೆ ನಿಲ್ದಾಣಕ್ಕೆ ಪ್ರಯಾಣಿಕರನ್ನು ಇಳಿಸಲು ಮತ್ತು ಕರೆದುಕೊಂಡು ಹೋಗಲು ಬರುವ ವಾಹನಗಳು ಸೋಮವಾರದಿಂದ ಪಾರ್ಕಿಂಗ್ ಶುಲ್ಕ ಕಟ್ಟಲೇಬೇಕಾಗಿದೆ. ಸರ್ ಎಂ ವಿಶ್ವೇಶ್ವರಯ್ಯ ರೈಲ್ವೆ ನಿಲ್ದಾಣದಲ್ಲಿ ಇದೀಗ ಹೊಸ ನಿಯಮ ಜಾರಿಯಾಗಿದೆ. ನಿಲ್ದಾಣದ ಆವರಣದಲ್ಲಿ ಹತ್ತು ನಿಮಿಷಕ್ಕಿಂತ ಹೆಚ್ಚು ಕಾಲ ವಾಹನಗಳು ಇದ್ದರೆ ಪಾರ್ಕಿಂಗ್ ಹಣ ನೀಡಬೇಕು. ಹತ್ತು ನಿಮಿಷಗಳ ಒಳಗೆ ಪಿಕ್ ಅಪ್, ಡ್ರಾಪ್ ಮಾಡಿ ಹೋದರೆ ಯಾವುದೇ ಶುಲ್ಕವಿಲ್ಲ. ಹನ್ನೊಂದು ನಿಮಿಷ ಆದರೂ ಹಣ ಪಾವತಿ ಮಾಡಲೇಬೇಕು.



ಪುಟ 2

### ವೈದ್ಯಕೀಯ ಕಾಲೇಜಿನ ಲಿಫ್ಟ್‌ನಲ್ಲಿ

# ಕಿರಿಯ ವೈದ್ಯೆಗೆ ಕಿರುಕುಳ

**ರಾಂಚಿ:** ರಾಂಚಿಯ ವೈದ್ಯಕೀಯ ಕಾಲೇಜೊಂದರ ಲಿಫ್ಟ್ ನಲ್ಲಿ ವೈದ್ಯೆಗೆ ಕಿರುಕುಳ ನೀಡಿರುವ ಘಟನೆ ನಡೆದಿದೆ. ಜಾರ್ಖಂಡ್ ನ ರಾಂಚಿಯ ರಾಜೇಂದ್ರ ಇನ್ ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ನ ಆಂಕೋಲಜಿ ವಿಭಾಗದ ಕಿರಿಯ ವೈದ್ಯೆಯೊಬ್ಬರಿಗೆ ಕಿರುಕುಳ ನೀಡಲಾಗಿದೆ.

ಇತ್ತೀಚೆಗಷ್ಟೇ ಕೋಲ್ಕತ್ತಾ ಆರ್‌ಜಿಕರ್ ವೈದ್ಯಕೀಯ ಕಾಲೇಜು, ಆಸ್ಪತ್ರೆಯಲ್ಲಿ ವೈದ್ಯೆ ಮೇಲೆ ನಡೆದ ಅತ್ಯಾಚಾರ, ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ದೇಶಾದ್ಯಂತ ಪ್ರತಿಭಟನೆಗಳು ನಡೆಯುತ್ತಿವೆ. ಈಗ ಮತ್ತೊಂದು ಕಿರುಕುಳದ ಸುದ್ದಿ ವರದಿಯಾಗಿ ಎಲ್ಲರ ಆಕ್ರೋಶಕ್ಕೆ ಕಾರಣವಾಗಿದೆ. ಎಫ್‌ಐಆರ್ ದಾಖಲಾದ ಬಳಿಕ ಆರೋಪಿಯನ್ನು ಬಂಧಿಸಲಾಗಿದೆ.

ಘಟನೆ ಬಳಿಕ ವೈದ್ಯರು ಮುಷ್ಕರ ಘೋಷಿಸಿದರು, ಕಿರಿಯ ವೈದ್ಯರ ಸಂಘ (ಜೆಡಿಎ) ಮತ್ತು ರಿಮ್ಸ್ ಆಡಳಿತ ಮಂಡಳಿ ನಡುವೆ ಚರ್ಚೆಯ ನಂತರ, ಆಡಳಿತವು ವೈದ್ಯರಿಗೆ



ಹೆಚ್ಚಿನ ಭದ್ರತೆಯ ಭರವಸೆ ನೀಡಿದ ನಂತರ ಮುಷ್ಕರವನ್ನು ಹಿಂತೆಗೆದುಕೊಳ್ಳಲಾಯಿತು.

ಪ್ರತಿ ಲಿಫ್ಟ್‌ಗೆ ಲಿಫ್ಟ್ ಆಪರೇಟರ್‌ಗಳನ್ನು ನೇಮಿಸಲು ಮತ್ತು ಪ್ರತಿ ವಾರ್ಡ್‌ನಲ್ಲಿ ಸಶಸ್ತ್ರ ಪೊಲೀಸ್ ಅಧಿಕಾರಿಗಳನ್ನು ನಿಯೋಜಿಸಲು ಅವರು ಒಪ್ಪಿಕೊಂಡರು.

ಪುಟ 2

### ಬನಶಂಕರಿ ದೇವಸ್ಥಾನದ ಶಿವಪುರ

# ಗುಡ್ಡದಲ್ಲಿ ಇಸ್ಪೀಟ್ ದಂಧೆ

**ಬಾಗಲಕೋಟೆ:** ಬನಶಂಕರಿ ದೇವಿ ನಾಡಲ್ಲಿ ಜೂಜು ದಂಧೆ ಎಗ್ಗಿಲ್ಲದೇ ನಡೆಯುತ್ತಿದೆ. ಪ್ರತಿ ದಿನ ಹಾಡಹಗಲೇ 50 ಲಕ್ಷದಿಂದ ಕೋಟಿ ವರೆಗೆ ಇಸ್ಪೀಟ್ ಅಂದರ್ ಬಾಹರ್ ದಂಧೆ ನಡೆಯುತ್ತಿದೆ. ತಿಂಗಳ ಕಮೀಷನ್ ಪಡೆದು ಕಂಡು ಕಾಣದಂತೆ ಪೊಲೀಸರಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ನಾಡಿನ ಶಕ್ತಿಪೀಠಗಳಲ್ಲಿ ಒಂದಾದ ಬನಶಂಕರಿ ದೇವಿ ದೇವಸ್ಥಾನದ ಪಕ್ಕದಲ್ಲಿರುವ ಶಿವಪುರ ಗುಡ್ಡದಲ್ಲಿ ಜೂಜು ದಂಧೆ ನಡೆಯುತ್ತಿದೆ. ಪವಿತ್ರ ದೇವಸ್ಥಾನದ ದರ್ಶನಕ್ಕೆ ರಾಜ್ಯದ ಮೂಲೆ ಮೂಲೆಯಿಂದ ಭಕ್ತರು ಬರ್ತಾರೆ. ಆದರೆ ಇಂತಹ ಪವಿತ್ರ ಸ್ಥಾನದಲ್ಲಿ ಅವ್ಯಾಹತವಾಗಿ



ಜೂಜು ದಂಧೆ ನಡೆಯುತ್ತಿದೆ. ಗುಡ್ಡದಲ್ಲಿ ಒಂದು ಪೆಂಡಾಲ್ ಹಾಕಿ ಇಸ್ಪೀಟ್ ಆಡಿಸಲಾಗುತ್ತಿದೆ.

ಪುಟ 2

### ರೈಲ್ವೆ ಹಳಿ ಮೇಲೆ ಸಿಮೆಂಟ್ ಬ್ಲಾಕ್ ಕಿಡಿಗೇಡಿಗಳು

# ಮೈಲಿಗಲ್ಲಿಗೆ ಗುದ್ದಿದ ರೈಲು

**ರಾಜಸ್ಥಾನ:** ರಾಜಸ್ಥಾನದ ಅಜ್ಮೀರ್ ನಿಂದ ಅಹಮದಾಬಾದ್‌ಗೆ ಹೋಗುವ ಮಾರ್ಗದಲ್ಲಿ ರೈಲಿನ ಹಳಿ ತಪ್ಪಿಸುವ ಪ್ರಯತ್ನ ನಡೆದಿದೆ. ರೈಲ್ವೆ ಹಳಿ ಮೇಲಿದ್ದ ಸಿಮೆಂಟ್ ಬ್ಲಾಕ್ ಮೈಲಿಗಲ್ಲಿಗೆ ಗೂಡ್ಸ್ ರೈಲು ಡಿಕ್ಕಿ ಹೊಡೆದು ಹಳಿ ತಪ್ಪಿದೆ. ಕಾನ್ಪುರದಲ್ಲಿ ಭಾನುವಾರ ಕಾಳಿಂದಿ ಎಕ್ಸ್ ಪ್ರೆಸ್ ರೈಲನ್ನು ಹಳಿ ತಪ್ಪಿಸುವ ಯತ್ನವನ್ನು ಕಿಡಿಗೇಡಿಗಳು ನಡೆಸಿದ್ದರು, ಹಳಿ ಮೇಲೆ ಸಿಲಿಂಡರ್, ಪೆಟ್ರೋಲ್ ತುಂಬಿದ ಬಾಟಲಿಗಳು, ಗನ್ ಪೌಡರ್ ಸೇರಿದಂತೆ ಅಪಾಯಕಾರಿ ವಸ್ತುಗಳನ್ನು ಇರಿಸಲಾಗಿತ್ತು.

ರೈಲು ಸಿಲಿಂಡರ್ ಗೆ ಡಿಕ್ಕಿ ಹೊಡೆದ ಪರಿಣಾಮ ಅದು ಸ್ಫೋಟಗೊಂಡಿತ್ತು, ಆದರೆ ರೈಲಿಗಾಗಲಿ ಅಥವಾ ಪ್ರಯಾಣಿಕರಿಗಾಗಲಿ ಯಾವುದೇ ರೀತಿಯ ಸಮಸ್ಯೆಯಾಗಿರಲಿಲ್ಲ. ಲೋಕೊ ಪೈಲಟ್ ತುರ್ತು ಬ್ರೇಕ್ ಹಾಕಿದ್ದರಿಂದ ರೈಲು ಹಳಿಯಲ್ಲಿ ಅಡಚಣೆ ಉಂಟಾದ ಕಾರಣ ತಕ್ಷಣ ರೈಲ್ವೆ ಸಂರಕ್ಷಣಾ ಪಡೆ (ಆರ್‌ಪಿಎಫ್) ಗೆ ಎಚ್ಚರಿಕೆ ನೀಡಿ ಸಂಪೂರ್ಣ ತಪಾಸಣೆ ನಡೆಸಿದ ನಂತರ ದೊಡ್ಡ ರೈಲು ಅಪಘಾತವನ್ನು ತಪ್ಪಿಸಲಾಯಿತು.

ಅಜ್ಮೀರ್‌ನ ಫುಲೇರಾದಿಂದ ಗುಜರಾತ್‌ನ ಅಹಮದಾಬಾದ್‌ಗೆ ರೈಲು ಪ್ರಯಾಣಿಸುತ್ತಿದ್ದಾಗ



ಮಂಗಳವಾರ ನಸುಕಿನ ವೇಳೆ ಈ ಘಟನೆ ನಡೆದಿದೆ. ರೈಲು ಶಾರಧನ ನಿಲ್ದಾಣದ ಬಳಿ ಇದ್ದಾಗ ಇಂಜಿನ್ ಹಳಿಯಲ್ಲಿ ಯಾವುದೋ ವಸ್ತುವಿಗೆ ಡಿಕ್ಕಿ ಹೊಡೆದಿದೆ.

ತಪಾಸಣೆ ನಡೆಸಿದಾಗ, ರೈಲನ್ನು ಹಳಿತಪ್ಪಿಸುವ ಪ್ರಯತ್ನದಲ್ಲಿ 100 ಕಿಲೋಗ್ರಾಂಗಳಷ್ಟು ತೂಕದ ದೊಡ್ಡ ಕಾಂಕ್ರೀಟ್ ಬ್ಲಾಕ್ ನಿರ್ಮಿಸಲಾಗಿತ್ತು ಎಂಬುದು ತಿಳಿದುಬಂದಿದೆ. ಈ ಸಂಬಂಧ ಮಾಂಗಲ್ಯವಾಸ್ ಠಾಣೆಯಲ್ಲಿ ಆರ್‌ಪಿಎಫ್ ಅಪರಿಚಿತ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿದ್ದು, ಆರೋಪಿಗಳ ಪತ್ತೆಗೆ ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ.

### ದರ್ಶನ್ ಅಲ್ಲ, ರೇಣುಕಾ ಸ್ವಾಮಿ ಕೊಲೆಯಲ್ಲಿ ಪ್ರಮುಖ ಪಾತ್ರ ಇವನದ್ದೇ..

**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಹೆಸರು ಹೈಲೈಟ್ ಆಗುತ್ತಿದೆ. ನಟಿ ಪವಿತ್ರಾ ಗೌಡ ಈ ಪ್ರಕರಣದಲ್ಲಿ ಎ1 ಆರೋಪಿ ಆದರೂ ಅವರಿಗಿಂತ ಹೆಚ್ಚಾಗಿ ಚರ್ಚೆಯಲ್ಲಿ ಇರುವ ಹೆಸರು ದರ್ಶನ್ ಅವರದ್ದು. ಆದರೆ, ಈ ಪ್ರಕರಣದಲ್ಲಿ ರೇಣುಕಾಸ್ವಾಮಿ ಪತ್ತೆಯಿಂದ ಹತ್ಯೆವರೆಗೂ ಪ್ರತಿ ಹಂತದಲ್ಲೂ ಓರ್ವನ ಪಾತ್ರ ಹೆಚ್ಚಿದೆ.

ಪುಟ 2



### ದರ್ಶನ್ ರೀತಿಯೇ ಇರುತ್ತೀನಿ ಎಂದು

# ಪತ್ನಿ ಸಾವಿಗೆ ಕಾರಣನಾದ ದಾಸನ ಫ್ಯಾನ್

**ಬೆಂಗಳೂರು:** ಚಾಲೆಂಜಿಂಗ್ ಸ್ಟಾರ್ ದರ್ಶನ್, ರೇಣುಕಾಸ್ವಾಮಿ ಕೊಲೆ ಕೇಸ್ ನಲ್ಲಿ ಜೈಲು ಸೇರಿದ್ದಾರೆ. ಈ ಹಿಂದೆ ಹೆಂಡತಿಯ ಮೇಲೆ ಹಲ್ಲೆ ಮಾಡಿ ಜೈಲಿಗೆ ಹೋಗಿದ್ದ ದರ್ಶನ್ ಈಗ ಮತ್ತೆ ರೇಣುಕಾಸ್ವಾಮಿ ಅನ್ನೋನ ಕೊಲೆ ಮಾಡಿ ಜೈಲಿಗೆ ಹೋಗಿದ್ದಾರೆ. ದರ್ಶನ್‌ಗೆ ಲಕ್ಷಾಂತರ ಅಭಿಮಾನಿಗಳಿದ್ದು ಅದರಲ್ಲೊಬ್ಬ ಮುರ್ಖ ಅಭಿಮಾನಿ ಇದೀಗ ಹೆಂಡತಿಯ ಸಾವಿಗೆ ಕಾರಣನಾಗಿದ್ದಾನೆ. ಅನುಷಾ ಮೃತ ಮಹಿಳೆ. ಶ್ರೀ ಹರಿ ಆರೋಪಿ ಗಂಡ.

ನಾನು ದರ್ಶನ್ ರೀತಿಯೇ ಇರ್ತೀನಿ ಅಂತ ಹೇಳುತ್ತಿದ್ದ ಶ್ರೀ ಹರಿ ಇದೀಗ ಒಂದು ಸಾವಿಗೆ ಕಾರಣನ್ನಾಗಿದ್ದಾನೆ. ಬಾತ್ ರೂಮ್ ಗೆ ಹೋಗಿದ್ದ ಅನುಷಾ ಪೆಟ್ರೋಲ್ ಸುರಿದುಕೊಂಡು ಮೃತಪಟ್ಟಿದ್ದಾರೆ. ಸೆ. 7ರಂದು ಚಿಕಿತ್ಸೆ ಫಲಿಸದೆ ಅನುಷಾ ಮೃತಪಟ್ಟಿದ್ದಾರೆ. ಮೃತ ಅನುಷಾ ತಾಯಿ ತನ್ನ ಅಳಿಯನೇ ತನ್ನ ಮಗಳನ್ನ ಕೊಂದಿದ್ದಾನೆ ಎಂದು ಆರೋಪಿಸಿದ್ದಾರೆ. ಸದ್ಯ ಪೊಲೀಸರು ಆರೋಪಿ ಶ್ರೀ ಹರಿಯನ್ನು ಬಂಧಿಸಿದ್ದಾರೆ.



ಶಿರಸಿ ಮೂಲದ ಶ್ರೀ ಹರಿ ವರ್ಷಗಳ ಹಿಂದೆಯೇ ಬೆಂಗಳೂರಿಗೆ ಬಂದು ಐಟಿ ಕಂಪನಿಯಲ್ಲಿ ಕೆಲಸ ಮಾಡ್ತಿದ್ದ. ಇನ್ನು ಬಸವನಗುಡಿಯಲ್ಲಿ ಹೆತ್ತವರ ಜೊತೆ ವಾಸವಿದ್ದ ಅನುಷಾಳಿಗೆ ಹೆತ್ತವರು 5 ವರ್ಷದ ಹಿಂದೆಯೇ ಮಗಳಿಗೆ ಮದುವೆ ಮಾಡಬೇಕು ಅಂತ ಹುಡುಗನನ್ನ ಹುಡುಕುವಾಗ ಶ್ರೀಹರಿ ಸಿಕ್ಕಿದ್ದ. ಈ ಶ್ರೀ ಹರಿ ಅನುಷಾಳ ತಾಯಿಯ ಕಡೆಯ ಸಂಬಂಧಿ. ಹೇಗೂ ಒಳ್ಳೆ ಕೆಲಸದಲ್ಲಿದ್ದಾನೆ. ಒಳ್ಳೆ ಸಂಬಳ ಅಂತೆಲ್ಲಾ ಅಂದುಕೊಂಡು 5 ವರ್ಷದ ಹಿಂದೆ ಇಬ್ಬರಿಗೂ ಮದುವೆ ಮಾಡಲಾಗಿತ್ತು. ನಂತರ ಹುಳಿಮಾವುವಿನ ಅಕ್ಷಯನಗರದ ಅಪಾರ್ಟ್ ಮೆಂಟ್ ಒಂದರಲ್ಲಿ ಫ್ಲಾಟ್ ಖರೀದಿಸಿ ಗಂಡ ಹೆಂಡತಿ ವಾಸವಾಗಿದ್ರು. ಎಲ್ಲವೂ ಚೆನ್ನಾಗೇ ಇತ್ತು. ಎರಡು ವರ್ಷಗಳ ನಂತರ ಮಗು ಕೂಡ ಆಯ್ತು.

5 ವರ್ಷದ ಹಿಂದೆ ಅನುಷಾಳನ್ನ ಮದುವೆಯಾದ ಹರಿ ಆಕೆಯ ಕೈಗೆ ಒಂದು ಮಗುವನ್ನೂ ಕೊಟ್ಟ. ಆದ್ರೆ ಯಾವತ್ತೂ ಆ ಮಗುವನ್ನ ತಂದೆಯ ರೀತಿ ನೋಡಲೇ ಇಲ್ಲ. ಮಗುವನ್ನ ನೋಡಿಕೊಳ್ಳೋಕೆ ಅಂತಾನೇ ಅನುಷಾ ಹೆತ್ತವರನ್ನ ತನ್ನ ಮನೆಗೆ ಕರೆದುಕೊಂಡು ಬಂದು ಇರಿಸಿಕೊಂಡಿದ್ದಳು.

ಪುಟ 2

## ದೀಪಾವಳಿಯೊಳಗೆ ಕಾಂಗ್ರೆಸ್ ಸರ್ಕಾರ ಢಮಾರ್: ಸಿಟಿ ರವಿ



**ಹುಬ್ಬಳ್ಳಿ:** ದೀಪಾವಳಿ ಒಳಗಡೆ ಕಾಂಗ್ರೆಸ್ ಸರ್ಕಾರ ಢಮಾರ್ ಆಗೋದು ಪಕ್ಕಾ ಎಂದು ವಿಧಾನ ಪರಿಷತ್ ಸದಸ್ಯ ಸಿಟಿ ರವಿ ಭವಿಷ್ಯ ನುಡಿದಿದ್ದಾರೆ. ಸಿದ್ದರಾಮಯ್ಯ ಅವರ ಪಾಪದ ಕೊಡ ತುಂಬಿದೆ. ಕಾಂಗ್ರೆಸ್ ಈಗ ಟೈಮ್ ಬಾಂಬ್ ಫಿಕ್ಸ್ ಮಾಡಿದೆ. ಸಿದ್ದರಾಮಯ್ಯ ಜೊತೆಗೆ ಬಂಡೆಯಂತೆ ಜೊತೆಗಿರುತ್ತೇನೆ ಎನ್ನುತ್ತಿರುವವರೇ ಡೇಂಜರ್. ಡಿಕೆ ಶಿವಕುಮಾರ್ ಒಂದು ಬಾಂಬ್, ಪ್ರಿಯಾಂಕಾ ಖರ್ಗೆ, ಎಂಬಿ ಪಾಟೀಲ್ ಯಾವ ಯಾವ ಬಾಂಬ್ ಇಟ್ಟಿದ್ದಾರೆ ಅವರಿಗೆ ಕೇಳಬೇಕು ಎಂದರು. ಕಾಂಗ್ರೆಸ್ ಪಕ್ಷದ ಶಾಸಕರು, ಸಚಿವರು ಮತ್ತು ಮುಖಂಡರು ಸಿದ್ದರಾಮಯ್ಯ ರಾಜೀನಾಮೆಗೆ ಸಿದ್ಧತೆ ನಡೆಸಿದ್ದಾರೆ. ರಾಜೀನಾಮೆಗೆ ಸಮಯವನ್ನೂ ನಿಗದಿಪಡಿಸಿದ್ದಾರೆ. ಅದಕ್ಕೆ ಪೂರಕವಾಗಿ ಕೆಲವು ಸಚಿವರು ತಾವು ಸಹ ಮುಖ್ಯಮಂತ್ರಿ ಆಕಾಂಕ್ಷಿ ಎಂದು ಹೇಳಿಕೆ ನೀಡುತ್ತಿದ್ದಾರೆ ಎಂದು ತಿಳಿಸಿದರು. ವಿವಿಧ ಹಗರಣದಗಳು ಸರ್ಕಾರದ ವಿರುದ್ಧ ಕೇಳಿ ಬಂದಿವೆ ಹೀಗಾಗಿ ಬಹಳ ದಿನ ಸಿದ್ದರಾಮಯ್ಯ ಸಿಎಂ ಆಗಿ ಇರುವುದಿಲ್ಲ ಎಂದು ತಿಳಿಸಿದರು.

## 3 ಮಸೂದೆಗಳಿಗೆ ಅಂಕಿತ ಹಾಕಿದ ರಾಜ್ಯಪಾಲರು



**ಬೆಂಗಳೂರು:** ವಿಧಾನಮಂಡಲದಲ್ಲಿ ಅನುಮೋದನೆ ಪಡೆದಿದ್ದ 3 ವಿಧೇಯಕಗಳಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಂಕಿತ ಹಾಕಿದ್ದಾರೆ. ಕರ್ನಾಟಕ ಸಾರ್ವಜನಿಕ ಪರೀಕ್ಷಾ (ಭ್ರಷ್ಟಾಚಾರ) ವಿಧೇಯಕ, ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, ಕರ್ನಾಟಕ ಪುರಸಭೆಗಳು ಹಾಗೂ ಇತರೆ ಕಾನೂನು ವಿಧೇಯಕಕ್ಕೆ ರಾಜ್ಯಪಾಲರು ಸೋಮವಾರ ಸಹಿ ಹಾಕಿದ್ದಾರೆ. ಕೆಲವು ಸ್ಪಷ್ಟನೆ ಕೇಳಿ ವಿಧೇಯಕಗಳನ್ನು ರಾಜ್ಯಪಾಲರು ವಾಪಾಸ್ ಕಳುಹಿಸಿದ್ದರು. ಸರ್ಕಾರದ ಸ್ಪಷ್ಟನೆ ನಂತರ ವಿಧೇಯಕಗಳಿಗೆ ಅಂಕಿತ ಸಿಕ್ಕಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.11 ವಿಧೇಯಕಗಳ ಪೈಕಿ 3 ವಿಧೇಯಕಗಳಿಗೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ. ಇನ್ನೂ 8 ವಿಧೇಯಕಗಳಿಗೆ ರಾಜ್ಯಪಾಲರ ಅನುಮೋದನೆ ಪಡೆಯುವುದು ಬಾಕಿ ಇದೆ.

## ಕನ್ನಡ ಎಂ.ಎ ಪದವಿ ಪ್ರವೇಶಕ್ಕೆ ಅರ್ಜಿ ಆಹ್ವಾನ

2024–25 ನೇ ಸಾಲಿನ ಕನ್ನಡ ಸ್ನಾತಕೋತ್ತರ (ಎಂ.ಎ. ಕನ್ನಡ) ಎಂ.ಇ.ಎಸ್. ಕಲೆ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ಅರ್ಜಿ ಆಹ್ವಾನಿಸಿದೆ. ಯಾವುದೇ ಪದವಿಯಲ್ಲಿ ಶೇಕಡ 50 ಅಂಕಗಳನ್ನು ಗಳಿಸಿರುವವರು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಈ ಮೊಬೈಲ್ ನಂಬರ್‌ಗಳಿಗೆ ಕರೆ ಮಾಡಿ, ಸೋಮ ಶೇಖರಗೌಡ – 9731759771, ಹಾಗೂ ಡಾ.ರಾಮಕೃಷ್ಣಯ್ಯ ಎಂ. 81050933 50.

# ಪೂಜೆ ಹೆಸರಲ್ಲಿ ಇಡೀ ಗ್ರಾಮಕ್ಕೆ ಕೋಟಿ ಕೋಟಿ ಪಂಗನಾಮ ಹಾಕಿದ ಖದೀಮರು

**ವಿಜಯನಗರ:** ಪೂಜೆ ಹೆಸರಲ್ಲಿ ಖದೀಮರ ತಂಡದಿಂದ ಇಡೀ ಗ್ರಾಮಕ್ಕೆ ಕೋಟಿ ಕೋಟಿ ಹಣ ಪಂಗನಾಮ ಹಾಕಿರುವ ಘಟನೆ ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಕಲ್ಲಹಳ್ಳಿ ತಾಂಡಾದಲ್ಲಿ ಬೆಳಕಿಗೆ ಬಂದಿದೆ.

ಒಂದಲ್ಲ ಎರಡಲ್ಲ ಹತ್ತು ಪಟ್ಟು ಅಂದರೆ 1 ಲಕ್ಷಕ್ಕೆ 10 ಲಕ್ಷ ಹಣ ಮಾಡಿ ಕೊಡುತ್ತೇವೆ ಎಂದು ಹೇಳಿ ಖದೀಮರ ತಂಡ ಕಲ್ಲಹಳ್ಳಿ ತಾಂಡಾದ ಜನರಿಗೆ ಆರು ತಿಂಗಳಲ್ಲಿ ಒಂದೇ ಗ್ರಾಮದ 60ಕ್ಕೂ ಹೆಚ್ಚು ಜನರಿಂದ 2 ಕೋಟಿಗೂ ಅಧಿಕ ಹಣ ಲೂಟಿ ಮಾಡಿದ್ದಾರೆ.

ನಿಮಗೆ ಕಷ್ಟ ಇದೆಯಾ, ಆರು ತಿಂಗಳಲ್ಲಿ ನಿಮ್ಮ ಕಷ್ಟ ಪರಿಹಾರ ಮಾಡುತ್ತೇವೆ ಎಂದು ಬಣ್ಣ ಬಣ್ಣದ ಆಸೆ ತೋರಿಸಿ ಮನೆಗೆ ರಾತ್ರಿ ವೇಳೆ ಬಂದು ಪೂಜೆ ಮಾಡಿ ಹಣ ಇಡಲಾಗುತ್ತಿತ್ತು. ಮಾತ್ರವಲ್ಲದೇ ಎಲ್ಲರ ಮೊಬೈಲ್ ಫೋನ್ ಪ್ಲೈಟ್ ಮೂಡಿಗೆ ಹಾಕಿಸಿ, ಲೈಟ್ ಆಫ್ ಮಾಡಿ ಪೂಜೆ ಮಾಡುತ್ತೇವೆ ಎಂದು ಹೇಳುತ್ತಿದ್ದರು. ಕೊನೆಗೆ ಬಾಕ್ಸೊಂದರಲ್ಲಿ ಲಕ್ಷಾಂತರ ಹಣ ಇಟ್ಟು ಪ್ಯಾಕ್ ಮಾಡಬಹುದಾ ಎಂದು ಕೇಳುತ್ತಿದ್ದರು. ಹಣ ಕೊಟ್ಟಿರುವವರು ಮಾಡಿ ಅಂದಾಗ ನೀವು ಹೊರಗೆ ಹೋಗಿ, ನಾವು



ಪೂಜೆ ಮಾಡಿ ಮತ್ತೆ ಪ್ಯಾಕ್ ಮಾಡಬೇಕು ಎಂದು ಹೇಳಿ ಮನೆಯವರನ್ನು ಹೊರಗೆ ಕಳಿಸುತ್ತಿದ್ದ ಖದೀಮರು 168 ದಿನಗಳವರೆಗೆ ತೆಗೆಯಬಾರದು, ಆಮೇಲೆ ಇದರಲ್ಲಿನ ಹಣ 10 ಪಟ್ಟು ಹೆಚ್ಚಾಗುತ್ತದೆ ಎಂದು ನಂಬಿಸಿ ಜನರಿಗೆ ವಂಚನೆ ಮಾಡಿದ್ದರು.

ಖದೀಮರ ಗ್ಯಾಂಗ್‌ನಿಂದ ಮೋಸಹೋದ ಕಲ್ಲಹಳ್ಳಿ ತಾಂಡಾದ ಕುಮಾರ ನಾಯ್ಕ್ ಎಂಬಾತ ಹೊಸಪೇಟೆ ಗ್ರಾಮೀಣ ಠಾಣೆಗೆ ದೂರು ನೀಡಿದ್ದರು. ದೂರಿನ ಮೇರೆಗೆ ರಾಜಸ್ಥಾನ ಮೂಲದ ಜಿತೇಂದ್ರ ಸಿಂಗ್, ಆತನಿಗೆ ಸಹಕರಿಸುತ್ತಿದ್ದ ಕಲ್ಲಹಳ್ಳಿ ಗ್ರಾಮದ ತುಕ್ಯಾ ನಾಯ್ಕ್, ಶಂಕು ನಾಯ್ಕ್ ಎಂಬವರನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತರಿಂದ 35 ಲಕ್ಷ ರೂ, ನೋಟು ಎಣಿಸುವ 1 ಯಂತ್ರ, ಟವೆಲ್, ಜಮ್ಖಾನ ಜಪ್ತಿ ಮಾಡಲಾಗಿದೆ.

# 60 ಲಕ್ಷ ಬಿಪಿಎಲ್ ಕಾರ್ಡ್ ರದ್ದು ಮಾಡಲು ರಾಜ್ಯ ಸರ್ಕಾರ ತಯಾರಿ

**ಬೆಂಗಳೂರು:** 60 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲು ರಾಜ್ಯ ಸರ್ಕಾರ ತಯಾರಿ ಮಾಡ್ಕೊಂಡಿದೆ ಎಂದು ವಿಪಕ್ಷ ನಾಯಕ ಅಶೋಕ್ ಹೊಸ ಬಾಂಬ್ ಸಿಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿರುವ ಅವರು, ಗ್ಯಾರಂಟಿಗಳಿಂದ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ರಾಜ್ಯ ಸರ್ಕಾರ ಇದೀಗ ಅಕ್ರಮ ಬಿಪಿಎಲ್ ಪಡಿತರದಾರರಿಗೆ ಚಾಟಿ ಬೀಸಲು ಮುಂದಾಗಿದೆ. ಇದನ್ನೇ ಈಗ ಬಿಜೆಪಿ ಅಸ್ತ್ರ ಮಾಡ್ಕೊಂಡಿದೆ. 60 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲು ರಾಜ್ಯ ಸರ್ಕಾರ ತಯಾರಿ ಮಾಡ್ಕೊಂಡಿದೆ ಎಂದು ಅಶೋಕ್ ಆರೋಪಿಸಿದ್ದಾರೆ. ಬಿಪಿಎಲ್ ಕಾರ್ಡ್ ರದ್ದು ಮಾಡಲು ಸರ್ಕಾರ ಹಲವು ಕಠಿಣ ನಿಬಂಧನೆ ಹಾಕಲು ಮುಂದಾಗಿದೆ. ಗುಡಿಸಲಿನಲ್ಲಿದ್ದವರಿಗೆ ಮಾತ್ರ ಗ್ಯಾರಂಟಿಗಳು ಸಿಗಬೇಕು ಅಂತ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡ್ತಿದ್ದಾರೆ ಅಂತ ದೂರಿದ್ದಾರೆ. ಸಿದ್ದರಾಮಯ್ಯ ಸರ್ಕಾರ



ಪಾಪರ್ ಆಗಿದೆ. ತೆರಿಗೆ ಹೆಚ್ಚಿಸಿದ್ರೂ, ಸಂಬಳ ಕೊಡೋಕೆ ಆಗ್ತಿಲ್ಲ. ನಮ್ಮ ರಾಜ್ಯವೂ ಹಿಮಾಚಲದ ಸ್ಥಿತಿ ತಲುಪಿದೆ ಎಂದು ಲೇವಡಿ ಮಾಡಿದ್ರು. ಅಂದ ಹಾಗೇ, ಗೃಹಲಕ್ಷ್ಮಿ ಹಣ ಕಳೆದ ಎರಡ್ಮೂರು ತಿಂಗಳಿಂದ ರಿಲೀಸ್ ಆಗಿಲ್ಲ. ಶೀಘ್ರವೇ ಬಿಡುಗಡೆ ಮಾಡಲಾಗುತ್ತೆ ಎಂದು ಸಚಿವೆ ಹೆಬ್ಬಾಳ್ಕರ್ ತಿಳಿಸಿ ಒಂದು ವಾರ ಕಳೆದಿದೆ. ಆದ್ರೂ, ಯಾರ ಖಾತೆಗೂ ಗೃಹಲಕ್ಷ್ಮಿ ಹಣ ಬಿದ್ದಿಲ್ಲ ಎಂದು ಲೇವಡಿ ಮಾಡಿದ್ದಾರೆ.

# ಶಿವಾಜಿನಗರದ ಮೆಟ್ರೋ ನಿಲ್ದಾಣಕ್ಕೆ ಸೇಂಟ್ ಮೇರಿ ಹೆಸರಿಡಬೇಡಿ

**ಬೆಂಗಳೂರು:** ಶಿವಾಜಿನಗರದ ಮೆಟ್ರೋ ನಿಲ್ದಾಣಕ್ಕೆ ಸೇಂಟ್ ಮೇರಿ ಹೆಸರಿಡುವಂತೆ ಮನವಿ ಸಲ್ಲಿಕೆಗೆ ಸಂಬಂಧಿಸಿದಂತೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರೋಧ ವ್ಯಕ್ತಪಡಿಸಿದ್ದಾರೆ.

**ಪೋಸ್ಟ್‌ನಲ್ಲಿ ಏನಿದೆ?:** ಎಕ್ಸ್ ಖಾತೆಯಲ್ಲಿ ಟ್ವೀಟ್ ಮಾಡಿ ವಿರೋಧ ವ್ಯಕ್ತಪಡಿಸಿದ ಅವರು, ಒಚಿದು ಸಂಸ್ಸ್ರತಿಯನ್ನು ಹೇಗೆ ನಾಶ ಮಾಡಬಹುದು ಎಂಬುದಕ್ಕೆ ಇದೆ ಉದಾಹರಣೆಯಾಗಿದೆ. ಹಿಂದೂಗಳ ಆರಾಧ್ಯದೈವ, ಔರಂಗಜೇಬನ ಹುಟ್ಟಡಗಿಸಿದ ಗಂಡುಗಲಿ, ಮಹಾಪರಾಕ್ರಮಿ ಶಿವಾಜಿ ಮಹಾರಾಜರು ತಮ್ಮ ಬಾಲ್ಯವನ್ನು ಕಳೆದಂತ ಶಿವಾಜಿನಗರದ ಮೆಟ್ರೋಗೆ ಸಚಿತ ಮೇರಿ ಹೆಸರನ್ನು ಇಡಬೇಕಂತೆ.

ಇತಿಹಾಸವನ್ನು ಅರಿಯದ ಮೂಢರಷ್ಟೇ ಈ ರೀತಿ ಸಲಹೆ ಕೊಡಬಲ್ಲರು. 150 ವರ್ಷಗಳ ಇತಿಹಾಸವಿರುವ ಏಕಾಂಬರೇಶ್ವರ ಸ್ವಾಮಿಚಿ ದೇವಸ್ಥಾನ, ಮುತ್ಯಾಲಮ್ಮ ದೇವಸ್ಥಾನ, ಸೀತಾರಾಮಾಂಜನೇಯ ಸ್ವಾಮಿ ದೇವಸ್ಥಾನ, ಅಂಗಾಲ ಪರಮೇಶ್ವರಿ ಅಮ್ಮನವರ ದೇವಸ್ಥಾನಗಳು ಶಿವಾಜಿನಗರದಲ್ಲಿದೆ.



ಒಚಿದು ಸಂಸ್ಸ್ರತಿಯನ್ನು ಹೇಗೆ ನಾಶ ಮಾಡಬಹುದು ಎಂಬುದಕ್ಕೆ ಇದೆ ಉದಾಹರಣೆ. ಹಿಂದೂಗಳ ಆರಾಧ್ಯದೈವ, ಔರಂಗಜೇಬನ ಹುಟ್ಟಡಗಿಸಿದ ಗಂಡುಗಲಿ, ಮಹಾಪರಾಕ್ರಮಿ ಶಿವಾಜಿ ಮಹಾರಾಜರು ತಮ್ಮ ಬಾಲ್ಯವನ್ನು ಕಳೆದಂತ ಶಿವಾಜಿನಗರದ ಮೆಟ್ರೋ ಗೆ ಸಚಿತ ಮೇರಿ ಹೆಸರನ್ನು ಇಡಬೇಕಂತೆ.

ಓಲೈಕೆ ರಾಜಕಾರಣಕ್ಕೆ, ಹೆಚ್ಚು ವೋಟು ಬೀಳುತ್ತಿರುವ ಸಮುದಾಯವನ್ನು ಸಚಿತುಷ್ಟಗೊಳಿಸಲು ಈ ರೀತಿ ವ್ಯರ್ಥ ಪ್ರಯತ್ನಗಳು ಬೇಕಾಗಿಲ್ಲ. ನಮ್ಮ ಸಂಸ್ಕೃತಿ, ಪರಂಪರೆ, ಧರ್ಮದ ಹೆಸರನ್ನು ಉಳಿಸಿದವರನ್ನೆಲ್ಲ ಬಿಟ್ಟು, ರಾಜಕೀಯ ಕಾರಣಕ್ಕಾಗಿ ಮೇರಿಯಮ್ಮನ ಹೆಸರು ನಾಮಕರಣ ಮಾಡುವ ಅವಶ್ಯಕತೆ ಇಲ್ಲ ಎಚಿದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಏನಿದರ ಹಿನ್ನೆಲೆ?:** ಮೊನ್ನೆಯಷ್ಟೆ (ಸೆ.08) ರಂದು ಶಿವಾಜಿನಗರದ ಸಂತ ಮೇರಿ ಜಯಂತ್ಯುತ್ಸವ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಭಾಗಿಯಾಗಿದ್ದರು. ಶಿವಾಜಿನಗರ ಮೆಟ್ರೋ ನಿಲ್ದಾಣಕ್ಕೆ ಸೇಂಟ್ ಮೇರಿಸ್ ಮೆಟ್ರೋ ಸ್ಟೇಷನ್ ಎಂದು ನಾಮಕರಣ ಮಾಡಬೇಕು. ಇದರಿಂದ ಪುಣ್ಯಕ್ಷೇತ್ರ ಮೇರಿ ಚರ್ಚಿಗೆ ಹೆಚ್ಚು ಜನರು ಬರಲು ಅನುಕೂಲ ಆಗುತ್ತದೆ ಎಂದು ಅಲ್ಲಿನ ಫಾದರ್ ಸಿಎಂಗೆ ಮನವಿ ಸಲ್ಲಿಸಿದ್ದರು. ಈ ಸಂಬಂಧ ಶಾಸಕ ಯತ್ನಾಳ್ ವಿರೋಧ ವ್ಯಕ್ತಪಡಿಸಿದ್ದಾರೆ.

# ಶಾಸಕ ಯಶ್‌ಪಾಲ್ ಸುವರ್ಣ ಸೇರಿ 11 ಮಂದಿ ವಿರುದ್ಧ ಎಫ್‌ಐಆರ್ ದಾಖಲು

**ಉಡುಪಿ:** ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರತಿಭಟನೆ ನಡೆಸಿ ಅವರ ಪ್ರತಿಕೃತಿಗೆ ಚಪ್ಪಲಿ ಏಟು ಹಾಗೂ ಬೆಂಕಿ ಹಚ್ಚಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಉಡುಪಿ ಶಾಸಕ ಯಶ್‌ಪಾಲ್ ಸುವರ್ಣ ಸೇರಿ 11 ಮಂದಿ ಬಿಜೆಪಿ ಮುಖಂಡರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಪ್ರಾಂಶುಪಾಲರಿಗೆ ಪ್ರಶಸ್ತಿ ವಾಪಸ್ ಪಡೆದ ವಿಚಾರವಾಗಿ ಮಣಿಪಾಲದ ಸಿಂಡಿಕೇಟ್ ಸರ್ಕಲ್‌ನಲ್ಲಿ ಸೆ.6ರಂದು ಪ್ರತಿಭಟನೆ ನಡೆಸಲಾಗಿತ್ತು. ಈ ವೇಳೆ ಹೆದ್ದಾರಿ ತಡೆದು ಬಿಜೆಪಿ ಮುಖಂಡರು ಸಿಎಂ ಪ್ರತಿಕೃತಿಗೆ ಬೆಂಕಿ ಹಚ್ಚಿದ್ದರು. ಅಲ್ಲದೇ ಹಿಂದೂ ವಿರೋಧಿ ಸಿದ್ದರಾಮಯ್ಯ ತೊಲಗಿಸಿ ಎಂದು ಘೋಷಣೆ ಕೂಡ ಕೂಗಿದ್ದರು.

ಈ ಸಂದರ್ಭ ನಗರಸಭಾ ಸದಸ್ಯ ಗಿರೀಶ್ ಅಂಚನ್, ಯುವ ಮೋರ್ಚಾ ಮುಖಂಡ ಪೃಥ್ವಿರಾಜ್ ಶೆಟ್ಟಿ ಸಿಎಂ ಪ್ರತಿಕೃತಿಗೆ ಚಪ್ಪಲಿಯಿಂದ ಹೊಡೆದಿದ್ದರು. ಈ ಕುರಿತು ಎನ್‌ಎಸ್‌ಯುಐ ಮುಖಂಡ ಸೌರಭ್ ಬಲ್ಲಾಳ್ ಶಾಂತಿಭಂಗ ತರುವ ಉದ್ದೇಶದಿಂದ ಕೃತ್ಯ ಎಸಗಿದ್ದಾರೆ ಎಂದು ದೂರು ನೀಡಿದ್ದಾರೆ. ಈ ಪ್ರಕರಣದಲ್ಲಿ ಯಶ್‌ಪಾಲ್ ಸುವರ್ಣ ಎ5 ಆರೋಪಿಯಾಗಿದ್ದಾರೆ. ನಗರಸಭಾ ಅಧ್ಯಕ್ಷ ಪ್ರಭಾಕರ ಪೂಜಾರಿ, ಸದಸ್ಯರಾದ ಗಿರೀಶ್ ಅಂಚನ್, ವಿಜಯ ಕೊಡವೂರು, ಬಾಲಕೃಷ್ಣ ಶೆಟ್ಟಿ ವಿರುದ್ಧವೂ ದೂರು ನೀಡಲಾಗಿದೆ. ಮಣಿಪಾಲ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.




## ಮೂವರು ಅರೆಸ್ಟ್

**ಪ್ರಕರಣ ಹಿನ್ನೆಲೆ:** ಮೊದಲಿಗೆ ಮಂಡ್ಯ ತಾಲೂಕಿನ ಹಾಡ್ಯ ಗ್ರಾಮದ ಆಲೆಮನೆಯಲ್ಲಿ ನಡೆಯುತ್ತಿದ್ದ ಕರಾಳದಂಧೆಯನ್ನ ಬೆಂಗಳೂರಿನ ಬ್ಯೆಯಪ್ಪನಹಳ್ಳಿ ಠಾಣೆ ಪೊಲೀಸರು ಭೇದಿಸಿ ಹಲವು ಮಂದಿಯನ್ನ ಬಂಧಿಸಿದ್ದರು. ಆನಂತರ ಈ ಪ್ರಕರಣವನ್ನ ಸಿಐಡಿಗೂ ವಹಿಸಲಾಗಿತ್ತು. ಆದರೆ ಈ ಪ್ರಕರಣದಲ್ಲಿ ಕಿಂಗ್ ಪಿನ್ ಆಗಿದ್ದ ಅಭಿಷೇಕ್ ಬಂಧನವಾಗದೇ ತಲೆ ಮರೆಸಿಕೊಂಡಿದ್ದ. ಆನಂತರ ಪಾಂಡವಪುರದ ಹೆಲ್ತ್ ಕ್ವಾಟ್ರಸ್, ಮೇಲೆಕೋಟೆ, ನಾಗಮಂಗಲ ಸೇರಿದಂತೆ ಹಲವು ಕಡೆಗಳಲ್ಲಿ ನಡೆಯುತ್ತಿದ್ದ ಕರಾಳದಂಧೆ ಬೇಧಿಸಿ ಹಲವು ಆರೋಪಿಗಳನ್ನ ಬಂಧನ ಮಾಡಲಾಗಿತ್ತು. ಆದರೆ ಐದು ಪ್ರಕರಣಗಳಲ್ಲಿ ಸಿಐಡಿ ಪೊಲೀಸರು ಸೇರಿದಂತೆ ಮಂಡ್ಯ ಜಿಲ್ಲೆಯ ಪೊಲೀಸರಿಗೆ ಚಳ್ಳೆಯನ್ನು ತಿನ್ನಿಸಿ ಕಿಂಗ್ ಪಿನ್ ಅಭಿಷೇಕ್ ಕರಾಳದಂಧೆಯನ್ನ ಮುಂದುವರೆಸಿಕೊಂಡು ಹೋಗಿದ್ದ. ಈತನ ಬಂಧನಕ್ಕಾಗಿಯೇ ಏಳು ತಂಡಗಳನ್ನ ರಚನೆ ಮಾಡಲಾಗಿತ್ತು. ಕೊನೆಗೂ ಐನಾತಿ ಅಭಿಷೇಕ್ ಬಂಧನವಾಗಿದೆ.

## ಅರಣ್ಯ ಇಲಾಖೆ ನೋಟಿಸ್

ವರದಿ ಸಲ್ಲಿಕೆಯಾದ ಬಳಿಕ ಅರಣ್ಯ ಇಲಾಖೆ 2015ರ ನಂತರ ಅರಣ್ಯ ಒತ್ತುವರಿ ಮಾಡಿ ನಿರ್ಮಿಸಿರುವ ರೆಸಾರ್ಟ್ ಅಥವಾ ಹೋಂಸ್ಟೇ, ತೋಟ, ಬಡಾವಣೆಗಳನ್ನು ನಿರ್ದಾಕ್ಷಿಣ್ಯವಾಗಿ ತೆರವು ಮಾಡುವಂತೆ ಸೂಚನೆ ನೀಡಿತ್ತು.

ಇದೀಗ, ಅನಧಿಕೃತವಾಗಿ ನಡೆಯುತ್ತಿರುವ ರೆಸಾರ್ಟ್ ಅಥವಾ ಹೋಂಸ್ಟೇಗಳನ್ನು ಪತ್ತೆಹಚ್ಚಲು ಅರಣ್ಯ ಇಲಾಖೆ ಮುಂದಾಗಿದೆ. ಹೀಗಾಗಿ ಚಿಕ್ಕಮಗಳೂರು ಅರಣ್ಯ ವಲಯದಲ್ಲಿ ನಿರ್ಮಾಣ ಮಾಡಿರುವ ಎಲ್ಲ ಹೋಂಸ್ಟೇ ಮಾಲಿಕರು ಕಂದಾಯ ದಾಖಲಾತಿಗಳನ್ನು ಸಲ್ಲಿಸುವಂತೆ ಅರಣ್ಯ ಇಲಾಖೆ ಸೂಚಿಸಿದೆ.

## 18 ಅಧಿಕಾರಿಗಳಿಗೆ ನೋಟಿಸ್

**ಆರ್ ಟಿಐ ಕಾರ್ಯಕರ್ತ ಗಂಗರಾಜು ಮಾಡಿದ್ದ ಆರೋಪವೇನು? :** ಮೈಸೂರು ತಾಲ್ಲೂಕು ಹಿನಕಲ್ ಗ್ರಾಮ ಸರ್ವೆ ನಂ.89ರಲ್ಲಿ 7 ಎಕರೆ 18 ಗುಂಟೆ ಜಮೀನನ್ನು ಹಿನಕಲ್ ಮಂಡಲ ಪಂಚಾಯ್ತಿಯವರು ಆಶ್ರಯ ಯೋಜನೆಯಡಿಯಲ್ಲಿ ಅನಧಿಕೃತ ಬಡಾವಣೆ ನಿರ್ಮಿಸಿ / ಉಳ್ಳವರಿಗೆ ರಾಜಕೀಯ ವ್ಯಕ್ತಿಗಳಿಗೆ ಹಂಚಿಕೆ ಮಾಡಿ ವಂಚಿಸಿದ ಬಗ್ಗೆ ದಿನಾಂಕ 01.04.2017 ರಂದು ನಾನು ತಮ್ಮ ಕಛೇರಿಗೆ ದೂರು ನೀಡಿದ್ದೆ. ಇದು ದೃಢಪಟ್ಟಿರುವುದರಿಂದ ಸಂಬಂಧಪಟ್ಟವರ ವಿರುದ್ಧ ಕ್ರಮಕ್ಕಾಗಿ ಮನವಿ ಸಲ್ಲಿಸುತ್ತಿದ್ದೇನೆ ಎಂದು 2017ರಲ್ಲಿ ಆರ್ ಟಿಐ ಕಾರ್ಯಕರ್ತ ಗಂಗರಾಜು ಭ್ರಷ್ಟಾಚಾರ ನಿಗ್ರಹ ದಳದ ಮೈಸೂರು ಜಿಲ್ಲಾ ವ್ಯಾಪ್ತಿಯ ಪೊಲೀಸ್ ವರಿಷ್ಠಾಧಿಕಾರಿಗಳಿಗೂ ಪತ್ರ ಬರೆದಿದ್ದರು.

ಸರ್ವೆ ನಂ.89ರಲ್ಲಿ 7 ಎಕರೆ 18 ಗುಂಟೆ ಮುಡಾ ಪ್ರಾಧಿಕಾರದ ಸ್ವತ್ತಿನಲ್ಲಿ ಅಕ್ರಮವಾಗಿ ಮುಡಾ ಅನುಮತಿಯನ್ನು ಪಡೆಯದೇ ಬಡಾವಣೆಯನ್ನು ನಿರ್ಮಿಸಿ ಆಶ್ರಯ ಯೋಜನೆ ಫಲಾನುಭವಿಗಳಿಗೆ ಹಂಚಿಕೆ ಮಾಡುತ್ತೇವೆಂದು ಸದರಿ ಹಿನಕಲ್ ಮಂಡಲ ಪಂಚಾಯ್ತಿಯ ಅಧ್ಯಕ್ಷರು, ಕಾರ್ಯದರ್ಶಿಗಳು (ಪ್ರಧಾನರು) 1990–92ನೇ ಅವಧಿಯಲ್ಲಿ ಇದ್ದಂತಹ ಪಂಚಾಯ್ತಿಯ ಸರ್ವಸದಸ್ಯರುಗಳು ಹಾಗೂ ಈ ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ ನಿರ್ಧಾರ ತೆಗೆದುಕೊಳ್ಳುವ ಸಮಯದಲ್ಲಿ ಪರೋಕ್ಷವಾಗಿ, ಪ್ರತ್ಯಕ್ಷವಾಗಿ ಸಹಕರಿಸಿದ ಎಲ್ಲಾ ಅಧಿಕಾರಿವರ್ಗದವರ ವಿರುದ್ಧ ಕ್ರಮ ತೆಗೆದುಕೊಳ್ಳಲು ತಮ್ಮ ಕಛೇರಿಗೆ ಮನವಿ ಸಲ್ಲಿಸಿದ್ದೆ. ಇದು ದೃಢವಾಗಿರುವದರಿಂದ ಮುಡಾ ಪ್ರಾಧಿಕಾರವು ಈ ಮೇಲ್ಕಂಡ ಸ್ವತ್ತನ್ನು ಭೂ ಮಾಲೀಕರಿಂದ ಭೂಸ್ವಾಧೀನ ಮಾಡಿಕೊಳ್ಳುವ ಮುಂಚೆ ಯಾವ ಉದ್ದೇಶಕ್ಕೋಸ್ಕರ ಭೂಸ್ವಾಧೀನಕ್ಕೆ ಸರ್ಕಾರಕ್ಕೆ ನಿವೇದಿಸಿಕೊಂಡಿದ್ದರೊ ಆ ಉದ್ದೇಶವನ್ನು ಜನರಿಗೆ ಈಡೇರಿಸದೆ ವಂಚಿಸಿದೆ. ಹೀಗೆ ವಂಚಿಸಿರುವ ಅಂದಿನ ಹಾಗೂ ಈ ವಿಷಯಕ್ಕೆ ಸಂಬಂಧಪಟ್ಟಂತೆ ಹಲವಾರು ಬಾರಿ ಮುಡಾ ಪ್ರಾಧಿಕಾರಕ್ಕೂ ಸಹ ನಾನು ವಿನಂತಿಸಿಕೊಂಡಿದ್ದರೂ ಸದರಿಯವರು ಯಾವುದೇ ಕ್ರಮವಹಿಸಲು ಮುಂದಾಗದೆ ಕರ್ತವ್ಯ ಲೋಪ ಎಸಗಿರುವ ಎಲ್ಲಾ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕೆಂದು ತಮ್ಮಲ್ಲಿ ಕೇಳಿಕೊಳ್ಳುತ್ತೇನೆ ಎಂದು ಗಂಗರಾಜು ಪತ್ರದಲ್ಲಿ ಉಲ್ಲೇಖಿಸಿದ್ದರು.

ಇದೇ ರೀತಿ ಮೈಸೂರು ನಗರದಲ್ಲಿ ಮೈಸೂರು ಜನರಿಗೋಸ್ಕರ ಬಡಾವಣೆ ನಿರ್ಮಿಸಿ ಹಾಗೂ ಉದ್ಯಾನವನ

## ಮೊದಲನೇ ಪುಟದಿಂದ...

ಮತ್ತು ಇನ್ನಿತರ ಸಾರ್ವಜನಿಕರಿಗೋಸ್ಕರ ಸೌಲಭ್ಯ ನೀಡಲು ನೂರಾರು ಎಕರೆ ಭೂಮಿಯನ್ನು ಭೂಸ್ವಾಧೀನ ಮಾಡಿಕೊಂಡಿದ್ದು, ಆದರೆ ಯಾವ ಉದ್ದೇಶಕ್ಕೆ ಭೂಸ್ವಾಧೀನ ಮಾಡಿಕೊಂಡಿದ್ದಾರೋ ಅದನ್ನು ಯಥಾವತ್ತು ಜಾರಿ ಮಾಡಿ ಸಾರ್ವಜನಿಕರಿಗೆ ಹಂಚಿಕೆ ಮಾಡದೆ ವಂಚಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಈ ಮುಡಾ ಕರ್ಮಕಾಂಡಕ್ಕೆ ಸಂಬಂಧಿಸಿದಂತೆ ತನಿಖೆಗೆ ಆದೇಶ ನೀಡಿ ಸರ್ವೆ ನಂಬರ್ 89ರಲ್ಲಿ ಒಟ್ಟು 11 ಎಕರೆ 18 ಗುಂಟೆಯನ್ನೂ ಸಹ ಅಕ್ರಮವಾಗಿ ಹಿನಕಲ್ ಮಂಡಲ ಪಂಚಾಯಿತಿಯ ಅಂದಿನ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರು ವಂಚಿಸಿರುತ್ತಾರೆ. ಈ ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ ಸ್ವಾಧೀನಪಡಿಸಿ ಕೊಂಡಿದ್ದಂತಹ ಸ್ವತ್ತಿನಲ್ಲಿ ಹಲವಾರು ಲ್ಯಾಂಡ್ ಮಾಫಿಯ ಹಾಗೂ ರಾಜಕೀಯ ಮುಖಂಡರು ಇಂತಹ ಭೂಮಿಯನ್ನು ಅಕ್ರಮವಾಗಿ ಖಾತೆ ಮಾಡಿಸಿಕೊಂಡು ಕಟ್ಟಡಗಳನ್ನು ನಿರ್ಮಿಸಿ ಹಾಗೂ ನಿವೇಶನಗಳನ್ನಾಗಿ ಮಾಡಿ ಹಂಚಿಕೆ ಮಾಡುತ್ತಿದ್ದರೂ ಸಹ ಸಂಬಂಧಪಟ್ಟ ಮುಡಾ ಅಧಿಕಾರಿಗಳು ಯಾವುದೇ ಕ್ರಮವಹಿಸದೆ ಕಣ್ಣು ಮುಚ್ಚಿ ಕುಳಿತಿರುತ್ತಾರೆ. ಹಾಗೂ ಈ ಅಕ್ರಮಕ್ಕೆ ಸದರಿ ಮುಡಾ ಅಧಿಕಾರಿಗಳೂ ಸಹ ಶಾಮಿಲಾಗಿರುತ್ತಾರೆ. ಇದಕ್ಕೆ ನಿದರ್ಶನವೆಂಬಂತೆ ಈ ಮೇಲ್ಕಂಡ ಹೆಸರಿಸಿರುವ ಇರುವ ಸರ್ವೆ ನಂಬರ್‌ನಲ್ಲಿ 7 ಎಕರೆ 18 ಗುಂಟೆ ಸ್ವತ್ತೇ ಸಾಕ್ಷಿ ಎಂದು ಗಂಗರಾಜು ಪತ್ರದಲ್ಲಿ ಆರೋಪಿಸಿದ್ದರು.

## ಪ್ರಯಾಣಿಕರಿಗೆ ಸಂಕಷ್ಟ

ಒಂದು ವೇಳೆ ಸ್ಟೇಷನ್ ಒಳಗೆ ಬಂದು ಹತ್ತು ನಿಮಿಷಕ್ಕಿಂತ ಹೆಚ್ಚಿನ ಸಮಯ ಆಗುತ್ತದೆ ಎಂದಾದರೆ, ಅಂತಹ ವಾಹನ ಮಾಲೀಕರು ಸ್ಟೇಷನ್ ನಲ್ಲಿರುವ ಪಾರ್ಕಿಂಗ್ ಸ್ಟ್ಯಾಂಡ್ ನಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡಬಹುದು.

**ರೈಲ್ವೆ ಸಚಿವ ಸೋಮಣ್ಣ ಏನಂತಾರೆ:** ಈ ಹೊಸ ನಿಯಮದ ಬಗ್ಗೆ ರೈಲ್ವೆ ಇಲಾಖೆಯ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಪ್ರಶ್ನಿಸಿದಾಗ, ರೈಲ್ವೆ ಅಧಿಕಾರಿಗಳ ಜೊತೆಗೆ ಮಾತನಾಡಿ ಕ್ರಮ ಕೈಗೊಳ್ಳುತ್ತೇನೆ ಎಂದಿದ್ದಾರೆ.

**ಎಸ್‌ಎಂವಿಟಿಯಲ್ಲಿ ಪಾರ್ಕಿಂಗ್ ಶುಲ್ಕ ಎಷ್ಟು :** ಹತ್ತು ನಿಮಿಷದಿಂದ ಇಪ್ಪತ್ತು ನಿಮಿಷಗಳ ವರೆಗೆ ದ್ವಿಚಕ್ರ ವಾಹನಗಳಿಗೆ ಒಂದು ವಾಹನಕ್ಕೆ 40 ರೂಪಾಯಿ. ತ್ರಿಚಕ್ರ ಮತ್ತು ನಾಲ್ಕು ಚಕ್ರದ ವಾಹನಗಳಿಗೆ 50 ರೂಪಾಯಿ ನಿಗದಿಪಡಿಸಲಾಗಿದೆ.

20 ರಿಂದ 30 ನಿಮಿಷಕ್ಕೆ ದ್ವಿಚಕ್ರ ವಾಹನಗಳಿಗೆ ಒಂದು ವಾಹನಕ್ಕೆ 100 ರೂಪಾಯಿ, ತ್ರಿಚಕ್ರ ಮತ್ತು ನಾಲ್ಕು ಚಕ್ರದ ವಾಹನಗಳಿಗೆ 200 ರೂಪಾಯಿ ಶುಲ್ಕವಿದೆ. 30 ನಿಮಿಷಗಳ ನಂತರ ದ್ವಿಚಕ್ರ ವಾಹನಗಳಿಗೆ ಒಂದು ವಾಹನಕ್ಕೆ 250 ರೂಪಾಯಿ, ತ್ರಿಚಕ್ರ ಮತ್ತು ನಾಲ್ಕು ಚಕ್ರದ ವಾಹನಗಳಿಗೆ 500 ರೂಪಾಯಿ ಶುಲ್ಕವಿದೆ.

**ದುಬಾರಿ ಪಾರ್ಕಿಂಗ್ ಶುಲ್ಕ:** ರೈಲ್ವೆ ಇಲಾಖೆಯ ಹೊಸ ನಿಯಮಕ್ಕೆ ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಸರಿಯಾದ ಸಮಯಕ್ಕೆ ರೈಲುಗಳು ಬರುವುದಿಲ್ಲ. ಆ ಸಮಯದಲ್ಲಿ ತಂದೆ, ತಾಯಿಯನ್ನು ಕುಟುಂಬಸ್ಥರನ್ನು ಪಿಕ್ ಅಪ್ ಮಾಡಲು ಬಂದಿರುತ್ತೇವೆ. ಅದಕ್ಕೆ ಹಣ ಪಾವತಿ ಮಾಡಬೇಕು ಅಂದರೆ ಹೇಗೆ ಅದೂ ಕೂಡ ಇಷ್ಟೊಂದು ದುಬಾರಿ ಶುಲ್ಕ ವಿಧಿಸಿದರೆ ಹೇಗೆ ಇಲ್ಲಿ ದುಡಿದ ದುಡ್ಡನ್ನೆಲ್ಲ ಇವರಿಗೆ ನೀಡಿದರೆ ನಾವು ಜೀವನ ಮಾಡುವುದು ಹೇಗೆ ಎಂದು ಆಟೋ ಚಾಲಕರು ಮತ್ತು ಬೈಕ್ ಸವಾರರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

**ರೈಲ್ವೆ ಅಧಿಕಾರಿಗಳು ಹೇಳುವುದೇನು?** ವಾಹನ ಸವಾರರು ಪ್ರಯಾಣಿಕರನ್ನು, ತಮ್ಮವರನ್ನು ಪಿಕ್ ಅಪ್, ಡ್ರಾಪ್ ಮಾಡಲು ಬರುವ ವೇಳೆ ರೈಲ್ವೆ ಸ್ಟೇಷನ್ ನಲ್ಲಿ ಬೇಕಾಬಿಟ್ಟಿ ವಾಹನಗಳನ್ನು ಪಾರ್ಕ್ ಮಾಡಿ ಹೋಗಿ ಬಿಡುತ್ತಾರೆ. ಇದರಿಂದ ಪ್ರಯಾಣಿಕರಿಗೆ ತೊಂದರೆ ಆಗುತ್ತದೆ. ಅದಕ್ಕೆ ಈ ನಿಯಮ ಜಾರಿಗೆ ತರಲಾಗಿದೆ ಎಂದು ರೈಲ್ವೆ ಅಧಿಕಾರಿಗಳು ಹೇಳುತ್ತಿದ್ದಾರೆ.

ವಾಹನ ಸವಾರರು ಮಾತ್ರ ಈ ರೀತಿಯ ನಿಯಮ ಸರಿಯಲ್ಲ. ಇದರಿಂದ ತೊಂದರೆ ಆಗುತ್ತದೆ. ಹಣ ಪಾವತಿ ಮಾಡಲು ಆಗುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

## ಕಿರಿಯ ವೈದ್ಯೆಗೆ ಕಿರುಕುಳ

ಆವರಣದಲ್ಲಿ ಕನಿಷ್ಠ 100 ಶಸ್ತ್ರಸಜ್ಜಿತ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗುವುದು.ರಿಮ್ಸ್‌ನ ಕಿರಿಯ ವೈದ್ಯರು ಆರ್‌ಜಿ ಕರ್ ಘಟನೆಯನ್ನು ಪ್ರತಿಭಟಿಸಿದರು, ಉತ್ತಮ ಭದ್ರತೆ ಮತ್ತು ವೈದ್ಯಕೀಯ ಸಂರಕ್ಷಣಾ ಕಾಯ್ದೆಯನ್ನು ಜಾರಿಗೊಳಿಸುವಂತೆ ಒತ್ತಾಯಿಸಿದರು.

## ಗುಡ್ಡದಲ್ಲಿ ಇಸ್ಪೀಟ್ ದಂಧೆ

ಮಧ್ಯಾಹ್ನ 2 ಗಂಟೆಯಿಂದ ಯಾವುದೇ ಅಳುಕಿಲ್ಲದೇ ಅಕ್ರಮ ದಂಧೆ ನಡೆಯುತ್ತಿದೆ. ಪೊಲೀಸರು ಕೂಡ ಈ ಕಡೆ ಸುಳಿಯುವುದಿಲ್ಲ. ಹೀಗಾಗಿ ಯಾವುದೇ ಭಯವಿಲ್ಲದೆ ಬೆಟ್ಟಿಂಗ್ ಕಟ್ಟಿ ಇಸ್ಪೀಟ್ ಆಡಲಾಗುತ್ತಿದೆ. ಬಾಗಲಕೋಟೆ ಜಿಲ್ಲೆ ಬಾದಾಮಿ ತಾಲೂಕಿನ ಬನಶಂಕರಿ ದೇವಸ್ಥಾನದ ಪಕ್ಕದ ಎರಡು ಕಿಲೋ ಮೀಟರ್ ವ್ಯಾಪ್ತಿಯಲ್ಲಿರುವ ಶಿವಪುರ ಗ್ರಾಮದ ಶಿವಪುರ ಗುಡ್ಡದಲ್ಲಿ ಇದೇ ಗ್ರಾಮದ ಪಾಂಡು ಎಂಬ ವ್ಯಕ್ತಿ ಈ ಇಸ್ಪೇಟ್ ದಂಧೆಯನ್ನು ನಡೆಸುತ್ತಿದ್ದಾನೆ. ಯಾವ ಕ್ಯಾಸಿನೋಗೆ ಕಡಿಮೆ ಇಲ್ಲದಂತೆ ಇಸ್ಪೀಟ್ ದಂಧೆ ನಡೆಯುತ್ತಿದೆ. ಜೂಜುಕೋರರಿಗೆ ಪಾಂಡು ಮೀಟರ್ ಬಡ್ಡಿಯನ್ನೂ ನೀಡ್ತಾನೆ. ಅಷ್ಟೇ ಅಲ್ಲದೆ ಇಲ್ಲಿ ಇಸ್ಪೇಟ್ ಆಡಲು ಬೇರೆ ಬೇರೆ ಜಿಲ್ಲೆಗಳಿಂದ ಜನ ಬರ್ತಾರೆ. ಇಸ್ಪೀಟ್ ಆಡಲು ಬರುವ ಜನರನ್ನು ಕರೆಯಲು ಆಟೋ ವ್ಯವಸ್ಥೆ ಸಹ ಮಾಡಲಾಗಿದೆ. ನೂರಾರು ಜೂಜುಕೋರರು ಸೇರಿಕೊಂಡು ಭರ್ಜರಿಯಾಗಿ ಇಸ್ಪೇಟ್ ದಂಧೆ ನಡೆಸುತ್ತಿದ್ದಾರೆ. ಇಷ್ಟೆಲ್ಲ ಅಕ್ರಮ ನಡೆಯುತ್ತಿದ್ರೂ, ಪೊಲೀಸ್ ಇಲಾಖೆ ಮಾತ್ರ ಕಣ್ಮುಚ್ಚಿಕುಳಿತಿದ್ದಾರೆ.

## ದಾಸನ ಫ್ಯಾನ್

**ದರ್ಶನ್ ಇಬ್ಬರನ್ನು ಮೇಂಟೇನ್ ಮಾಡ್ತಿದ್ದರು, ನಾನೂ ಮಾಡ್ತೀನಿ ಎಂದಿದ್ದ ಶ್ರೀ ಹರಿ:** ಮಗುವಾದ ಬಳಿಕ ಅನುಷಾಗೆ ಕಿರುಕುಳ ಶುರು ಆಗಿತ್ತು. ನನಗೆ ಇನ್ನೊಂದು ಅಫೈರ್ ಇದೆ. ಅವಳನ್ನ ನಾನು ಮದುವೆಯಾಗಬೇಕು ಎಂದು ಅನುಷಾಳಿಗೆ ಶ್ರೀ ಹರಿ ಹಿಂಸೆ ಮಾಡುತ್ತಿದ್ದ. ಆದ್ರೆ ಇದಕ್ಕೆ ಅನುಷಾ ಒಪ್ಪಲಿಲ್ಲ. ಆಗ ಈತ ದರ್ಶನ್ ಇಬ್ಬಿಬ್ಬರನ್ನ ಮೇಂಟೇನ್ ಮಾಡ್ತಿಲ್ವಾ ನಾನು ಹಾಗೇ ಮಾಡ್ತೀನಿ ಎಂದು ಕಿರುಕುಳ ನೀಡುತ್ತಿದ್ದ. ಜೊತೆಗೆ ಕೆಲಸ ಮಾಡ್ತಿದ್ದ ಯುವತಿಯೊಂದಿಗೆ ಅಸಭ್ಯವಾಗಿ ವರ್ತಿಸಿದಕ್ಕೆ ಆತನನ್ನ ಕಂಪನಿಯಿಂದ ಹೊರಹಾಕಿದ್ದರು. ಆದ್ರೆ ಯಾವಾಗ ಕೆಲಸದಿಂದ ಹೊರದಬ್ಬಿಸಿಕೊಂಡು ಮನೆಯಲ್ಲಿ ಕೂತನೋ ಆಗ ಈತನಿಂದ ಹೆಂಡತಿಗೆ ಮತ್ತಷ್ಟು ಟಾರ್ಚರ್ ಹೆಚ್ಚಾಗಿತ್ತು.

ಪ್ರತಿ ನಿತ್ಯ ನೀನ್ ನನಗೆ ಬೇಡ. ಬಿಟ್ಟು ಹೋಗು. ನಾನು ಇನ್ನೊಂದು ಮದುವೆಯಾಗಬೇಕು ಇಷ್ಟೇ ಆತ ಹೇಳುತ್ತಿದ್ದನಂತೆ. ಅಷ್ಟೇ ಅಲ್ಲಾ ಅಶ್ಲೀಲ ವಿಡಿಯೋ ತೋರಿಸಿ ಇದರಂತೆ ಸೆಕ್ಸ್‌ಗೆ ಸಹಕರಿಸು ಅಂತಿದ್ನಂತೆ. ಒಪ್ಪದಿದ್ದಕ್ಕೆ ಬೇರೆಯವಳ ಬಳಿ ಹೋಗ್ತೀನಿ. ಅವಳು ಒಳ್ಳೆ ಸುಖ ಕೊಡ್ತಾಳೆ ಎಂದಿದ್ದನಂತೆ. ಇದರಿಂದ ಬೇಸತ್ತ ಅನುಷಾ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

**ಗಂಡನಿಗೆ ವಿಡಿಯೋ ಕಾಲ್ ಮಾಡಿ ಬೆಂಕಿ ಹಚ್ಚಿಕೊಂಡ ಅನುಷಾ:** ಸೆ. 5ರಂದು ಗೌರಿ ಹಬ್ಬಕ್ಕೆ ಅನುಷಾ ತಯಾರಿ ಮಾಡಿಕೊಳ್ತಿದ್ದಳು. ಈ ವೇಳೆ ಶ್ರೀ ಹರಿ ಹಾಗೂ ಅನುಷಾ ನಡುವೆ ಜಗಳ ಶುರುವಾಗಿತ್ತು. ಇದರಿಂದ ರೋಸಿ ಹೋಗಿ ಅನುಷಾ ಸೀದಾ ಪೆಟ್ರೋಲ್ ತೆಗೆದುಕೊಂಡು ಬಾತ್ ರೂಮ್‌ಗೆ ಹೋಗಿ ಬಾತ್ ರೂಮ್ ನಿಂದಲೇ ಗಂಡನಿಗೆ ವಾಟ್ಸಪ್ ವಿಡಿಯೋ ಕಾಲ್ ಮಾಡಿ ಇದನ್ನೆಲ್ಲಾ ಬಿಟ್ಟುಬಿಡು. ಮಗು ಮುಖ ನೋಡಿ ಆದ್ರೂ, ಬದಲಾಗು ಅಂತ ಕೇಳಿಕೊಂಡಿದ್ದಾಳೆ. ಆಗಲೂ ಶ್ರೀ ಹರಿ ಆಕೆಯ ಮಾತನ್ನ ಕೇಳಲಿಲ್ಲ, ಆಗ ಅನುಷಾ ನಾನು ಸಾಯುತ್ತೇನೆ ಅಂತ ಹೇಳಿದ್ದಾಳೆ. ಆಗ ಈ ಪಾಪಿ ಗಂಡ ನೀನು ಮೊದಲು ಸಾಯಿ ಆ ಮೇಲೆ ನಾನು ನೆಮ್ಮದಿಯಾಗಿ ಮತ್ತೊಂದು ಮದುವೆಯಾಗಬಹುದು ಅಂದಿದ್ದಾನೆ. ಇದರಿಂದ ನೊಂದ ಅನುಷಾ ಪೆಟ್ರೋಲ್ ಅನ್ನ ಸುರಿದುಕೊಂಡಿದ್ದಾಳೆ. ವಿಡಿಯೋ ಕಾಲ್ ನಲ್ಲಿ ಗಂಡ ನೋಡುತ್ತಿರುವಾಗ್ಲೇ ಬೆಂಕಿ ಹಚ್ಚಿಕೊಂಡಿದ್ದಾಳೆ. ಆದ್ರೆ ಈ ಟೈಂನಲ್ಲಿ ಗಂಡ ಹರಿ ಒಂದು ಮಾತನ್ನೂ ಆಡಿಲ್ಲ ಆಕೆ ಬೆಂಕಿಯಲ್ಲಿ ಬೇಯುತ್ತಿರೋದನ್ನ ನೋಡುತ್ತಾ ಕೂತುಬಿಟ್ಟಿದ್ದ.

ಇಷ್ಟೆಲ್ಲಾ ಆಗುವಾಗ ಅನುಷಾ ತಾಯಿ ಹೊರಗಡೆ ಮಗುವಿಗೆ ಊಟ ಮಾಡಿಸುತ್ತಿದ್ದರು. ಕೆಲ ಹೊತ್ತಿನ ನಂತರ ಗಂಡನೇ ಬಂದು ಅನು ತಾಯಿಯ ಬಳಿ ನಿಮ್ಮ ಮಗಳು ಏನೋ ಮಾಡಿಕೊಂಡಿದ್ದಾಳೆ ಬಂದು ನೋಡಿ ಅಂತ ಹೇಳಿದ್ದಾನೆ. ಆಗ ಗಾಬರಿಯಿಂದ ಈ ತಾಯಿ ಹೋಗಿ ನೋಡಿದ್ರೆ, ಅನುಷಾ ಅರ್ಧ ಬೆಂದು ಹೋಗಿದ್ದಳು. ಅನುಷಾ ತಾಯಿ ಸುತ್ತಿಗೆಯಿಂದ ಬಾತ್ ರೂಮ್ ಬಾಗಿಲು ಹೊಡೆದು ಅಕ್ಕಪಕ್ಕದವರ ಸಹಾಯದಿಂದ ಮಗಳನ್ನ ಆಸ್ಪತ್ರೆಗೆ ಸೇರಿಸಿದ್ದಾರೆ. ಆಗಲೂ ಹರಿ ಅವಳ ಜೊತೆ ಆಸ್ಪತ್ರೆಗೆ ಹೋಗಿಲ್ಲ. ಆದ್ರೆ 2 ದಿನ ಸಾವು ಬದುಕಿನ ನಡುವೆ ಹೋರಾಡಿದ ಅನುಷಾ ಇದೀಗ ಮೃತಪಟ್ಟಿದ್ದಾರೆ.

ಸದ್ಯ ಹುಳಿಮಾವು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಶ್ರೀಹರಿಯನ್ನು ಬಂಧಿಸಿರುವ ಪೊಲೀಸರು ವಿಚಾರಣೆ ನಡೆಸ್ತಿದ್ದಾರೆ.

## ಇವನದ್ದೇ..

ಅಷ್ಟಕ್ಕೂ ಆತ ಯಾರು? ಆತನೇ ಪುಟ್ಟಸ್ವಾಮಿ ಅಲಿಯಾಸ್ ಪವನ್. ಪವಿತ್ರ ಹೆಸರಿನಲ್ಲಿ ಚ್ಯಾಟಿಂಗ್ ಆರಂಭಿಸಿ, ರೇಣುಕಾಸ್ವಾಮಿ ಪತ್ತೆ ಮಾಡಿ ಕೊಲೆ ಮಾಡುವವರೆಗೂ ಇದೆ. ಈ ಪ್ರಕರಣದಲ್ಲಿ ಆತ ಎ3 ಆಗಿದ್ದಾನೆ. ಆತ ಪೊಲೀಸರ ಎದುರು ಹಲವು ವಿಚಾರಗಳನ್ನು ಒಪ್ಪಿಕೊಂಡಿದ್ದಾನೆ. ಬಿಕಾಂ ಮುಗಿಸಿ ಎಂಬಿಎ ಮಾಡಿದ ಈತ ದರ್ಶನ್ ಮನೆ ಸೆಕ್ಯೂರಿಟಿ ಗಾರ್ಡ್ ಆಗಿದ್ದ.

ಪವನ್ ಓದುತಿದ್ದ ಕಾಲೇಜು ಬಳಿಯೇ ದರ್ಶನ್ ಮನೆ ಇತ್ತು. ಓದು ಮುಗಿಸಿದ ಬಳಿಕ ದರ್ಶನ್ ಮನೆಯಲ್ಲೇ ಕೆಲಸ ಹುಡುಕಿಕೊಂಡ. ಮೊದಲು ವಾಚ್‌ಮ್ಯಾನ್ ಆಗಿದ್ದ ಈತ ನಂತರ ಮನೆಗೆಲಸ ಮಾಡುತ್ತಿದ್ದ. ನಂತರ ಪವಿತ್ರ ಮನೆಗೆ ತೆರಳುವಂತೆ ಪವನ್‌ಗೆ ದರ್ಶನ್ ಸೂಚನೆ ನೀಡಿದ್ದರು. ಅದರಂತೆ ಪವನ್ ಆರು ವರ್ಷಗಳ ಹಿಂದೆ ಪವಿತ್ರಾ ಮನೆ ಸೇರಿದ್ದ. ಪವಿತ್ರಾ ಗೌಡ ಕಾರ್ ಡ್ರೈವರ್ ಆಗಿ, ಅವರ ಮನೆಗೆಲಸ ಮಾಡಿಕೊಂಡು ಪವನ್ ಇದ್ದ. ಪವಿತ್ರಾ ಗೌಡರನ್ನು ಅಮ್ಮಾಜಿ ಮತ್ತು ಪವಿ ಅಕ್ಕ ಎಂದು ಕರೆಯುತಿದ್ದ. ಈತನ ಸಂಬಳ ತಿಂಗಳಿಗೆ ಕೇವಲ 15 ಸಾವಿ ರೂಪಾಯಿ. ಎಂಬಿಎ ಓದಿ ಮನೆಗೆಲಸ ಮಾಡುತ್ತಿದ್ದ ಪವನ್ ಬಗ್ಗೆ ವಿಜಯಲಕ್ಷ್ಮೀ ಸಾಕಷ್ಟು ಕೋಪ ಇತ್ತು.

ಪವಿತ್ರಾ ಗೌಡ ಅಕೌಂಟ್‌ನಿಂದ ರೇಣುಕಾಸ್ವಾಮಿಗೆ ಪವನ್‌ನಿಂದಲೇ ಮೊದಲ ಸಂದೇಶ ಹೋಗಿತ್ತು. ಮೆಸೇಜ್ ಕಂಡು ಬುದ್ಧಕಲಿಸೊದಾಗಿ ಪವಿತ್ರ ಗೌಡಗೆ ಪವನ್ ತಿಳಿಸಿದ್ದ. ಪವನ್ ತನ್ನ ಫೋನ್ ನಂಬರ್ ಅನ್ನು ರೇಣುಕಾಸ್ವಾಮಿ ಬಳಕೆ ಮಾಡುತ್ತಿದ್ದ ಉಠತಿಣುಚಿಟ ಏ.ಖ ಅಕೌಂಟ್‌ಗೆ ಕಳುಹಿಸಿದ್ದ. ನಂಬರ್ ಕಳುಹಿಸಿದ ಕೂಡಲೇ ಕಾಲ್ ಬಂದಿತ್ತು. ಬಂದ ಕಾಲ್ ರಿಸೀವ್ ಮಾಡಿ ಪವಿತ್ರಾರಿಂದ ಪ್ರೀತಿಯ ಮಾತುಗಳನ್ನು ಆಡುವಂತೆ ಕೇಳಿಕೊಂಡಿದ್ದ ಪವನ್. ನಂತರ ಪವಿತ್ರಾ ಹೆಸರಲ್ಲಿ ಪವನ್ ಮೆಸೇಜ್ ಮಾಡಿದ್ದ.

ನಂತರ ಕಷ್ಟಪಟ್ಟು ರೇಣುಕಾ ಸ್ವಾಮಿಯನ್ನು ಪವನ್ ಹುಡುಕಿದ್ದ. ಪವನ್‌ನಿಂದಲೇ ರೇಣುಕಾಸ್ವಾಮಿ ಕಿಡ್ನ್ಯಾಪ್ ಪ್ಲ್ಯಾನ್ ನಡೆದಿತ್ತು. ರೇಣುಕಾಸ್ವಾಮಿ ಕರೆತರಲು ರಾಘವೇಂದ್ರಗೆ ಪವನ್ ಸೂಚಿಸಿದ್ದ. ಕರೆತಂದ ಮೇಲೆ ಪವನ್ ಮೇಲೆ ಈತನೂ ಹಲ್ಲೆ ಮಾಡಿದ್ದ. ಈ ಬಗ್ಗೆ ಪೊಲೀಸರಿಗೆ ಸ್ವ ಇಚ್ಛಾ ಹೇಳಿಕೆ ನೀಡಿದ್ದಾನೆ.

## ವಿಚಾರಣೆ

ಹಲ್ಲೆ ಮಾಡಿಸಿದ್ದು ಧ್ರುವ ಸರ್ಜಾ ಬಳಿ ಕೆಲಸ ಮಾಡಿಕೊಂಡಿದ್ದ ನಾಗೇಂದ್ರ. ಧ್ರುವ ಸರ್ಜಾಗೆ ನಾಗೇಂದ್ರ ಚಾಲಕನಾಗಿಯೂ ಕೆಲಸ ಮಾಡಿದ್ದ. ನಾಗೇಂದ್ರಗೆ ಸಾಥ್ ಕೊಟ್ಟಿದ್ದೆ ಧ್ರುವ ಸರ್ಜಾ ಮ್ಯಾನೇಜರ್ ಅಶ್ವಿನ್ ಎನ್ನಲಾಗಿತ್ತು.

ಪ್ರಶಾಂತ್ ಪೂಜಾರಿ ಅವರು ಧ್ರುವ ಸರ್ಜಾಗೆ ಆಪ್ತರಾಗಿದ್ದರು. ಧ್ರುವಗೆ ಜಿಮ್‌ನಲ್ಲಿ ಟ್ರೇನ್ ಮಾಡ್ತುತ್ತಿದ್ದುದು ಇದೇ ಪ್ರಶಾಂತ್. ಇಬ್ಬರ ನಡುವಿನ ಆಪ್ತತೆಯನ್ನು ನಾಗೇಂದ್ರ ಹಾಗೂ ಅಶ್ವಿನ್‌ಗೆ ಸಹಿಸಿಕೊಳ್ಳಲು ಆಗುತ್ತಿರಲಿಲ್ಲ ಎನ್ನಲಾಗಿದೆ. ಹೀಗಾಗಿ ಹಲ್ಲೆಗೆ ಪ್ಲ್ಯಾನ್ ರೂಪಿಸಿದರು. ತಾವೇ ಹಲ್ಲೆ ಮಾಡಿದರೆ ಗೊತ್ತಾಗುತ್ತದೆ ಎಂದು ಸ್ನೇಹಿತರ ಕೈಯಲ್ಲಿ ಹಲ್ಲೆ ಮಾಡಿಸಿದ್ದ ಆರೋಪ ಎದುರಾಗಿತ್ತು.

ಕನಕಪುರ ಮೂಲದ ಹರ್ಷ ಮತ್ತು ಸುಭಾಷ್ ಅವರನ್ನು ಮುಂದಕ್ಕೆ ಬಿಟ್ಟು ಅಶ್ವಿನ್ ಹಲ್ಲೆ ಮಾಡಿಸಿದ್ದರು. ತನಿಖೆ ವೇಳೆ ಅಶ್ವಿನ್ ಪಾತ್ರ ಇರೋದು ಬೆಳಕಿಗೆ ಬಂದಿತ್ತು. ಹೀಗಾಗಿ ಕರೆದು ವಿಚಾರಣೆ ಮಾಡಲಾಗಿದೆ. ಈ ಹಿನ್ನಲೆಯಲ್ಲಿ ಅಶ್ವಿನ್ ಬಂಧಿಸಲಾಗಿದೆ. ಕಳೆದ ವರ್ಷ ಅಶ್ವಿನ್ ಹುಟ್ಟುಹಬ್ಬಕ್ಕೆ ಧ್ರುವ ಸರ್ಜಾ ಅವರು ದುಬಾರಿ ಟೊಯೊಟಾ ಫಾರ್ಚೂನರ್ ಕಾರು ಗಿಫ್ಟ್ ಮಾಡಿದ್ದರು.

## ಭವಿಷ್ಯ?

ಅಂದೇ ತೀರ್ಪು ನೀಡುತ್ತೇನೆ ಎಂದು ಹೇಳಿ ವಿಚಾರಣೆ ಮುಂದೂಡಿದ್ದಾರೆ ನ್ಯಾಯಮೂರ್ತಿ ನಾಗಪ್ರಸನ್ನ.

ಸರ್ಕಾರದ ಪರ ವಾದ ಮಂಡಿಸಿದ ಎಜಿ ಶಶಿಕಿರಣ್ ಶೆಟ್ಟಿ, ಯಾವ್ಯಾವ ಪ್ರಕರಣಗಳನ್ನ 17ಎ ಅಡಿ ತನಿಖೆಗೆ ನೀಡಬಹುದು ಎಂಬುದನ್ನು ಉಲ್ಲೇಖಿಸಿದರು. ಅಲ್ಲದೆ ಇದಕ್ಕೆ ಸಂಬಂಧಿಸಿದಂತೆ ಲಲಿತ್ ಕುಮಾರಿ ಪ್ರಕರಣವನ್ನು ಉಲ್ಲೇಖಿಸಿ, ಕೆಲ ಅಂಶಗಳನ್ನ ಕೋರ್ಟ್ ಗಮನಕ್ಕೆ ತಂದು ಈ ಕೇಸ್‌ನಲ್ಲಿ ಶೊಕಾಸ್ ನೋಟಿಸ್ ನೀಡಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದು ಕಾನೂನು ಬಾಹಿರ ಎಂದು ವಾದಿಸಿದರು.

ರಾಜ್ಯಪಾಲರು ತನಿಖಾಧಿಕಾರಿಯಿಂದ ವರದಿ ಪಡೆಯಬೇಕಿತ್ತು. ಸರ್ಕಾರಕ್ಕೆ ಶೋಕಾಸ್ ನೋಟಿಸ್ ನೀಡುವ ಬದಲು ವರದಿ ಪಡೆಯಬೇಕಿತ್ತು. ವರದಿಯ ಬಲವಿಲ್ಲದೆ, ರಾಜ್ಯಪಾಲರು ಅನುಮತಿ ನೀಡಿದ್ದಾರೆ. ಸಿಎಂ ಕೈಗೊಂಡ ನಿರ್ಧಾರ, ಶಿಫಾರಸಿನಲ್ಲಿ ಅಪರಾಧ ಅಂಶವಿರಬೇಕು. 17ಎ ಅಡಿ ಅನುಮತಿ ನೀಡುವಾಗ ಕೃತ್ಯ, ಕರ್ತವ್ಯದ ಭಾಗವಾಗಿತ್ತೇ ಎಂಬುದನ್ನು ನೋಡಬೇಕು ಎಂದು ನ್ಯಾಯಪೀಠಕ್ಕೆ ವಿವರಿಸಿದ ಎಜಿ, ನಂತರ ಬಿ ಎಸ್ ಯಡಿಯೂರಪ್ಪ ಪ್ರಕರಣವನ್ನೂ ಉಲ್ಲೇಖ ಮಾಡಿದರು.

**ಸೆಕ್ಷನ್ 17ಎ ಅಡಿ ಅನುಮತಿಗೆ ಪ್ರಾಥಮಿಕ ತನಿಖೆ ಆಗಿರಬೇಕಿಂದಿಲ್ಲವೇ?:**

ಅಲ್ಲದೇ, ಡಿನೋಟಿಫಿಕೇಷನ್ ಕೇಸ್‌ನಲ್ಲಿ ಸಿಎಂ ಆಗಿದ್ದ ಬಿಎಸ್‌ವೈ ತೀರ್ಮಾನ ಕೈಗೊಂಡಿದ್ದರು. ಆದರೆ, ಮುಡಾ ಕೇಸ್‌ನಲ್ಲಿ ಸಿದ್ದರಾಮಯ್ಯ ತೀರ್ಮಾನ ಕೈಗೊಂಡಿಲ್ಲ. ಸಿಎಂ ಕರ್ತವ್ಯದ ಭಾಗವಾಗಿ ಈ ಕೃತ್ಯ ನಡೆದಿಲ್ಲ. ಈಖಖ ದಾಖಲಿಸುವ ಮೊದಲು ಪ್ರಾಥಮಿಕ ತನಿಖೆ ಅಗತ್ಯವೆಂದಿದೆ. ಆದರೆ, ಸೆಕ್ಷನ್ 17ಎ ಅಡಿ ಅನುಮತಿಗೆ ಪ್ರಾಥಮಿಕ ತನಿಖೆ ಆಗಿರಬೇಕಿಂದಿಲ್ಲವೇ? ಇದಕ್ಕೆ ಅವಕಾಶ ಕೊಟ್ಟರೆ ದಿನನಿತ್ಯ ಹಲವು ಖಾಸಗಿ ದೂರು ದಾಖಲಾಗಬಹುದು. ಸಕ್ಷಮ ಪ್ರಾಧಿಕಾರಿಯೇ ಇದನ್ನೆಲ್ಲಾ ವಿಚಾರಣೆ ನಡೆಸಿದರೆ ಸಮಸ್ಯೆ ಆಗಲಿದೆ, ತನಿಖಾಧಿಕಾರಿಯಂತೆ ರಾಜ್ಯಪಾಲರು ವರ್ತಿಸುವಂತಿಲ್ಲ ಎಂದು ಶಶಿಕಿರಣ್ ಅವರು ವಾದ ಮಂಡಿಸಿದರು.

ಈ ವೇಳೆ ಮಧ್ಯೆ ಪ್ರವೇಶಿಸಿದ ಜಡ್ಜ್, ಪೊಲೀಸರು ಎಫ್‌ಐಆರ್ ದಾಖಲಿಸುವ ಮುನ್ನ ಸೆಕ್ಷನ್ 17ಎ ಅಡಿ ಅನುಮತಿ ಪಡೆಯಬೇಕು. ಕೋರ್ಟ್ ಸೂಚಿಸಿದ್ದರೆ ಎಫ್‌ಐಆರ್ ದಾಖಲಾಗುತ್ತಿತ್ತು. ಇದನ್ನು ತಡೆಯಲು ಖಾಸಗಿ ದೂರುದಾರರಿಗೆ ಅನುಮತಿ ಪಡೆಯುವ ಅವಕಾಶ ನೀಡಲಾಗಿದೆ ಎಂದರು.

**ಖಾಸಗಿ ದೂರುದಾರರ ಮನವಿಯನ್ನು ರಾಜ್ಯಪಾಲರು ಹಿಂತಿರುಗಿಸಬೇಕಿತ್ತು:** ಮತ್ತೆ ವಾದ ಮುಂದುವರಿಸಿದ ಎಜಿ, ತನಿಖಾಧಿಕಾರಿ ಪ್ರಾಥಮಿಕ ತನಿಖೆ ನಡೆಸಬೇಕು, ರಾಜ್ಯಪಾಲರಲ್ಲ. ರಾಜ್ಯಪಾಲರು ಅನುಸರಿಸಿದ ಪ್ರಕ್ರಿಯೆಗೆ ಕಾನೂನಿನಡಿ ಅವಕಾಶವಿಲ್ಲ. ರಾಜ್ಯಪಾಲರು ಖಾಸಗಿ ದೂರುದಾರರಿಗೆ ಅವಕಾಶವನ್ನೇ ನೀಡಬಾರದಿತ್ತು. ದೂರುದಾರ ಪ್ರದೀಪ್ ಕುಮಾರ್ ಪೊಲೀಸರಿಗೆ ದೂರನ್ನೇ ನೀಡಿರಲಿಲ್ಲ. ಖಾಸಗಿ ದೂರುದಾರರ ಮನವಿಯನ್ನು ರಾಜ್ಯಪಾಲರು ಹಿಂತಿರುಗಿಸಬೇಕಿತ್ತು ಎಂದು ವಾದ ಮಂಡಿಸಿದರು.

ಹೀಗೆ ರಾಜ್ಯಪಾಲರು ಅನುಸರಿಸಿದ ಕ್ರಮ ಕಾನೂನು ಬಾಹಿರವಾಗಿದೆ ಎಂದು ಸಿಎಂ ಪರವಾಗಿ ಂಉ ಶಶಿಕಿರಣ್ ಶೆಟ್ಟಿ ಕೂಡ ವಾದ ಮಂಡಿಸಿದ್ದಾರೆ. ಎಜಿ ವಾದ ಮುಗಿಯುತ್ತಲೇ 12ನೇ ತಾರೀಖಿನಂದು, ಈ ಹಿಂದೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಹಾಗೂ ದೂರುದಾರರ ಪರ ವಕೀಲರು ಮಂಡಿಸಿದ್ದ ವಾದಕ್ಕೆ ಪ್ರತಿವಾದ ಮಾಡಲು ಅಜ ಪರ ವಕೀಲ ಅಭಿಷೇಕ್ ಮನು ಸಿಂಘ್ವಿ ಅವಕಾಶ ಕೇಳಿದ್ದಾರೆ. ಸಿಂಘ್ವಿ ಜೊತೆಗೆ ಅಜ ಪರ ಮತ್ತೆ ವಾದ ಮಾಡಲು ವಕೀಲ ರವಿವರ್ಮ ಕುಮಾರ್ ಅವಕಾಶ ಕೇಳಿದ್ದಾರೆ.

ಹೀಗೆ ಸಿಎಂ ಪರವಾಗಿ ವಾದಸರಣಿಯನ್ನು ಮುಂದುವರಿಸುವ ವಕೀಲರ ಸಂಖ್ಯೆ ಹೆಚ್ಚಾಗುತ್ತಲೇ, ಎಷ್ಟು ಜನ ಅಂತಾ ವಾದ ಮಾಡ್ತೀರಿ ಎಂದು ಜಡ್ಜ್ ಪ್ರಶ್ನಿಸಿದರು. ಇದಾದ ನಂತರ 12 ನೇ ತಾರೀಖು ಮಧ್ಯಾಹ್ನ 12 ಗಂಟೆಗೆ ವಿಚಾರಣೆ ಮುಂದೂಡಿ, ಅವತ್ತೇ ಎಲ್ಲರ ವಾದಗಳು ಮಂಡನೆಯಾಗಬೇಕು. ಅದೇ ದಿನ ತೀರ್ಪು ನೀಡುವ ಸುಳಿವನ್ನೂ ನೀಡಿದ್ದಾರೆ. ಹೀಗಾಗಿ ಮತ್ತೆ ಮೂರು ದಿನ ಸಿಎಂಗೆ ರಿಲೀಫ್ ಸಿಕ್ಕಿದ್ದರೂ, ಪ್ರಾಸಿಕ್ಯೂಷನ್ ನ ತೂಗುಗತ್ತಿಯಿಂದ ಪಾರಾಗಿಲ್ಲ. ಇದರಿಂದ ಸಿದ್ದರಾಮಯ್ಯ ಸೀಟು ನಿಜಕ್ಕೂ ಸೇಫಾ ಅಥವಾ ಕುರ್ಚಿಗೆ ಮುಡಾ ಸೈಟುಗಳೇ ಕಂಟಕವಾಗುತ್ತಾ ಎನ್ನುವುದು ಸೆಪ್ಟಂಬರ್ 12ರಂದು ಇತ್ಯರ್ಥವಾಗಲಿದೆ.

# 14ರಂದು ಲೋಕ್ ಆದಾಲತ್

**ಕೋಲಾರ:** ಪಿರ್ಯಾದುದಾರರು ಹಾಗೂ ಆರೋಪಿತರು ನ್ಯಾಯಾಲಯದಲ್ಲಿ ಬಾಕಿಯಿರುವ ತಮ್ಮ ನಡುವಿನ ಸಿವಿಲ್ ಪ್ರಕರಣಗಳು, ರಾಜೀ ಆಗಬಹುದಾದ



ಅಪರಾಧಿಕ ಪ್ರಕರಣ, ವ್ಯಾಜ್ಯಪೂರ್ವ ಪ್ರಕರಣವನ್ನು ರಾಜೀ ಸಂಧಾನ ಪ್ರಕ್ರಿಯೆ ಮುಖಾಂತರ ಇತ್ಯರ್ಥಪಡಿಸಲು, ಸೆಪ್ಟೆಂಬರ್ 14 ರಂದು ನ್ಯಾಯಾಲಯದಲ್ಲಿ ಹಮ್ಮಿಕೊಂಡಿರುವ ಜನತಾ ನ್ಯಾಯಾಲಯ ಮುಂದೆ ತೆಗೆದುಕೊಳ್ಳಲಾಗುವುದು. ಕಾರಣ ಆ ದಿವಸ ಬೆಳಿಗ್ಗೆ 10.30 ಗಂಟೆಗೆ ತಾವು ಲೋಕ್ ಆದಾಲತ್ ಮುಂದೆ ಖುದ್ದಾಗಿ, ತಮ್ಮ ವಕೀಲರೊಂದಿಗೆ ಸಂಬಂಧಪಟ್ಟ ದಾಖಲೆಗಳೊಂದಿಗೆ ಹಾಜರಾಗಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ನಾಳೆ ಜನ ಸಂಪರ್ಕ ಸಭೆ

**ಕೋಲಾರ:** ಕೋಲಾರ ಜಿಲ್ಲಾ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರವರು ಸೆಪ್ಟೆಂಬರ್ 11, 2024 ಬುಧವಾರದಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕೋಲಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಸಭಾಂಗಣದಲ್ಲಿ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಾಗುವುದು. ಆದ್ದರಿಂದ ತಮ್ಮ ಅಧೀನ ಕಛೇರಿಗಳಿಂದ ಪ್ರತಿಯೊಬ್ಬ ಅಧಿಕಾರಿ ಮತ್ತು ಸಿಬ್ಬಂದಿಯವರು ಹಾಜರಾಗಬಹುದು ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

# ಪ್ರಜಾಪ್ರಭುತ್ವ ದಿನದ ಅಂಗವಾಗಿ ಮಾನವ ಸರಪಳಿ

ಕೋಲಾರ: ಪ್ರಜಾಪ್ರಭುತ್ವ ರಾಷ್ಟ್ರವಾದ ನಮ್ಮ ದೇಶದ ಸಾರ್ವಭೌಮತ್ವದ ಹಿರಿಮೆಯನ್ನು ಸ್ಮರಿಸುವ ಸದುದ್ದೇಶದಿಂದ ಇದೇ ಸೆಪ್ಟೆಂಬರ್ 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಜಿಲ್ಲೆಯಲ್ಲಿ ಸಾರ್ವಜನಿಕರು ಹಾಗೂ ಜಾತ್ಯಾತೀತವಾಗಿ ಪ್ರತಿ ನಾಗರೀಕರ ಹಬ್ಬವನ್ನಾಗಿ ಆಚರಿಸಲು ಪ್ರತಿಯೊಬ್ಬರು ಭಾಗವಹಿಸಬೇಕು ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಇಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸುವ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಅವರು ಸೆಪ್ಟೆಂಬರ್ 15 ರಂದು ಬೀದರ್‌ನಿಂದ ಚಾಮರಾಜನಗರದವರೆಗೆ ಸುಮಾರು ಒಟ್ಟು 2800 ಕಿ.ಮೀ ಮಾನವ ಸರಪಳಿಯನ್ನು ನಿರ್ಮಿಸಿ ಪ್ರಜಾಪ್ರಭುತ್ವದ ಮಹತ್ವವನ್ನು ದಾರಿಯುದ್ದಕ್ಕೂ ಪಸರಿಸುವ ಕಾರ್ಯಕ್ರಮ ಇದಾಗಿದೆ. ಈ ಕಾರ್ಯಕ್ರಮ ಜಿಲ್ಲೆಯಲ್ಲಿ ಚಿಕ್ಕೊಂಡಹಳ್ಳಿ ಯಿಂದ ಸಾಗಿ ಕೋಲಾರ ನಗರ ಮಾರ್ಗವಾಗಿ ವೆಂಕಟಾಪುರ ಗೇಟ್‌ವರೆಗೆ ಒಟ್ಟು 55 ಕಿ.ಮೀ ಮಾನವ ಸರಪಳಿ ಹಾಗೂ ಸಂವಿಧಾನ ಬಗ್ಗೆ ತಿಳಿವಳಿಕೆ ಮೂಡಿಸುವುದು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನಡೆಯಲಿದ್ದು, ಹಳ್ಳಿಗಳ ಮೂಲಕ ಈ ಕಾರ್ಯಕ್ರಮ ನಡೆಯಲಿದೆ ಎಂದ ಅವರು ಪ್ರತಿ 1 ಕಿ.ಮೀ ದೂರದಲ್ಲಿ ಆ ಭಾಗದ ಸ್ಥಳೀಯ ಶಾಲಾ ವಿದ್ಯಾರ್ಥಿಗಳು ಸಂಘ ಸಂಸ್ಥೆ ಪದಾಧಿಕಾರಿಗಳು ವಿವಿಧ ಸಂಘಟನೆಗಳು, ವಿವಿಧ ಸಮುದಾಯದ ಪ್ರಮುಖರು, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಸ್ಥಳೀಯ ಜನ ಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿಗಳು ಆ ಭಾಗದ ಗ್ರಾಮಗಳ ಜನತೆ, ಗ್ರಾಮದ ಮುಖಂಡರು, ಸ್ತ್ರೀಶಕ್ತಿ, ವಿವಿಧ ಸಂಘಗಳ ಪದಾಧಿಕಾರಿಗಳು ಭಾಗವಹಿಸಿ ಮಾನವ ಸರಪಳಿ ನಿರ್ಮಿಸಿ ಸಂವಿಧಾನದ ಮಹತ್ವವನ್ನು ಸಾರುವ ಈ ಬೃಹತ್ ಕಾರ್ಯಕ್ರಮದಲ್ಲಿ ಜನರ ಸಹಭಾಗಿತ್ವ ಬಹಳ ಮುಖ್ಯ ವಿಶ್ವದಲ್ಲೇ ಅತಿ ದೊಡ್ಡ ಪ್ರಜಾಪ್ರಭುತ್ವವನ್ನು ನಾವು ಹೊಂದಿದ್ದೇವೆ. ಯುವ ಪೀಳಿಗೆಗೆ ಪ್ರಜಾಪ್ರಭುತ್ವದ ಮೌಲ್ಯಾನುಸಾರ ಶಕ್ತರಾಗಲು ಪ್ರಜಾಪ್ರಭುತ್ವದ ಮೌಲ್ಯಗಳ ಕುರಿತು ಜಾಗೃತಿ ಮೂಡಿಸುವುದು ಬಹಳ ಅವಶ್ಯಕವಾಗಿದೆ. ಈ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರು ಸ್ವಯಂ ಪ್ರೇರಿತವಾಗಿ ಭಾಗವಹಿಸಿ ಯಶಸ್ವಿಗೊಳಿಸಲು ಮನವಿ ಮಾಡಿದ ಜಿಲ್ಲಾಧಿಕಾರಿಗಳು ಪ್ರತಿಯೊಂದು ಕಿ.ಮೀ. ಗೂ ಸರ್ಕಾರಿ ಹಿರಿಯ ಅಧಿಕಾರಿಗಳಿಗೆ ಜವಾಬ್ದಾರಿಯನ್ನು ವಹಿಸಲಾಗಿದ್ದು, ಆಯಾ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ತಾಲ್ಲೂಕು ಅಧಿಕಾರಿಗಳಿಗೆ ನಿಗಾ ವಹಿಸಲು ವಿವಿಧ ಕಾರ್ಯಕ್ರಮಗಳ ಉಸ್ತುವಾರಿ ವಹಿಸಲಾಗಿದೆ ಎಂದರು.

ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ಪ್ರಭುಗಳಾಗಿರುವಾಗ ಸ್ವತಂತ್ರ್ಯದ ಮಹತ್ವ ತಿಳಿದುಕೊಳ್ಳುವುದು ಬಹಳ ಮುಖ್ಯ ನಮ್ಮ ಸಂವಿಧಾನವು ಭಾರತೀಯರ ಹೆಮ್ಮೆ. ಈ ಕಾರ್ಯಕ್ರಮದಲ್ಲಿ ಹಾಗೂ ದಾರಿ ಯುದ್ದಕ್ಕೂ ಆಯಾ ಭಾಗದಲ್ಲಿ ಹಬ್ಬದ ವಾತಾವರಣ ನಿರ್ಮಾಣ ಮಾಡುವತ್ತಾ ಸ್ಥಳೀಯ ಗ್ರಾಮಸ್ಥರು ಹಸಿರು ತೋರಣಗಳಿಂದ ಸಿಂಗರಿಸಿ ತಮ್ಮ ತಮ್ಮ ಊರುಗಳಿಗೆ ಸ್ವಾಗತಿಸುವ ಮತ್ತು ಬಿಳ್ಕೊಡಿಗೆಯನ್ನು ಬಹಳ ವಿಜೃಂಭಣೆಯಿಂದ ನೇರವೇರಿಸಲು ಎಲ್ಲ ಸಮುದಾಯದ ಮುಖಂಡರು, ಸಂಘ ಸಂಸ್ಥೆಗಳ ಸರ್ಕಾರಿ ಖಾಸಗಿ ನೌಕರ, ಶಾಲಾ-ಕಾಲೇಜ್ ವಿದ್ಯಾರ್ಥಿಗಳು ಸೇರಿದಂತೆ ಸ್ವಯಂ ಪ್ರೇರಿತವಾಗಿ ಸಾರ್ವಜನಿಕರು ಭಾಗವಹಿಸಿ ಪ್ರಜಾಪ್ರಭುತ್ವದ ದಿನಾಚರಣೆಯನ್ನು ಹಬ್ಬವಾಗಿ ಆಚರಿಸಲು ಪ್ರತಿಯೊಬ್ಬರು ಭಾಗವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್, ಕೆ.ಜಿ.ಎಫ್ ಪೊಲೀಸ್ ವರಿಷ್ಠಾಧಿಕಾರಿ ಶಾಂತಕುಮಾರ್, ಅಪರ ಜಿಲ್ಲಾಧಿಕಾರಿ ಮಂಗಳ, ಉಪವಿಭಾಗಾಧಿಕಾರಿ ಡಾ. ಮೈತ್ರಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸ್ ಹಾಗೂ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜಿಮ್ ಸ್ಥಾಪನೆ ಸಹಾಯಧನಕ್ಕೆ ಪರಿಶಿಷ್ಟಜಾತಿ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನ

**ಚಾಮರಾಜನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2024-25ನೇ ಸಾಲಿನಲ್ಲಿ ಪರಿಶಿಷ್ಟಜಾತಿ ಉಪಯೋಜನೆಯಡಿ ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟದಲ್ಲಿ ಪದಕ ವಿಜೇತರಾದ ಪರಿಶಿಷ್ಟಜಾತಿ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಹೊಂದಲು ಜಿಮ್ ಸ್ಥಾಪನೆಗಾಗಿ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯಲ್ಲಿ ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟದಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿಯ ಅರ್ಹ ಕ್ರೀಡಾಪಟುಗಳು ನಿಗದಿತ ಅರ್ಜಿಯನ್ನು ನಗರದ ಜಿಲ್ಲಾಡಳಿತ ಭವನದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿ ಸಂಬಂಧಿಸಿದ ದಾಖಲೆಗಳೊಂದಿಗೆ ಸೆಪ್ಟೆಂಬರ್ 23ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ 08226-224932 ಮತ್ತು ಮೊ.ಸಂ 9844160841 ಅನ್ನು ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕರಿಂದ ದೂರು ಸ್ವೀಕಾರ

**ಚಾಮರಾಜನಗರ:** ಲೋಕಾಯುಕ್ತ ಅಧಿಕಾರಿಗಳು ಸೆಪ್ಟೆಂಬರ್ 18ರಂದು ಚಾಮರಾಜನಗರಕ್ಕೆ ಭೇಟಿ ನೀಡಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಗರದ ಪ್ರವಾಸಿಮಂದಿರದಲ್ಲಿ ಸಾರ್ವಜನಿಕರಿಂದ ದೂರು ಅರ್ಜಿಗಳನ್ನು ಸ್ವೀಕರಿಸಿ ವಿಚಾರಣೆ ನಡೆಸಲಿದ್ದಾರೆ. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕ ಕೆಲಸಗಳ ಅನಗತ್ಯ ವಿಳಂಬ ಹಾಗೂ ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗದಿತ ನಮೂನೆ-1 ಮತ್ತು 2ರಲ್ಲಿ ಭರ್ತಿ ಮಾಡಿ ನೀಡಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರಾದ ಕೆ.ಟಿ. ಮ್ಯಾಥ್ಯೂಸ್ ಥಾಮಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಚಾಮರಾಜನಗರ:** ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಅದರ ವ್ಯಾಪ್ತಿಗೆ ಒಳಪಡುವ ಇತರೆ ನಿಗಮಗಳಿಂದ 2024-25ನೇ ಸಾಲಿನ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ್ 15ರವರೆಗೆ ವಿಸ್ತರಿಸಲಾಗಿದೆ. ನಿಗಮಗಳ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಆಗಸ್ಟ್ 31ರವರೆಗೆ ನಿಗದಿಪಡಿಸಲಾಗಿತ್ತುಸ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ಚಾಮರಾಜನಗರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಜಿಲ್ಲೆಯ ವಿಕಲಚೇತನ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮತ್ತು ವಿವಾಹ ಪ್ರೋತ್ಸಾಹಧನ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮತ್ತು ಸಾಮಾನ್ಯ ವ್ಯಕ್ತಿ ವಿಕಲಚೇತನರ ವ್ಯಕ್ತಿಯನ್ನು ವಿವಾಹವಾಗುವ ವ್ಯಕ್ತಿಗಳಿಗೆ ವಿವಾಹ ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ತಾಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದು ಅಕ್ಟೋಬರ್ 5ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ (ದೂ.ಸಂ 08226-223688) ಹಾಗೂ ಚಾಮರಾಜನಗರ ಎಂ.ಆರ್. ಡಬ್ಲ್ಯೂ ರಾಜೇಶ್ (8073716208), ಕೊಳ್ಳೇಗಾಲ ಎಂ.ಆರ್. ಡಬ್ಲ್ಯೂ ಕವಿರತ್ನ (7892715408), ಗುಂಡ್ಲುಪೇಟೆ ಎಂ.ಆರ್. ಡಬ್ಲ್ಯೂ ಮಂಜುಳ (9742423332), ಯಳಂದೂರು ಎಂ.ಆರ್.ಡಬ್ಲ್ಯೂ ಮಹದೇವಮ್ಮ (9740164149) ಅವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮನೆ ಕಳ್ಳತನ ಆರೋಪಿ ಬಂಧನ : ಚಿನ್ನಾಭರಣ, ನಗದು ವಶ

**ಚಾಮರಾಜನಗರ:** ಸಂತೇಮರಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮನೆಕಳ್ಳತನ ಪ್ರಕರಣದ ಆರೋಪಿಯನ್ನು ಪತ್ತೆ ಹಚ್ಚಿ ಆತನಿಂದ 1,31,500 ರೂ. ಮೌಲ್ಯದ ಚಿನ್ನಾಭರಣ ಹಾಗೂ ನಗದನ್ನು ವಶಪಡಿಸಿಕೊಳ್ಳಲಾಗಿದೆ. ಸಂತೇಮರಹಳ್ಳಿ ಪೊಲೀಸ್ ಠಾಣೆಯಲ್ಲಿ ಸೆಪ್ಟೆಂಬರ್ 7ರಂದು ದಾಖಲಾದ ಮನೆಕಳ್ಳತನ ಪ್ರಕರಣದ ಆರೋಪಿಯ ಪತ್ತೆ ಸಂಬಂಧ ಸಿಪಿಐ ಬಸವರಾಜು ಸಂತೇಮರಹಳ್ಳಿ ವೃತ್ತ ಅವರ ನೇತೃತ್ವದ ತಂಡದಲ್ಲಿ ಪಿಎಸ್ಐ ಟಿ.ಎಂ. ತಾಜುದ್ದೀನ್ ಹಾಗೂ ಚಂದ್ರಶೇಖರ (ಅಪರಾಧ) ಅವರು ಸೆಪ್ಟೆಂಬರ್ 8ರಂದು ಆರೋಪಿಯನ್ನು ವಶಕ್ಕೆ ಪಡೆದು ಕಳುವಾಗಿದ್ದ 1,31,500 ರೂ. ಮೌಲ್ಯದ 21.5 ಗ್ರಾಂ.ನ ಒಂದು ಚಿನ್ನದ ಸರ ಮತ್ತು ಡಾಲರ್, 5 ಗ್ರಾಂ.ನ ಒಂದು ಉಂಗುರ, 21,500 ರೂ. ನಗದು ಹಣ ವಶಕ್ಕೆ ಪಡೆದಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಎಸ್. ಮಾದೇಶ, ರಮೇಶ, ಕೆ.ಜಿ. ಸುಂದ್ರಪ್ಪ ಮತ್ತು ಆರ್. ಯಶವಂತ್ ಅವರು ಪಾಲ್ಗೊಂಡಿದ್ದರು. ಪತ್ತೆ ಕಾರ್ಯದಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿ, ಸಿಬ್ಬಂದಿಗಳ ಕಾರ್ಯವನ್ನು ಪೊಲೀಸ್ ಅಧೀಕ್ಷಕರಾದ ಡಾ. ಬಿ.ಟಿ. ಕವಿತಾ ಅವರು ಪ್ರಶಂಸಿದ್ದಾರೆ ಎಂದು ತಿಳಿಸಿದೆ.

# ಡ್ರೈವರ್ ರುದ್ರಪ್ಪ ನಿಧನ

**ವಿಜಯಪುರ:** ಪಟ್ಟಣದ ಶ್ರೀ ಸೋಮೇಶ್ವರ ಸ್ವಾಮಿ ದೇವಾಲಯ



ರಸ್ತೆಯಲ್ಲಿ ವಾಸವಾಗಿದ್ದ ಡ್ರೈವರ್ ರುದ್ರಪ್ಪ (80) ರವರು ಅವರ ನಿವಾಸದಲ್ಲಿಯೇ ವಯೋ ಸಹಜ ಅನಾರೋಗ್ಯದಿಂದ ಸೋಮವಾರದಂದು ನಿಧನರಾಗಿರುತ್ತಾರೆ. ಮೃತರು ಪತ್ನಿ, ಓರ್ವ ಪುತ್ರ ಹಾಗೂ ಮೂವರು ಹೆಣ್ಣು ಮಕ್ಕಳನ್ನು ಅಗಲಿರುತ್ತಾರೆ. ಮೃತರ ಅಂತ್ಯಸಂಸ್ಕಾರವನ್ನು ಪಟ್ಟಣದ ಅಯೋಧ್ಯಾನಗರ ಶಿವಾಚಾರ ವೈಶ್ಯ ನಗರ್ತ ರುದ್ರ ಭೂಮಿಯಲ್ಲಿ ನೆರವೇರಿಸಲಾಯಿತು.

# ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯ ಬಗ್ಗೆ ಅರಿವು ಮೂಡಿಸಿ

**ಕೋಲಾರ:** ಜಿಲ್ಲಾ ಕಾರ್ಯಪಡೆಯ ಅಧಿಕಾರಿಗಳು ಹಾಗೂ ಸೆಕ್ಷನ್ 17ರ ಅಡಿಯಲ್ಲಿ ಬರುವಂತಹ ಎಲ್ಲಾ ಅಧಿಕಾರಿಗಳು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ದಾಳಿಯಲ್ಲಿ ಭಾಗವಹಿಸುವುದು ಹಾಗೂ ರಕ್ಷಣೆ ಮಾಡಿದಂತಹ ಮಕ್ಕಳಿಗೆ ಮೊರಾರ್ಜಿದೇಸಾಯಿ, ಅಲ್ಪಸಂಖ್ಯಾತರ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ವಸತಿ ಶಾಲೆಗಳಿಗೆ ದಾಖಲಿಸಬೇಕು ಎಂದು ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷ ಅವರು ತಿಳಿಸಿದರು. ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ, ಕೋಲಾರದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಜಿಲ್ಲಾ ಕಾರ್ಯಪಡೆ (ಖಿಚಿಞ ಈಔಡಿಛಿಜ) ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಬೈಲಾ ನವೀಕರಿಸುವ ಬಗ್ಗೆ ಚರ್ಚಿಸಿದರು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ಕಾರ್ಯಕ್ಷಮತೆಯ ಆಧಾರದ ಮೇಲೆ ಮುಂದುವರೆಸಲು ತಿಳಿಸಿದರು. ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಯ ಬಗ್ಗೆ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಮಾಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಹಾಗೂ ಸೆಕ್ಷನ್ 16 17ರ ನಿರೀಕ್ಷಕರು ಬಾಲಕಾರ್ಮಿಕರ ಹಾಗೂ ಕಿಶೋರ ಕಾರ್ಮಿಕರ ದಾಳಿಯಲ್ಲಿ ಪಾಲ್ಗೊಂಡು ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿ ಮಾಡುವಲ್ಲಿ ಎಲ್ಲಾ ಅಧಿಕಾರಿಗಳು ಶ್ರಮ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕರು ಮಾತನಾಡಿ Pan-India Rescue & Rehabilitation campaign ಸಂಬಂಧಿಸಿದಂತೆ ದಿನಾಂಕ:01-04-2024 ರಿಂದ 31-08-2024 ರವರೆಗೆ ಬಾಲಕಾರ್ಮಿಕ ಕಿಶೋರ ಕಾರ್ಮಿಕರ ದಾಳಿಯಲ್ಲಿ 04 ಬಾಲ ಕಾರ್ಮಿಕರು ಹಾಗೂ 06 ಕಿಶೋರ ಕಾರ್ಮಿಕರನ್ನು ಪತ್ತೆಹಚ್ಚಿ ಪುನರ್ವಸತಿ ಕಲ್ಪಿಸಲಾಗಿದೆ ಎಂದರು. ಸಭೆಯಲ್ಲಿ ಕಾರ್ಮಿಕ ಅಧಿಕಾರಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಕಾರ್ಮಿಕ ನಿರೀಕ್ಷಕರು ಸೇರಿದಂತೆ ಮತ್ತಿರರರು ಉಪಸ್ಥಿತರಿದ್ದರು.



# 15ರಂದು ಮಾನವ ಸರಪಳಿ ನಿರ್ಮಿಸಿ

## ಪ್ರಜಾಪ್ರಭುತ್ವ ದಿನ ಆಚರಿಸಲು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮನವಿ



**ಚಿಕ್ಕಬಳ್ಳಾಪುರ:** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಜಿಲ್ಲೆಯಲ್ಲಿ ಎಲ್ಲ ವರ್ಗದ ಸಾರ್ವಜನಿಕರು ಆಗಮಿಸಿ ಬೃಹತ್ ಮಾನವ ಸರಪಳಿ ನಿರ್ಮಿಸುವ ಮೂಲಕ ಅರ್ಥಪೂರ್ಣವಾಗಿ ಪ್ರಜಾಪ್ರಭುತ್ವ ದಿನವನ್ನು ಆಚರಣೆ ಮಾಡಲು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಮನವಿ ಮಾಡಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಸರ್. ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ನಡೆದ ''ಅಂತರಾಷ್ಟ್ರೀಯ ಪ್ರಜಾ ಪ್ರಭುತ್ವ ದಿನಾಚರಣೆ''ಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೀದರ್ ನಿಂದ ಚಾಮರಾಜನಗರದ ವರೆಗೆ ಬೃಹತ್ ಮಾನವ ಸರಪಳಿಯನ್ನು ನಿರ್ಮಿಸಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15 ರಂದು ಬೆಳಿಗ್ಗೆ 8:30 ರಿಂದ 9:30ರ ಸಮಯದಲ್ಲಿ ರಾಜ್ಯದಾದ್ಯಂತ ಏಕ ಕಾಲಕ್ಕೆ ಆಚರಣೆ ಮಾಡಲು ಸರ್ಕಾರದ ನಿರ್ದೇಶನವಿದೆ. 2500 ಕಿಲೋ ಮೀಟರ್ ನ ಉದ್ದ 25 ಲಕ್ಷ ಜನರನ್ನು ಒಳಗೊಂಡ ಎಲ್ಲ ವರ್ಗದವರು ಭಾಗವಹಿಸಲಿದ್ದಾರೆ, ಅದರಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗಡಿಯ ಭಾಗಕ್ಕೆ ಹೊಂದಿಕೊಂಡಿರುವ ಚಿಕ್ಕಬಳ್ಳಾಪುರ ಜಿಲ್ಲೆಯ ಮೊಡಕು ಹೊಸಹಳ್ಳಿ ಗ್ರಾಮದಿಂದ ಆರಂಭಗೊಂಡು ಕೋಲಾರ ಜಿಲ್ಲೆಯ ಗಡಿಯ ಭಾಗವಾದ ಹೆಚ್ ಕ್ರಾಸ್ ಬಳಿ ಚಿಕ್ಕಗೊಂಡಹಳ್ಳಿಯ ವರಗೆ ಜಿಲ್ಲೆಯಲ್ಲಿ 47 ಕಿಲೋ ಮೀಟರ್ ಬೃಹತ್ ಮಾನವ ಸರಪಳಿಯನ್ನು ನಿರ್ಮಿಸಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಬೇಕಾಗಿದೆ. ಚಿಕ್ಕಬಳ್ಳಾಪುರ ನಗರದ ಜಿಲ್ಲಾಡಳಿತ ಭವನದ ಮುಂಭಾಗದ ವೇದಿಕೆಯ ಕಾರ್ಯಕ್ರಮದಲ್ಲಿ ಪ್ರಜಾಪ್ರಭುತ್ವದ ಮಹತ್ವ ಬಗ್ಗೆ ವಿಷಯ ತಜ್ಞರಿಂದ ಭಾಷಣದ ಮೂಲಕ ತಿಳಿಸಲಾಗುತ್ತದೆ. ಪ್ರತಿ ಒಂದು ಕೀಲೋ ಮೀಟರ್ ಗೆ 800 ಜನಗಳಿಂದ ಮಾನವ ಸರಪಳಿ ನಿರ್ಮಿಸಲು ಸಿದ್ಧತೆ ಕೈಗೊಳ್ಳಲು ಪ್ರಭಾರ ವಹಿಸಿ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ನೇಮಿಸಲಾಗಿದೆ. ಅಂದು ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಕುಡಿಯುವ ನೀರು, ಮಜ್ಜಿಗೆ, ಪೊಲೀಸ್ ಬಂದೋಬಸ್ತ್, ಆರೋಗ್ಯ ಸೇವೆ, ಅಬುಂಲೆನ್ಸ್ ನಿಲುಗಡೆ, ವಿದ್ಯಾರ್ಥಿಗಳಿಗೆ ವಾಹನ ವ್ಯವಸ್ಥೆ ಹಾಗೂ ಮೂಲಭೂತ ಸೌರ್ಕಯಗಳನ್ನು ಒದಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಮಾನವ ಸರಪಳಿ ಜೊತೆಗೆ ಪ್ರತಿ ಒಂದು ಕಿಲೋ ಮೀಟರ್ ಗೆ ರಸ್ತೆ ಬದಿಯಲ್ಲಿಅಂದು ಗಿಡ ನೆಡುವ ಮೂಲಕ ಪ್ರಜಾಪ್ರಭುತ್ವ ದಿನಾಚರಣೆಯನ್ನು ಅರ್ಥ ಪೂರ್ಣವಾಗಿ ಆಚರಿಸಬೇಕು ಎಂದು ತಿಳಿಸಿದರು.

ಜನಪ್ರತಿನಿದಿನಗಳು, ಸಾರ್ವಜನಿಕರು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಸರ್ಕಾರೇತರ ಸಂಸ್ಥೆಗಳು, ಸ್ವ-ಸಹಾಯ ಸಂಘಗಳ ಸದಸ್ಯರು ಪದಾಧಿಕಾರಿಗಳೆಲ್ಲರ ಸಹಕಾರ ಪಡೆದು ಆಚರಣೆ ಮಾಡಲು ಎಲ್ಲಾ ಇಲಾಖೆಗಳು ಸಮನ್ವಯ, ಸಹಕಾರದೊಂದಿಗೆ ಕಾರ್ಯ ನಿರ್ವಹಿಸಬೇಕು. ಅದಕ್ಕೆ ಬೇಕಾದ ಎಲ್ಲಾ ಸಿದ್ದತೆಗಳನ್ನು ಈಗಿನಿಂದಲೇ ಕೈಗೊಳ್ಳಬೇಕೆಂದು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಣೆಯ ಕಾರ್ಯಕ್ರಮಕ್ಕೆ ಜಿಲ್ಲೆಯ ಸಮಸ್ತ ನಾಗರೀಕರು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸಿ ಯಶಸ್ಸುಗೊಳಿಸಲು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್ ಹಾಗೂ ಅಪರ ಪೊಲೀಸ್ ವರಿಷ್ಠಾಧಿಕಾರಿ ಆರ್ ಐ ಕಾಸಿಂ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬೈಲಾಂಜಿನಪ್ಪ, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಆಡಳಿತ ಸಂಸ್ಥೆಗಳ ಜನಪ್ರತಿನಿದಿನಗಳು, ಎಲ್ಲ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಉಪ ಅಧ್ಯಕ್ಷರು ಮತ್ತು ಸದ್ಯಸರು, ವಿವಿಧ ಸಂಘ ಸಂಸ್ಥೆಗಳ ಮುಖಂಡರು ಉಪಸ್ಥಿತರಿದ್ದರು.

# ಉಚಿತ ಕೃತಕ ಕೈಕಾಲು ವಿತರಣೆ

**ಮಂಡ್ಯ:** ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಮಹಾಸಂಸ್ಥಾನ, ದಕ್ಷಿಣಾಮ್ನಾಯ ಶ್ರೀ ಶಾರದಾಪೀಠ, ಶೃಂಗೇರಿ ಜಗದ್ಗುರು ಶ್ರೀ ಶ್ರೀ ಭಾರತೀತೀರ್ಥ ಮಹಾಸ್ವಾಮಿಗಳ ಸಂನ್ಯಾಸ ದೀಕ್ಷೆಯ ಸುವರ್ಣ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ಶಿಬಿರದಲ್ಲಿ ವಿಕಲಚೇತನರಿಗೆ ಕೃತಕ ಕೈ ಕಾಲುಗಳನ್ನು ಉಚಿತವಾಗಿ ನೀಡಲು ಸೆಪ್ಟಂಬರ್ 27 ರಿಂದ 29 ರವರೆಗೆ ಬೆಂಗಳೂರಿನ ಶಂಕರಪುರಂನ ಪಂಚಮಹಾಕವಿ ರಸ್ತೆಯಲ್ಲಿರುವ ಶ್ರೀ ಚಂದ್ರಶೇಖರ ಭಾರತಿ ಕಲ್ಯಾಣ ಮಂಟಪದಲ್ಲಿ ಶಿಬಿರವನ್ನು ಆಯೋಜಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ವಿಕಲಚೇತನರುಗಳು ಶಿಬಿರಕ್ಕೆ ಆಧಾರ್ ಕಾರ್ಡ್ ಹಾಗೂ ಅಂಗವಿಕಲರ ಗುರುತಿನ ಚೀಟಿಯ ಜೆರಾಕ್ಸ್ ಪ್ರತಿಯೊಂದಿಗೆ ಶಿಬಿರದಲ್ಲಿ ಭಾಗವಹಿಸಿ ಕೃತಕಾಂಗಗಳನ್ನು ಉಚಿತವಾಗಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 9845585213 (ಸೂರ್ಯನಾರಾಯಣ) ಹಾಗೂ ದೂ.ಸಂ:9342069904 (ಶಂಕರ್ ಅಗರ್ವಾಲ್) ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಶ್ರೀರಂಗಪಟ್ಟಣ ದಸರಾ: ಕಲಾವಿದರಿಂದ ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಶ್ರೀರಂಗಪಟ್ಟಣ ದಸರಾ ಕಾರ್ಯಕ್ರಮವನ್ನು ಅಕ್ಟೋಬರ್ 04 ರಿಂದ ಹಮ್ಮಿಕೊಳ್ಳಲಾಗಿದ್ದು, ಸದರಿ ಕಾರ್ಯಕ್ರಮಕ್ಕೆ ಕಲಾವಿದರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸೆಪ್ಟಂಬರ್ 20 ರೊಳಗೆ ತಮ್ಮ ಕಲಾಪ್ರಕಾರ ಮಾಹಿತಿಯೊಂದಿಗೆ ಬ್ಯಾಂಕ್ ಖಾತೆ ಜೆರಾಕ್ಸ್ ಪ್ರತಿ ಸಹಿತ ಮಂಡ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 08232-223197 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 13ರಂದು ಬೃಹತ್ ಉದ್ಯೋಗ ಮೇಳ

**ಬೆಂಗಳೂರು ಗ್ರಾಮಾಂತರ:** ಸೆಪ್ಟೆಂಬರ್ 13ರಂದು ದೇವನಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯಲಿರುವ ಜಿಲ್ಲಾಮಟ್ಟದ ಬೃಹತ್ ಉದ್ಯೋಗಮೇಳಕ್ಕೆ ಇದುವರೆಗೆ 116 ಕಂಪನಿಗಳು ನೋಂದಾಯಿಸಿಕೊಂಡಿದ್ದು, ವಿವಿಧ ಕಂಪನಿ ಹಾಗೂ ಏಜೆನ್ಸೀ ವತಿಯಿಂದ 28,840 ಉದ್ಯೋಗಗಳಿಗೆ ಬೇಡಿಕೆ ಇದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅವರು ಹೇಳಿದರು.



ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ನಡೆದ ಉದ್ಯೋಗ ಮೇಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಮಟ್ಟದ ಬೃಹತ್ ಉದ್ಯೋಗಮೇಳದಲ್ಲಿ ಅಂದಾಜು 120 ಕ್ಕೂ ಅಧಿಕ ನಿಯೋಜಕರು/ಕಂಪನಿಗಳು ಹಾಗೂ 15,000 ಉದ್ಯೋಗಾಂಕ್ಷಿಗಳ ಭಾಗವಹಿಸುವ ಗುರಿ ಹೊಂದಲಾಗಿದೆ. ಇದುವರೆಗೂ ನೇರ ಸಂದರ್ಶನ ಮೂಲಕ ಆಯ್ಕೆಗೆ ಅಂದಾಜು 8,000 ಉದ್ಯೋಗ ಬೇಡಿಕೆ ಇದೆ ಹಾಗೂ ಏಜೆನ್ಸೀ ಮೂಲಕ ಆಯ್ಕೆಗೆ 20,000 ಉದ್ಯೋಗಕ್ಕೆ ಬೇಡಿಕೆ ಇದೆ ಎಂದು ಹೇಳಿದರು. ಪ್ರತಿ ಗ್ರಾಮ ಪಂಚಾಯಿತಿಗೆ 100 ಉದ್ಯೋಗಾಂಕ್ಷಿಗಳು ನೋಂದಣಿ ಹಾಗೂ ನಗರಸಭೆ ಮತ್ತು ಪುರಸಭೆ ವ್ಯಾಪ್ತಿಗಳಲ್ಲಿ 2000 ದಿಂದ 3000 ಉದ್ಯೋಗಾಂಕ್ಷಿಗಳ ನೋಂದಣಿ ಮಾಡಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಆನ್ಲೈನ್ ನಲ್ಲಿ ನೋಂದಾಯಿಸಿಕೊಳ್ಳದ ಉದ್ಯೋಗಾಂಕ್ಷಿಗಳಿಗೆ ಸ್ಥಳದಲ್ಲಿಯೇ ನೋಂದಣಿ ವ್ಯವಸ್ಥೆ ಕಲ್ಪಿಸಿ, ಉದ್ಯೋಗಾಂಕ್ಷಿಗಳ ವಿದ್ಯಾಬ್ಯಾಸಕ್ಕೆ ಅನುಗುಣವಾಗಿ ಕಂಪನಿಗಳ ಬಳಿ ಸಂದರ್ಶನಕ್ಕೆ ತೆರಳಲು ಮಾರ್ಗದರ್ಶನ ಮಾಡಲು ಎನ್.ಎಸ್.ಎಸ್, ಎನ್.ಸಿ.ಸಿ ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳನ್ನು ನೇಮಿಸಿ. ಉದ್ಯೋಗಾಂಕ್ಷಿಗಳಿಗೆ ನೆರವಾಗಲು ಕಂಪನಿ ವಿವರಗಳು, ಸಂದರ್ಶನಕ್ಕೆ ಹಾಜರಾಗಿ ಬೇಕಾದ ವಿಳಾಸದ ಸೂಚನಾ ಫಲಕಗಳನ್ನು ಅಳವಡಿಸಲು ಅಧಿಕಾರಿಗಳಿಗೆ ಸೂಚಿಸಿದರು. ಎಸ್ಎಸ್ಎಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಇಂಜಿನಿಯರಿಂಗ್, ಯಾವುದೇ ಪದವಿ ಹಾಗೂ ಸ್ನಾತಕೋತ್ತರ ಪದವಿ ಹೊಂದಿರುವ ಮತ್ತು ವಿವಿಧ ತರಬೇತಿ ಸಂಸ್ಥೆಗಳಲ್ಲಿ ಕೌಶಲ್ಯ ತರಬೇತಿ ಪಡೆದ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿರುತ್ತದೆ. ಉದ್ಯೋಗಮೇಳದಲ್ಲಿ ಭಾಗವಹಿಸಲು ಉದ್ಯೋಗಕಾಂಕ್ಷಿಗಳು https://bangalorerural.nic.in/en/job-fair/5 ನೋಂದಾಯಿಸಿಕೊಳ್ಳಬಹುದಾಗಿರುತ್ತದೆ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಕೆ.ಎನ್ ಅನುರಾಧ ಅವರು ಮಾತನಾಡಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ, ಗ್ರಾಮ ಪಂಚಾಯಿತಿ ಪಿ.ಡಿ.ಒ ಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದ್ದು ಉದ್ಯೋಗ ಮೇಳಕ್ಕೆ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಳ್ಳಲು ಕ್ರಮ ವಹಿಸಿ ಎಂದು ಹೇಳಲಾಗಿದೆ. ಉದ್ಯೋಗಾಂಕ್ಷಿಗಳು ಕೂಡ ಹತ್ತಿರದ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಹಾಗೂ ತಾಲ್ಲೂಕು ಪಂಚಾಯಿತಿ ಕಛೇರಿಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದ್ದು ಉದ್ಯೋಗಾಂಕ್ಷಿಗಳು ಇದರ ಸದುಪಯೋಗ ಪಡಿಸಿಕೊಳ್ಳಿ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿಗಳಾದ ಅಮರೇಶ್.ಹೆಚ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೆ ರಮೇಶ್, ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಜಂಟಿ ನಿರ್ದೇಶಕರಾದ ನರೇಂದ್ರ ಬಾಬು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಗನ್ನಾಥ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಮಂಡ್ಯ:** ಬೆಂಗಳೂರಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಅಕ್ಟೋಬರ್ 17 ರಂದು ನಡೆಯುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ನೀಡಿ ಗೌರವಿಸಲು ಪರಿಶಿಷ್ಟ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಸೂಕ್ತ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆಪ್ಟಂಬರ್ 17 ಕೊನೆಯ ದಿನವಾಗಿದ್ದು, ಸಂಬಂಧಿಸಿದ ಸಮಾಜಕಲ್ಯಾಣ ಇಲಾಖೆಯ ತಾಲ್ಲೂಕು ಸಹಾಯಕ ನಿರ್ದೇಶಕರಿಂದ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ ಸಲ್ಲಿಸುವುದು. ಅನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಹಾಗೂ ಸಂಬಂಧಪಟ್ಟ ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರುಗಳನ್ನು ಸಂಪರ್ಕಿಸಬೇಕೆಂದು ಮಂಡ್ಯ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಕ್ಕಳ ದಿನಾಚರಣೆ-2024ರ ಪ್ರಯುಕ್ತ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತದೆ. ಪ್ರಕರಣವು ಆಗಸ್ಟ್ 01, 2023 ರಿಂದ ಜುಲೈ 31, 2024 ರೊಳಗೆ ನಡೆದಿರಬೇಕು. ಆಗಸ್ಟ್ 01, 2006 ರಂದು ಹಾಗೂ ನಂತರ ಜನಿಸಿದ ಮಕ್ಕಳು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10000ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ. ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ.100000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು. ಪ್ರಸಕ್ತ ಸಾಲಿನ ಪ್ರಶಸ್ತಿಗಾಗಿ ಕಛೇರಿಯಿಂದ ಪಡೆದು ಸೆಪ್ಟಂಬರ್ 17 ರೊಳಗೆ ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿ ಸಲ್ಲಿಸಬಹುದು. ನಿಗಧಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08152-222753, 223665, 9663294415 ಯನ್ನು ಸಂಪರ್ಕಿಸಬಹುದು.

# ಪರಿಶೀಲಿಸುವುದಾಗಿ ಭರವಸೆ ನೀಡಿದ ವಿ.ಸೋಮಣ್ಣ

**ಬೆಂಗಳೂರು:** ರೈಲ್ವೆ ಮಂತ್ರಾಲಯದಿಂದ ಮಾನ್ಯತೆ ಪಡೆದ ಪತ್ರಕರ್ತರಿಗೆ ರೈಲ್ವೆ ಪಾಸ್ ನೀಡುವ ಯೋಜನೆಯನ್ನು ಪುನರಾರಂಭಿಸಬೇಕು ಎಂದು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಏಗಘಾಎ)ವು ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಅವರಲ್ಲಿ ಮನವಿ ಮಾಡಿದೆ. ಕೇಂದ್ರ ಸರ್ಕಾರವೇ ಶೇ.50 ರಿಯಾಯಿತಿ ದರದಲ್ಲಿ ರೈಲು ಪ್ರಯಾಣ ಮಾಡುವ ಸೌಲಭ್ಯವನ್ನು ಪತ್ರಕರ್ತರಿಗೆ ಕಲ್ಪಿಸಿತ್ತು. ಕೋವಿಡ್ ನಂತರ ಪತ್ರಕರ್ತರ ರೈಲ್ವೆ ಪಾಸ್ ಸೌಲಭ್ಯವನ್ನು ರದ್ದು ಮಾಡಿದೆ. ಇದರಿಂದಾಗಿ ಕೇಂದ್ರ ಸರ್ಕಾರದಿಂದ ಪತ್ರಕರ್ತರಿಗೆ ಲಭ್ಯವಿದ್ದ ಯೋಜನೆಯು ಇಲ್ಲದಂತಾಗಿದೆ ಎಂದು ಮನವಿಯಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದ್ದಾರೆ.

ಈ ಬಗ್ಗೆ ಮರುಚಿಂತನೆ ಮಾಡಿ ಮಾನ್ಯತೆ ಪಡೆದ ಪತ್ರಕರ್ತರಿಗೆ ಈ ಮೊದಲು ಇದ್ದಂತೆ ರೈಲ್ವೆ ಪಾಸ್ ಸೌಲಭ್ಯವನ್ನು ಈ ಕೂಡಲೆ ಪುನರಾರಂಭಿ ಸಬೇಕೆಂದು ಅವರು ಸೋಮಣ್ಣ ಅವರಲ್ಲಿ ವಿನಂತಿಸಿಕೊಂಡಿದ್ದಾರೆ.

## ಚರ್ಚಿಸಿ ಸೂಕ್ತ ಕ್ರಮ

**ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಮನವಿಗೆ ಸ್ಪಂಧಿಸಿರುವ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಅವರು, ಪತ್ರಕರ್ತರ ಯೋಜನೆಯನ್ನು ಯಾವ ಕಾರಣಕ್ಕೆ ನಿಂತಿದೆ ಎನ್ನುವ ಮಾಹಿತಿ ಇಲ್ಲ. ದೆಹಲಿಗೆ ತೆರಳಿದ ಬಳಿಕ ಈ ಬಗ್ಗೆ ಚರ್ಚೆ ನಡೆಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದ್ದಾರೆ.**

# ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಹಿಂದೂಸ್ಥಾನ್ ಏರೋನಾಟಿಕ್ ಲಿಮಿಟೆಡ್ ಬೆಂಗಳೂರು ಇವರು 2024-25 ನೇ ಸಾಲಿಗೆ ಶಿಶಿಕ್ಷು ತರಬೇತಿಗಾಗಿ (ಅಪ್ರೆಂಟಿಶಿಪ್) ಈ ಕೆಳಕಂಡ ವೃತ್ತಿಗಳಲ್ಲಿ ITI, in Fitter, Turner, Machinist, Electrician, Welder COPA, Carpenter, Foundry Man, Sheet Metal Worker, Tool and die Maker and CNC Programmer Cum Operator ವಿಭಾಗಗಳಲ್ಲಿ ಕ್ರಾಫ್ಟ್ ಮೆನ್ ಟ್ರೈನಿಂಗ್ ಸ್ಕೀಮ್ ನಲ್ಲಿ (ಅಖಿಖ) ತೇರ್ಗಡೆ ಹೊಂದಿರುವ ಅಭ್ಯರ್ಥಿಗಳಿಗೆ ಅಪ್ರೆಂಟಿಶಿಪ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಮತ್ತು 2 apprenticeshipindia.org/ candidate- registration ನಲ್ಲಿ ನೋಂದಾಯಿಸಿಕೊಂಡು ನೋಂದಾಯಿಸಿದ ಸಂಖ್ಯೆ ಹಾಗೂ ಅರ್ಜಿಗಳನ್ನು ಡೌನ್‌ಲೊಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಉದ್ಯೋಗಾಧಿಕಾರಿಗಳು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಕಚೇರಿಗೆ ಅಕ್ಟೋಬರ್ 3 ರೂಳಗೆ ಸಲ್ಲಿಸಲುಕೋರಲಾಗಿದೆ. ಹೆಚ್ಚಿದ ಮಾಹಿತಿಗಾಗಿ ವೆಬ್ಸೈಟ್: www.halindia.co.in ಮತ್ತು ದೂರವಾಣಿ ಸಂಖ್ಯೆ: 8310004823 ರನ್ನು ಸಂಪರ್ಕಿಸಬಹುದಾಗಿದೆ.

**ಕರ್ನಾಟಕ ಸರ್ಕಾರ**
**ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ**

**ಇ-ಪ್ರೊಕ್ಯೂರ್‌ಮೆಂಟ್ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ : 08/2024-25**
**ದಿನಾಂಕ: 05-09-2024**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಐಟಂವಾರು ಟೆಂಡರ್‌ಗಳನ್ನು ಲೆಕ್ಕ ಶೀರ್ಷಿಕೆ: ನರೇಗಾ ಯೋಜನೆಯಡಿ ಕರೆದಿರುವ ಕಾಮಗಾರಿಗಳನ್ನು KG-1 & KG-2 (Stanard Tender Document) ಪ್ರಕಾರ KPPP ಮುಖಾಂತರ ಕರ್ನಾಟಕ ಸಂಗ್ರಹಣೆಯಲ್ಲಿ ಪಾರದರ್ಶಕ ನಿಯಮಗಳು KTPP Act 1999 and KTPP Rule 2000ರಲ್ಲಿ ಸಿವಿಲ್ ಗುತ್ತಿಗೆದಾರರುಗಳಿಂದ ದ್ವಿ ಲಕೋಟೆ ಪದ್ಧತಿಯಲ್ಲಿ ಕರೆಯಲಾಗಿದೆ. ಅಂದಾಜು ಮೊತ್ತ ರೂ. 626.65 ಲಕ್ಷಗಳ ಒಟ್ಟು 19 ಟೆಂಡರ್ ಆಹ್ವಾನಿಸಲಾಗಿದೆ. ಆನ್‌ಲೈನ್ ಟೆಂಡರ್ ಅಪ್‌ಲೋಡ್ ಮಾಡುವ ದಿನಾಂಕ: 09-09-2024, ಕೊನೆಯ ದಿನಾಂಕ: 24-09-2024 ಸಂಜೆ 17.00 ಗಂಟೆಯವರೆಗೆ ಹಾಗೂ ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 26-09-2024. ಇನ್ನುಳಿದ ಹೆಚ್ಚಿನ ಮಾಹಿತಿಗಳನ್ನು KPPP website www.kppp.karnataka.gov.inನಲ್ಲಿ ಪಡೆಯಬಹುದಾಗಿರುತ್ತದೆ ಹಾಗೂ ಕಚೇರಿ ದೂರವಾಣಿ ಸಂಖ್ಯೆ: 08226-223019ಕ್ಕೆ ಸಂಪರ್ಕಿಸುವುದು.

**ಸಂ: ವಾಸಾಸಂಇ; ಚಾ ನಗರ: 239: 2024-25**

**ಕಾರ್ಯಪಾಲಕ ಇಂಜಿನಿಯರ್**
**ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಚಾಮರಾಜನಗರ**

# ಧಾರ್ಮಿಕ ಮೌಲ್ಯಗಳ ಸಂವರ್ಧನೆಗಾಗಿ ದಸರಾ ಸಮಾರಂಭ

**ನರೇಗಲ್:** ಆಧುನಿಕತೆಯ ಹೆಸರಿನಲ್ಲಿ ಭಾರತೀಯ ಸಂಸ್ಕೃತಿಯ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಯುವ ಜನಾಂಗ ನಿರ್ದಿಷ್ಟ ಗೊತ್ತು ಗುರಿಗಳಿಲ್ಲದೆ ಕವಲು ದಾರಿಯಲ್ಲಿ ಸಾಗುತ್ತಿದ್ದಾರೆ. ಇಂಥ ಸಂದರ್ಭದಲ್ಲಿ ಧಾರ್ಮಿಕ ಮೌಲ್ಯಗಳ ಸಂವರ್ಧನೆಗಾಗಿ ಮತ್ತು ಸಾಮರಸ್ಯ ಬದುಕಿಗಾಗಿ ಅಬ್ಬಿಗೇರಿಯಲ್ಲಿ ದಸರಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ ವೀರ ಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಸೋಮವಾರ ರೋಣ ತಾಲೂಕಿನ ಅಬ್ಬಿಗೆರೆ ಹಿರೇಮಠದ ಸಭಾಂಗಣದಲ್ಲಿ ಸಂಯೋಜಿಸಿದ ದಸರಾ ಮಹೋತ್ಸವದ ಪೂರ್ವಭಾವಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಭಾರತೀಯ ಸಂಸ್ಕೃತಿ ಉತ್ಕೃಷ್ಟವಾದದ್ದು ಪೂರ್ವದ ಆಚಾರ್ಯರು ಋಷಿಮುನಿಗಳು ಮತ್ತು ಸತ್ಪುರುಷರು ಕೊಟ್ಟು ಹೋದ ಸಂದೇಶ ಬದುಕಿ ಬಾಳುವ ಜನಾಂಗಕ್ಕೆ ದಾರಿ ದೀಪ. ಧರ್ಮ ಹಲವಾದರೂ ಆಚರಣೆಗಳು ಬೇರೆ ಬೇರೆಯಾದರೂ ಎಲ್ಲ ಧರ್ಮಗಳ ಗುರಿ ಜನಕಲ್ಯಾಣವೇ ಆಗಿದೆ. ಧರ್ಮದ, ಜಾತಿಯ, ಭಾಷೆಯ, ಪ್ರಾಂತೀಯ ಹೆಸರಿನಲ್ಲಿ ಹಲವಾರು ಸಂಘರ್ಷಗಳು ಆಗಾಗ ನಡೆಯುತ್ತಲೇ ಇವೆ. ಸ್ವಾರ್ಥ ಮತ್ತು ಸಂಕುಚಿತ ಮನೋಭಾವನೆಗಳು ಇದಕ್ಕೆಲ್ಲ ಕಾರಣ. ಮಾನವ ಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ, ಶಾಂತಿ ಸಾಹಿತ್ಯ ಸಂಸ್ಕೃತಿ -ಸಂವರ್ಧಿಸಲಿ ಶಾಂತಿ-ಸಮೃದ್ಧಿ ಸರ್ವರಿಗಾಗಲಿ



ಎನ್ನುವ ಸದಾಶಯದಂತೆ ಬಾಳೆಹೊನ್ನೂರಿನ ಶ್ರೀ ಜಗದ್ಗುರು ರಂಭಾಪುರಿ ಧರ್ಮಪೀಠ ಕಾರ್ಯ ಮಾಡುತ್ತಿದೆ. ಧರ್ಮ ಧರ್ಮಗಳಲ್ಲಿ ಜಾತಿ ಜಾತಿಗಳಲ್ಲಿ ಉಂಟಾಗುತ್ತಿರುವ ಸಂಘರ್ಷ ದೂರಾಗಲು ಸಮಾಜದಲ್ಲಿ ಶಾಂತಿ ನೆಮ್ಮದಿ ಪ್ರಾಪ್ತವಾಗಲು ಇಂಥ ಧಾರ್ಮಿಕ ಸಮಾರಂಭಗಳ ಅವಶ್ಯಕತೆ ಇದೆ. ಆದ್ದರಿಂದ ಅಕ್ಟೋಬರ್ ಮೂರರಿಂದ 12ರವರೆಗೆ ಅಬ್ಬಿಗೇರಿ ಗ್ರಾಮದ ಶ್ರೀ ಅನ್ನದಾನೀಶ್ವರ ಪ್ರೌಢಶಾಲಾ ಆವರಣದಲ್ಲಿ ಹಾಕಿರುವ ಮಾನವ ಧರ್ಮ ಮಂಟಪದಲ್ಲಿ ದಸರಾ ಧರ್ಮ ಸಮ್ಮೇಳನ ಜರುಗಲಿದೆ. ಸ್ವಾಗತ ಸಮಿತಿಯ ಅಧ್ಯಕ್ಷರಾಗಿ ಶಾಸಕ ಜಿಎಸ್ ಪಾಟೀಲ್ ಹಾಗೂ ದಾಸೋಹ ಸಮಿತಿಯ ಅಧ್ಯಕ್ಷರಾಗಿ ಮಾಜಿ ಸಚಿವ ಕಳಕಪ್ಪ ಬಂಡಿ ಮತ್ತು ಸಕಲ ಭಕ್ತರು ಶ್ರಮಿಸುತ್ತಿದ್ದಾರೆ. ಈ ಹಿಂದಿನ ಎಲ್ಲ ದಸರಾ ಮಹೋತ್ಸವ ದಾಖಲೆಗಳನ್ನು ಮೀರಿ ಅತ್ಯಂತ ವಿಜೃಂಭಣೆಯಿಂದ ಜರುಗಲಿದೆ ಎಂದು ರಂಭಾಪುರಿ ಜಗದ್ಗುರು ಆತ್ಮವಿಶ್ವಾಸ ವ್ಯಕ್ತಪಡಿಸಿದರು.

ಸಮಾರಂಭ ಉದ್ಘಾಟಿಸಿದ ಶಾಸಕ ಜಿ.ಎಸ್.ಪಾಟೀಲ್ ಮಾತನಾಡಿ ಸುಖ ಶಾಂತಿ ಬದುಕಿಗೆ ಧರ್ಮದ ಅವಶ್ಯಕತೆ ಬಹಳಷ್ಟು ಇದೆ. ಧರ್ಮ ಮಾರ್ಗದಲ್ಲಿ ಪ್ರತಿಯೊಬ್ಬರೂ ನಡೆಯುವ ಸತ್ಯ ಸಂಕಲ್ಪ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಅಬ್ಬಿಗೆರೆಯಲ್ಲಿ ಜರುಗಲಿರುವ ಶ್ರೀ ರಂಭಾಪುರಿ ಜಗದ್ಗುರುಗಳ ದಸರಾ ಮಹೋತ್ಸವ ಈ ಭಾಗದ ಭಕ್ತರಿಗೆ ಬೆಳಕು ತೋರುವುದೆಂಬ ಆತ್ಮವಿಶ್ವಾಸ ನಮ್ಮೆಲ್ಲರಿಗೂ ಇದೆ. ನಾವು ನೀವೆಲ್ಲರೂ ಸೇರಿ ಈ ದಸರಾ ಮಹೋತ್ಸವವನ್ನು ಅತ್ಯಂತ ಯಶಸ್ವಿಯಾಗಿ ಜರುಗಿಸೋಣ. ಯಾರಿಗೂ ಯಾವುದೇ ರೀತಿ ಆತಂಕ ಮೂಡುವ ಅವಶ್ಯಕತೆ ಇಲ್ಲ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಇದ್ದರೆ ಎಲ್ಲವನ್ನು ಯಶಸ್ವಿಯಾಗಿ ಮಾಡುವುದಾಗಿ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಶ್ರೀ ಅನ್ನದಾನೇಶ್ವರ ಪ್ರೌಢಶಾಲಾ ಆವರಣದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಹರ ಗುರು ಚರಮೂರ್ತಿಗಳ ಸಮ್ಮುಖದಲ್ಲಿ ಶಾಸಕ ಜಿ.ಎಸ್ .ಪಾಟೀಲರು ಭವ್ಯ ಮಂಟಪಕ್ಕೆ ಭೂಮಿ ಪೂಜೆ ನೆರವೇರಿಸಿದರು.

ಅಬ್ಬಿಗೇರಿ ಹಿರೇಮಠದ ಮತ್ತು ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಹಾಗೂ ಸೂಡಿ ಜುಕ್ತಿ ಹಿರೇಮಠದ ಡಾ ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು ಕಾರ್ಯಕ್ರಮದ ಯಶಸ್ವಿಗಾಗಿ ಎಲ್ಲರೂ ಒಗ್ಗಟ್ಟಾಗಿ ಶ್ರಮಿಸಬೇಕೆಂದು ತಿಳಿಸಿದರು. ಈ ಸಮಾರಂಭದಲ್ಲಿ ನರೇಗಲ್, ಚಳಗೇರಿ, ಹಂಪಸಾಗರ, ಸಂಗೊಳ್ಳಿ, ಬದಾಮಿ, ದೋಟಿಹಾಳ, ಅಬ್ಬಿಗೇರಿ, ಎಲ್ಲಾರಲಿಂಗ ಶ್ರೀಗಳು ಉಪಸ್ಥಿತರಿದ್ದರು.

## ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ್ ಜೋಡಣೆ ಆದೇಶ ಹಿಂಪಡೆಯಿರಿ

**ಹುಳಿಯಾರು:** ಸರ್ಕಾರ ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ್ ಜೋಡಣೆ ಮೂಲಕ ಮೀಟರ್ ಅಳವಡಿಸಿ ಶುಲ್ಕ ವಿಧಿಸುವ ಹುನ್ನಾರ ನಡೆಸಿದೆ. ಇಡೀ ಸಮಾಜಕ್ಕೆ ಅನ್ನ ನೀಡುವ ರೈತರ ವಿರೋಧಿ ಕ್ರಮವನ್ನು ಅನುಸರಿಸುತ್ತಿದೆ. ಕೂಡಲೇ ಆಧಾರ್ ಜೋಡಣೆ ಆದೇಶವನ್ನು ಹಿಂಪಡೆಯಬೇಕು ಎಂದು ಹೊಸಹಳ್ಳಿ ಚಂದ್ರಣ್ಣ ಬಣದ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಒತ್ತಾಯಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ನಿಯಮಿತವಾಗಿ ವಿದ್ಯುತ್ ಸರಬರಾಜು ಮಾಡದ ಕಾರಣಕ್ಕೆ ಪದೇಪದೇ ರೈತರ ಪಂಪ್ ಸೆಟ್‌ಗಳು ಸುಟ್ಟು ಹೋಗಿವೆ. ಇದರ ದುರಸ್ತಿಗಾಗಿಯೇ ರೈತರು ಲಕ್ಷಾಂತರ ರೂ. ವಿನಿಯೋಗಿಸುವಂತಾಗಿದೆ.



ಇಂತಹ ದುಸ್ಥಿತಿಯಲ್ಲಿ ಸರ್ಕಾರ ಈಗ ಕೃಷಿ ಪಂಪ್‌ಸೆಟ್‌ಗಳ ಆರ್.ಆರ್. ಸಂಖ್ಯೆಗೆ ಆಧಾರ್ ಜೋಡಣೆ ಮಾಡುತ್ತಿರುವುದು ರೈತ ವಿರೋಧಿ ಕೆಲಸ. ಶುಲ್ಕ ವಿಧಿಸುವ ದುರುದ್ದೇಶದಿಂದ ಮೀಟರ್ ಅಳವಡಿಸಲಾಗುತ್ತಿದೆ. ಇದರಿಂದ ಮೊದಲೇ ಸಂಕಷ್ಟದಲ್ಲಿರುವ ರೈತಾಪಿ ವರ್ಗ ಮತ್ತಷ್ಟು ಸಮಸ್ಯೆಗೆ ಸಿಲುಕುವಂತಾಗಲಿದೆ. ಸರ್ಕಾರ ತನ್ನ ನಿರ್ಧಾರ ಕೈ ಬಿಡಬೇಕು. ಇಲ್ಲವಾದರೆ ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ. ಈ ಹಿಂದಿನ ಬಿಜೆಪಿ ಸರ್ಕಾರ 2 ವರ್ಷ ಅಕ್ರಮ ಸಕ್ರಮ ಯೋಜನೆಯಲ್ಲಿ ರೈತರಿಂದ ಹಣ ಕಟ್ಟಿಸಿಕೊಂಡಿದ್ದರೂ ಸಹ ಸಂಪರ್ಕ ಕೊಡದೆ ರೈತರ ಪ್ರಗತಿಗೆ ಪೆಟ್ಟು ಕೊಟ್ಟಿತು. ಈಗಿನ ಕಾಂಗ್ರೆಸ್ ಸರ್ಕಾರ 2023 ರ ಸೆಪ್ಟೆಂಬರ್‌ನಿಂದ ಕೃಷಿ ಕೊಳವೆಬಾವಿಗಳಿಗೆ ವಿದ್ಯುತ್ ತಂತಿ, ಟಿಸಿ, ಕಂಬಗಳನ್ನು ರೈತರೇ ಖರೀದಿಸಬೇಕು ಎಂದು ಆದೇಶಿಸಿದೆ. ರೈತನ ಹೆಸರೇಳಿಕೊಂಡು ಅಧಿಕಾರಕ್ಕೆ ಬಂದ ಈ ಎರಡೂ ಸರ್ಕಾರಗಳೂ ರೈತ ವಿರೋಧಿ ನೀತಿ ಅಳವಡಿಸುತ್ತಿದೆ. ತಕ್ಷಣ ಹಣ ಕಟ್ಟಿದ ಎಲ್ಲಾ ರೈತರಿಗೂ ಅಗತ್ಯ ಉಪಕರಣ ನೀಡಿ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಅಲ್ಲದೆ ಹೊಸದಾಗಿ ಅಕ್ರಮ ಸಕ್ರಮದಲ್ಲಿ ವಿದ್ಯುತ್ ಸಂಪರ್ಕ ಬಯಸುವ ರೈತರಿಂದ ಹಣ ಕಟ್ಟಿಸಿಕೊಂಡು ಸಂಪರ್ಕ ಕೊಟ್ಟು ನಿರಾತಂಕವಾಗಿ ಕೃಷಿ ಚಟುವಟಿಕೆಗಳು ನಡೆಯುವಂತೆ ಮಾಡಬೇಕು ಎಂದು ಚಂದ್ರಣ್ಣ ಒತ್ತಾಯಿಸಿದ್ದಾರೆ.

## ಸರ್ಕಾರಿ ಶಾಲಾ ಶಿಕ್ಷಕಿ ಪದ್ಮಜಾ ಅವರಿಗೆ ಶಿಕ್ಷಕರತ್ನ ಪ್ರಶಸ್ತಿ ಪ್ರಧಾನ

**ವಿಜಯಪುರ:** ಪಟ್ಟಣದ ಅಶೋಕನಗರ ನಿವಾಸಿ, ಹೊಸಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಪದ್ಮಜಾ ಅವರಿಗೆ ರಾಯಚೂರಿನ ಕಲಾ ಸಂಕುಲ ಸಂಸ್ಥೆಯು ಶಿಕ್ಷಕರತ್ನ ಪ್ರಶಸ್ತಿ ನೀಡಿ ಗೌರವಿಸಿದೆ. ರಾಯಚೂರಿನ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಭಾನುವಾರ ನಡೆದ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಯಿತು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರಾದ ಎನ್.ಎಸ್.ಬೋಸರಾಜು, ಪದ್ಮಶ್ರೀ ಪುರಸ್ಕೃತ ಅಕ್ಷರಸಂತ ಹರೇಕಳ ಹಾಜಬ್ಬ, ಕಿರು ತೆರೆ ಡಾ.ರಜಿನಿ, ಮಂಗಳೂರು ಪೆರುವಾಯಿ ಗ್ರಾಮಪಂಚಾಯಿತಿ ಅಧ್ಯಕ್ಷೆ ನಫೀಸಾ, ಕಲಾಸಂಕುಲ ಸಂಕುಲ ಸಂಸ್ಥೆಯ ಅಧ್ಯಕ್ಷೆ ರೇಖಾ ಬಡಿಗೇರ್, ಕಾರ್ಯದರ್ಶಿ ಮಾರುತಿ ಬಡಿಗೇರ್ ಮತ್ತಿತರರು ಇದ್ದರು. ಪದ್ಮಜಾ ಅವರು ಆರಂಭದಲ್ಲಿ ಶಿಶುವಿಹಾರದ ಶಿಕ್ಷಕಿಯಾಗಿ ಆಯ್ಕೆಯಾಗಿ, ನಂತರ ಶಾಲಾಮಾತೆ ಶಿಕ್ಷಕಿಯಾಗಿ ಹೊಸಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಸದ್ಯ ನಲಿಕಲಿ ವಿದ್ಯಾರ್ಥಿಗಳಿಗೆ ಚಟುವಟಿಕೆ ಆಧಾರಿತವಾಗಿ ಕಲಿಸುವಲ್ಲಿ ಯಶಸ್ವಿಯಾಗಿದ್ದಾರೆ. ಅವರ ಸೇವೆಯನ್ನು ಗುರ್ತಿಸಿ ಶಿಕ್ಷಕರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಪ್ರಶಸ್ತಿ ಪುರಸ್ಕೃತ ಶಿಕ್ಷಕಿ ಪದ್ಮಜಾ ಅವರನ್ನು ಹೊಸಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕಿ ಜಿ.ಎನ್.ನೇತ್ರಾವತಿ, ಶಿಕ್ಷಕಿ ಎನ್.ಶೈಲಜಾ, ರೇಖಾರಾಣಿ, ಸಿಆರ್‌ಪಿ ರಮೇಶ್‌ಕುಮಾರ್, ತಾಲ್ಲೂಕು ಪ್ರೌಢಶಾಲಾ ಸಹಶಿಕ್ಷಕರ ಸಂಘದ ಕಾರ್ಯದರ್ಶಿ ಎಚ್.ಎಸ್.ರುದ್ರೇಶಮೂರ್ತಿ ಅಭಿನಂದಿಸಿದ್ದಾರೆ.



## ವಾಯುವಿಹಾರಕ್ಕೆ ತೊಂದರೆ

**ತಿಪಟೂರು:** ನಗರದ ಅಮಾನಿಕೆರೆಯಲ್ಲಿ ವಾಯುವಿವಾರಕ್ಕೆ ನಿರ್ಮಿಸಲಾಗಿರುವ ವಾಕಿಂಗ್ ಮಧ್ಯಭಾಗ ಹಾಗೂ ಅಕ್ಕಪಕ್ಕದಲ್ಲಿ ಗಿಡಗಂಟೆಗಳು, ಮುಳ್ಳಿನ ಗಿಡಗಳು ಬೃಹದಾಕಾರವಾಗಿ ಬೆಳೆದಿದ್ದು ವಾಯು ವಿಹಾರಿಗಳಿಗೆ ವಾಕಿಂಗ್ ಮಾಡಲು ತುಂಬಾ ತೊಂದರೆಯಾಗುತ್ತಿದೆ.



ಪ್ರತಿದಿನ ವಾಯುವಿಹಾರಕ್ಕೆ ಎಂದು ಬರುವ ಸಾರ್ವಜನಿಕರು ಹಿಡಿ ಶಾಪ ಹಾಕುತ್ತಿದ್ದಾರೆ . ಕಾಟಾಚಾರಕ್ಕೆ ಸಣ್ಣ ನೀರಾವರಿ ಇಲಾಖೆಯವರು ಮೇಲ್ನೋಟಕ್ಕೆ ಕಾಣುವಂತೆ ಐದರಿಂದ ಆರು ಇಂಚು ಗಿಡದ ಬಳ್ಳಿಗಳನ್ನು ನೆಲದಲ್ಲಿಯೇ ಬಿಟ್ಟು ನಾವು ಕೆರೆಯ ವಾಕಿಂಗ್ ಜಾಗವನ್ನು ಸ್ವಚ್ಛಗೊಳಿಸಿದ್ದೇವೆ ಎಂದು ಬಿಂಬಿಸಿಕೊಳ್ಳುತ್ತಿದ್ದಾರೆ. ಈ ಕೆಲಸವು ಸಾರ್ವಜನಿಕರಿಗೆ ಮೆಚ್ಚುಗೆಯಂತೂ ವ್ಯಕ್ತಪಡಿಸುತ್ತಿಲ್ಲ, ಸಾರ್ವಜನಿಕರು ಚರ್ಚೆಯಲ್ಲಿ ತೊಡಗಿದ್ದಾರೆ. ಸಾರ್ವಜನಿಕರ ಅಭಿಪ್ರಾಯವೆಂದರೆ ನಾವು ನಗರಸಭೆಗೆ ಎಲ್ಲಾ ರೀತಿಯ ತೆರಿಗೆಗಳನ್ನು ಕಟ್ಟುತ್ತೇವೆ ಆದರೆ ನಮಗೆ ನಗರಸಭೆ ಅಥವಾ ಸಣ್ಣ ನೀರಾವರಿ ಇಲಾಖೆಯವರಿಂದಾಗಲಿ ಸೂಕ್ತ ವ್ಯವಸ್ಥೆ ದೊರೆಯುತ್ತಿಲ್ಲವೆಂದು ಸಾರ್ವಜನಿಕರು ದೂರಿದ್ದಾರೆ.

# ಸಂಚಾರಿ ಪಶು ಚಿಕಿತ್ಸಾ ಘಟಕಕ್ಕೆ ಚಾಲನೆ

## ದಸೂಡಿ ಮಾರ್ಗದ ಯೋಜನೆಗೆ ಶಾಸಕ ಸಿ.ಬಿ.ಸುರೇಶ್ ಬಾಬು ಉದ್ಘಾಟನೆ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ಪಶು ಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ತಾಲ್ಲೂಕಿನ ಸಂಚಾರಿ ಪಶುಚಿಕಿತ್ಸಾ ಘಟಕದ ಮೂರನೇ ಮಾರ್ಗವಾದ ಹುಳಿಯಾರು ಹೋಬಳಿಯ ದಸೂಡಿ ಮಾರ್ಗದ ಉದ್ಘಾಟನಾ ಕಾರ್ಯಕ್ರಮವನ್ನು ಸೋಮವಾರ ಆಯೋಜಿಸಲಾಗಿತ್ತು.



ಶಾಸಕರಾದ ಸಿ.ಬಿ.ಸುರೇಶ್ ಬಾಬು ರವರು ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿ, ಇದೊಂದು ಅತ್ಯತ್ತಮ ಸೇವಾ ಕೈಂಕರ್ಯ, ಹಿರಿಯೂರು ಗಡಿ ಭಾಗದಲ್ಲಿರುವ ಮತ್ತು ತಾಲ್ಲೂಕು ಕೇಂದ್ರ ಸ್ಥಾನದಿಂದ ದೂರದಲ್ಲಿರುವ ದಸೂಡಿ ಭಾಗದ ರೈತಾಪಿ ಜನರಿಗೆ ಪಶು ವೈದ್ಯಕೀಯ ಸೇವೆಯನ್ನು ಒದಗಿಸುತ್ತಿರುವುದು ಅಭಿನಂದನೀಯ ವಿಚಾರ ಎಂದು ಹರ್ಷಿಸಿ ಶುಭಾಷಯ ಕೋರಿದರು.

ವರ್ಷವಿಡೀ ನಿರಂತರ ಆದಾಯ ನೀಡಬಲ್ಲ ಹೈನುಗಾರಿಕೆ, ಕುರಿ/ಮೇಕೆ ಸಾಕಾಣಿಕೆ, ಕೋಳಿ ಸಾಕಾಣಿಕೆ ಮುಂತಾದವುಗಳನ್ನು ಇತ್ತೀಚೆಗೆ ವ್ಯಾಪಕವಾಗಿ ಮಾಡುತ್ತಿರುವುದರಿಂದ ರೈತರ ಆದಾಯವೂ ಸಹ ದಿನೇ ದಿನೇ ಹೆಚ್ಚಾಗುತ್ತಿದೆ. ಪಶುಸಂಗೋಪನಾ ಚಟುವಟಿಕೆಗಳು ದೇಶದ ನಿರುದ್ಯೋಗ ಸಮಸ್ಯೆಯನ್ನು ಸ್ವಲ್ಪ ಮಟ್ಟಿಗೆ ನಿವಾರಿಸುವಲ್ಲಿ ಬಹುಪ್ರಮುಖ ಪಾತ್ರ ವಹಿಸುತ್ತವೆ. ಇಂದು ವಾಣಿಜ್ಯ ಉದ್ದಿಮೆಗಳಾಗಿ ಬೆಳೆದಿದ್ದು ದೇಶದ ಆರ್ಥಿಕ ಪರಿಸ್ಥಿತಿಯ ಸುಧಾರಣೆಗೂ ತಮ್ಮ ಅಮೂಲ್ಯ ಕೊಡುಗೆ ನೀಡುತ್ತವೆ ಎಂದರು.

ಪಶು ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ರೆ.ಮ ನಾಗಭೂಷಣ ಮಾತನಾಡಿ ದಸೂಡಿ ಭಾಗದಲ್ಲಿ ಸುಮಾರು 1000 ದನಗಳು, 386 ಎಮ್ಮೆಗಳು, 30000 ಕಿಂತ ಹೆಚ್ಚು ಕುರಿಗಳು, 2500 ಮೇಕೆಗಳು 1300 ಕೋಳಿಗಳು ಇರುತ್ತವೆ. ರೈತರಿಗೆ ರೈತ ಮಿತ್ರನಾಗಿ ಚಿಕ್ಕನಾಯಕನಹಳ್ಳಿಯ ವಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ತನ್ನ ಕೊಡುಗೆಯನ್ನು ನೀಡುತ್ತಾ ಇದೆ. ಈ ನಿಟ್ಟಿನಲ್ಲಿ ಪ್ರತಿ ಸೋಮವಾರದಂದು ದಸೂಡಿ ಮತ್ತು ಸುತ್ತ ಮುತ್ತಲ ಗ್ರಾಮಗಳಾದ ಮಾರುಹೊಳೆ, ದಸೂಡಿ, ಬಲ್ಲಪ್ಪನಹಟ್ಟಿ, ಕರಕಮರಸರ, ಚಿತ್ರದೇವರಹಟ್ಟಿ, ಬಂಡೇಹಟ್ಟಿ, ಬುಳ್ಳಯ್ಯನಹಟ್ಟಿ, ಪುರದಪ್ಪನಪಾಳ್ಯಗಳಿಗೆ ಸಂಚಾರಿ ಪಶು ಚಿಕಿತ್ಸಾ ಘಟಕದ ಸೌಲಭ್ಯವನ್ನು ನೀಡಲಾಗುತ್ತದೆ ಎಂದು ತಿಳಿಸಿದರು.

ಸಂಚಾರಿ ಮತ್ತು ವಿಸ್ತರಣೆ ವಶುವೈದ್ಯಾಧಿಕಾರಿಗಳಾದ ಡಾ.ಎನ್.ವಿರೂಪಾಕ್ಷ, ಜಾನುವಾರು ಅಭಿವೃದ್ಧಿ ಅಧಿಕಾರಿಗಳಾದ ಕೇಶವ ಲೋಕರೆ, ಪಶು ವೈದ್ಯಕೀಯ ಪರೀಕ್ಷಕರಾದ ರವಿಶಂಕರ್ ಮತ್ತು ಕಿರಿಯ ಪರೀಕ್ಷಕರಾದ ಮನೋಜ್, ಅತಾವುಲ್ಲ, ಚೈತ್ರಶ್ರೀ, ರೇಖಾ.ನಾಗರಾಜು ಮತ್ತು ದಸೂಡಿ ಗ್ರಾಮದ ಗ್ರಾಮ ಪಂಚಾಯಿತಿ ಸದಸ್ಯರಾದ ಮತ್ತು ಲೇಖಕರಾದ ಶ್ರೀ ಮರಿಯಪ್ಪನವರು, ಸತೀಶ್ ರವರು ಉಪಸ್ಥಿತರಿದ್ದರು.

### ರೈತರಿಗೆ ಪೂರಕ ಸೇವೆ

**ದಸೂಡಿ ಭಾಗದ ರೈತರಿಗೆ ದಬ್ಬಗುಂಟೆಯಲ್ಲಿರುವ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ ಸದ್ಯ ಸೇವೆಯನ್ನು ಒದಗಿಸುತ್ತಿದೆ. ದೂರದಲ್ಲಿರುವ ಹೊಯ್ಸಳಕಟ್ಟೆ ಮತ್ತು ಗಾಣಧಾಳು ಪಶು ಚಿಕಿತ್ಸಾಲಯ ಸೇವೆಯನ್ನು ಒದಗಿಸುವುದು ಕಷ್ಟಕರವಾಗಿದೆ. ಅಲ್ಲದೆ ಈ ಎರಡೂ ಕೇಂದ್ರದಲ್ಲೂ ಪಶು ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುತ್ತವೆ. ಈ ನಿಟ್ಟಿನಲ್ಲಿ ಈ ಹಿಂದೆ ದಸೂಡಿಯಲ್ಲಿ ಪಶು ಆರೋಗ್ಯ ಶಿಬಿರವನ್ನು ಹಮ್ಮಿಕೊಂಡಿದ್ದಾಗ ಗ್ರಾಮದ ಮುಖಂಡರಾದ ಕೆ.ಮರಿಯಪ್ಪ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ಶಾರದಮ್ಮ ಸೇರಿದಂತೆ ಸಂಘದ ಸದಸ್ಯರುಗಳು ದಸೂಡಿ ಗ್ರಾಮದಲ್ಲಿ ಪಶು ಚಿಕಿತ್ಸಾಲಯವನ್ನು ಪ್ರಾರಂಭಿಸಬೇಕೆಂದು ವಿನಂತಿಸಿದ್ದರು. ಈ ವಿಚಾರದಲ್ಲಿ ಕಾರ್ಯಪ್ರವೃತ್ತರಾದ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ರೆ.ಮ ನಾಗಭೂಷಣರವರು ಪಶು ಚಿಕಿತ್ಸಾಲಯವನ್ನು ಪ್ರಾರಂಭಿಸುವುದು ಸರ್ಕಾರದ ಮಟ್ಟದಲ್ಲಿದ್ದು ಅದು ತಡವಾಗಬಹುದೆಂದು ಅರಿತು ಸಂಚಾರಿ ಪಶು ಚಿಕಿತ್ಸಾ ಘಟಕದ ಸೇವೆ ಮಂಜೂರು ಮಾಡಿಸಿ ಸೋಮವಾರ ಶಾಸಕ ಸಿ.ಬಿ.ಸುರೇಶ್‌ಬಾಬು ಅವರಿಂದ ಉದ್ಘಾಟನೆ ಮಾಡಿಸಿದರು.**

## ವೀರಕಪುತ್ರದ ಹಾಲು ಡೈರಿ ಕಾಂಗ್ರೆಸ್ ಬೆಂಬಲಿತ ಅಧ್ಯಕ್ಷರಾಗಿ ಮೂರ್ತಿ ಈ, ನಾಗರಾಜ್ ಕೆ, ಅವಿರೋಧ ಆಯ್ಕೆ

**ಟೇಕಲ್ :** ಟೇಕಲ್‌ನ ವೀರಕಪುತ್ರದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಮೂರ್ತಿ ಈ, ಹಾಗೂ ಉಪಾಧ್ಯಕ್ಷರಾಗಿ ನಾಗರಾಜ್ ಕೆ, ಹಾಗೂ ನಿದೇರ್ಶಕರುಗಳು ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಶಿವಲಿಂಗಪ್ಪ ತಿಳಿಸಿದರು. ಸೋಮವಾರ ನಡೆದ ಚುನಾವಣಾ ಪ್ರಕ್ರಿಯಲ್ಲಿ ಯಾವುದೇ ನಾಮ ಪತ್ರಗಳು ಬವಾರದ ಕಾರಣ ಅವಿರೋಧ ಆಯ್ಕೆಯಾಗಿದ್ದಾದರೆಂದು ಘೋಷಿಸಿದರು.

ನಿರ್ಧೆಶಕರುಗಳಾಗಿ ಚಂದ್ರಪ್ಪ ವಿ ಎಂ, ರಾಮಕೃಷ್ಣಪ್ಪ, ಪ್ರೇಮಮ್ಮ ರಾಧಮ್ಮ, ಆಯ್ಕೆಯಾದರು, ಈ ಸಂದರ್ಭದಲ್ಲಿ ಗ್ರಾಮಸ್ಥರು, ಹಾಲು ಉತ್ಪಾದರು, ನೂತನ ಆಡಳಿತ ಮಂಡಳಿಯನ್ನು ಅಭಿನಂಧಿಸಿದರು. ಈ ಸಂಧರ್ಭದಲ್ಲಿ ಅಧ್ಯಕ್ಷರಾದ ಮೂರ್ತಿ ಈ ರವರು ಮಾತನಾಡಿ ನಿದೇರ್ಶಕರುಗಳ ಹಾಗೂ ಹಾಲು ಉತ್ಪಾದಕರ ಸಹಕಾರದಿಂದ ಹಾಗೂ ಶಾಸಕ ಕೆ ವೈ ನಂಜೇಗೌಡರ ಕೃಪೆಯಿಂದ ಡೈರಿಯನ್ನು ಅಭಿವೃದ್ಧಿ ಪಥದತ್ತ ಕೊಂಡ್ಯುಯುವುದಾಗಿ ತಿಳಿಸಿದರು. ಉಪಾಧ್ಯಕ್ಷ ನಾಗರಾಜ್ ಕೆ ಮಾತನಾಡಿ ಗುಣಮಟ್ಟದ ಹಾಲನ್ನು ಸಂಘಕ್ಕೆ ನೀಡಿ ಅಭಿವೃದ್ಧಿಪಡಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾ ಪಂ ಸದಸ್ಯರುಗಳಾದ ಸುರೇಶ್ ಚಲಪತಿ, ಡೈರಿ ಕಾರ್ಯದರ್ಶಿ ವಿ ಎಸ್ ವೆಂಕಟಾಚಲಪತಿ ರಾವ್, ಮುಖಂಡರಾದ ಹೆಚ್.ವಿ.ವಿನೋದ್‌ಗೌಡ, ಎಸ್ ಜಿ ರಾಮಮೂರ್ತಿ, ಹೆಚ್ ಹನುಮಂತಪ್ಪ, ಗಂಗಪ್ಪನವರ ನಾರಾಯಣಸ್ವಾಮಿ, ಚಂದ್ರಪ್ಪಈ ಆಂಜಿನಪ್ಪ, ನಾರಾಯಣಸ್ವಾಮಿ ವಿ ಎಂ, ಮೈಸೂರು ಮಂಜುನಾಥ್, ಶ್ರೀನಿವಾಸ್ ವಿ.ಆರ್, ವಿಸ್ತರಣಾಧಿಕಾರಿ ಹುಲ್ಲೂರಪ್ಪ, ಮಾಜಿ ಗ್ರಾ ಪಂ. ಸದಸ್ಯೆ ಪ್ರಮೀಳಮ್ಮ ನಾರಾಯಣಸ್ವಾಮಿ, ಹಾಗೂ ಹಾಲು ಉತ್ಪಾದರು, ಗ್ರಾಮಸ್ಥರು ಉಪಸ್ಥಿತರಿದ್ದರು.



## ಕೆ ಜಿ ಹಳ್ಳಿ ಗ್ರಾಪಂ ಜಮಾ ಬಂಧಿ ಮಂಡನೆ

**ಟೇಕಲ್:** ಟೇಕಲ್‌ನ ಕೆ ಜಿ ಹಳ್ಳಿಯ ಗ್ರಾ ಪಂ ಕಛೇರಿಯಲ್ಲಿ ಸೋಮವಾರ 2023-24ನೇ ಸಾಲಿನ ಜಮಾ ಬಂಧಿ ಸಭೆಯನ್ನು ಏರ್ಪಡಿಸಲಾಗಿತ್ತು. ಈ ಸಭೆಯಲ್ಲಿ ನೋಡಲ್ ಅಧಿಕಾರಿಯಾಗಿದ್ದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ದಿವ್ಯ ಎ ಆರ ರವರು ಮಾತನಾಡಿ ಪಂಚಾಯಿತಿ ಕಾರ್ಯಧರ್ಶಿಯವರು ಮಂಡಿಸಿದ ಲೆಕ್ಕಪತ್ರಗಳು, ಜಮಾ ಖರ್ಚು, ಉಳಿಕೆ ಬಾಬತ್ತು, ಸಾರ್ವಜನಿಕರ ಗಮನಕ್ಕೆ ತರಲಾಗಿದ್ದು, ಈ ಬಗ್ಗೆ ಸಾರ್ವಜನಿಕರು ಲೋಪದೋಷಗಳು ನಡೆದಿದ್ದರೆ ನಮ್ಮ ಗಮನಕ್ಕೆ ತಂದರೆ ಅದನ್ನು ಸರ್ಕಾರದ ಗಮನಕ್ಕೆ ತರುತ್ತೇನೆ ಎಂದರು. ಸರ್ಕಾರ ನೀಡುವ ಅನುದಾನದಲ್ಲಿ ಗ್ರಾ ಪಂ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವುದು (ಕುಡಿಯುವ ನೀರು, ನೈರ್ಮಲ್ಯ, ಚರಂಡಿ ವ್ಯವಸ್ಥೆ, ಬೀದಿ ದೀಪಗಳ ಅಳವಡಿಕೆ, ಮನೆ ನಿರ್ಮಿಸಿಕೊಳ್ಳುವ ಫಲಾನುಭವಿಗಳುಗೆ ಸಹಾಯಧನ ಇನ್ನು ಇತರೆ) ಜೋತೆಗೆ ಪಂಚಾಯಿತಿ ನೌಕರರ ವೇತನ, ಅಧ್ಯಕ್ಷ, ಉಪಾಧ್ಯಕ್ಷರ, ಸದಸ್ಯರುಗಳ ಗೌರವಧನ, ಜಲಗಾರರ ವೇತನ, ಪಂಪು ಮೋಟರ್ ದುರಸ್ಥಿ ಇನ್ನು ಮುಂತಾದ ಕಾಮಗಾರಿಗಳನ್ನು ಕೈ ಗೊಳ್ಳಗಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಗ್ರಾ ಪಂ. ಅಧ್ಯಕ್ಷ ಎಸ್ ಆರ್ ಯಲ್ಲಪ್ಪ ಈಗ ಮಂಡಿಸಿರುವ ಜಮಾ ಬಂಧಿ ಲೆಕ್ಕ ಪತ್ರದಲ್ಲಿ ಎಲ್ಲವು ಸರಿಯಾಗಿದೆ. ಯಾವುದೇ ಲೋಪದೋಷಗಳು ಕಂಡುಬಂಧಿಲ್ಲ. ಕೆಲವು ಕಡೆ ಗ್ರಾಮಗಳಲ್ಲಿ ಅನುದಾನ ಹೆಚ್ಚಿಗೆ ನೀಡಲಾಗಿದೆ ಇದಕ್ಕೆ ಸಾರ್ವಜನಿಕರುವ, ಸದಸ್ಯರು, ಅನ್ಯತಾ ಭಾವಿಸಬಾರದು, ಪಂಚಾಯಿತಿಯಲ್ಲಿ ಯಾವುದೇ ತರಹದ ಕುಡುಯುವ ನೀರಿನ ಸಮಸ್ಯೆಯಾಗಲಿ, ಬೀದಿ ದೀಪಗಳ ಅಳವಡಿಕೆಯಲ್ಲಿ ಮಂಚೂಣಿಯಲ್ಲಿದೆ. ಕೆಲವು ಗ್ರಾಮಗಳಲ್ಲಿ ಸದಸ್ಯರ ಸಹಕಾರ ಉತ್ತಮವಾಗಿ ಮುಂದುವರಿಯುತ್ತಿದೆ. ಇನ್ನು ಹೆಚ್ಚಿನ ರೀತಿಯಲ್ಲಿ ಸದಸ್ಯರು ಸಹಕಾರ ನೀಡದರೆ ಪಂಚಾಯಿತಿಯನ್ನು ಅಭಿವೃದ್ದಿಗೊಳಿಸಿ, ಮಾದರಿ ಮಾಡಲು ಪ್ರಯತ್ನಿಸುತ್ತೇನೆ ಎಂದರು.



ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ಮಮತ ಶಶಿಧರ್, ಪಿ.ಡಿ.ಓ ವೆಂಕಟೇಶ್ ಎಂ ಸಿ, ಕಾರ್ಯಧರ್ಶಿ ಸವಿತ ಎಂ, ಜಮಾ ಬಂಧಿ ಸಹಾಯಕ ಆದಿಕಾರಿಗಳು ಚಿಕ್ಕತಿರುಪತಿ ಪಿ.ಡಿ.ಓ ಹರೀಂದ್ರ, ಗೋಪಾಲ್ ಎ, ದಯಾನಂದರೆಡ್ಡಿ, ಗ್ರಾ ಪಂ ಸದಸ್ಯರುಗಳು, ಜಲಗಾರರು, ಸ್ವಚ್ಚತಾ ಸಿಬ್ಬಂದಿ, ಗ್ರಂಥಾಲಯ ಮೇಲ್ವಿಚಾರಕರು, ಸಾರ್ವಜನಿಕರು ಉಪಸ್ಥಿತರಿದ್ದರು.



ವಿಜಯಪುರದ ಸರ್ವೋದಯ ಸರ್ವಿಸ್ ಸೊಸೈಟಿ ವೃದ್ಧಾಶ್ರಮ ಹಾಗೂ ಬುದ್ಧಿಮಾಂದ್ಯ ಮಕ್ಕಳ ಆಶ್ರಮಕ್ಕೆ 300 ಲೀಟರ್‌ನ ಸೋಲಾರ್ ವಾಟರ್ ಹೀಟರ್‌ನ್ನು ಪಟ್ಟಣದ ಇನ್ನರ್‌ವಿಲ್ ಕ್ಲಬ್ ಮುಖಾಂತರ ಇನ್ಸ್ಟಾಲ್ ಮಾಡಲಾಯಿತು. ಈ ಸಂಧರ್ಭದಲ್ಲಿ ಪಟ್ಟಣದ ಇನ್ನರ್‌ವಿಲ್ ಕ್ಲಬ್ ಅಧ್ಯಕ್ಷರಾದ ಪ್ರೇಮ ನಾಗರಾಜಪ್ಪ ಕಾರ್ಯದರ್ಶಿ ಮಾಲತಿ ಆನಂದ್ ಹಾಗೂ ಮಾಜಿ ಜಿಲ್ಲಾಧ್ಯಕ್ಷೆ(ಪಿಡಿಸಿ) ಆಶಾ ಶೈಲೇಂದ್ರ, ಹಾಗೂ ಕಮಿಟಿ ಮೆಂಬರ್ ವೀಣಾ ನಟಸೇಖರ್, ಉಪಸ್ಥಿತರಿದ್ದರು.

## ಮನೆ ಕಳವು ಪ್ರಕರಣದಲ್ಲಿ ಓರ್ವ ಸೆರೆ; ನ್ಯಾಯಾಂಗ ಬಂಧನ

**ಚಾಮರಾಜನಗರ:** ಎಚ್.ಮೂಕಹಳ್ಳಿಯ ಮನೆಯೊಂದರಲ್ಲಿ ಕಳ್ಳತನ ಮಾಡಿದ್ದ ವ್ಯಕ್ತಿಯನ್ನು ಸಂತೆಮರಹಳ್ಳಿ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಮೈಸೂರು ಜಿಲ್ಲೆಯ ಟಿ.ನರಸೀಪುರದ ಪ್ರದೀಪ್ ಬಂಧಿತ ಆರೋಪಿ. ಈತ ತನ್ನ ಪರಿಚಯಸ್ಥ ಎಚ್.ಮೂಕಹಳ್ಳಿ ಗ್ರಾಮದ ಚಂದ್ರಶೇಖರ್ ಮನೆಗೆ ಬಂದಿದ್ದು ಕೆಲ ದಿನ ಇಲ್ಲೇ ಉಳಿದುವಾಪಸ್ಸು ಹೋಗುವಾಗ ಮನೆಯಲ್ಲಿದ್ದ 21.5 ಗ್ರಾಂ.ನ ಒಂದುಚಿನ್ನದ ಸರ, 5 ಗ್ರಾಂ.ನ ಉಂಗುರು, 21,500 ರೂ. ನಗದನ್ನುಕಳವು ಮಾಡಿ ಪರಾರಿಯಾಗಿದ್ದಾನೆ. ಈ ಸಂಬಂಧ ಚಂದ್ರಶೇಖರ್ ಎಂಬುವವರು ಸಂತೆಮರಹಳ್ಳಿ ಠಾಣೆಗೆ ದೂರು ನೀಡಿದ್ದು ಪ್ರಕರಣದಾಖಲಿಸಿಕೊಂಡ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಬಂಧಿತನಿಂದ ಚಿನ್ನದ ಸರ, ಉಂಗುರ,ನಗದನ್ನು ವಶಪಡಿಸಿಕೊಳ್ಳಲಾಗಿದ್ದು ಆರೋಪಿ ಪ್ರದೀಪ್ನನ್ನುಸಂತೆಮರಹಳ್ಳಿ ಪೊಲೀಸ್ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಆರೋಪಿ ಪತ್ತೆ ಕಾರ್ಯದಲ್ಲಿಸಂತೆಮರಹಳ್ಳಿ ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ಟಿ.ಎಂ.ತಾಜುದ್ದೀನ್, ಅಪರಾಧ ವಿಭಾಗದ ಸಬ್ ಇನ್ಸ್ಪೆಕ್ಟರ್‌ಚಂದ್ರಶೇಖರ, ಸಿಬ್ಬಂದಿಗಳಾದ ಮಾದೇಶ್, ರಮೇಶ್, ಯಶವಂತ, ಸುಂದರಪ್ಪ ಭಾಗವಹಿಸಿದ್ದರು.

### ಕಾಂಗ್ರೆಸ್‌ಗೆ ಅಧಿಕಾರ ಕೈ ತಪ್ಪಿಸಿದ ಸ್ವಪಕ್ಷಸದಸ್ಯರು

# ನಗರಸಭೆಯ ಆಡಳಿತ ಚುಕ್ಕಾಣಿ ಹಿಡಿದ ಬಿಜೆಪಿ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ನಗರಸಭೆ ಮತ್ತು ಗುಂಡ್ಲುಪೇಟೆ ಪುರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯಲ್ಲಿ ಬಿಜೆಪಿಗೆ ಶಾಕ್ ನೀಡಿದ್ದ ಕಾಂಗ್ರೆಸ್ ಗೆ ಚಾಮರಾಜನಗರ ನಗರಸಭೆ ವರಿಷ್ಟರ ಚುನಾವಣೆಯಲ್ಲಿ ಬಿಜೆಪಿ ಶಾಕ್ ನೀಡುವ ಮೂಲಕ ಮುಯ್ಯಿಗೆ ಮುಯ್ಯಿ ತೀರಿಸಿಕೊಂಡಿದೆ.



ಚಾಮರಾಜನಗರ- ನಗರಸಭೆಯ ಅಧ್ಯಕ್ಷರಾಗಿ ಬಿಜೆಪಿಯ ಸುರೇಶ್, ಉಪಾಧ್ಯಕ್ಷರಾಗಿ ಮಮತಾ ಆಯ್ಕೆಯಾಗಿದ್ದು, ಎರಡನೇ ಅವಧಿಗೆ ಬಿಜೆಪಿ ನಗರಸಭೆಯ ಆಡಳಿತ ತನ್ನದಾಗಿಸಿಕೊಂಡಿದೆ. ನಗರಸಭೆಯ ಅಧ್ಯಕ್ಷ ಸ್ಥಾನಕ್ಕೆಕಾಂಗ್ರೆಸ್ ನಿಂದ 31ನೇ ವಾರ್ಡ್ ಸದಸ್ಯ ಆರ್.ಎಂ.ರಾಜಪ್ಪ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಎಸ್ಡಿಪಿಐ ಪಕ್ಷದ 12ನೇ ವಾರ್ಡ್ ಸದಸ್ಯ ಅಬ್ರಾರ್ ಅಹಮ್ಮದ್ ನಾಮಪತ್ರ ಸಲ್ಲಿಸಿದ್ದರು. ಬಿಜೆಪಿಯಿಂದ ಅಧ್ಯಕ್ಷ ಸ್ಥಾನಕ್ಕೆ 28ನೇ ವಾರ್ಡ್ ಸದಸ್ಯ ಸುರೇಶ್ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ 22 ನೇ ವಾರ್ಡ್ ಸದಸ್ಯೆ ಎಚ್.ಎಸ್. ಮಮತ ನಾಮಪತ್ರ ಸಲ್ಲಿಸಿದ್ದರು. ವರಿಷ್ಟರ ಆಯ್ಕೆ ಮತದಾನದ ಮೂಲಕ ನಡೆಯುವಾಗ ಕಾಂಗ್ರೆಸ್ ಪಕ್ಷದ ನಗರಸಭಾ ಸದಸ್ಯರಾದ ಆರ್.ಪಿ.ನಂಜುಂಡಸ್ವಾಮಿ, ನೀಲಮ್ಮ ಹಾಗೂ ಭಾಗ್ಯಮ್ಮ ಗೈರಾಗಿದ್ದರು. ಕಾಂಗ್ರೆಸ್ನ ಚಂದ್ರಕಲಾ ಬಿಜೆಪಿಗೆ ಸೇರ್ಪಡೆಯಾಗಿದ್ದರು. ಬಿಜೆಪಿಯ ಮಹದೇವಯ್ಯ, ಕಾಂಗ್ರೆಸ್ನತ್ತ ಮುಖ ಮಾಡಿದ್ದು ,ಕೆಲ ದಿನಗಳ ಹಿಂದೆಯೇ ಪಕ್ಷೇತರ ಸದಸ್ಯ ಬಸವಣ್ಣ ಕೂಡ ಕಾಂಗ್ರೆಸ್ ಸೇರ್ಪಡೆಯಾಗಿದ್ದರು.

ಇದರ ನಡುವೆ ಬಿಎಸ್ಪಿ ಸದಸ್ಯ ಪಿ. ಪ್ರಕಾಶ್ ಸತತ ಸಭೆಗೆ ಗೈರು ಹಾಜರಾದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳು ಪ್ರಕಾಶ್ ರವರ ಸದಸ್ಯತ್ವವನ್ನು ಅನರ್ಹಗೊಳಿಸಿದ್ದರು.

ಸೋಮವಾರ ನಡೆದ ನಗರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆಗೆ ಸಂಸದ ಸುನೀಲ್ ಬೋಸ್, ಶಾಸಕ ಸಿ.ಪುಟ್ಟರಂಗಶೆಟ್ಟಿ ಮತ ಸೇರಿಕಾಂಗ್ರೆಸ್ಗೆ 14 ಮಂದಿ ಕೈ ಎತ್ತಿದರು. ಬಿಜೆಪಿಗೆ 15ಮಂದಿ ಕೈ ಎತ್ತುವ ಮೂಲಕ ಬಿಜೆಪಿಯ ಸುರೇಶ್ ಅಧ್ಯಕ್ಷರಾಗಿ, ಮಮತ ಉಪಾಧ್ಯಕ್ಷರಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿಯಾಗಿದ್ದ ಉಪವಿಭಾಗಾಧಿಕಾರಿ ಮಹೇಶ್ ಘೋಷಣೆಮಾಡಿದರು.

**ಎರಡನೇ ಅವಧಿಗೆ ಬಿಜೆಪಿ ಆಡಳಿತ ಮುಂದುವರಿಕೆ :** ಜಿಲ್ಲೆಯ ಕೊಳ್ಳೇಗಾಲ ನಗರಸಭೆ, ಗುಂಡ್ಲುಪೇಟೆ ಪುರಸಭೆ ಹಾಗೂ ಯಳಂದೂರು ಪಪಂ ಅನ್ನು ತನ್ನ ವಶಕ್ಕೆ ಪಡೆದು ಬೀಗಿದ್ದಕಾಂಗ್ರೆಸ್ಗೆ ಚಾಮರಾಜನಗರ ನಗರಸಭೆ ಕೈ ಹಚ್ಚಿದೆ. ಇದರಿಂದ ಎರಡನೇಬಿಜೆಪಿ ಆಡಳಿತ ಮುಂದುವರಿಸಿದೆ. ಜಿಲ್ಲೆಯ ನಾಲ್ಕುಸ್ಥಳೀಯ ಸಂಸ್ಥೆಯಲ್ಲಿ ತನ್ನ ಅಸ್ತಿತ್ವ ಕಳೆದುಕೊಂಡಿದ್ದ ಬಿಜೆಪಿ ಚಾಮರಾಜನಗರ ನಗರಸಭೆಯನ್ನು ತನ್ನ ವಶಕ್ಕೆ ಪಡೆಯಲು ಹವಣಿಸುತ್ತಿದ್ದಬಿಜೆಪಿ ಕೊನೆಗೂ ಗೆಲುವು ಸಾಧಿಸಿದೆ.

## ಆವತಿಯಲ್ಲಿ ಶ್ಯಮಂತೋಕೋಪಾಕ್ಯಾನ ಎಂಬ ಯಂತ್ರ ಚಾರಿತ ದೃಶ್ಯ ರೂಪಕ



**ವಿಜಯಪುರ:** ಪಟ್ಟಣ ಸಮೀಪದ ಆವತಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ಶ್ರೀವಿದ್ಯಾ ಗಣಪತಿ ಗೆಳೆಯರ ಚಾರಿಟಬಲ್ ಟ್ರಸ್ಟ್ ವತಿಯಿಂದ ಶ್ಯಮಂತೋಕೋಪಾಕ್ಯಾನ ಎಂಬ ಯಂತ್ರ ಚಾಲಿತ ದೃಶ್ಯ ರೂಪಕವನ್ನು ರೂಪಿಸಲಾಗಿದ್ದು ದೇವನಹಳ್ಳಿ, ವಿಜಯಪುರ, ಚಿಕ್ಕಬಳ್ಳಾಪುರ ಹಾಗೂ ಸುತ್ತಮುತ್ತಲ ಗ್ರಾಮಗಳ ಜನರನ್ನು ಆಕರ್ಷಿಸುತ್ತಲಿದೆ.

ಈಗಾಗಲೇ ಶ್ರೀ ವಿದ್ಯಾಗಣಪತಿ ಗೆಳೆಯರ ಬಳಗದ ವತಿಯಿಂದ ಕಳೆದ 60 ವರ್ಷಗಳಿಗೂ ಹೆಚ್ಚು ಕಾಲದಿಂದ ಗಣೇಶೋತ್ಸವವನ್ನು ಆಚರಿಸಿಕೊಂಡು ಬರುತ್ತಿದ್ದು ಈ ಹಿಂದೆ ವಿನಾಯಕ ವಿಜಯ, ಗಜಮುಖ ಚರಿತ್ರೆ, ಸಿದ್ದಿ ಬುದ್ಧಿ ವಿನಾಯಕ, ವಿಶ್ವರೂಪ ಸಿದ್ಧಿ ವಿನಾಯಕ ದರ್ಶನ, ಏಕದಂತ ಸಿದ್ಧಿವಿನಾಯಕ ವಿರಹನುಮಾನ ಎಂಬಂತಹ ಹಲವಾರು ಯಂತ್ರ ಚಾಲೀತ ರೂಪಕಗಳನ್ನು ಮಾಡುವ ಮೂಲಕ ಆವತಿ ಗ್ರಾಮದ ಗೆಳೆಯರ ಬಳಗದವರು ಹೆಸರು ಮಾಡಿದ್ದು ಈ ಬಾರಿ ಶ್ಯಮಂತೋಕೋಪಾಕ್ಯಾನ ಎಂಬ ರೂಪಕವನ್ನು ಮಾಡಿದ್ದು ಎಲ್ಲರನ್ನೂ ಆಕರ್ಷಿಸುತ್ತಲಿದೆ.

ಭಾದ್ರಪದ ಚೌತಿಯ ಚಂದ್ರನ ದರ್ಶನ ದಿಂದಾಗುವ ತೊಂದರೆ ಅಪವಾದ ದೇವಾನುದೇವತೆಗಳನ್ನು ಬಿಟ್ಟಿಲ್ಲ ಎಂಬುದೇ ಈ ರೂಪಕದ ವಿಷಯವಾಗಿರುತ್ತದೆ.

ಆವತಿಯ ಎಂಜಿಎಸ್ ರಸ್ತೆಯ ಶ್ರೀ ಆಂಜನೇಯ ಸ್ವಾಮಿ ದೇವಾಲಯದ ಮುಂಭಾಗ ಈ ದೃಶ್ಯ ರೂಪವನ್ನು ಪ್ರತಿದಿನ ಸಂಜೆ 8:30 ಕ್ಕೆ ಏರ್ಪಡಿಸಲಾಗುತ್ತಿದ್ದು ಅಕ್ಟೋಬರ್ 7ರವರೆಗೂ ಇದನ್ನು ನಡೆಸಲಾಗುತ್ತಿದ್ದು ಸುತ್ತು ಮುತ್ತಲ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ತಿಳಿಸಲಾಗಿದೆ.

### ಮಾಲೂರು ಶಾಸಕ ಕೆ.ವೈ.ನಂಜೇಗೌಡ ಭರವಸೆ

# ಗುರುಭವನ ನಿರ್ಮಾಣಕ್ಕೆ ಒಂದು ವರ್ಷದ ನನ್ನ ಗೌರವಧನ ನೀಡುವೆ

**ಮಾಲೂರು :** ಪಟ್ಟಣದಲ್ಲಿ ಪ್ರಗತಿಯಲ್ಲಿರುವ ಗುರುಭವನದ ನಿರ್ಮಾಣಕ್ಕೆ ಶಾಸಕರ ಅನುಧಾನದ ಜೊತೆಗೆಒಂದು ವರ್ಷದ ಶಾಸಕರ ಗೌರವಧನವನ್ನು ನೀಡುವುದಾಗಿ ಶಾಸಕ ಕೆವೈ ನಂಜೇಗೌಡಅವರು ತಿಳಿಸಿದರು.

ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ ಮತ್ತುತಾಲ್ಲೂಕು ಶಿಕ್ಷಕರ ಸಂಘದ ವತಿಯಿಂದ ಡಾ.ಎಸ್.ರಾಧಾಕೃಷ್ಣನ್ ಅವರ 136ನೇ ಜನ್ಮದಿನದ ಅಂಗವಾಗಿ ಪಟ್ಟಣದ ವಿಶ್ವನಾಥ್ಕನ್ವೆನ್ಷನ್ಹಾಲ್ ನಲ್ಲಿಸೋಮವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆಯ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಸಮಾಜದಲ್ಲಿತಂದೆ, ತಾಯಿಯ ನಂತರದ ಸ್ಥಾನವನ್ನುಗುರುವಿಗೆ ನೀಡಿಗೌರವಿಸುತ್ತಿದ್ದು ಪ್ರತಿಯೊಬ್ಬ ಮಗುವಿನಲ್ಲಿನ ಸರಿ ತಪ್ಪುಗಳನ್ನು ತಿದ್ದಿಅವರಲ್ಲಿ ಹಡಗಿರುವ ಪ್ರತಿಭೆಯನ್ನು ಹೊರತೆಗೆದುಉತ್ತಮ



ಜೀವನವನ್ನು ರೂಪಿಸಿಕೊಡುವುದರ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಗುವಿನ ಪಾತ್ರ ಬಹುಮುಖ್ಯವಾಗಿದೆಎಂದರು. ನಾನು ಶಾಸಕನಾದ ಮೇಲೆ ಮುಖ್ಯವಾಗಿ ಸರ್ಕಾರಿ ಶಾಲೆಗಳ ಮೇಲೆ ವಿಶೇ? ಕಾಳಜಿವಹಿಸಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹಲವಾರು ಯೋಜನೆಗಳನ್ನು ತಂದಿದ್ದು. ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸುಮಾರು 46 ಕೋಟಿರೂಅನುಧಾನದಲ್ಲಿಅಭಿವೃದ್ಧಿ ಕಾಮಗಾರಿಗಳು ನಡೆದಿವೆ. ರಾಜ್ಯದಲ್ಲೇ ಪ್ರಥಮವಾಗಿ ಮಾಸ್ತಿ ವೆಂಕಟೇಶ್ಅಯ್ಯಂಗರ್ ಅವರತವರೂರಲ್ಲಿ ಸುಮಾರು 25 ಕೋಟಿ ವೆಚ್ಚದಲ್ಲಿ 8 ಎಕರೆಜಾಗದಲ್ಲಿ ಮಾಸ್ತಿ ವೆಂಕಟೇಶ್ಅಯ್ಯಂಗರ್ ವಸತಿ ಶಾಲೆ ನಿರ್ಮಾಣವಾಗಿದ್ದುಉದ್ಘಾಟನೆಗೆ ಸಿದ್ದವಾಗಿದೆ. ಹಾಗೇ ಮಾಸ್ತಿಯವರು ಓದಿರುವದೊಡ್ಡ ಶಿವಾರ ಸರ್ಕಾರಿ ಶಾಲೆಯನ್ನು ವಿಶೇಷವಾಗಿಅಭಿವೃದ್ಧಿ ಪಡಿಸಲಾಗಿದೆ. ವಿಶೇಷವಾಗಿ ಶಿಕ್ಷಕರು ಮಕ್ಕಳು ಸರ್ಕಾರಿ ಶಾಲೆಗಳಿಗೆ ದಾಖಲಾಗುವುದಕ್ಕೆ ಹೆಚ್ಚು ಒತ್ತು ನೀಡಬೇಕು ಮುಂದಿನ ವ?ದ ಶಿಕ್ಷಕರ ದಿನಾಚರಣೆಯಲ್ಲಿಯಾರುಅತಿ ಹೆಚ್ಚು ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಾತಿ ಮಾಡಿಸುತ್ತಾರೋಅಂತಹ ಶಿಕ್ಷಕರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಗುವುದು. ಈಗಾಗಲೇ ಗುರುಭವನ ಕಾಮಗಾರಿಗೆ ಪ್ರಗತಿಯಲ್ಲಿದ್ದು ಶಾಸಕರ ಅನುದಾನದಲ್ಲಿ 25 ಲಕ್ಷ ನೀಡಿದ್ದು, ಗುರುಭವನ ಪೂರ್ಣವಾಗಲು ಬೇಕಾಗಿರುವ ಹಣವನ್ನುಎಲ್ಲರ ಸಹಕಾರದೊಂದಿಗೆ ಕ್ರೂಡಿಕರಿಸಲಾಗುವುದು, ಜೊತೆಗೆ ನನ್ನಒಂದು ವರ್ಷದ ಶಾಸಕರ ಗೌರವಧನವನ್ನು ಗುರುಭವನಕ್ಕೆ ನೀಡುತ್ತೇನೆ. ಹಾಗೇ ಈಗಾಗಲೇ ನಮ್ಮ ಮುಖಂಡರುಎಲ್ಲಾರೀತಿಯಲ್ಲಿ ಸಹಕರಿಸುತ್ತಿದ್ದು ಮುಂದಿನ ವ?ದೊಳಗೆ ಗುರುಭವನ ಪೂರ್ಣವಾಗಲಿದೆಎಂದರು.

ಇದೇ ವೇಳೆ ತಾಲ್ಲೂಕಿನಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತಿಹೊಂದ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ತಹಸೀಲ್ದಾರ್ ಕೆ ರಮೇಶ್,ಯೋಜನಾ ಪ್ರಾಧಿಕಾರದಅಧ್ಯಕ್ಷ ಮೊಹಮ್ಮದ್ ನಯೀಮ್ ವುಲ್ಲಾ, ಪುರಸಭಾಅಧ್ಯಕ್ಷರಾದ ಕೋಮಲ ನಾರಾಯಣ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಕೃಷ್ಣಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಕಲಾ, ಮಾಸ್ತಿ ಬ್ಲಾಕ್ ಕಾಂಗ್ರೆಸ್ಅಧ್ಯಕ್ಷ ವಿಜಯನರಸಿಂಹ, ಸರ್ಕಾರಿ ನೌಕರರ ಸಂಘದತಾಲ್ಲೂಕು ಅಧ್ಯಕ್ಷ ವಿ.ಮುನೇಗೌಡ, ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಅಧ್ಯಕ್ಷರು, ಸೇರಿದಂತೆ ಇತರೆ ಸಂಘಟನೆಗಳ ಅಧ್ಯಕ್ಷರು ಪಧಾಧಿಕಾರಿಗಳು, ಶಿಕ್ಷಕರು ಇದ್ದರು.

# ಕಲಾವಿದರ ಕಡಗಣನೆ ಖಂಡಿಸಿ ಪ್ರತಿಭಟನೆ



**ಮಂಡ್ಯ:** ಗಗನಚುಕ್ಕಿ ಜಲಪಾತೋತ್ಸವ ಹಾಗೂ ಶ್ರೀರಂಗಪಟ್ಟಣ ದಸರಾ ಮಹೋತ್ಸವದಲ್ಲಿ ಸ್ಥಳೀಯ ಕಲಾವಿದರನ್ನು ಕಡೆಗಣಿಸಿರುವುದನ್ನು ಖಂಡಿಸಿ ಕಲಾವಿದರು ಪ್ರತಿಭಟನೆ ನಡೆಸಿದರು.

ನಗರದ ವಿ ವಿ ಪ್ರತಿಮೆ ಬಳಿಯಿಂದ ಮೆರವಣಿಗೆ ಹೊರಟ ವಿವಿಧ ಕಲಾ ಪ್ರಕಾರಗಳ ಕಲಾವಿದರು ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು.

ಜಿಲ್ಲೆಯಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಹಬ್ಬ, ಜಯಂತೋತ್ಸವ, ಸಮ್ಮೇಳನ ಹಾಗೂ ಉತ್ಸವಗಳಲ್ಲಿ ಜಿಲ್ಲೆಯ ಕಲಾವಿದರನ್ನು ಕಡೆಗಣಿಸಿ ಇವೆಂಟ್ಸ್ ಮ್ಯಾನೇಜ್ಮೆಂಟ್ ಗಳಿಗೆ ಕಾರ್ಯಕ್ರಮಗಳನ್ನು ಒಪ್ಪಿಸುವ ಮೂಲಕ ಅನ್ಯಾಯ ಮಾಡಲಾಗುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಜಿಲ್ಲೆಯಲ್ಲಿ ನಡೆಯುವ ಎಲ್ಲಾ ರೀತಿಯ ಸರ್ಕಾರಿ ಕಾರ್ಯಕ್ರಮ, ಜಯಂತಿ, ಸಮಾವೇಶ ಸಮ್ಮೇಳನ ಉತ್ಸವ ಗಳಲ್ಲಿ ಸ್ಥಳೀಯ ಕಲಾವಿದರಿಗೆ ಮೊದಲ ಆದ್ಯತೆ ನೀಡಬೇಕು, ಕಲಾವಿದರಿಂದ ಅರ್ಜಿ ಆಹ್ವಾನಿಸುವ ಬದಲು ಕಲಾವಿದರು,ಕಲಾತಂಡಗಳ ಪಟ್ಟಿ ಮಾಡಿ ಎಲ್ಲರಿಗೂ ಸಮಾನಾಂತರವಾಗಿ ಕಾರ್ಯಕ್ರಮ ನೀಡಬೇಕು, ಸಂಭಾವನೆ ವಿಚಾರದಲ್ಲಿ ಶೋಷಣೆ ತಪ್ಪಿಸಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವಿಧಪ್ ಕಲಾ ಪ್ರಕಾರಗಳಿಗೆ ನೀಡುತ್ತಿರುವ ಸಂಭಾವನೆ ಕ್ರಮ ಅನುಸರಿಸಿ ಸಂಭಾವನೆ ನೀಡಬೇಕು, ಕಾರ್ಯಕ್ರಮ ನಡೆದ 15 ದಿನದ ಒಳಗಾಗಿ ಸಂಭಾವನೆ ನೀಡಬೇಕು, ಕಲಾ ಪ್ರದರ್ಶನದ ವೇಳೆ ಕಲಾವಿದರಿಗೆ ಕುಡಿಯುವ ನೀರು, ಊಟ, ವಸತಿ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಕಲಾವಿದರಿಗೆ ನೀಡುವ ಸ್ಥಾನಮಾನ ಗೌರವವನ್ನು ಸ್ಥಳೀಯ ಕಲಾವಿದರಿಗೂ ನೀಡಬೇಕು, ಕಲಾವಿದ, ಕಲಾತಂಡಗಳನ್ನು ನೇರ ಸಂಪರ್ಕಿಸಿ ಕಾರ್ಯಕ್ರಮ ನೀಡುವ ಮೂಲಕ ಮಧ್ಯವರ್ತಿ ಹಾವಳಿ ತಪ್ಪಿಸಬೇಕು, ಜಿಲ್ಲೆಯ ಜನಪ್ರತಿನಿಧಿಗಳು ವಿಶೇಷ ಪ್ರೋತ್ಸಾಹ ನೀಡುವ ಮೂಲಕ ರಾಜ್ಯ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಉಸ್ತವಗಳಿಗೆ ಜಿಲ್ಲೆಯ ಕಲಾವಿದರನ್ನು ಶಿಫಾರಸು ಮಾಡಬೇಕು, ಶಾಮಿಯಾನ, ಧ್ವನಿ ವರ್ದಕ, ದೀಪಾಲಂಕಾರ, ವಸ್ತ್ರಲಂಕಾರ, ಪೌರಾಣಿಕ, ಸಾಮಾಜಿಕ ಡ್ರಾಮಾ ಸೀನರಿ ಮಾಲೀಕರು ಕಲಾವಿದರಿಗೆ ಜೀವನ ಭದ್ರತೆ ಇಲ್ಲದೆ ಇರುವುದರಿಂದ ಇವರಿಗೆ ಹೆಚ್ಚು ಉತ್ತೇಜನ ನೀಡಬೇಕು ಎಂದು ಒತ್ತಾಯಿಸಿದರು. ಕಲಾವಿದರಾದ ಸಂತೆ ಕಸಲಗೆರೆ ಬಸವರಾಜು, ಹನಿಯಂಬಾಡಿ ಶೇಖರ್, ಎಚ್ ಪಿ ವೈರಮುಡಿ, ತಗ್ಗಹಳ್ಳಿ ವೆಂಕಟೇಶ್, ಸಿ.ಕುಮಾರಿ, ಲಂಕೇಶ್, ಕಾರಸವಾಡಿ ಮಹದೇವ, ಕೃಷ್ಣೇಗೌಡ, ಸುರೇಶ್ ಭಾಗವಹಿಸಿದ್ದರು.

# 15ರಂದು 24 ಕಿ.ಮೀ.ಮಾನವ ಸರಪಳಿ

## ಪ್ರಜಾಪ್ರಭುತ್ವ ದಿನ ಯಶಸ್ವಿಗೊಳಿಸಲು ಸಂಸದ , ಶಾಸಕರ ಮನವಿ

**ಚಾಮರಾಜನಗರ:** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಇದೇ ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತಿದ್ದು, ರಾಜ್ಯದ ಬೀದರ್ ಜಿಲ್ಲೆಯ ಬಸವಕಲ್ಯಾಣದಿಂದ ಚಾಮರಾಜನಗರ ಜಿಲ್ಲೆಯವರೆಗೆ ಅತಿ ಉದ್ದದ ಮಾನವ ಸರಪಳಿ ರಚಿಸಲಾಗುತ್ತಿದೆ. ಈ ಮಹತ್ವದ ಕಾರ್ಯಕ್ರಮದಲ್ಲಿ ಎಲ್ಲರೂ ಭಾಗವಹಿಸಿ ಯಶಸ್ವಿಗೊಳಿಸುವಂತೆ ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಮನವಿ ಮಾಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸುನೀಲ್ ಬೋಸ್ ಅವರು ಸೆಪ್ಟೆಂಬರ್ 15ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ನಾಗರಿಕರಿಗೆ ಪ್ರಜಾಪ್ರಭುತ್ವ, ಸಂವಿಧಾನದ ಆಶಯಗಳನ್ನು ಒಳಗೊಂಡ ಜಾಗೃತಿ ಮೂಡಿಸುವ ಉದ್ದೇಶದಿಂದ ಸರ್ಕಾರ ಮಹತ್ವದ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಸೆಪ್ಟೆಂಬರ್ 15ರಂದು ಬೆಳಿಗ್ಗೆ 8.30 ರಿಂದ 10.30ರವರೆಗೆ ಏಕಕಾಲದಲ್ಲಿ ಮಾನವ ಸರಪಳಿ ನಿರ್ಮಿಸುವ ಕಾರ್ಯಕ್ರಮವು ರಾಜ್ಯಾದ್ಯಂತ ನಡೆಯಲಿದೆ. ಚಾಮರಾಜನಗರ ಜಿಲ್ಲೆಯಲ್ಲಿ 24 ಕಿ.ಮೀ ವ್ಯಾಪ್ತಿಯ ಮಾನವ ಸರಪಳಿ ರಚಿಸಲಾಗುತ್ತಿದ್ದು, 19,200 ಜನರು ಭಾಗವಹಿಸಲಿದ್ದಾರೆಂದು ತಿಳಿಸಿದರು.

ಚಾಮರಾಜನಗರ ಜಿಲ್ಲೆಯ ಆರಂಭದ ಸರಹದ್ದಾದ ಮೂಗೂರು ಕ್ರಾಸ್ನಿಂದ ಚಾಮರಾಜನಗರ ಪಟ್ಟಣದ ಪಚ್ಚಪ್ಪ ವೃತ್ತದವರೆಗೆ ಮಾನವ ಸರಪಳಿ ನಿರ್ಮಿಸಲಾಗುತ್ತದೆ. ಪಚ್ಚಪ್ಪ ವೃತ್ತದಿಂದ ಸುಮಾರು 1 ಕಿ.ಮೀವರೆಗೆ ಅಂದರೆ ವರ್ತಕರ ಭವನದವರೆಗೆ ಭಾರತದ ತ್ರಿವರ್ಣ ಧ್ವಜ ಹಿಡಿಯುವ ಕಾರ್ಯಕ್ರಮ ಸಹ ವಿಶೇಷವಾಗಿದೆ. ಸಂವಿಧಾನ ಪೀಠಿಕೆ ಓದುವುದು, ಸಸಿ ನೆಡುವುದು, ಇನ್ನಿತರ ವಿಶೇಷ ಕಾರ್ಯಕ್ರಮಗಳನ್ನು ಏರ್ಪಾಡು ಮಾಡಲಾಗಿದೆ ಎಂದು ಲೋಕಸಭಾ ಸದಸ್ಯರು ವಿವರಿಸಿದರು.

ಪ್ರಜಾಪ್ರಭುತ್ವವು ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಭದ್ರ ಬುನಾದಿ ಮೇಲೆ ನಿಂತಿದೆ. ಈ ಭದ್ರ ಬುನಾದಿ ಬಲಿಷ್ಠವಾಗದಿದ್ದರೆ ಪ್ರಜಾಪ್ರಭುತ್ವ ಬಲಿಷ್ಠವಾಗಲಾರದು. ಆದ್ದರಿಂದ ಸಮಾನತೆ, ಸ್ವಾಂತ್ರಂತ್ರ್ಯ ಭ್ರಾತೃತ್ವದ ಆದರ್ಶಗಳು ಭಾರತ ಸಂವಿಧಾನ ಪೀಠಿಕೆಯ ಭಾಗವಾಗಿದೆ. ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು ಈ ಬಗ್ಗೆ ಅರಿವು ಮೂಡಿಸುವ ದೊಡ್ಡ ಕೆಲಸವನ್ನು ಸರ್ಕಾರ ಹಮುಮಿಕೊಂಡಿದೆ ಎಂದರು.

2023ನೇ ಸಾಲಿನಲ್ಲಿ ಸಂವಿಧಾನ ಜಾಗೃತಿ



> **ಜಿಲ್ಲೆಯಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಣೆಗೆ ಪ್ರತಿಯೊಬ್ಬರ ಸಹಕಾರ ಅಗತ್ಯವಾಗಿದೆ. ಚಿಕ್ಕ ವಯಸ್ಸಿನ ಶಾಲಾ ಮಕ್ಕಳು ಭಾಗವಹಿಸುತ್ತಿಲ್ಲ. ಹಿರಿಯ ತರಗತಿಯ ವಿದ್ಯಾರ್ಥಿಗಳು ಪಾಲ್ಗೊಳ್ಳದ್ದಾರೆ. ಅಧಿಕಾರಿಗಳಿಗೆ ಅಗತ್ಯ ಜವಾಬ್ದಾರಿ ನೀಡಲಾಗಿದೆ.**
>
> **। ಮೋನಾ ರೋತ್**
> **ಪ್ರಭಾರ ಜಿಲ್ಲಾಧಿಕಾರಿ**

ಜಾಥಾ ಕಾರ್ಯಕ್ರಮವನ್ನು ಎಲ್ಲೆಡೆ ಯಶಸ್ವಿಯಾಗಿ ನಡೆಸಲಾಗಿತ್ತು. ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಇದೇ ಸೆಪ್ಟೆಂಬರ್ 15ರಂದು ಉದ್ದನೆಯ ಮಾನವ ಸರಪಳಿ ರಚಿಸುವ ಮೂಲಕ ಆಚರಿಸಲಾಗುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಗೆ ಜಿಲ್ಲೆಯ ಜನಪ್ರನಿಧಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ರೋಟರಿ ಇಂಟರ್ ನ್ಯಾಷನಲ್, ಸಿವಿಲ್ ಸೊಸೈಟಿ, ಎನ್.ಜಿ.ಒ, ವಕೀಲರು, ಶಿಕ್ಷಕರು, ವಿದ್ಯಾರ್ಥಿಗಳು, ಮಹಿಳಾ ಸಂಘಟನೆಗಳು, ಮಾಧ್ಯಮದವರು, ಎಲ್ಲಾ ರಾಜಕೀಯ ಪಕ್ಷದ ಮುಖಂಡರು, ಸಮುದಾಯದ ಯಜಮಾನರು, ಮುಖಂಡರು ಸೇರಿದಂತೆ ಎಲ್ಲಾ ಸಾರ್ವಜನಿಕರು ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಕೋರಿದರು.

ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಮಾತನಾಡಿ ಜಿಲ್ಲಾ ವ್ಯಾಪ್ತಿಯಲ್ಲಿ ರಚಿಸಲಾಗುವ 24 ಕಿ.ಮೀ ಉದ್ದದ ಮಾನವ ಸರಪಳಿ ನಿರ್ಮಾಣವು ಅತ್ಯಂತ ಗಮನಸೆಳೆಯಲಿದೆ. ಮೂಗೂರು ಕ್ರಾಸ್ ನಿಂದ ಆರಂಭವಾಗಲಿರುವ ಮಾನವ ಸರಪಳಿ ನಿರ್ಮಾಣದ ಪ್ರತೀ 100 ಮೀಟರ್ ಗೆ ವಿವಿಧ ಇಲಾಖೆಯ ಸಿಬ್ಬಂದಿ ನಿಯೋಜಿಸಲಾಗಿದೆ. ಪ್ರತೀ 500ಮೀ ಓರ್ವ ತಾಲೂಕುಮಟ್ಟದ ಅಧಿಕಾರಿ ಹಾಗೂ ಪ್ರತಿ 1 ಕಿ.ಮೀ ಗೆ ಜಿಲ್ಲಾಮಟ್ಟದ ಅಧಿಕಾರಿಗಳನ್ನು ಉಸ್ತುವಾರಿಯಾಗಿ ನೇಮಿಸಲಾಗಿದೆ. ಆಶಾ ಕಾರ್ಯಕರ್ತೆಯರು, ಆರೋಗ್ಯ ಅಧಿಕಾರಿಗಳನ್ನು ಸಹ ನಿಯೋಜಿಸಲಾಗಿದೆ ಎಂದರು.

ಗಡಿಜಿಲ್ಲೆ ಚಾಮರಾಜನಗರದಲ್ಲಿ ಅತ್ಯಂತ ವಿಶಿಷ್ಟವಾಗಿ ಪ್ರಜಾಪ್ರಭುತ್ವ ದಿನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಜ್ಯದಲ್ಲಿ 25 ಲಕ್ಷ ಜನರು ಭಾಗವಹಿಸುತ್ತಿದ್ದು, 10 ಸಾವಿರ ಸಸಿ ನೆಡಲಾಗುತ್ತಿದೆ. ಜಿಲ್ಲೆಯ ಜನರು ಈ ಅರ್ಥಪೂರ್ಣ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಮಾತನಾಡಿ ಜಿಲ್ಲೆಯಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿರುವ ಅತಿ ಉದ್ದದ ಮಾನವ ಸರಪಳಿಯಲ್ಲಿ ಎಲ್ಲರೂ ಭಾಗವಹಿಸಬೇಕು. ಮಾನವ ಸರಪಳಿಯಲ್ಲಿ ಪಾಲ್ಗೊಳ್ಳಲು ಸಂಘ ಸಂಸ್ಥೆಗಳು, ಅಸೋಷಿಯೇಷನ್, ಸಹಕಾರ ಸಂಘ, ನೌಕರರ ಸಂಘ, ಎನ್.ಜಿ.ಒ, ಇತರೆ ಸಂಘಗಳು ಸೇರಿದಂತೆ ಇತರರು ಸಹ ಗೂಗಲ್ ಲಿಂಕ್ https://forms.gle/WUaMfzQo8y8EyLnj7 ಬಳಸಿಯೂ ನೋಂದಣಿ ಮಾಡಿಕೊಳ್ಳಬಹುದು ಎಂದು ತಿಳಿಸಿದರು.

ಇದೇ ವೇಳೆ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಲೋಗೊ ಒಳಗೊಂಡ ಬಿತ್ತಿ ಪತ್ರವನ್ನು ಗಣ್ಯರು ಬಿಡುಗಡೆ ಮಾಡಿದರು.

ಶಾಸಕರಾದ ಹೆಚ್.ಎಂ. ಗಣೇಶ್ ಪ್ರಸಾದ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಇತರರು ಸುದ್ದಿಗೋಷ್ಠಿಯಲ್ಲಿ ಇದ್ದರು.

## ಡಾ.ಕೃಷ್ಣ ಅವರಿಗೆ ಅಭಿನಂದನೆ

**ಮಂಡ್ಯ:** ಕರ್ನಾಟಕ ಆಹಾರ ನಿಗಮದ ಅಧ್ಯಕ್ಷರಾದ ಡಾ.ಕೃಷ್ಣ ಅವರ ನಿವಾಸದಲ್ಲಿ ತಾಲೂಕು ಅಕ್ಕಿ ಗಿರಣಿ ಮಾಲೀಕರ ಸಂಘದ ವತಿಯಿಂದ ಅಶೋಕ್ ನಗರದ ಡಾ.ಕೃಷ್ಣ ಅವರ ನಿವಾಸದಲ್ಲಿ ಅಭಿನಂದಿಸಲಾಯಿತು.

ಅಕ್ಕಿ ಗಿರಣಿ ಮಾಲೀಕರ ಸಂಘದ ಸಂಪಳ್ಳಿ ಬಸವರಾಜು ಮಾತನಾಡಿ, ಕಾಂಗ್ರೆಸ್ ಪಕ್ಷವು ಡಾ.ಕೃಷ್ಣ ಅವರನ್ನು ಗುರುತಿಸಿ ಕರ್ನಾಟಕ ಆಹಾರ ನಿಗಮದ ಅಧ್ಯಕ್ಷರನ್ನಾಗಿ ಮಾಡಿರುವುದು ಶ್ಲಾಘನೀಯವಾದದ್ದು ಇವರ ಸೇವೆಯನ್ನು ಗುರುತಿಸಿ ಮತ್ತಷ್ಟು ಉನ್ನತ ಹುದ್ದೆ ಅಲಂಕರಿಸಲಿ ಡಾ. ಕೃಷ್ಣ ಅವರು ವೈದ್ಯ ವೃತ್ತಿಯಲ್ಲಿ ಬಡ ಜನರಿಗೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡಿ ಜನ ಮೆಚ್ಚಿಗೆ ಗಳಿಸಿದ್ದಾರೆ ಎಂದು ಶ್ಲಾಘಿಸಿದರು. ಡಾ.ಕೃಷ್ಣ ಅವರ ಸೇವೆಯು ಹೀಗೆಯೇ ಸದಾ ಮುಂದುವರಿಯಲಿ, ಜೊತೆಗೆ ಆಹಾರ ನಿಗಮದಲ್ಲಿ ಅತ್ಯುತ್ತಮ ಸೇವೆ ನೀಡಿ ರಾಜ್ಯದಲ್ಲೇ ಇವರ ಸೇವೆ ಮೆಚ್ಚುವಂತಾಗಲಿ ಎಂದು ಶುಭ ಆರೈಸಿದರು. ಈ ಸಂದರ್ಭದಲ್ಲಿ ಕೆ.ಆತ್ಮಾನಂದ, ಶಿವನಂಜು, ಮಹೇಶ್, ಸರ್ವೇಶ್, ಮಹೇಶ್, ಮುಕ್ತಾರ್ ಅಹಮದ್, ರಾಮಕೃಷ್ಣ , ಕಲ್ಲಹಳ್ಳಿ ನಾಗೇಂದ್ರ, ಭಾಗವಹಿಸಿದ್ದರು.




**ಮಂಡ್ಯ ಶಂಕರ್ ನಗರದ ವಿದ್ಯಾಗಣಪತಿ ಮತ್ತು ಶ್ರೀ ಉಮಾಮಹೇಶ್ವರ ದೇವಸ್ಥಾನ ಆವರಣದಲ್ಲಿ ಗೌರಿ ಗಣೇಶ ಹಬ್ಬದ ಅಂಗವಾಗಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ದೇವಸ್ಥಾನದ ಅಧ್ಯಕ್ಷ ಎಂ ಹೆಚ್ ಶಿವಲಿಂಗೇಗೌಡ ಮಾತನಾಡಿ ಮೂರು ದಿನಗಳ ಕಾಲ ದೇವಾಲಯದ ಆವರಣದಲ್ಲಿ ಸರ್ವೇಶ್ವರ ಭಜನಾ ಮಂಡಳಿ ಇಂದ ಭಜನೆ ಕುಟಟ ವಿಸ್ಮಯ ಶಿವಕುಮಾರ್ ಯಿಂದ ಹರಿಕಥೆ ಕಾರಸವಾಡಿ ಮಧುಸೂದನ್ ಅವರಿಂದ ಹರಿಕಥೆ ಸಂಪಳ್ಳಿ ಬಸವರಾಜು ಮತ್ತು ತಂಡದಿಂದ ಗೀತ ಲಹರಿ ಕಾರ್ಯಕ್ರಮಕ್ಕೆ ಬಂದಂತಹ ಭಕ್ತಾದಿಗಳಿಗೆ ಪ್ರಸಾದ ವಿತರಿಸಲಾಗುತ್ತಿದೆ.**

## ಶ್ರೀಗಂಧ ಕಳ್ಳಸಾಗಣೆ; ಇಬ್ಬರ ಬಂಧನ

**ಚಾಮರಾಜನಗರ:** ಶ್ರೀಗಂಧ ಕಳ್ಳ ಸಾಗಾಣಿಕೆ ಮಾಡುತ್ತಿದ್ದ ಆರೋಪಿಗಳಿಬ್ಬರನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೊಪ್ಪಿಸಿದ ಘಟನೆ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ರಾಮಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ರಾಮಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ಅಜ್ಜೀಪುರ-ಮಂಚಾಪುರ ನಡುವೆ ರಾಮಾಪುರ ಕಡೆಗೆ ಗೋಪಿಶೆಟ್ಟಿಯೂರು ಗ್ರಾಮದ ಸೇಟು, ಮುತ್ತು ಶೆಟ್ಟಿಯೂರು ಗ್ರಾಮದ ವಿಜಯ್ ರವರು ಶ್ರೀಗಂಧ ತುಂಡುಗಳನ್ನು ಚೀಲದಲ್ಲಿ ತುಂಬಿಕೊಂಡು ಮೊಪೆಡ್ ನಲ್ಲಿ ಸಾಗಾಣಿಕೆ ಮಾಡುತ್ತಿರುವ ಬಗ್ಗೆ ಮಾಹಿತಿ ಪಡೆದ ಪೊಲೀಸರು ದಾಳಿ ನಡೆಸಿ ಬಂಧಿಸಿದರು. ಬಂಧಿತ ಆರೋಪಿಗಳಿಂದ 15 ಕೆ.ಜಿ 50 ಗ್ರಾಂ ತೂಕದ 36 ಶ್ರೀಗಂಧ ತುಂಡುಗಳನ್ನು ಜಪ್ತಿಪಡಿಸಿಕೊಂಡಿದ್ದು, ಶ್ರೀಗಂಧ ಸಾಗಾಣಿಕೆ ಮಾಡುತ್ತಿದ್ದ ಹೋಂಡಾ ಡಿಯೋ ಮೊಪೆಡ್ ನ್ನು ವಶಪಡಿಸಿಕೊಂಡು ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ಇಂದು ಹಿರಿಯ ನಾಗರಿಕರಿಗೆ ಜಿಲ್ಲಾಮಟ್ಟದ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ

**ಚಾಮರಾಜನಗರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ವತಿಯಿಂದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಆಚರಿಸುತ್ತಿದ್ದು, ಇದರ ಅಂಗವಾಗಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಜಿಲ್ಲಾಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಸೆಪ್ಟೆಂಬರ್ 10ರಂದು ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ಪೇಟೆ ಪ್ರೈಮರಿ) ಆವರಣದಲ್ಲಿ ಆಯೋಜಿಸಲಾಗಿದೆ. ವಯೋಮಿತಿ ಆಧಾರದ ಮೇಲೆ ಎರಡು ವಿಭಾಗಗಳಲ್ಲಿ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಸ್ಪರ್ಧೆ ಏರ್ಪಡಿಸಲಾಗಿದೆ. 60 ರಿಂದ 70 ವರ್ಷದವರಿಗೆ ಮ್ಯೂಸಿಕಲ್ ಚೇರ್ ಮತ್ತು 60 ರಿಂದ 70 ವರ್ಷ ಮೇಲ್ಪಟ್ಟವರಿಗೆ ಬಿರುಸಿನ ನಡಿಗೆ, ಬಕೆಟ್ನಲ್ಲಿ ಬಾಲ್ ಎಸೆಯುವುದು ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಾದ ಗಾಯನ ಮತ್ತು ಏಕ ಪಾತ್ರಾಭಿನಯ ಸ್ಪರ್ಧೆಗಳನ್ನು ನಡೆಸಲಾಗುವುದು. ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಿ, ಜಿಲ್ಲಾಮಟ್ಟದ ಹಿರಿಯ ನಾಗರಿಕರ ದಿನಾಚರಣೆಯಂದು ಸನ್ಮಾನಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ. ಸಂ 08226-223688 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ರಾಷ್ಟ್ರೀಯ ಅರಣ್ಯ ಹುತಾತ್ಮರ ಸ್ಮರಣ ದಿನ ಕಾರ್ಯಕ್ರಮ

**ಚಾಮರಾಜನಗರ:** ಅರಣ್ಯ ಇಲಾಖೆಯ ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶ ವತಿಯಿಂದ ರಾಷ್ಟ್ರೀಯ ಅರಣ್ಯ ಹುತಾತ್ಮರ ಸ್ಮರಣ ದಿನ ಕಾರ್ಯಕ್ರಮವನ್ನು ಸೆಪ್ಟೆಂಬರ್ 11 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಅರಣ್ಯ ಹುತಾತ್ಮರ ಸ್ಮಾರಕದಲ್ಲಿ ಹಮ್ಮಿಕೊಳ್ಳಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಚಾಮರಾಜನಗರ (ಪ್ರಾದೇಶಿಕ) ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ. ಹೀರಾಲಾಲ್ ಅವರು ಪ್ರಾಸ್ತಾವಿಕ ನುಡಿಗಳನ್ನಾಡುವರು. ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿ.ಎಸ್. ಶ್ರೀಪತಿ ಅವರು ಹುತಾತ್ಮರ ನಾಮ ವಾಚನ ಮಾಡುವರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ವಿ. ಸಭ್ಯಶ್ರೀ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಸೌಲಭ್ಯಗಳಿಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಯಳಂದೂರು ಪಟ್ಟಣ ಪಂಚಾಯಿತಿ ವತಿಯಿಂದ 2024-25ನೇ ಸಾಲಿಗೆ ಶೇ 24.10, 7.25 ಹಾಗೂ ಶೇ 5ರ ಕಾರ್ಯಕ್ರಮಗಳಡಿ ವಿವಿಧ ವೈಯಕ್ತಿಕ ಸೌಲಭ್ಯಗಳನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಬಿಎ, ಬಿಕಾಂ, ಬಿಎಸ್.ಸಿ, ಎಂ.ಎ, ಎಂ.ಸಿ, ಎಂ.ಕಾಂ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಬಿ.ಇ, ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ಖರೀದಿಸಲು ಸಹಾಯಧನ ನೀಡಲಾಗುವುದು. ವಿಕಲಚೇತನ ಫಲಾನುಭವಿಗಳಿಗೆ ಶೌಚಾಲಯ ನಿರ್ಮಾಣಕ್ಕೆ ಸಹಾಯಧನ, ಶಸ್ತ್ರಚಿಕಿತ್ಸೆಗೆ ಪ್ರೋತ್ಸಾಹಧನ, ಸ್ವಚ್ಛ ಭಾರತ್ ಯೋಜನೆಯಡಿ ಶೌಚಾಲಯ ನಿರ್ಮಾಣ ಮಾಡಲು ಅರ್ಜಿ ಸಲ್ಲಿಸುವ ಫಲಾನುಭವಿಗಳು ವಿದ್ಯಾರ್ಹತೆ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಬಿ.ಪಿ.ಎಲ್ ಕಾರ್ಡ್, ಲಾಯರ್ ಪ್ರಮಾಣ ಪತ್ರ, ಹಾಗೂ ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್ ಪ್ರತಿಯನ್ನು ಅರ್ಜಿ ಜೊತೆಯಲ್ಲಿ ಲಗತ್ತಿಸಬೇಕು. ಅರ್ಜಿಗಳನ್ನು ಪಟ್ಟಣ ಪಂಚಾಯಿತಿ ಕಚೇರಿಯಲ್ಲಿ ಪಡೆದು ಸೆಪ್ಟೆಂಬರ್ 10 ರಿಂದ 30 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಯಳಂದೂರು ಪಟ್ಟಣ ಪಂಚಾಯಿತಿ ಸಂಪರ್ಕಿಸುವಂತೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟಜಾತಿ ಉಪಯೋಜನೆಯಡಿ ವಿವಿಧ ತರಬೇತಿಗೆ'ಅರ್ಜಿ ಆಹ್ವಾನ

**ಚಾಮರಾಜನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2024-25ನೇ ಸಾಲಿಗೆ ಪರಿಶಿಷ್ಟಜಾತಿ ಉಪಯೋಜನೆಯಡಿ ಜಿಮ್, ಫಿಟ್ನೆಸ್, ಬ್ಯೂಟೀಷಿಯನ್ ಹಾಗೂ ಚಾಟ್ಸ್ ತಯಾರಿಕೆಗೆ ತರಬೇತಿ ಶಿಬಿರಗಳನ್ನು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದೆ. 15 ದಿನಗಳ ಜಿಮ್/ಫಿಟ್ನೆಸ್ ತರಬೇತಿಯು ಸೆಪ್ಟೆಂಬರ್ 19 ರಿಂದ ಅಕ್ಟೋಬರ್ 3 ರವರೆಗೆ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ನಡೆಯುತ್ತದೆ. ಮಹಿಳೆಯರಿಗಾಗಿ ಮಾತ್ರ 13 ದಿನಗಳ ಬ್ಯೂಟೀಷಿಯನ್ ತರಬೇತಿಯನ್ನು ಸೆಪ್ಟೆಂಬರ್ 21 ರಿಂದ ಅಕ್ಟೋಬರ್ 3ರವರೆಗೆ ಹಾಗೂ 6 ದಿನಗಳ ಚಾಟ್ಸ್ ತಯಾರಿಕೆ ತರಬೇತಿಯು ಅಕ್ಟೋಬರ್ 4 ರಿಂದ 9 ರವರೆಗೆ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದೆ. ಈ ಎಲ್ಲಾ ತರಬೇತಿಗಳಿಗೆ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣ, ಅನುತ್ತೀರ್ಣರಾದ 18 ರಿಂದ 40ರ ವಯೋಮಿತಿಯಲ್ಲಿರಬೇಕು. ಅರ್ಹ ಅಭ್ಯರ್ಥಿಗಳು ನಗರದ ಜಿಲ್ಲಾಡಳಿತ ಭವನದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯಲ್ಲಿ ಅರ್ಜಿ ಪಡೆದು ಸೆಪ್ಟೆಂಬರ್ 15ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ. ಸಂ 08226-224932 ಅಥವಾ ಮೊ.ಸಂ 9916466659 ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರಾದ ಆರ್. ಶಿವಸ್ವಾಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರಿ ಗಾತ್ರದ ಹೆಬ್ಬಾವು ರಕ್ಷಿಸಿದ ಅಶೋಕ್

**ಚಾಮರಾಜನಗರ :** ಕಾಡಿನಲ್ಲಿರಬೇಕಾದ ಹೆಬ್ಬಾವೊಂದು ರಾಷ್ಟ್ರೀಯ ಹೆದ್ದಾರಿಯಲ್ಲಿ ಹರಿದಾಡುತ್ತಿರುವಾಗ ಉರಗ ರಕ್ಷಕರೊಬ್ಬರು ಅದನ್ನು ಹಿಡಿದು ಸುರಕ್ಷಿತವಾಗಿ ರಕ್ಷಿಸಿದ ಘಟನೆ ಚಾಮರಾಜನಗರ ಪಟ್ಟಣದ ಸೋಮವಾರ ಪೇಟೆ ಯಲ್ಲಿ ಭಾನುವಾರ ರಾತ್ರಿ ನಡೆದಿದೆ.



ಚಾಮರಾಜನಗರ ಪಟ್ಟಣದ ಸೋಮವಾರ ಪೇಟೆಯ ಹೆಚ್.ಪಿ ಪೆಟ್ರೋಲ್ ಬಂಕ್ ಎದುರು ರಾಷ್ಟ್ರೀಯ ಹೆದ್ದಾರಿಯ ರಸ್ತೆ ವಿಭಜಕದ ಬಳಿ 9 ಅಡಿ ಉದ್ದದ ಸುಮಾರು 20 ಕೆ.ಜಿ ತೂಕ ವಿರುವ ಭಾರಿ ಗಾತ್ರದ ಹೆಬ್ಬಾವು ಹರಿದು ಹೋಗುತ್ತಿರುವುದನ್ನುಗಮನಿಸಿದ ಸಾರ್ವಜನಿಕರು ಉರಗ ರಕ್ಷಕ ಸ್ನೇಕ್ ಅಶೋಕ್ ರವರಿಗೆ ಕರೆ ಮಾಡಿದರು. ಸಾರ್ವಜನಿಕರ ಕರೆಗೆ ಸ್ಪಂಧಿಸಿದ ಸ್ನೇಕ್ ಅಶೋಕ್ ಕೂಡಲೇ ಸ್ಥಳಕ್ಕೆ ಆಗಮಿಸಿ ಹೆಬ್ಬಾವನ್ನು ಹಿಡಿದು ರಕ್ಷಿಸಿ ಅದನ್ನು ಸುರಕ್ಷಿತವಾಗಿರುವ ಕಾಡಿನತ್ತ ಬಿಡಲು ತೆಗೆದುಕೊಂಡು ಹೋದರು.

# ಬೃಹತ್ ಮಾನವ ಸರಪಳಿ ಕಾರ್ಯಕ್ರಮಕ್ಕೆ ಸಾರ್ವಜನಿಕರು ಕೈ ಜೋಡಿಸಲು ಜಿಲ್ಲಾಧಿಕಾರಿ ಮನವಿ

**ಬೆಂಗಳೂರು ಗ್ರಾಮಾಂತರ:** ಸೆಪ್ಟೆಂಬರ್ 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಏಕಕಾಲಕ್ಕೆ ರಾಜ್ಯಾದ್ಯಂತ ಬೃಹತ್ ಮಾನವ ಸರಪಳಿ ನಿರ್ಮಿಸಲು ನಿರ್ಧರಿಸಲಾಗಿದ್ದು, ಜಿಲ್ಲೆಯಲ್ಲಿ 80 ಕಿ.ಮೀ ವ್ಯಾಪ್ತಿಯಷ್ಟು ಮಾನವ ಸರಪಳಿ ನಿರ್ಮಿಸಲಾಗುವುದು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಎನ್. ಶಿವಶಂಕರ ಅವರು ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ನಡೆದ 'ಸೆ. 15 ರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ'ಕ್ಕೆ ಸಂಬಂಧಿಸಿದಂತೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿಕೊಂಡು ಅವರು ಮಾತನಾಡಿದರು.

ಮಾನವ ಸರಪಳಿಯು ತುಮಕೂರು ಗಡಿಯ ನೆಲಮಂಗಲ ತಾಲ್ಲೂಕಿನ ಹಳೆ ನಿಜಗಲ ಗೇಟ್ ನಿಂದ ಡಾಬಸ್ ಪೇಟೆ ಮಾರ್ಗವಾಗಿ ದೊಡ್ಡಬಳ್ಳಾಪುರದ ಹೆಗ್ಗಡಿಹಳ್ಳಿ ಗಡಿ(ನಂದಿ ಕ್ರಾಸ್) ವರೆಗೆ ತಲುಪಿ ಚಿಕ್ಕಬಳ್ಳಾಪುರ ಜಿಲ್ಲೆಗೆ ಮಾನವ ಸರಪಳಿ ಸೇರುತ್ತದೆ ಹಾಗೂ ಕೋಲಾರ ಗಡಿ ಭಾಗದಿಂದ ಹೊಸಕೋಟೆ ತಾಲ್ಲೂಕು ವೆಂಕಟಾಪುರದಿಂದ ದೊಡ್ಡ ಅಮಾನಿಕೆರೆ ವರೆಗೂ ಮಾನವ ಸರಪಳಿ ವ್ಯಾಪ್ತಿ ಬರುತ್ತದೆ. ಮಾನವ ಸರಪಳಿಯು




ಅಂದಾಜು 80 ಕಿ.ಮೀ ವ್ಯಾಪ್ತಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಬರುತ್ತದೆ.

ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತದ ಮುಂದಿನ ಪೀಳಿಗೆಯು ಪ್ರಜಾಪ್ರಭುತ್ವದ ಮೌಲ್ಯಾನುಸಾರ ಶಕ್ತವಾಗಬೇಕಾದರೆ ಪ್ರಜಾಪ್ರಭುತ್ವದ ಮೌಲ್ಯಗಳ ಕುರಿತ ಅರಿವಿನ ಜಾಗೃತಿ ಅತ್ಯಗತ್ಯವಾಗಿದ್ದು, ಈ ಹಿನ್ನಲೆಯಲ್ಲಿ ಸರ್ಕಾರವು ಬೃಹತ್ ಮಾನವ ಸರಪಳಿಯನ್ನು ರಚಿಸುವ ಮೂಲಕ ವಿಭಿನ್ನವಾಗಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಿದೆ. ಹಾಗಾಗಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮಾನವ ಸರಪಳಿ ಗೆ ಕೈ ಜೋಡಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಎಂದು ಮನವಿ ಮಾಡಿದರು.

ಜಿಲ್ಲೆಯ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು, ಸಂಘಟನೆಗಳು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದರು.

ರಾಜ್ಯಾದ್ಯಂತ ಏಕಕಾಲಕ್ಕೆ ಬೃಹತ್ ಮಾನವ ಸರಪಳಿ ರಚನೆಯಾಗಲಿದ್ದು ಬೆಳಿಗ್ಗೆ 8:30 ಗಂಟೆಯಿಂದ 9:30 ಗಂಟೆಗೆ ಮಾನವ ಸರಪಳಿ ರಚನೆಯಾಗಲಿದೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಡಾ. ಕೆ.ಎನ್ ಅನುರಾಧ ಅವರು ಮಾತನಾಡಿ ಜಿಲ್ಲೆಯ ಬೃಹತ್ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಪ್ರತಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ವ್ಯಾಪಕ ಪ್ರಚಾರ ಕೈಗೊಂಡು ಸಾರ್ವಜನಿಕರು ಭಾಗವಹಿಸಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಮೂಲಕ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಮರೇಶ ಹೆಚ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಟಿ.ಕೆ ರಮೇಶ್, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಪ್ರೇಮಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಅವಳಿ ಕರುಗಳಿಗೆ ಜನ್ಮ ನೀಡಿದ ಹಸು

**ಚಾಮರಾಜನಗರ :** ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಾರ್ಟಳ್ಳಿ ಸಮೀಪದ ತಗರಕೋಟ್ಯೆಯ ಗ್ರಾಮದಲ್ಲಿ ಹಸುವೊಂದು ಅವಳಿ ಕರುಗಳಿಗೆ ಜನ್ಮ ನೀಡಿದೆ.

ರೈತ ಮಹೇಶ್ ಅವರು ಸಾಕಿದ ಹಸು ಸೋಮವಾರ ಬೆಳ್ಳಿಗ್ಗೆ ಎರಡು ಹೆಣ್ಣು ಕರುವಿಗೆ ಜನ್ಮ ನೀಡಿದ್ದು, ಗ್ರಾಮಸ್ಥರು ಹಸು ಮತ್ತು ಕರುಗಳನ್ನು ನೋಡಿ ಸಂತಸ ವ್ಯಕ್ತಪಡಿಸುತ್ತಿದ್ದಾರೆ.

ಹಸುಗಳು ಒಂದಕ್ಕಿಂತ ಹೆಚ್ಚು ಕರುಗಳಿಗೆ ಜನ್ಮ ನೀಡುವುದು ತುಂಬಾ ಅಪರೂಪ ಎಂದು ಸ್ಥಳೀಯ ವೈದ್ಯರು ತಿಳಿಸಿದ್ದಾರೆ. ಹಸು ಹಾಗೂ ಕರುಗಳೆರಡೂ ಆರೋಗ್ಯವಾಗಿವೆ ಎಂದು ರೈತ ಮಹೇಶ್ ಸಂತಸವನ್ನು ವ್ಯಕ್ತಪಡಿಸಿದ್ದಾರೆ.



## ಸಂಜೆ ಟಿಪ್ಸ್




### ಉಷಾ ಇಂಟರ್‌ನ್ಯಾಷನಲ್‌ನಿಂದ ಗಣೇಶ ಚತುರ್ಥಿ ಉಡುಗೊರೆ ಆಯ್ಕೆಗಳು

ಗಣೇಶ ಚತುರ್ಥಿ ಸಮಯದಲ್ಲಿ ಹಬ್ಬದ ಉತ್ಸಾಹಕ್ಕೆ ಇನ್ನಷ್ಟು ಇಂಬು ನೀಡಲು ಉಷಾ ಇಂಟರ್ನ್ಯಾಷನಲ್ ನಿಮಗೆ ನಿಮ್ಮ ಇಷ್ಟದ ಅಡುಗೆ ಸಾಧನಗಳನ್ನು ತರುತ್ತಿದೆ. ಬಳಸಲು ಸುಲಭವಾದ ಅಪ್ಲೈಯನ್ಸ್‌ಗಳು ನಿಮ್ಮ ಅಡುಗೆ ಅನುಭವವನ್ನು ಸುಧಾರಿಸುತ್ತದೆ. ಅಷ್ಟೇ ಅಲ್ಲ, ಅಮೂಲ್ಯವಾದ ಸಮಯವನ್ನು ಉಳಿಸಲು ಕೂಡಾ ಇದು ಸಹಾಯ ಮಾಡುತ್ತದೆ ಮತ್ತು ಆ ಸಮಯವನ್ನು ನಿಮ್ಮ ಖುಷಿಯ ಸಮಯವನ್ನು ಕಳೆಯುವುದಕ್ಕೆ ನೀವು ಬಳಸಬಹುದು. ನಿಮ್ಮ ಕುಟುಂಬಕ್ಕೆ ನಿಮ್ಮ ಕೈ ರುಚಿಯನ್ನು ಇನ್ನಷ್ಟು ಆಹ್ಲಾದಕರವಾಗಿಸಬಹುದಾದ ನಾಲ್ಕು ಅಪ್ಲೈಯನ್ಸ್‌ಗಳು ಇಲ್ಲಿವೆ. ನೀವು ಸಾಂಪ್ರದಾಯಿಕ ಸಿಹಿ ತಿನಿಸು ಅಥವಾ ಖಾರದ ತಿನಿಸುಗಳನ್ನು ಮಾಡಲು ಬಯಸಲಿ ಅಥವಾ ಹೊಸ ಕಾಲದ ಅಡುಗೆಯ ಪ್ರಯೋಗವನ್ನು ಮಾಡುವುದೇ ಆಗಲಿ, ಈ ಅಪ್ಲೈಯನ್ಸ್‌ಗಳು ಸ್ಟೈಲ್, ದಕ್ಷತೆ ಮತ್ತು ಅನ್ವೇಷಣೆಯ ಮಿಶ್ರಣವಾಗಿರಲಿದೆ ಮತ್ತು ನಿಮ್ಮ ಹಬ್ಬದ ಸಂಭ್ರಮಕ್ಕೆ ಹೊಸತನ ನೀಡಲಿದೆ. ಅತಿ ಕಡಿಮೆ ಪ್ರಯತ್ನದಲ್ಲಿ ಅತ್ಯಂತ ಪರಿಣಿತಿಯನ್ನು ಅಡುಗೆಯಲ್ಲಿ ಸಾಧಿಸಲು, ಥಂಡರ್‌ಬೋಲ್ಟ್ ಪ್ರೋ 1000 ಮಿಕ್ಸರ್ ಗ್ರೈಂಡರ್ ನಿಮಗೆ ಸೂಕ್ತವಾಗಿದೆ. ಇದನ್ನು 100% ಕಾಪರ್ ಮೋಟರ್ ಬಳಸಿ ನಿರ್ಮಿಸಲಾಗಿದ್ದು, ಅತ್ಯುತ್ತಮ ಬಾಳಿಕೆ ಮತ್ತು ಕನಿಷ್ಠ ಹೀಟಿಂಗ್ ಅನ್ನು ಒದಗಿಸುತ್ತದೆ. ಇದರಲ್ಲಿ ಬಾಲ್ ಬೇರಿಂಗ್‌ಗಳನ್ನು ಬಳಸಲಾಗಿದ್ದು, ಬಾಳಿಕೆ ಹೆಚ್ಚುತ್ತದೆ. ಹೀಗಾಗಿ, ಹಲವು ವರ್ಷಗಳವರೆಗೆ ಅಡುಗೆ ಮನೆಗೆ ವಿಶ್ವಾಸಾರ್ಹ ಸಂಗಾತಿಯಾಗಿರುತ್ತದೆ. ಥಂಡರ್‌ಬೋಲ್ಟ್ ಪ್ರೋದಲ್ಲಿ ಫುಡ್ ಗ್ರೇಡ್ ಸ್ಟೇನ್ಲೆಸ್ ಸ್ಟೀಲ್ ಜಾರ್‌ಗಳು ಮತ್ತು ಬ್ಲೇಡ್‌ಗಳು ಇದ್ದು, ಸುಸ್ಥಿರ ಫಲಿತಾಂಶಗಳಿಗೆ ವೇಗವಾಗಿ ಮತ್ತು ಅತ್ಯಂತ ಸಣ್ಣದಾಗಿ ಕತ್ತರಿಸಲು ಸಹಾಯ ಮಾಡುತ್ತದೆ. ಹೀಗಾಗಿ ಅತ್ಯುತ್ತಮ ಗ್ರೈಂಡಿಂಗ್, ಬ್ಲೆಂಡಿಂಗ್ ಹಾಗೂ ಮಿಶ್ರಣವನ್ನು ನೀವು ಬಯಸಿದಂತೆ ಒದಗಿಸುತ್ತದೆ. ಇದರಲ್ಲಿ ಬ್ರೇಕ್ ರೆಸಿಸ್ಟೆಂಟ್ ಪಾಲಿಕಾರ್ಬೋನೇಟ್ ಮುಚ್ಚಳ ಇದ್ದು, ಕ್ಲಿಪ್ ಲಾಕ್ ವ್ಯವಸ್ಥೆಯಿದೆ. ಮೂರು ಮತ್ತು ನಾಲ್ಕು ಜಾರ್ ಆಯ್ಕೆಯಲ್ಲಿ ಲಭ್ಯವಿರುವ ಉಷಾ ಥಂಡರ್‌ಬೋಲ್ಟ್ ಪ್ರೋ 1000 ಮಿಕ್ಸರ್ ಗ್ರೈಂಡರ್ ಬೆಲೆಯು ರೂ. 8090/- (ಮೂರು ಜಾರ್‌ಗಳಿಗೆ) ಮತ್ತು 9790/- (ನಾಲ್ಕು ಜಾರ್‌ಗಳಿಗೆ) ಆಗಿದೆ.


# ಈರುಳ್ಳಿ ಪಕೋಡ

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

1 ಕಪ್ ಕಡಲೇ ಹಿಟ್ಟು, 2 ಟೇಬಲ್ ಸ್ಪೂನ್ ನಷ್ಟು ಅಕ್ಕಿ ಹಿಟ್ಟು, 4ದೊಡ್ಡ ಗಾತ್ರದ ಈರುಳ್ಳಿ ಉದ್ದಕ್ಕೆ ಸೀಳಿಕೊಳ್ಳಿ. ಇಂಗು ಚಿಟಿಕೆ, ಕರಿಬೇವು-10 ಎಸಳು, ಜೀರಿಗೆ-1/4 ಟೀ ಸ್ಪೂನ್, ಖಾರದ ಪುಡಿ-1 ಚಮಚ, ಉಪ್ಪು-ರುಚಿಗೆ ತಕ್ಕಷ್ಟು.

### ಮಾಡುವ ವಿಧಾನ

ಒಂದು ಬೌಲ್‌ಗೆ ಈರುಳ್ಳಿ ಹಾಕಿ ಅದಕ್ಕೆ ಸ್ವಲ್ಪ ಉಪ್ಪು ಹಾಕಿ ಕೈಯಾಡಿಸಿ. ಆಮೇಲೆ 1 ಟೀ ಸ್ಪೂನ್ ಬಿಸಿಯಾದ ಎಣ್ಣೆ ಹಾಕಿ ಮತ್ತೆ ಮಿಶ್ರಣ ಮಾಡಿ. ಇದಕ್ಕೆ ಜೀರಿಗೆ, ಖಾರದಪುಡಿ, ಅಕ್ಕಿ ಹಿಟ್ಟು, ಕರಿಬೇವು, ಚಿಟಿಕೆ ಇಂಗು ಹಾಕಿ ಚೆನ್ನಾಗಿ ಮಿಶ್ರಣ ಮಾಡಿಕೊಳ್ಳಿ. ನಂತರ ಸ್ವಲ್ಪ ಸ್ವಲ್ಪ ಕಡಲೇಹಿಟ್ಟು ಸೇರಿಸಿ ಮಿಶ್ರಣ ಮಾಡಿಕೊಳ್ಳಿ. ನೀರು ಸೇರಿಸಬೇಡಿ. ನಂತರ ಕಾದ ಎಣ್ಣೆಗೆ ಸ್ವಲ್ಪ ಸ್ವಲ್ಪವೇ ಹಿಟ್ಟು ಹಾಕಿ ಕರಿಯಿರಿ. ರುಚಿಯಾದ ಈರುಳ್ಳಿ ಪಕೋಡ ಸವಿಯಲು ಸಿದ್ಧ.

# ಒಟಿಟಿಗೆ ಬರಲಿದೆ ವಿಕ್ರಮ್ ಅಭಿನಯದ ತಂಗಲಾನ್ ಚಿತ್ರ



ತಂಗಲಾನ್ ಚಿತ್ರದ ಒಟಿಟಿ ಸ್ಟ್ರೀಮಿಂಗ್ ದಿನಾಂಕ ಅಂತಿಮವಾಗಿದೆ. ತಮಿಳಿನ ಸ್ಟಾರ್ ನಟ ಚಿಯಾನ್ ವಿಕ್ರಮ್ ಅಭಿನಯದ ತಂಗಲಾನ್ ಚಿತ್ರಮಂದಿರಗಳಲ್ಲಿ ಜನರ ಮೆಚ್ಚುಗೆ ಗಳಿಸಿದೆ. ಸಾಹಸಮಯ ಚಿತ್ರ ಆಗಸ್ಟ್ 15ರಂದು ಬೆಳ್ಳಿತೆರೆಗೆ ಬಂದಿತ್ತು. ಈ ಚಿತ್ರದ ಮೂಲಕ ಮತ್ತೊಮ್ಮೆ ವಿಕ್ರಮ್ ತಮ್ಮ ನಟನೆಯ ವಿವಿಧ ರೂಪಗಳನ್ನು ತೋರಿಸಿದ್ದಾರೆ. ವಿಭಿನ್ನ ಗೆಟಪ್‌ಗಳಲ್ಲಿ ಅತ್ಯುತ್ತಮ ಅಭಿನಯದ ಮೂಲಕ ಮಿಂಚಿದ್ದಾರೆ. ಈ ಪಿರಿಯಾಡಿಕಲ್ ಆಕ್ಷನ್ ಕಥೆಯ ಸಿನಿಮಾವನ್ನು ಪಾ ರಂಜಿತ್ ನಿರ್ದೇಶಿಸಿದ್ದಾರೆ. ಕಮರ್ಷಿಯಲ್ ಆಗಿ ಯಶಸ್ಸು ಕಾಂಡಿರುವ ಚಿತ್ರವು ಕೊನೆಗೂ ಒಟಿಟಿ ವೇದಿಕೆಗೆ ಬರಲು ಸಜ್ಜಾಗುತ್ತಿದೆ ಪ್ರಮುಖ ಒಟಿಟಿ ಪ್ಲಾಟ್ಫಾರ್ಮ್ ಆಗಿರುವ ನೆಟ್ಫ್ಲಿಕ್ಸ್ ತಂಗಲಾನ್ ಚಿತ್ರದ ಡಿಜಿಟಲ್ ಸ್ಟ್ರೀಮಿಂಗ್ ಹಕ್ಕುಗಳನ್ನು ಪಡೆದುಕೊಂಡಿದೆ. ಚಿತ್ರ ಬಿಡುಗಡೆಗೂ ಮುನ್ನವೇ ಈ ಒಪ್ಪಂದ ಮಾಡಿಕೊಳ್ಳಲಾಗಿತ್ತು. ಹೀಗಾಗಿ ಚಿತ್ರವು ಸೆಪ್ಟೆಂಬರ್ 20ರಂದು ನೆಟ್ಫ್ಲಿಕ್ಸ್ ಒಟಿಟಿಯಲ್ಲಿ ಸ್ಟ್ರೀಮ್ ಆಗಲಿದೆ ಎಂದು ವರದಿಯಾಗಿದೆ. ಆದರೆ, ನೆಟ್ಫ್ಲಿಕ್ಸ್‌ನಿಂದ ಈ ಕುರಿತು ಇನ್ನೂ ಯಾವುದೇ ಅಧಿಕೃತ ಪ್ರಕಟಣೆ ಬಂದಿಲ್ಲ. ತಂಗಲಾನ್ ಚಿತ್ರವು ಸೆಪ್ಟೆಂಬರ್ 20ರಂದು ನೆಟ್ಫ್ಲಿಕ್ಸ್ ಒಟಿಟಿಯಲ್ಲಿ ಬರುತ್ತಿದೆ. ತಮಿಳು ಮಾತ್ರವಲ್ಲದೆ. ಕನ್ನಡ, ತೆಲುಗು ಮತ್ತು ಮಲಯಾಳಂ ಭಾಷೆಗಳಲ್ಲಿಯೂ ಸ್ಟ್ರೀಮ್ ಆಗಲಿದೆ ಎಂಬುದು ಸದ್ಯದ ಸುದ್ದಿ. ಆದರೆ, ವಾರದ ನಂತರ ಹಿಂದಿ ಆವೃತ್ತಿ ಬರಲಿದೆ ಎಂಬ ಮಾತು ಕೇಳಿಬರುತ್ತಿದೆ. ತಂಗಲಾನ್ ಹಿಂದಿ ಆವೃತ್ತಿಯು ಸೆಪ್ಟೆಂಬರ್ 27ರಂದು ಬಿಡುಗಡೆಯಾಗುವ ನಿರೀಕ್ಷೆಯಿದೆ. ತಂಗಲಾನ್ ಚಿತ್ರವನ್ನು 1850ರ ದಶಕದ ಹಿನ್ನೆಲೆಯ ಬ್ರಿಟಿಷ್ ಆಳ್ವಿಕೆಯ ಕಥೆಯೊಂದಿಗೆ ನಿರ್ಮಿಸಲಾಗಿದೆ. ನಾಯಕಿಯರಾಗಿ ಪಾರ್ವತಿ ತಿರುವೋತ್ತು ಮತ್ತು ಮಾಳವಿಕಾ ಮೋಹನನ್ ನಟಿಸಿದ್ದಾರೆ. ಪಾ ರಂಜಿತ್ ನಿರ್ದೇಶನದ ಈ ಚಿತ್ರದಲ್ಲಿ ವಿಕ್ರಮ್ ಐದು ಗೆಟಪ್‌ಗಳಲ್ಲಿ ಕಾಣಿಸಿಕೊಂಡಿದ್ದಾರೆ. ಕೆಜಿಎಫ್ ಇರುವ ಕರ್ನಾಟಕದ ಕಥೆ ಹೊಂದಿದ್ದರೂ ಕನ್ನಡದಲ್ಲಿ ಈ ಸಿನಿಮಾ ರಿಲೀಸ್ ಆಗಿಲ್ಲ. ಜಿವಿ ಪ್ರಕಾಶ್ ಕುಮಾರ್ ಈ ಚಿತ್ರಕ್ಕೆ ಸಂಗೀತ ನೀಡಿದ್ದಾರೆ. ಎ ಕಿಶೋರ್ ಕುಮಾರ್ ಅವರ ಸಿನಿಮಾಟೋಗ್ರಫಿ ಚಿತ್ರದ ಪ್ರಮುಖ ಅಂಶ.

# ಈ ಸಮಸ್ಯೆ ಇರುವವರು ನೆಲ್ಲಿಕಾಯಿ ತಿನ್ನಬೇಡಿ

## ಹೆಲ್ತ್ ಟಿಪ್ಸ್



ವಿಟಮಿನ್ 'ಸಿ'ಯ ಆಗರವಾಗಿರುವ ಮತ್ತು ಕಬ್ಬಿಣ, ರಂಜಕ, ಕ್ರೋಮಿಯಂ ನಂತಹ ಖನಿಜಗಳನ್ನು ಒಳಗೊಂಡಿರುವ ನೆಲ್ಲಿಕಾಯಿ ತಿನ್ನುವುದರಿಂದ ಹೈ ಬ್ಲಡ್ ಶುಗರ್ ಪ್ರಮಾಣವನ್ನು ಕಡಿಮೆ ಮಾಡುತ್ತದೆ. ಒಮ್ಮೆ ನಿಮ್ಮ ಬ್ಲಡ್ ಶುಗರ್ ಈಗಾಗಲೇ ಕಡಿಮೆ ಇದ್ದಲ್ಲಿ ಮತ್ತು ನೀವು ಎಂಟಿ ಡಯಾಬಿಟಿಕ್ ಮಾತ್ರೆಗಳನ್ನು ಸೇವಿಸುತ್ತಿದ್ದಲ್ಲಿ ನೆಲ್ಲಿಕಾಯಿಯನ್ನು ತಿನ್ನಲು ಹೋಗಬೇಡಿ.

ಒಮ್ಮೆ ನೀವು ಯಾವುದಾದರೂ ಸರ್ಜರಿಗೆ ಒಳಗಾಗುತ್ತಿದ್ದಲ್ಲಿ ಸರ್ಜರಿಗೆ 2 ವಾರ ಮೊದಲು ನೆಲ್ಲಿಕಾಯಿ ತಿನ್ನಬೇಡಿ. ಏಕೆಂದರೆ ನೆಲ್ಲಿಕಾಯಿ ರಕ್ತವನ್ನು ತೆಳುವಾಗಿಸುತ್ತದೆ. ಇದರಿಂದ ಸರ್ಜರಿಯ ಸಮಯದಲ್ಲಿ ತೀವ್ರ ರಕ್ತಸ್ರಾವವಾಗಬಹುದು. ಇದಲ್ಲದೇ ದೀರ್ಘಕಾಲದ ರಕ್ತಸ್ರಾವದಿಂದ ಟಿಶ್ಯೂ ಹೈಪೋಕ್ಸಿಮಿಯಾ, ಸಿವಿಆರ್ ಎಸಿಡೋಸಿಸ್ ಅಥವಾ ಮಲ್ಟಿ ಆರ್ಗನ್ ಡಿಸ್ ಫಂಕ್ಷನ್ ಉಂಟಾಗಬಹುದು. ವಿಟಮಿನ್ 'ಸಿ'ಯ ಆಗರವಾಗಿರುವ ನೆಲ್ಲಿಕಾಯಿ ಎದೆಯುರಿಯ ಸಮಸ್ಯೆಯನ್ನು ನಿವಾರಿಸುತ್ತದೆ. ಹೈಪರ್ ಎಸಿಡಿಟಿ ಸಮಸ್ಯೆ ಇರುವವರು ನೆಲ್ಲಿಕಾಯಿ ತಿಂದರೆ ಹೊಟ್ಟೆಯ ಸಮಸ್ಯೆ ಉಂಟಾಗುತ್ತದೆ ಮತ್ತು ಇದರಿಂದ ನಿಮ್ಮ ಆರೋಗ್ಯ ಹದಗೆಡಬಹುದು. ನಿಮಗೆ ಡ್ರೈ ಸ್ಕಿನ್ ಮತ್ತು ಡ್ರೈ ಸ್ಕಲ್ಪ್ ಸಮಸ್ಯೆ ಇದ್ದರೆ ನೆಲ್ಲಿಕಾಯಿ ತಿನ್ನಬೇಡಿ. ನೆಲ್ಲಿಕಾಯಿ ತಿನ್ನುವುದರಿಂದ ತಲೆಹೊಟ್ಟು, ತುರಿಕೆ ಮತ್ತು ಕೂದಲು ಉದುರುವಿಕೆ ಉಂಟಾಗುತ್ತದೆ. ಇದರಿಂದ ಡಿಹೈಡ್ರೇಶನ್ ಸಮಸ್ಯೆ ಕೂಡ ಆಗಬಹುದು. ನೆಲ್ಲಿಕಾಯಿಯಲ್ಲಿ ಎಂಟಿಪ್ಲೇಟ್ಲೆಟ್ ಗುಣವಿದೆ. ಇದು ನಿಮ್ಮ ದೇಹದಲ್ಲಿ ರಕ್ತ ಹೆಪ್ಪುಗಟ್ಟುವಿಕೆಯನ್ನು ತಡೆಯುತ್ತದೆ. ಇದು ನಿಮ್ಮನ್ನು ಹಾರ್ಟ್ ಅಟ್ಯಾಕ್, ಸ್ಟ್ರೋಕ್ ತೊಂದರೆಯಿಂದ ಕಾಪಾಡುತ್ತದೆ. ಒಮ್ಮೆ ನಿಮಗೆ ರಕ್ತದ ಸಮಸ್ಯೆ ಇದ್ದಲ್ಲಿ ನೆಲ್ಲಿಕಾಯಿಯನ್ನು ತಿನ್ನಬೇಡಿ.

ನೆಲ್ಲಿಕಾಯಿ ತಿನ್ನುವುದರಿಂದ ರಕ್ತ ತೆಳುವಾಗುತ್ತದೆ, ಬ್ಲಡ್ ಕ್ಲಾಟ್ ಆಗುವುದಿಲ್ಲ. ಹಾಗಾಗಿ ರಕ್ತಸ್ರಾವದ ತೊಂದರೆ ಇರುವವರು ನೆಲ್ಲಿಕಾಯಿಯನ್ನು ತಿನ್ನುವ ಮೊದಲು ಒಮ್ಮೆ ವೈದ್ಯರ ಸಲಹೆ ಪಡೆಯುವುದು ಒಳಿತು.

# ಒಂದು ಅವಕಾಶ ಕಳೆದು ಹೋದರೆ, ನೂರಾರು ಅವಕಾಶ ಬರುತ್ತವೆ



## ಕಾಸ್ಟಿಂಗ್ ಕೌಚ್ ಬಗ್ಗೆ ಸನ್ನಿ ಲಿಯೋನ್ ಪ್ರತಿಕ್ರಿಯೆ

ಮಾಲಿವುಡ್‌ನಲ್ಲಿ ಹೇಮಾ ಸಮಿತಿ ವರದಿ ದೊಡ್ಡ ಸಂಚಲನವನ್ನೇ ಮೂಡಿಸಿದೆ. ಚಿತ್ರರಂಗದಲ್ಲಿ ತಮಗಾದ ಕೆಟ್ಟ ಅನುಭವಗಳ ಬಗ್ಗೆ ನಟಿಯರು ಮಾತನಾಡುತ್ತಿದ್ದಾರೆ. ಇದರ ನಡುವೆ ಬಾಲಿವುಡ್ ಬೆಡಗಿ ಸನ್ನಿ ಲಿಯೋನ್ ಕಾಸ್ಟಿಂಗ್ ಕೌಚ್ ಕುರಿತು ಪ್ರತಿಕ್ರಿಯೆ ನೀಡಿದ್ದಾರೆ. ಒಂದು ಅವಕಾಶ ಕಳೆದು ಹೋದರೆ, ನೂರಾರು ಅವಕಾಶಗಳು ಬರುತ್ತವೆ ಎಂದು ನಟಿ ಮಾತನಾಡಿದ್ದಾರೆ.

ಇತ್ತೀಚೆಗೆ ಸಿನಿಮಾ ಪ್ರಚಾರವೊಂದರಲ್ಲಿ ಭಾಗಿಯಾಗಿದ್ದ ವೇಳೆ, ಹೇಮಾ ಸಮಿತಿಯ ವರದಿಗೆ ಸನ್ನಿ ಲಿಯೋನ್ ರಿಯಾಕ್ಟ್ ಮಾಡಿದರು. ಸಿನಿಮಾದಲ್ಲಿ ನಟಿಸುವಾಗ ನನಗೆ ಯಾವುದೇ ಕೆಟ್ಟ ಅನುಭವ ಆಗಿಲ್ಲ. ಯಾರಾದರೂ ಅನುಚಿತವಾಗಿ ವರ್ತಿಸಿದರೆ ನೋ ಎಂದು ಹೇಳಿ ಹೊರಟು ಹೋಗುತ್ತೇನೆ ಎಂದಿದ್ದಾರೆ.

ವೃತ್ತಿರಂಗದಲ್ಲಿ ಹಂಚಿಕೊಳ್ಳಲು ನನಗೆ ಯಾವುದೇ ಕಹಿ ಅನುಭವಗಳಾಗಿಲ್ಲ. ನಾನು ವ್ಯಕ್ತಿತ್ವ ಮತ್ತು ವೃತ್ತಿಪರತೆಯನ್ನು ನಂಬುತ್ತೇನೆ. ನಾನು ಅರ್ಹಳು ಎಂದು ಅನಿಸಿದರೆ ಹೆಚ್ಚಿನ ಸಂಭಾವನೆಗೆ ಡಿಮ್ಯಾಂಡ್ ಮಾಡುತ್ತೇನೆ. ಅವಕಾಶಕ್ಕಾಗಿ ಸರಿಯಾದ ನಿರ್ಧಾರ ತೆಗೆದುಕೊಳ್ಳಬೇಕು. ನನ್ನ ಮುಂದೆ ಅನೇಕ ಬಾಗಿಲುಗಳು ಮುಚ್ಚಲ್ಪಟ್ಟಿವೆ. ಆದರೆ ಅದರಿಂದ ನನಗೆ ತೊಂದರೆಯಾಗಿಲ್ಲ. ಒಂದು ಅವಕಾಶ ಕಳೆದುಹೋದರೆ, ನಮ್ಮ ದಾರಿಯಲ್ಲಿ ನೂರು ಅವಕಾಶಗಳು ಬರುತ್ತವೆ ಎಂದು ನಟಿ ಕಾಸ್ಟಿಂಗ್ ಕೌಚ್ ಬಗ್ಗೆ ಮಾತನಾಡಿದ್ದಾರೆ.

# ಚರ್ಮದ ಕಾಂತಿ ಹೆಚ್ಚಿಸಲು 'ಕಾಫಿ' ಬಳಸಿ

## ಬ್ಯೂಟಿ ಟಿಪ್ಸ್



ಚಳಿಗಾಲದಲ್ಲಿ ತಾಜಾ ಹಾಗೂ ದೇಹವನ್ನು ಬೆಚ್ಚಗಿಡಲು ಕಾಫಿ ಬೆಸ್ಟ್. ಕಾಫಿ ಆರೋಗ್ಯಕ್ಕೆ ಒಳ್ಳೆಯದೆಂದು ಅನೇಕ ಸಂಶೋಧನೆಯಲ್ಲಿ ತಿಳಿದುಬಂದಿದೆ. ಕಾಫಿ ಕೇವಲ ಆರೋಗ್ಯಕ್ಕೆ ಮಾತ್ರವಲ್ಲ ಸೌಂದರ್ಯ ವರ್ದಕವೂ ಹೌದು. ಕಾಫಿ ಚರ್ಮದ ಕಾಂತಿಯನ್ನು ಹೆಚ್ಚಿಸುತ್ತದೆ. ಕಾಫಿಯನ್ನು ಜೇನು ತುಪ್ಪದ ಜೊತೆ ಬೆರೆಸಿ ಸ್ಕ್ರಬ್ ರೂಪದಲ್ಲಿ ಬಳಸಬಹುದು. ಇದು ಡೆಡ್ ಸ್ಕಿನ್ ಸಮಸ್ಯೆಯನ್ನು ದೂರ ಮಾಡುತ್ತದೆ. ಜೊತೆಗೆ ಚರ್ಮ ಶುಷ್ಕವಾಗುವುದನ್ನು ತಪ್ಪಿಸಿ ತ್ವಚೆ ತೇವಾಂಶದಿಂದ ಕೂಡಿರಲು ನೆರವಾಗುತ್ತದೆ. ಶುಷ್ಕ ಹಾಗೂ ಕೂದಲು ಉದುರುವ ಸಮಸ್ಯೆಯಿರುವವರು ಕಾಫಿಯನ್ನು ಬಳಸಬಹುದು. ಕಾಫಿಯನ್ನು ಕೂದಲಿಗೆ ಹಚ್ಚುವುದ್ರಿಂದ ಕೂದಲು ಉದುರುವ ಸಮಸ್ಯೆ ಕಡಿಮೆಯಾಗುತ್ತದೆ. ಮೆಹಂದಿ ಜೊತೆ ಕಾಫಿ ಮಿಕ್ಸ್ ಮಾಡಿ ಕೂದಲಿಗೆ ಹಚ್ಚಿದ್ರೆ ಕೂದಲು ಕಪ್ಪಾಗಿ ಉದುರುವುದು ನಿಲ್ಲುತ್ತದೆ. ಕಾಫಿ ಪುಡಿಗೆ ಟಿ-ಟ್ರೀ ಆಯಿಲ್ ಮಿಕ್ಸ್ ಮಾಡಿ ಮಸಾಜ್ ಮಾಡಬೇಕು. ಇದು ಮುಖದ ಹೊಳಪನ್ನು ಹೆಚ್ಚಿಸುವ ಜೊತೆಗೆ ಮುಖದ ಚರ್ಮ ಸುಕ್ಕುಗಟ್ಟದಂತೆ ನೋಡಿಕೊಳ್ಳುತ್ತದೆ. ಕಾಫಿಯಲ್ಲಿ ಆಂಟಿ ಆಕ್ಸಿಡೆಂಟ್ ಗುಣವಿರುತ್ತದೆ. ಕಾಫಿ ಕಣ್ಣಿನ ಉರಿಯೂತವನ್ನು ಕಡಿಮೆ ಮಾಡುತ್ತದೆ. ಕಣ್ಣಿನ ಸುತ್ತಮುತ್ತ ಕಾಣಿಸಿಕೊಳ್ಳುವ ಕಪ್ಪು ಕಲೆಯನ್ನು ಕಾಫಿ ಕಡಿಮೆ ಮಾಡುತ್ತದೆ.

# ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ನಿಂದ ಭಾರತದ 12 ರಾಜ್ಯಗಳಲ್ಲಿ 1100 ಆರೋಗ್ಯ ಶಿಬಿರಗಳ ಆಯೋಜನೆ




ಭಾರತದ ಅತ್ಯಂತ ದೊಡ್ಡ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ಹನ್ನೆರಡು ರಾಜ್ಯಗಳಲ್ಲಿ ಆರೋಗ್ಯ ಶಿಬಿರಗಳನ್ನು ಆಯೋಜಿಸುವ ಸಮಗ್ರ ಉಪಕ್ರಮ ಪ್ರಾರಂಭಿಸಿದೆ. ಈ ಉಪಕ್ರಮವನ್ನು ಇಂದು ರಾಜಸ್ಥಾನದ ಸಿರೋಹಿ ಜಿಲ್ಲೆಯಲ್ಲಿ ಉದ್ಘಾಟನಾ ಶಿಬಿರದ ಮೂಲಕ ಚಾಲನೆ ನೀಡಲಾಯಿತು. ಈ ಉಪಕ್ರಮದ ಮೂಲಕ ಬ್ಯಾಂಕ್ ನ ಸಿ.ಎಸ್.ಆರ್ ಅಂಗ ಎಯು ಫೌಂಡೇಷನ್ 1,100 ಶಿಬಿರಗಳನ್ನು ಆಯೋಜಿಸುವ ಗುರಿ ಹೊಂದಿದ್ದು ಪ್ರಾಥಮಿಕ ಆರೋಗ್ಯಸೇವಾ ಲಭ್ಯತೆ ಇಲ್ಲದ 1 ಲಕ್ಷ ವ್ಯಕ್ತಿಗಳಿಗೆ ಅನುಕೂಲ ಒದಗಿಸಲಿದೆ.

ಈ ಶಿಬಿರಗಳ ಪ್ರಾಥಮಿಕ ಗುರಿ ಗ್ರಾಮೀಣ ಸಮುದಾಯಗಳಿಗೆ ರಕ್ತಹೀನತೆ ಕಡಿಮೆ ಮಾಡುವ ಮತ್ತು ರೋಗಗಳ ಕುರಿತು ಅರಿವನ್ನು ಮೂಡಿಸುವ ಉದ್ದೇಶದೊಂದಿಗೆ ಮೂಲಭೂತ ಆರೋಗ್ಯ ಪರೀಕ್ಷೆಗಳು ಮತ್ತು ರೋಗ ಪತ್ತೆ ಮಾಡುವುದು. ಈ ಉಪಕ್ರಮವನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು ಮೊದಲ ಹಂತದಲ್ಲಿ ರಾಜಸ್ಥಾನ ಮತ್ತು ಗುಜರಾತ್ ರಾಜ್ಯಗಳು ಮತ್ತು ನಂತರದ ಹಂತಗಳಲ್ಲಿ ಆಂಧ್ರ ಪ್ರದೇಶ, ತಮಿಳುನಾಡು, ತೆಲಂಗಾಣ, ಕರ್ನಾಟಕ, ಬಿಹಾರ, ಉತ್ತರ ಪ್ರದೇಶ, ಛತ್ತೀಸಗಢ, ಮಹಾರಾಷ್ಟ್ರ, ಒಡಿಶಾ ಮತ್ತು ಮಧ್ಯಪ್ರದೇಶಗಳಿಗೆ ವಿಸ್ತರಿಸಲಿದೆ. ಕೆಲ ತಾಣಗಳಲ್ಲಿ ಈ ಶಿಬಿರವನ್ನು ಎರಡು ಬಾರಿ ಆಯೋಜಿಸಲಾಗುತ್ತಿದ್ದು ಅದೇ ಪ್ರದೇಶದ ರೋಗಿಗಳ ಆರೋಗ್ಯ ಗಮನಿಸಲಾಗುತ್ತದೆ.

ಈ ಶಿಬಿರಗಳು ಗ್ರಾಮೀಣ ಭಾರತದ ಜಿಲ್ಲೆಗಳನ್ನು ಗುರಿಯಾಗಿಸಿಕೊಂಡಿದ್ದು ದುರ್ಬಲ ಸಮುದಾಯಗಳಿಗೆ ಆರೋಗ್ಯಸೇವಾ ಅನುಕೂಲಗಳನ್ನು ತರಲಿದೆ. ವೈದ್ಯಕೀಯ ತಂಡಗಳು ಪ್ರಾಥಮಿಕ ಆರೋಗ್ಯ ಪರೀಕ್ಷೆಗಳನ್ನು ನಡೆಸಲಿದ್ದು ಅದರಲ್ಲಿ ತೂಕ, ಎತ್ತರ, ಹಿಮೋಗ್ಲೋಬಿನ್ ಮಟ್ಟಗಳು, ರಕ್ತದೊತ್ತಡ, ರಕ್ತದ ಸಕ್ಕರೆ ಮತ್ತು ಕೆಮ್ಮು, ಜ್ವರ, ಚರ್ಮರೋಗಗಳು ಮತ್ತಿತರೆ ಸಮಸ್ಯೆಗಳನ್ನು ಪರೀಕ್ಷಿಸಲಾಗುತ್ತದೆ. ಅಗತ್ಯ ಔಷಧಗಳನ್ನು ರೋಗ ನಿರ್ಣಯ ಆಧರಿಸಿ ಪೂರೈಸಲಾಗುತ್ತದೆ ಮತ್ತು ಪ್ರತಿ ರಕ್ತಹೀನತೆಯ ರೋಗಿಯು ರಕ್ತಹೀನತೆಯ ಅರಿವಿನ ಕಾರ್ಯಕ್ರಮದ ಅಂಗವಾಗಿ 30 ದಿನಗಳ ಮಾತ್ರೆಗಳನ್ನು ಪಡೆಯುತ್ತಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ಸಂಸ್ಥಾಪಕ, ಎಂ.ಡಿ. ಮತ್ತು ಸಿಇಒ ಸಂಜಯ್ ಅಗರ್ ವಾಲ್, "ಎಯು ಎಸ್.ಎಫ್.ಬಿ.ಯಲ್ಲಿ ನಾವು ದುರ್ಬಲ ಸಮುದಾಯಗಳ ಜೀವನಗಳನ್ನು ಸುಧಾರಿಸಲು ಮತ್ತು ಇಕೊಸಿಸ್ಟಂ ಸದೃಢಗೊಳಿಸಲು ಬದ್ಧರಾಗಿದ್ದೇವೆ. ಗ್ರಾಮೀಣ ಆರೋಗ್ಯ ಪರೀಕ್ಷೆಗಳು ಅತ್ಯಂತ ಮುಖ್ಯವಾಗಿದ್ದು ಜೀವಕಂಟಕವಾದ ರೋಗಗಳಿಗೆ ಸಕಾಲಿಕ ಚಿಕಿತ್ಸೆ ಸಾಧ್ಯವಾಗಿಸುತ್ತದೆ, ಆರೋಗ್ಯಕರ ಜೀವನ ನಡೆಸುವ ಸಾಧ್ಯತೆಗಳನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ. ಈ ಉಪಕ್ರಮವು ಆರೋಗ್ಯ ಪರೀಕ್ಷೆ ಮತ್ತು ಗ್ರಾಮೀಣ ಜನರಲ್ಲಿ ರಕ್ತಹೀನತೆಯ ಅರಿವನ್ನು ಹೆಚ್ಚಿಸುವ ಮೂಲಕ ಪ್ರಾಥಮಿಕ ಆರೋಗ್ಯ ಸೇವೆಗಳನ್ನು ನೇರವಾಗಿ ಅವರ ಮನೆಬಾಗಿಲಿಗೆ ತರುತ್ತದೆ ಮತ್ತು ಭಾರತದ ಆಕಾಂಕ್ಷೆಯ ಜಿಲ್ಲೆಗಳಲ್ಲಿ ಆರೋಗ್ಯಕರ ಜೀವನಶೈಲಿ ಉತ್ತೇಜಿಸುತ್ತದೆ" ಎಂದರು.

# ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಕುಟುಂಬ ಮುಖ್ಯಸ್ಥರಿಂದ ಬೋಧನೆ, ಉತ್ತಮ ವ್ಯಾಪಾರ ವಹಿವಾಟು, ದಾಂಪತ್ಯದಲ್ಲಿ ಪ್ರೀತಿ, ವಿಪರೀತ ಖರ್ಚು

**ವೃಷಭ:** ವಿವಾದಾತ್ಮಕ ವಿಷಯಗಳಿಂದ ದೂರವಿರಿ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಸಹೋದರರಿಂದ ಕಲಹ ಸಾಧ್ಯತೆ

**ಮಿಥುನ:** ಪರರಿಂದ ಮೋಸ, ಮನಸ್ಸಿನಲ್ಲಿ ಗೊಂದಲ, ಮಹಿಳೆಯರಿಗೆ ಶುಭ, ಸಾಲ ಮರುಪಾವತಿ, ವಿವಾಹ ಯೋಗ.

**ಕಟಕ:** ಆದಾಯಕ್ಕಿಂತ ಖರ್ಚು ಜಾಸ್ತಿ, ಋಣ ಭಾದೆ, ಅನಾರೋಗ್ಯ, ದೃಷ್ಟಿ ದೋಷ, ಚಂಚಲ ಮನಸ್ಸು, ಸಂತಾನ ಪ್ರಾಪ್ತಿ.

**ಸಿಂಹ:** ಕಾರ್ಯಕ್ಷೇತ್ರದಲ್ಲಿ ಉತ್ತಮ ಫಲ, ಯಾರನ್ನು ಹೆಚ್ಚಾಗಿ ನಂಬಬೇಡಿ, ವೈಯಕ್ತಿಕ ವಿಷಯಗಳ ಕಡೆ ಗಮನ ಕೊಡಿ.

**ಕನ್ಯಾ:** ಬಂಧುಗಳ ಭೇಟಿ, ಲ್ಯಾಂಡ್ ಡೆವಲಪರ್‌ಗಳಿಗೆ ಲಾಭ, ದೂರಾಲೋಚನೆ, ಸಣ್ಣ ಮಾತಿನಿಂದ ಕಲಹ ಎಚ್ಚರ.

**ತುಲಾ:** ನಾನಾ ರೀತಿಯ ಸಂಕಷ್ಟ, ಅವಕಾಶಗಳು ಕೈ ತಪ್ಪುವುದು, ಮನಕ್ಲೇಶ, ಶರೀರದಲ್ಲಿ ತಳಮಳ, ದ್ರವ್ಯ ಲಾಭ.

**ವೃಶ್ಚಿಕ:** ವಿದ್ಯಾರ್ಥಿಗಳಲ್ಲಿ ಉತ್ತಮ ಪ್ರಗತಿ, ದಾಯಾದಿ ಕಲಹ, ಕೋಪ ಜಾಸ್ತಿ, ಕಾರ್ಯ ವಿಕಲ್ಪ, ಆಲಸ್ಯ ಮನೋಭಾವ.

**ಧನಸ್ಸು:** ಅನ್ಯಾಯ ದಬ್ಬಾಳಿಕೆಗಳನ್ನು ವಿರೋಧಿಸುವಿರಿ, ತಾಳ್ಮೆ ಅತ್ಯಗತ್ಯ, ಸ್ನೇಹ ವೃದ್ಧಿ, ಹಿತಶತ್ರು ಭಾದೆ, ಗುರು ಹಿರಿಯರಲ್ಲಿ ಭಕ್ತಿ.

**ಮಕರ:** ಮಾತಿನ ಚಕಮಕಿ, ಹಣದ ವಿಷಯದಲ್ಲಿ ಜಾಗ್ರತೆವಹಿಸಿ, ಭೋಗವಸ್ತು ಖರೀದಿ, ಮಕ್ಕಳಿಂದ ನೋವು.

**ಕುಂಭ:** ವಿನಾಕಾರಣ ದ್ವೇಷ, ಹೊಗಳಿಕೆಗೆ ಮರುಳಾಗದಿರಿ, ಅನಿರೀಕ್ಷಿತ ಧನ ಲಾಭ, ವಾಹನದಿಂದ ತೊಂದರೆ.

**ಮೀನ:** ಕೋಪ ಜಾಸ್ತಿ, ಅಷ್ಟೇ ಬೇಗ ಶಾಂತರಾಗುವಿರಿ, ಮಾತಿನಲ್ಲಿ ಸೋಲುವುದಿಲ್ಲ.

# ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನ




ನಾವು ಪ್ರತಿ ವರ್ಷ ಸೆಪ್ಟೆಂಬರ್ 10 ರಂದು ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನವನ್ನು ಆಚರಿಸುತ್ತೇವೆ. ಇದು ಬೆಳೆಯುತ್ತಿರುವ ಸಮಸ್ಯೆಯಾಗಿದೆ ಮತ್ತು ಸಂಖ್ಯೆಗಳು ಆಘಾತಕಾರಿ ಕಥೆಯನ್ನು ಹೇಳುತ್ತವೆ. ವಿಶ್ವ ಆರೋಗ್ಯ ಸಂಸ್ಥೆ ಪ್ರಕಾರ ಪ್ರತಿ 40 ಸೆಕೆಂಡುಗಳಿಗೆ ಯಾರಾದರೂ ತಮ್ಮ ಪ್ರಾಣವನ್ನು ತೆಗೆದುಕೊಳ್ಳುತ್ತಾರೆ. ಇದು ಪ್ರತಿ ವರ್ಷ ವಿಶ್ವಾದ್ಯಂತ ಸುಮಾರು 800,000 ಜನರು - ಕೆಲವು ಅಂದಾಜುಗಳು ಆ ಸಂಖ್ಯೆಯನ್ನು 1 ಮಿಲಿಯನ್ಗೆ ಹತ್ತಿರವಾಗಿಸಿದೆ.

ನಾವು ಬಿಡುವಿಲ್ಲದ ಜೀವನಶೈಲಿಯನ್ನು ನಡೆಸುತ್ತೇವೆ ಮತ್ತು ಕುಳಿತುಕೊಳ್ಳಲು ಮತ್ತು ವಾಸ್ತವವಾಗಿ ನಮ್ಮ ಆಲೋಚನೆಗಳನ್ನು ಪ್ರಕ್ರಿಯೆಗೊಳಿಸಲು ಸಮಯವನ್ನು ಪಡೆಯುವುದಿಲ್ಲ, ಇದು ಮಾನಸಿಕ ಆರೋಗ್ಯ ಸಮಸ್ಯೆಗಳು ಅಥವಾ ಆಧಾರವಾಗಿರುವ ಸಮಸ್ಯೆಗಳನ್ನು ನಿರ್ಣಯಿಸದೆ ಹೋಗಲು ಒಂದು ಕಾರಣವಾಗಿರಬಹುದು. ವಿಶ್ವ ಆರೋಗ್ಯ ಸಂಸ್ಥೆ ಪ್ರಕಾರ, ಪ್ರತಿ 40 ಸೆಕೆಂಡಿಗೆ ಜಗತ್ತಿನಲ್ಲಿ ಎಲ್ಲೋ ಒಂದು ಕಡೆ ಆತ್ಮಹತ್ಯೆ ಮಾಡಿಕೊಳ್ಳಲಾಗುತ್ತದೆ. ಪ್ರತಿ ವರ್ಷ ಸುಮಾರು 800,000 ಜನರು ಆತ್ಮಹತ್ಯೆಯಿಂದ ಸಾಯುತ್ತಾರೆ. ಇವುಗಳಲ್ಲಿ ಹೆಚ್ಚಿನವು ಅಭಿವೃದ್ಧಿಯಾಗದ ಮತ್ತು ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ಸಂಭವಿಸುತ್ತವೆ. ಈ ಅಂಕಿಅಂಶಗಳು ಆಶ್ಚರ್ಯಕರವಾಗಿದ್ದು, ಆತ್ಮಹತ್ಯೆಯನ್ನು ತಡೆಯಬಹುದಾಗಿದೆ ಎಂದು ಪರಿಗಣಿಸಲಾಗಿದೆ. ರೋಗನಿರ್ಣಯ ಮಾಡದ ಮತ್ತು ಚಿಕಿತ್ಸೆ ಪಡೆಯದ ಮಾನಸಿಕ ಅಸ್ವಸ್ಥತೆಯು ಆತ್ಮಹತ್ಯೆಯ ಹಿಂದಿನ ದೊಡ್ಡ ಕಾರಣವಾಗಿದೆ.

ಆತ್ಮಹತ್ಯಾ ತಡೆಗಟ್ಟುವಿಕೆಗಾಗಿ ಇಂಟರ್ನ್ಯಾಷನಲ್ ಅಸೋಸಿಯೇಷನ್ 2003 ರಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವಿಕೆ ದಿನವನ್ನು ಪ್ರಾರಂಭಿಸಿತು. ಈ ದಿನವನ್ನು ಮಾನಸಿಕ ಆರೋಗ್ಯ ಮತ್ತು ವಿಶ್ವ ಆರೋಗ್ಯ ಸಂಸ್ಥೆಗಾಗಿ ವಿಶ್ವ ಒಕ್ಕೂಟವು ಸಹ-ಪ್ರಾಯೋಜಿಸುತ್ತದೆ. ಆತ್ಮಹತ್ಯಾ ನಡವಳಿಕೆಯ ಕುರಿತು ಸಂಶೋಧನೆ ಮತ್ತು ಡೇಟಾವನ್ನು ಸಂಗ್ರಹಿಸುವುದು, ವಿವಿಧ ಕಾರಣಗಳು ಮತ್ತು ಅದರ ಚಿಹ್ನೆಗಳು ಏಕೆ ಗಮನಕ್ಕೆ ಬರುವುದಿಲ್ಲ ಎಂಬುದನ್ನು ನಿರ್ಧರಿಸುವುದು ಮತ್ತು ಆತ್ಮಹತ್ಯೆ ತಡೆಗಟ್ಟುವಿಕೆಗಾಗಿ ಉತ್ತಮ ಅಭ್ಯಾಸಗಳು ಮತ್ತು ನೀತಿಗಳನ್ನು ಅಭಿವೃದ್ಧಿಪಡಿಸುವುದು ದಿನದ ಗುರಿಯಾಗಿದೆ. ತ್ತಿರುವವರ ಎಚ್ಚರಿಕೆಯ ಚಿಹ್ನೆಗಳನ್ನು ಹೇಗೆ ಗುರುತಿಸುವುದು ಮತ್ತು ತಡವಾಗುವ ಮೊದಲು ಅವರನ್ನು ತಲುಪುವುದು ಹೇಗೆ ಎಂದು ಸಾರ್ವಜನಿಕರಿಗೆ ತಿಳಿಸುವ ಮೂಲಕ ಜಾಗೃತಿ ಮೂಡಿಸಲು ವಿಶ್ವ ಆರೋಗ್ಯ ಸಂಸ್ಥೆ ಬಯಸಿದೆ. ಉಪಕ್ರಮವು ತುಂಬಾ ಉತ್ತಮವಾಗಿ ಕಾರ್ಯನಿರ್ವಹಿಸಿದ ಕಾರಣ, ವಿಶ್ವ ಆರೋಗ್ಯ ಸಂಸ್ಥೆ ತನ್ನ ಎರಡನೇ ವರ್ಷದಿಂದ ಅದರೊಂದಿಗೆ ಪಾಲುದಾರಿಕೆ ಹೊಂದಿದೆ.

ಸಂಜೆ ಮುಗಿಲು
ಮಂಗಳವಾರ
10.9.2024



# ರಾಜ್ಘಾಟ್‌ನಲ್ಲಿ ಅಮಲ್ತಾಸ್ ಸಸಿ ನೆಟ್ಟ ಅಬುದಾಬಿಯ ಯುವರಾಜ

**ನವದೆಹಲಿ:** ಅಬುಧಾಬಿಯ ಯುವರಾಜ ಶೇಖ್ ಖಲೀದ್ ಬಿನ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರು ಸೋಮವಾರ ರಾಜ್ಘಾಟ್‌ನಲ್ಲಿ ಅಮಲ್ತಾಸ್ ಸಸಿಯನ್ನು ನೆಟ್ಟು ಗಮನಸೆಳೆದರು. ಇದು ಭಾರತ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) ನಡುವಿನ ಸಂಬಂಧದಲ್ಲಿ ವಿಶಿಷ್ಟ ಪರಂಪರೆಗೆ ನಾಂದಿಯಾಯಿತು ಎಂದು ವಿಶ್ಲೇಷಿಸಲಾಗುತ್ತಿದೆ.

ಒಂದು ದೇಶದ ಮೂರು ತಲೆಮಾರಿನ ನಾಯಕರು ಮಹಾತ್ಮ ಗಾಂಧಿಯವರ ಪರಂಪರೆಯನ್ನು ಗೌರವಿಸುವ ಸ್ಥಳದಲ್ಲಿ ಮರಗಳನ್ನು ನೆಟ್ಟಿರುವುದು ಇದೇ ಮೊದಲು ಎಂಬುವುದು ಗಮನಾರ್ಹ. ಸಸಿ ನೆಡುವ ಮೂಲಕ ಭಾರತ ಮತ್ತು ಯುಎಇ ಉಭಯ ಸಂಬಂಧವನ್ನು ಹಂಚಿಕೊಳ್ಳುತ್ತವೆ, ಆ ಮೂಲಕ ಸುಸ್ಥಿರತೆಯ ಪಾಲುದಾರಿಕೆಯು ಪ್ರಮುಖ ಆಧಾರಸ್ತಂಭವಾಗಿದೆ. ನವದೆಹಲಿಯ ರಾಜ್ಘಾಟ್‌ನಲ್ಲಿ ಯುಎಇ ನಾಯಕರು ಸಸಿ ನೆಡುವ ವಿಶಿಷ್ಟ ಸಂಪ್ರದಾಯದ ಮೂಲಕ ಈ ವಿಶೇಷ ಬಾಂಧವ್ಯವನ್ನು ಎತ್ತಿ ತೋರಿಸಲಾಗಿದೆ ಎಂದು ರಾಜತಾಂತ್ರಿಕ ಮೂಲಗಳು ಅಭಿಪ್ರಾಯಪಟ್ಟಿವೆ.



# ಮಕ್ಕಳಿಗೆ ಲೈಂಗಿಕ ಕಿರುಕುಳ: 2,000 ಪೊಲೀಸರಿಂದ ಪಾದ್ರಿ ಬಂಧನ!

**ದಕ್ಷಿಣ ಪಿಲಿಪ್ಪೀನ್ಸ್:** ಮಕ್ಕಳಿಗೆ ಲೈಂಗಿಕ ಕಿರುಕುಳ ಕೊಡುತ್ತಿದ್ದ ದಕ್ಷಿಣ ಪಿಲಿಪ್ಪೀನ್ಸ್‌ನ ಪಾದ್ರಿ ಅಪೊಲೊ ಕ್ವಿಬೊಲೊಯ್ನನ್ನು ಬಂಧಿಸಲಾಗಿದೆ. ತನ್ನನ್ನು ತಾನು ಬ್ರಹ್ಮಾಂಡದ ಮಾಲಕ ಎನ್ನುತ್ತಿದ್ದ ಈತನ ವಿರುದ್ಧ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪ ಕೇಳಿ ಬಂದಿತ್ತು. ಸ್ವಯಂಘೋಷಿತ ದೇವಮಾನವ, ''ದೇವರೇ ನೇಮಕ ಮಾಡಿಕೊಂಡ ಮಗ' ಎಂದು ಹೇಳಿಕೊಂಡಿದ್ದ. 2,000 ಪೊಲೀಸರನ್ನು ನಿಯೋಜಿಸಿ 2 ವಾರಗಳ ಕಾಲ ಶೋಧ ಕಾರ್ಯ ನಡೆಸಲಾಗಿತ್ತು. ಸುಮಾರು 200 ದೇಶಗಳಲ್ಲಿ ಕೋಟ್ಯಾಂತರ ಹಿಂಬಾಲಕರನ್ನು ಹೊಂದಿರುವ ಈ ಪಾದ್ರಿ ಪಿಲಿಪೀನ್ಸ್ ಮಾಜಿ ಅಧ್ಯಕ್ಷ ರೊಡ್ರಿಗೊ ಡುಟರ್ಟ್‌ನ ಆಪ್ತನಾಗಿದ್ದಾನೆ.



# ಅಫ್ಘಾನ್‌ನಿಂದ ಅಮೆರಿಕ ಪಡೆಗಳ ವಾಪಸಾತಿ ಸಂದರ್ಭದ ಗೊಂದಲಕ್ಕೆ ಬೈಡನ್ ಹೊಣೆ

**ವಾಷಿಂಗ್ಟನ್:** 2021ರಲ್ಲಿ ಅಫ್ಘಾನಿಸ್ತಾನದಿಂದ ಅಮೆರಿಕದ ನಿರ್ಗಮನದ ಸಂದರ್ಭದ ಗೊಂದಲ, ಗಡಿಬಿಡಿ, ಅವ್ಯವಸ್ಥೆಗೆ ಅಧ್ಯಕ್ಷ ಬೈಡನ್‌ರನ್ನು ದೂಷಿಸಬೇಕು. ಅವರು ಮಿಲಿಟರಿ ನೀಡಿದ್ದ ಸಲಹೆಯನ್ನು ಕಡೆಗಣಿಸಿದ್ದರು ಎಂದು ಅಮೆರಿಕದ ವಿದೇಶಾಂಗ ವ್ಯವಹಾರಗಳ ಸಮಿತಿಯ ವರದಿ ಹೇಳಿದೆ. ಅಫ್ಘಾನಿಸ್ತಾನದಿಂದ ಹಿಂದೆ ಸರಿಯುವ ಗಡುವು ಸಮೀಪಿಸುತ್ತಿದ್ದಂತೆಯೇ ಗೊಂದಲ, ಗಡಿಬಿಡಿಯಲ್ಲಿ ಅಮೆರಿಕದ ಸುಮಾರು 7 ಶತಕೋಟಿ ಡಾಲರ್ ಮೌಲ್ಯದ ಶಸ್ತ್ರಾಸ್ತ್ರಗಳು ಮತ್ತು ಸಲಕರಣೆಗಳನ್ನು ಅಫ್ಘಾನಿಸ್ತಾನದಲ್ಲೇ ಬಿಡಲಾಗಿತ್ತು ಮತ್ತು ಇದು ತಾಲಿಬಾನ್ ಕೈ ಸೇರಿತ್ತು. ಅಫ್ಘಾನಿಸ್ತಾನದಿಂದ ತೆರಳುವ ಧಾವಂತದಲ್ಲಿ ಅಧ್ಯಕ್ಷ ಬೈಡನ್ ಆಡಳಿತವು ಮಿಲಿಟರಿ ಸಲಹೆಗಳನ್ನು ಹಾಗೂ ಅಂತರಾಷ್ಟ್ರೀಯ ಕಳವಳಗಳನ್ನು ಕಡೆಗಣಿಸಿತ್ತು. ಬೈಡನ್ ಆಡಳಿತ ರಾಷ್ಟ್ರೀಯ ಭದ್ರತೆಯ ವಿಷಯಕ್ಕಿಂತ ರಾಜಕೀಯ ಅಜೆಂಡಾಕ್ಕೆ ಆದ್ಯತೆ ನೀಡಿತ್ತು. ಸೇನೆಯ ಉನ್ನತ ಅಧಿಕಾರಿಗಳು ಪಡೆಗಳನ್ನು ಸಂಪೂರ್ಣ ಹಿಂಪಡೆಯದಂತೆ ಎಚ್ಚರಿಕೆ ನೀಡಿದ್ದರು. ಅಫ್ಘಾನಿಸ್ತಾನದಿಂದ ತರಾತುರಿಯಲ್ಲಿ ಸೇನೆ ಹಿಂಪಡೆದಿದ್ದರಿಂದ ಪ್ರಜಾಸತ್ತಾತ್ಮಕವಾಗಿ ಆಯ್ಕೆಗೊಂಡಿದ್ದ ಸರಕಾರವನ್ನು ತಾಲಿಬಾನ್ ಕ್ಷಿಪ್ರವಾಗಿ ಪದಚ್ಯುತಗೊಳಿಸಿತು ಮತ್ತು ಅನೇಕ ಅಮೆರಿಕನ್ನರು ಹಾಗೂ ಮಿತ್ರರಾಷ್ಟ್ರಗಳ ಪ್ರಜೆಗಳನ್ನು ಪ್ರತೀಕಾರಕ್ಕೆ ಗುರಿಯಾಗಿಸಿತು.





# ವಿಮಾ ಪಾಲಿಸಿ, ಕ್ಯಾನ್ಸರ್ ಔಷಧಿಗಳ ಮೇಲಿನ ತೆರಿಗೆ ಕಡಿತ

**ನವದೆಹಲಿ:** ಸೋಮವಾರ ನಡೆಯಲಿರುವ ಜಿಎಸ್ಟಿ ಕೌನ್ಸಿಲ್ ಸಭೆ ಮುಗಿದಿದೆ. ಈ ಸಭೆಯಲ್ಲಿ, ಮುಖ್ಯವಾಗಿ ಎರಡು ವಿಷಯಗಳನ್ನು ಚರ್ಚಿಸಬೇಕಾಗಿತ್ತು. ಆರೋಗ್ಯ ವಿಮೆಯ ಮೇಲಿನ ಜಿಎಸ್ಟಿ ದರಗಳನ್ನು ಕಡಿಮೆ ಮಾಡುವುದು ಮತ್ತು 2000 ರೂ.ಗಿಂತ ಕಡಿಮೆ ಆನ್ಲೈನ್ ವಹಿವಾಟುಗಳಿಗೆ (ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡ್ಗಳು) 18% ಜಿಎಸ್ಟಿ ವಿಧಿಸುವ ಪ್ರಕರಣವಿತ್ತು.

ಪ್ರಸ್ತುತ, ವಿಮಾ ಪ್ರೀಮಿಯಂ ಅಗ್ಗವಾಗುವುದಿಲ್ಲ, ಏಕೆಂದರೆ ಈ ವಿಷಯದ ಬಗ್ಗೆ ಅಂತಿಮ ನಿರ್ಧಾರವನ್ನ ಮುಂದಿನ ಸಭೆಗೆ ಮುಂದೂಡಲಾಗಿದೆ.

ಇದಲ್ಲದೆ, ನಾಮ್ಕೀನ್ ಮೇಲಿನ ಜಿಎಸ್ಟಿ ದರವನ್ನು ಶೇಕಡಾ 18 ರಿಂದ 12 ಕ್ಕೆ ಇಳಿಸಲು ನಿರ್ಧರಿಸಲಾಗಿದೆ. ಅಲ್ಲದೆ, ಕೆಲವು ಕ್ಯಾನ್ಸರ್ ಔಷಧಿಗಳ ಮೇಲಿನ ಜಿಎಸ್ಟಿ ದರಗಳನ್ನು ಕಡಿಮೆ ಮಾಡಲು ಒಪ್ಪಲಾಗಿದೆ. ಸಭೆಯಲ್ಲಿ, ಉತ್ತರಾಖಂಡದ ಹಣಕಾಸು ಸಚಿವರು ತೀರ್ಥಯಾತ್ರೆಯ ಮೇಲಿನ ಜಿಎಸ್ಟಿಯನ್ನು 5% ಕ್ಕೆ ಇಳಿಸಲಾಗಿದೆ ಎಂದು ಹೇಳಿದರು.

**ನಿರ್ಮಲಾ ಸೀತಾರಾಮನ್ ನೇತೃತ್ವದಲ್ಲಿ ಸಭೆ:** ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ, ಆರೋಗ್ಯ ಮತ್ತು ಜೀವ ವಿಮಾ ಪ್ರೀಮಿಯಂ ಮೇಲಿನ ಜಿಎಸ್ಟಿ ದರವನ್ನು ಪ್ರಸ್ತುತ ಶೇಕಡಾ 18 ರಿಂದ ಕಡಿಮೆ ಮಾಡಲು ವ್ಯಾಪಕವಾಗಿ ಒಪ್ಪಲಾಗಿದೆ. ಆದರೆ, ಜಿಎಸ್ಟಿ ಮಂಡಳಿಯ ಮುಂದಿನ ಸಭೆಯಲ್ಲಿ ಈ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು. ಜಿಎಸ್ಟಿ ಮಂಡಳಿಯ ಮುಂದಿನ ಸಭೆಯಲ್ಲಿ ವಿಧಾನಗಳನ್ನು ನಿರ್ಧರಿಸಲಾಗುವುದು. ಆದ್ದರಿಂದ, ವಿಮಾ ಪ್ರೀಮಿಯಂಗಳ ಮೇಲೆ ಜಿಎಸ್ಟಿ ವಿಧಿಸುವ ನಿರ್ಧಾರವನ್ನು ಕೌನ್ಸಿಲ್ ಸಭೆಯಲ್ಲಿ ಮುಂದೂಡಲಾಗಿದೆ.

ಪಕ್ಷವು ಸೆಪ್ಟೆಂಬರ್ 23 ರಂದು ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 60 ವರ್ಷಕ್ಕಿಂತ ಮೇಲ್ಪಟ್ಟ ವೃದ್ಧ ಮಹಿಳೆಯರಿಗೆ ಉಚಿತ ಆರೋಗ್ಯ ಶಿಬಿರಗಳನ್ನು ನಡೆಸಲಿದೆ. ಸಂಸದರು, ಶಾಸಕರು, ಎಂಎಲ್ಸಿಗಳು, ಇತರ ಚುನಾಯಿತ ಪ್ರತಿನಿಧಿಗಳು, ವಿವಿಧ ಮಂಡಳಿಗಳು ಮತ್ತು ನಿಗಮಗಳ ಅಧ್ಯಕ್ಷರು ಈ ಆರೋಗ್ಯ ಶಿಬಿರಗಳನ್ನು ಆಯೋಜಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಂದು ಅದು ಹೇಳಿದೆ.

# ಕಮಲಾ ಹ್ಯಾರಿಸ್ ಆಹ್ವಾನದ ಮೇರೆಗೆ ಕುಟುಂಬ ಸಮೇತ ಅಮೆರಿಕಗೆ ಹೋದ ಡಿಕೆ ಶಿವಕುಮಾರ್



**ಅಮೆರಿಕಾ:** 2024ರ ಅಮೆರಿಕಾ ಅಧ್ಯಕ್ಷೀಯ ಚುನಾವಣೆ ರಂಗೇರಿದೆ. ಜೋ ಬೈಡನ್ ಬಳಿಕ ಅವರ ಸ್ಥಾನಕ್ಕೆ ಯಾರು ಬರ್ತಾರೆ ಎಂಬ ಕುತೂಹಲ ಮನೆ ಮಾಡಿದೆ. ಒಂದು ಕಡೆ ಕಮಲಾ ಹ್ಯಾರಿಸ್ ಇದ್ರೆ ಮತ್ತೊಂದು ಕಡೆ ಡೊನಾಲ್ಡ್ ಟ್ರಂಪ್ ಅಧ್ಯಕ್ಷ ಸ್ಥಾನಕ್ಕೆ ಫೈಪೋಟಿ ನೀಡಿದ್ದಾರೆ. ಈ ಮಧ್ಯೆ ಕಮಲಾ ಹ್ಯಾರಿಸ್ ಆಹ್ವಾನದ ಮೇರೆಗೆ ಡಿಕೆ ಶಿವಕುಮಾರ್ ಕುಟುಂಬ ಸಮೇತ ಅಮೆರಿಕಾಗೆ ತೆರಳಿದ್ದಾರೆ.

ಅಮೆರಿಕ ಅಧ್ಯಕ್ಷ ಚುನಾವಣೆ ಅಭ್ಯರ್ಥಿ ಕಮಲಾ ಹ್ಯಾರಿಸ್ ಜೊತೆ ಡಿಕೆಶಿ ನಂಟು ಹೊಂದಿದ್ದು ಸಾಕಷ್ಟು ಕುತೂಹಲ ಮೂಡಿಸಿದೆ. ಸಿಎಂ ವಿರುದ್ಧ ಮುಡಾ ಕೇಸ್ ಪ್ರಾಸಿಕ್ಯೂಷನ್ ಶುರುವಾಗಿದ್ದೇ ಆಗಿದ್ದು, ರಾಜ್ಯ ಹಸ್ತಪಾಳಯದಲ್ಲಿ ಸಂಚಲನಕಾರಿ ಬೆಳವಣಿಗೆಗಳು ನಡೀತಾ ಇವೆ. ಪರಮೇಶ್ವರ್, ಸತೀಶ್ ಜಾರಕಿಹೊಳಿ, ಎಂ.ಬಿ ಪಾಟೀಲ್ ಸೇರಿದಂತೆ ಕೆಲವು ಘಟಾನುಘಟಿಗಳು ಸಿಎಂ ಕುರ್ಚಿಗಾಗಿ ಕಾಯ್ತಿದ್ದಾರೆ. ಆದರೆ ಇದ್ಯಾವುದರ ಟೆನ್ಷನ್ ಇಲ್ಲದೆ ಡಿಕೆಶಿ ವಿದೇಶ ಪ್ರವಾಸದಲ್ಲಿ ಬ್ಯುಸಿಯಾಗಿದ್ದಾರೆ. ನಿನ್ನೆ ಸಂಜೆಯೇ ಕುಟುಂಬ ಸಮೇತ ಅಮೆರಿಕಕ್ಕೆ ಪ್ರಯಾಣ ಬೆಳೆಸಿದ್ದಾರೆ. ಅದಕ್ಕೂ ಮೊದಲು ಮಧ್ಯಾಹ್ನ ಕಾವೇರಿ ನಿವಾಸದಲ್ಲಿ ಸಿಎಂ ಸಿದ್ದರಾಮಯ್ಯ ಭೇಟಿ ಮಾಡಿ, ಪ್ರವಾಸದ ಬಗ್ಗೆ ಮಾಹಿತಿ ನೀಡಿದ್ರು.

ಅರ್ಧ ಗಂಟೆಗೂ ಹೆಚ್ಚು ಸಮಯ ಮಾತುಕತೆ ನಡೆಸಿದ್ರು. ಸಿಎಂ ಕುರ್ಚಿಗಾಗಿ ಕೆಲವರು ಲಾಬಿ ನಡೆಸ್ತಿರೋ ಬಗ್ಗೆಯೂ ಗಂಭೀರ ಮಾತುಕತೆ ನಡೆದಿದೆ ಎನ್ನಲಾಗುತ್ತಿದೆ.



# ಮೋದಿ ಹುಟ್ಟುಹಬ್ಬಕ್ಕೆ ವಿವಿಧ ಸೇವಾ ಕಾರ್ಯಕ್ರಮ ಹಮ್ಮಿಕೊಂಡ ಬಿಜೆಪಿ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿಯವರ 74ನೇ ಹುಟ್ಟುಹಬ್ಬದ ಅಂಗವಾಗಿ ಸೆಪ್ಟೆಂಬರ್ 17ರಂದು 'ಸೇವಾ ಪಖ್ವಾರ' ಆರಂಭಿಸುವ ಮೂಲಕ ಬಿಜೆಪಿ ದೇಶಾದ್ಯಂತ ವಿವಿಧ ಕಲ್ಯಾಣ ಚಟುವಟಿಕೆಗಳನ್ನು ಆಯೋಜಿಸಲಿದೆ.

ಸೇವಾ ಪಖ್ವಾರದ ಸಂದರ್ಭದಲ್ಲಿ ಬಿಜೆಪಿ ಸದಸ್ಯರು ರಕ್ತದಾನ ಶಿಬಿರ, ಸ್ವಚ್ಛತಾ ಅಭಿಯಾನ, ಆರೋಗ್ಯ ಸೇರಿದಂತೆ ಹಲವು ಕಲ್ಯಾಣ ಚಟುವಟಿಕೆಗಳನ್ನು ನಡೆಸಲಿದೆ.

ಈ ಬಾರಿಯೂ ಸೆ. 17ರಂದು ಎಲ್ಲ ಜಿಲ್ಲೆಗಳಲ್ಲಿ ರಕ್ತದಾನ ಶಿಬಿರ ಆಯೋಜಿಸುವಂತೆ ಪಕ್ಷದ ಸದಸ್ಯರಿಗೆ ಸೂಚನೆ ನೀಡಿದೆ.

ಸ್ವಚ್ಛತಾ ಅಭಿಯಾನವನ್ನು ಸೆಪ್ಟೆಂಬರ್ 18 ರಿಂದ 24 ರವರೆಗೆ ಎಲ್ಲಾ ಶಾಲೆ ಮತ್ತು ಆಸ್ಪತ್ರೆ ಆವರಣದಲ್ಲಿ ನಡೆಸಬಹುದು. ನಾವು ಶಾಲೆ ಮತ್ತು ಆಸ್ಪತ್ರೆ ಆವರಣಗಳಿಗೆ ಬಣ್ಣ ಬಳಿಯಬಹುದು ಮತ್ತು ಶಾಲೆಗಳು ಮತ್ತು ಆಸ್ಪತ್ರೆಗಳಿಗೆ ಅಗತ್ಯ ವಸ್ತುಗಳು ಮತ್ತು ಉಪಕರಣಗಳನ್ನು ದಾನ ಮಾಡಬಹುದು ಎಂದು ಪಕ್ಷದ ಪತ್ರದಲ್ಲಿ ತಿಳಿಸಲಾಗಿದೆ.



ಪ್ಯಾರಿಸ್ ಪ್ಯಾರಾಲಿಂಪಿಕ್ಸ್-2024 ರ ಭಾಗವಹಿಸಿದ ಎಲ್ಲಾ ಕ್ರೀಡಾಪಟುಗಳಿಗೂ ಅಭಿನಂದನಾ ಕಾರ್ಯಕ್ರಮವನ್ನು ರಾಜ್ಯ ಪ್ರಧಾನ ಕಚೇರಿಯಲ್ಲಿ ಆಯೋಜಿಸಬಹುದು ಮತ್ತು ಕಾರ್ಯಕ್ರಮಕ್ಕೆ ಕ್ರೀಡಾಪಟುಗಳನ್ನು ಆಹ್ವಾನಿಸಬೇಕು. ಆ ಸಂದರ್ಭದಲ್ಲಿ ದಿವ್ಯಾಂಗರಿಗೆ ಸಹಾಯ ಸಾಧನಗಳನ್ನು ದಾನ ಮಾಡಬಹುದು ಎಂದು ಸಲಹೆ ನೀಡಲಾಗಿದೆ.

# ಭಾರತದಲ್ಲಿ ಮಂಕಿಪಾಕ್ಸ್ ಕೇಸ್ ದೃಢ; ಐಸೋಲೇಷನ್ ಸೌಲಭ್ಯ ಸಿದ್ಧತೆಗೆ ಕೇಂದ್ರ ಸೂಚನೆ

**ನವದೆಹಲಿ:** ಭಾರತದಲ್ಲಿ ಮೊದಲ ಮಂಕಿಪಾಕ್ಸ್ ಕೇಸ್ ಪತ್ತೆಯಾಗಿದೆ. ಇತ್ತೀಚೆಗೆ ಆಫ್ರಿಕನ್ ದೇಶದಿಂದ ಭಾರತಕ್ಕೆ ಬಂದಿದ್ದರು ವ್ಯಕ್ತಿಯೊಬ್ಬರಲ್ಲಿ ಮಂಕಿಪಾಕ್ಸ್ ಇದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಸೋಮವಾರ ದೃಢಪಡಿಸಿದೆ. ಭಾನುವಾರ (ಸೆ.8) ಶಂಕಿತ ವ್ಯಕ್ತಿಯಿಂದ ಮಾದರಿಗಳನ್ನು ಸಂಗ್ರಹಿಸಲಾಗಿದೆ. ಮಾದರಿ ಪರೀಕ್ಷೆ ಬಳಿಕ ಮಂಕಿಪಾಕ್ಸ್ ದೃಢಪಟ್ಟಿರುವುದಾಗಿ ಸಚಿವಾಲಯ ತಿಳಿಸಿದೆ. ರೋಗಿಯಲ್ಲಿ ಪಶ್ಚಿಮ ಆಫ್ರಿಕಾದ ಕ್ಲಾಡ್-2ನ ಒಂಟಿಥ ವೈರಸ್ ಇರುವಿಕೆಯನ್ನು ಪ್ರಯೋಗಾಲಯ ಪರೀಕ್ಷೆ ದೃಢಪಡಿಸಿದೆ. ಈ ಹಿನ್ನೆಲೆ ಅವರನ್ನು ಪ್ರತ್ಯೇಕವಾಗಿ ಇಡಲಾಗಿದೆ. ಸೋಂಕಿತ ವ್ಯಕ್ತಿಯ ಗುರುತನ್ನು ಬಹಿರಂಗಪಡಿಸದೆ, ರೋಗಿಯು ಸ್ಥಿರವಾಗಿದ್ದಾರೆ, ಇತರೇ ರೋಗಲಕ್ಷಣಗಳು ಕಂಡುಬಂದಿಲ್ಲ ಎಂದು ತಿಳಿದುಬಂದಿದೆ.

2022ರ ಜುಲೈ ತಿಂಗಳಲ್ಲಿ ಕೇರಳದಲ್ಲಿ 3 ಮಂಕಿಪಾಕ್ಸ್ ಪ್ರಕರಣ ಪತ್ತೆಯಾಗಿತ್ತು. ಗಂಇ (ಯುನೈಟೆಡ್ ಅರಬ್ ಎಮಿರೇಟ್ಸ್)ಯಿಂದ ಬಂದಿದ್ದ ವ್ಯಕ್ತಿಯಲ್ಲಿ ಸೋಂಕು ಕಾಣಿಸಿಕೊಂಡ ನಂತರ ಉಲ್ಬಣಗೊಂಡಿತ್ತು.

**ರಾಜ್ಯಗಳಿಗೆ ಸೂಚನೆ:** ಮೊದಲ ಪ್ರಕರಣದ ವರದಿಯಾದ ಬೆನ್ನಲ್ಲೇ ಎಲ್ಲಾ ರಾಜ್ಯಗಳಿಗೆ ಪತ್ರ ಬರೆದಿರುವ ಕೇಂದ್ರ ಆರೋಗ್ಯ ಸಚಿವಾಲಯ, ಮಂಕಿಪಾಕ್ಸ್ ಬಗ್ಗೆ ಜನಸಾಮಾನ್ಯರಿಗಿರುವ ಅನಗತ್ಯ ಭೀತಿಯನ್ನು ನಿವಾರಿಸುವಂತೆ ಸೂಚನೆ ನೀಡಿದೆ. ಭಾರತದಲ್ಲಿ ಹೊಸದಾಗಿ ಮಂಕಿಪಾಕ್ಸ್ ಪ್ರಕರಣಗಳು ವರದಿಯಾಗಿವೆ. ಸಚಿವಾಲಯವು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ. ಎಲ್ಲಾ ಆಸ್ಪತ್ರೆಗಳಲ್ಲಿನ ಐಸೋಲೇಷನ್ ಸೌಲಭ್ಯ, ತರಬೇತಿ ಪಡೆದ ವೈದ್ಯರು ಇರುವಂತೆ ಮತ್ತು ಚಿಕಿತ್ಸೆಗೆ ಅಗತ್ಯವಿರುವ ಉಪಕರಣಗಳು ಇರುವಂತೆ ನೋಡಿಕೊಳ್ಳಬೇಕು. ಶಂಕಿತರು ಮತ್ತು ಸೋಂಕು ದೃಢಪಟ್ಟವರ ಸಂಪರ್ಕಕ್ಕೆ ಬಂದ ಇತರರನ್ನು ಪತ್ತೆ ಮಾಡುವ ಕೆಲಸವನ್ನು ಮಾಡಬೇಕು ಎಂದು ರಾಜ್ಯಗಳಿಗೆ ಸಚಿವಾಲಯ ಸೂಚನೆ ನೀಡಿದೆ.

# ತಾಂತ್ರಿಕ ದೋಷ ವಾಯುಪಡೆಯ ಹೆಲಿಕಾಪ್ಟರ್ ಗದ್ದೆಯಲ್ಲಿ ತುರ್ತು ಭೂಸ್ಪರ್ಶ

**ಚೆನ್ನೈ:** ತಾಂತ್ರಿಕ ದೋಷದಿಂದಾಗಿ ಐಎಎಫ್‌ನ ತರಬೇತಿ ಹೆಲಿಕಾಪ್ಟರ್ ಚೆನ್ನೈ ಬಳಿಯ ಪೊಪರ್‌ಂದಲ್‌ನ ಗದ್ದೆಯಲ್ಲಿ ತುರ್ತು ಭೂಸ್ಪರ್ಶ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇಬ್ಬರು ಸಿಬ್ಬಂದಿ ಹಾರಾಟ ನಡೆಸುತ್ತಿದ್ದ ಹೆಲಿಕಾಪ್ಟರ್ ಸಲವಕ್ಕಂ ಪೊಲೀಸ್ ಠಾಣಾ ವ್ಯಾಪ್ತಿಯ ಪೊಪರ್ ಂದಲ್ ಪ್ರದೇಶಕ್ಕೆ ಸಮೀಪಿಸಿದಾಗ ಹಠಾತ್ತನೆ ತಾಂತ್ರಿಕ ದೋಷ ಕಾಣಿಸಿಕೊಂಡಿದೆ. ಪರಿಣಾಮವಾಗಿ ಪೈಲಟ್ ಗದ್ದೆಯಲ್ಲಿ ತುರ್ತು ಭೂಸ್ಪರ್ಶ ಮಾಡಬೇಕಾಯಿತು ಎಂದು ಅಧಿಕಾರಿ ತಿಳಿಸಿದ್ದಾರೆ. ಸ್ವಲ್ಪ ಸಮಯದ ನಂತರ ಮತ್ತೊಂದು ಸೇನಾ ಹೆಲಿಕಾಪ್ಟರ್ ಮೂಲಕ ಸಿಬ್ಬಂದಿ ಬಂದು ತಾಂತ್ರಿಕ ದೋಷ ಸರಿಪಡಿಸಿ ಸೇನಾ ನೆಲೆಗೆ ಕೊಂಡೊಯ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅದೃಷ್ಟವಶಾತ್ ತುರ್ತು ಭೂಸ್ಪರ್ಶದ ವೇಳೆ ಯಾವುದೇ ಅನಾಹುತ ಆಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇತ್ತೀಚೆಗೆ ಗುಜರಾತ್‌ನಲ್ಲಿ ಭಾರತೀಯ ಕೋಸ್ಟ್ ಗಾರ್ಡ್ ಹೆಲಿಕಾಪ್ಟರ್ ಸಮುದ್ರದಲ್ಲಿ ತುರ್ತು ಭೂಸ್ಪರ್ಶ ಮಾಡಿದ್ದರ ಪರಿಣಾಮ ಅದರಲ್ಲಿದ್ದ ಇಬ್ಬರು ಪೈಲಟ್‌ಗಳು ಸೇರಿ ಮೂವರು ನಾಪತ್ತೆಯಾಗಿದ್ದರು.

# ಮಹಿಳೆಯರು ಮನೆಯಲ್ಲಿಯೇ ಇರಬೇಕು ಎಂಬುದು ಆರ್‌ಎಸ್‌ಎಸ್ ನಂಬಿಕೆ: ರಾಹುಲ್ ಗಾಂಧಿ

**ವಾಷಿಂಗ್ಟನ್:** ಅಮೆರಿಕದಲ್ಲಿ ಭಾರತೀಯ ವಲಸಿಗರನ್ನು ಉದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಆರ್‌ಎಸ್ ಎಸ್ ಭಾರತವನ್ನು ಒಂದು ಕಲ್ಪನೆ ಎಂದು ನಂಬುತ್ತದೆ, ಭಾರತದಲ್ಲಿ ನಿರುದ್ಯೋಗದ ಬಗ್ಗೆಯೂ ರಾಹುಲ್ ಗಾಂಧಿ ಮಾತನಾಡಿದ್ದಾರೆ ಮತ್ತು ಚೀನಾದೊಂದಿಗೆ ಭಾರತವನ್ನು ಹೋಲಿಕೆ ಮಾಡಿದ್ದಾರೆ.

ಅಮೆರಿಕದ ಡಲ್ಲಾಸ್‌ನಲ್ಲಿ ಸಾರ್ವಜನಿಕ ಭಾಷಣದಲ್ಲಿ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಬಿಜೆಪಿ ಮತ್ತು ಆರ್ ಎಸ್‌ಎಸ್ ವಿರುದ್ಧ ಹರಿಹಾಯ್ದಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಟೆಕ್ಸಾಸ್ ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳು ಮತ್ತು ಭಾರತೀಯ ವಲಸಿಗರ ಸದಸ್ಯರನ್ನು ಉದ್ದೇಶಿಸಿ ಮಾಡಿದ ಸಂವಾದದಲ್ಲಿ ವಾಗ್ದಾಳಿ ನಡೆಸಿದ್ದಾರೆ.



ಬಿಜೆಪಿ ಅಥವಾ ಆರ್‌ಎಸ್‌ಎಸ್ ಮಹಿಳೆಯರು ನಿರ್ದಿಷ್ಟ ವಲಯಕ್ಕೆ ಮಾತ್ರಕ್ಕೆ ಸೀಮಿತವಾಗಿರಬೇಕು, ಅವರು ಮನೆಯಲ್ಲಿಯೇ ಇರಬೇಕು, ಅಡುಗೆ ಮಾಡಬೇಕು, ಅವರು ಹೆಚ್ಚು ಮಾತನಾಡಬಾರದು ಎಂದು ನಂಬುತ್ತಾರೆ. ಮಹಿಳೆಯರು ಏನು ಮಾಡಲು ಬಯಸುತ್ತಾರೆಯೋ ಅದನ್ನು ಮಾಡಲು ಅವರಿಗೆ ಅವಕಾಶ ನೀಡಬೇಕು ಎಂದು ನಾವು ನಂಬುತ್ತೇವೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ಭಾರತವು ಒಂದು ಕಲ್ಪನೆ ಎಂದು ಆರ್‌ಎಸ್‌ಎಸ್ ನಂಬುತ್ತದೆ. ಭಾರತವು ಅನೇಕ ವಿಚಾರಗಳೆಂದು ನಾವು ನಂಬುತ್ತೇವೆ. ಪ್ರತಿಯೊಬ್ಬರಿಗೂ ಭಾಗವಹಿಸಲು ಅವಕಾಶ ನೀಡಬೇಕು, ಕನಸು ಕಾಣಲು ಅವಕಾಶ ನೀಡಬೇಕು ಮತ್ತು ಅವರ ಜಾತಿ, ಭಾಷೆ, ಧರ್ಮ, ಸಂಪ್ರದಾಯ ಅಥವಾ ಇತಿಹಾಸವನ್ನು ಲೆಕ್ಕಿಸದೆ ಜಾಗವನ್ನು ನೀಡಬೇಕು ಎಂದು ನಾವು ನಂಬುತ್ತೇವೆ ಎಂದರು.

# ಇಸ್ರೇಲ್ ದಾಳಿಯಲ್ಲಿ 14 ಮಂದಿ ಬಲಿ

**ದಮಾಸ್ಕಸ್:** ರವಿವಾರ ರಾತ್ರಿ ಹಮಾ ಪ್ರಾಂತದಲ್ಲಿ ಇಸ್ರೇಲ್ನ ವೈಮಾನಿಕ ದಾಳಿಯಲ್ಲಿ 14 ಮಂದಿ ಸಾವನ್ನಪ್ಪಿದ್ದು ಇತರ 43 ಮಂದಿ ಗಾಯಗೊಂಡಿದ್ದಾರೆ. 8 ಗಾಯಾಳುಗಳ ಸ್ಥಿತಿ ಗಂಭೀರವಾಗಿದೆ ಎಂದು ಸಿರಿಯಾ ಸರಕಾರಿ ಸ್ವಾಮ್ಯದ ಸುದ್ದಿಸಂಸ್ಥೆ 'ಸನಾ' ಸೋಮವಾರ ವರದಿ ಮಾಡಿದೆ.



ರವಿವಾರ ರಾತ್ರಿಯಿಂದ ನಡೆದ ಇಸ್ರೇಲ್ನ 'ಕ್ರಿಮಿನಲ್' ದಾಳಿಯಲ್ಲಿ 18 ಮಂದಿ ಮೃತಪಟ್ಟಿದ್ದು ಇತರ 32 ಮಂದಿ ಗಾಯಗೊಂಡಿದ್ದಾರೆ ಎಂದು ಮಾನವ ಹಕ್ಕುಗಳ ಸಿರಿಯನ್ ವೀಕ್ಷಣಾಲಯದ ವರದಿ ಹೇಳಿದೆ.

ರವಿವಾರ ರಾತ್ರಿ 11.20 ಗಂಟೆಗೆ ಇಸ್ರೇಲ್ ಶತ್ರು ವಾಯವ್ಯ ಲೆಬನಾನ್ ದಿಕ್ಕಿನಿಂದ ಮಧ್ಯ ಸಿರಿಯಾದ ಹಲವಾರು ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿ ಸರಣಿ ಕ್ಷಿಪಣಿ ದಾಳಿ ನಡೆದಿದೆ. ನಮ್ಮ ವಾಯುರಕ್ಷಣಾ ವ್ಯವಸ್ಥೆ ಕೆಲವು ಕ್ಷಿಪಣಿಗಳನ್ನು ಹೊಡೆದುರುಳಿಸಿದೆ. ಹಮಾ ಪ್ರಾಂತದಲ್ಲಿರುವ ವೈಜ್ಞಾನಿಕ ಸಂಶೋಧನಾ ಕೇಂದ್ರದ ಪ್ರದೇಶವನ್ನು ಗುರಿಯಾಗಿಸಿ ನಡೆದ ದಾಳಿಯಲ್ಲಿ ಹಲವು ಕಟ್ಟಡಗಳು ಹಾಗೂ ಮಿಲಿಟರಿ ನೆಲೆಗಳಿಗೆ ಹಾನಿಯಾಗಿದೆ ಎಂದು ಮಿಲಿಟರಿ ಮೂಲಗಳನ್ನು ಉಲ್ಲೇಖಿಸಿ ಸಿರಿಯಾದ ಸನಾ ಸುದ್ದಿಸಂಸ್ಥೆ ವರದಿ ಮಾಡಿದೆ.

ಇರಾನ್ ಪರವಿರುವ ಗುಂಪುಗಳು ಹಾಗೂ ಶಸ್ತ್ರಾಸ್ತ್ರ ಅಭಿವೃದ್ಧಿ ತಜ್ಞರು ಕಾರ್ಯ ನಿರ್ವಹಿಸುತ್ತಿದ್ದ ಕೇಂದ್ರವನ್ನು ಗುರಿಯಾಗಿಸಿ ದಾಳಿ ನಡೆದಿದೆ ಎಂದು ಮತ್ತೊಂದು ವರದಿ ಹೇಳಿದೆ.

# ಓರ್ಝೋನ್ ಮತ್ತು ಓರ್ಝುನ್ ಬ್ರ್ಯಾಂಡ್‌ನ ಅನಧಿಕೃತ ಬಳಕೆ ವಿರುದ್ಧ ತಡೆಯಾಜ್ಞೆ ನೀಡಿದ ದೆಹಲಿ ಹೈಕೋರ್ಟ್

**ನವದೆಹಲಿ:** ಭಾರತದಲ್ಲಿ ಆರ್ಕಿಟೆಕ್ಚರಲ್ ಹಾರ್ಡ್‌ವೇರ್ ಉತ್ಪನ್ನಗಳು ಮತ್ತು ಭದ್ರತಾ ಉತ್ಪನ್ನಗಳನ್ನು ಒದಗಿಸುವ ಪ್ರಮುಖ ಪೂರೈಕೆದಾರರಾದ ಓರ್ಝೋನ್ ಓವರ್ ಸೀಸ್ ಪ್ರೈ. ಲಿಮಿಟೆಡ್ (ಓರ್ಝೋನ್) ದಕ್ಷಿಣ ಭಾರತದಲ್ಲಿ ಅದರಲ್ಲೂ ನಿರ್ದಿಷ್ಟವಾಗಿ ಆಂಧ್ರಪ್ರದೇಶ, ತೆಲಂಗಾಣ, ಕರ್ನಾಟಕ, ಹೈದರಾಬಾದ್ ಮತ್ತು ವಿಶಾಖಪಟ್ಟಣಂನಲ್ಲಿ ಅದರ ಬ್ರಾಂಡ್‌ನ ಅನಧಿಕೃತ ಬಳಕೆಯ ವಿರುದ್ಧವಾಗಿ ತನ್ನ ಟ್ರೇಡ್‌ಮಾರ್ಕ್ ಮತ್ತು ಇತರ ಬೌದ್ಧಿಕ ಆಸ್ತಿ ಹಕ್ಕುಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಕಾನೂನು ಕ್ರಮ ಕೈಗೊಂಡಿದೆ.

ಇತ್ತೀಚೆಗೆ ಕಂಪನಿಯು ತನ್ನ ಟ್ರೇಡ್‌ಮಾರ್ಕ್ ಓರ್ಝೋನ್ ಮತ್ತು ಓರ್ಝುನ್ ಅನ್ನು ಕೆಲವು ಅಸಂಘಟಿತ ಘಟಕಗಳು ಅನಧಿಕೃತವಾಗಿ ಬಳಸುತ್ತಿರುವ ಕುರಿತ ಮಾಹಿತಿಯನ್ನು ತಿಳಿದುಕೊಂಡಿತ್ತು. ಅನಧಿಕೃತ ಟ್ರೇಡ್ ಮಾರ್ಕ್ ಬಳಕೆಯು ಗ್ರಾಹಕರಲ್ಲಿ ಗೊಂದಲ ಉಂಟು ಮಾಡಿತ್ತು ಮತ್ತು ಬ್ರ್ಯಾಂಡ್‌ನ ಖ್ಯಾತಿಗೆ ಹಾನಿಯಾಗುವ ಸಂಭವ ಇತ್ತು. ತನ್ನ ಬ್ರ್ಯಾಂಡ್ ಮೌಲ್ಯವನ್ನು ಭದ್ರಪಡಿಸಿಕೊಳ್ಳಲು ಓರ್ಝೋನ್ ದೆಹಲಿ ಹೈಕೋರ್ಟ್‌ನಲ್ಲಿ ಟ್ರೇಡ್‌ಮಾರ್ಕ್, ವಿನ್ಯಾಸ ಮತ್ತು ಹಕ್ಕುಸ್ವಾಮ್ಯ ಉಲ್ಲಂಘನೆಗಾಗಿ ಕಾನೂನು ಪ್ರಕ್ರಿಯೆಗಳನ್ನು ಪ್ರಾರಂಭಿಸಿದೆ.




ಆಗಸ್ಟ್ 9, 2024ರಂದು ಗೌರವಾನ್ವಿತ ದೆಹಲಿ ಹೈಕೋರ್ಟ್ ಓರ್ಝೋನ್ ಪರವಾಗಿ ಮಧ್ಯಂತರ ಆದೇಶವನ್ನು ನೀಡಿದೆ ಮತ್ತು ಹೈದರಾಬಾದ್ ಮೂಲದ ಎರಡು ಘಟಕಗಳಾದ ಶ್ರೀ ಸಿದ್ಧಿ ವಿನಾಯಕ ಹಾರ್ಡ್‌ವೇರ್ ಸೊಲ್ಯೂಷನ್ಸ್ ಮತ್ತು ಟೈಟನ್ ಹಾರ್ಡ್‌ವೇರ್ ಪ್ರೈ.ಲಿ. ಲಿಮಿಟೆಡ್ ಗೆ 'ಓರ್ಝೋನ್ ಮತ್ತು ಓರ್ಝುನ್' ಟ್ರೇಡ್ ಮಾರ್ಕ್ ಬಳಕೆ ಮಾಡಬಾರದೆಂದು ಆದೇಶಿಸಿದೆ. ಜೊತೆಗೆ ಕಂಪನಿಯ ಅನುಮತಿಯಿಲ್ಲದೆ ಕಂಪನಿಗೆ ಸಂಬಂಧಿಸಿದ ವಸ್ತುಗಳನ್ನು ಬಳಸಬಾರದು ಎಂದು ಸೂಚಿಸಿದೆ.

21.08.2024ರಂದು ಮೇಲೆ ತಿಳಿಸಲಾದ ಎರಡು ಘಟಕಗಳ ಹೈದರಾಬಾದ್ ಮೂಲದ ಕಚೇರಿಯಲ್ಲಿ ಶೋಧ ನಡೆಸಲು ಮತ್ತು ವಶಪಡಿಸಿಕೊಳ್ಳುವ ಕಾರ್ಯಾಚರಣೆ ನಡೆಸಲು ಹೈಕೋರ್ಟ್ ಸ್ಥಳೀಯ ಆಯುಕ್ತರನ್ನು ನೇಮಕ ಗೊಳಿಸಿತ್ತು. ಅಲ್ಲಿಂದ ಓರ್ಝೋನ್ ಬ್ರ್ಯಾಂಡ್ ನ ಉತ್ಪನ್ನಗಳ ದೊಡ್ಡ ಸ್ಟಾಕ್ ಅನ್ನು ಮರು ವಶಕ್ಕೆ ಪಡೆಯಲಾಗಿದೆ ಮತ್ತು ನ್ಯಾಯಾಲಯದ ನಿರ್ದೇಶನಗಳಿಗೆ ಅನುಸಾರವಾಗಿ ಸೀಲ್ ಮಾಡಲಾಗಿದೆ.

ಇನ್ನೊಂದು ಪ್ರಕರಣದಲ್ಲಿ ದಿಲ್ಲಿ ನ್ಯಾಯಾಲಯವು ಹೈದರಾಬಾದ್‌ನ ಕ್ಲಾಸಿಕ್ ಗ್ಲಾಸ್ ಮತ್ತು ಹಾರ್ಡ್‌ವೇರ್ ವಿರುದ್ಧ ಶಾಶ್ವತ ತಡೆಯಾಜ್ಞೆಯನ್ನು ನೀಡಿದ್ದು, ಹಾಡ್ ವೇರ್ ಉತ್ಪನ್ನಗಳಿಗೆ ''ಪ್ಲಸ್ ಓರ್ಝೋನ್'' ಟ್ರೇಡ್ ಮಾರ್ಕ್ ಅನ್ನು ಬಳಸುವುದನ್ನು ನಿಷೇಧಿಸಿದೆ.

ಬ್ರ್ಯಾಂಡ್ ತನ್ನ ಗ್ರಾಹಕರು, ವಿತರಕರು, ಪಾಲುದಾರರನ್ನು ಜಾಗರೂಕರಾಗಿರಲು ಸೂಚಿಸಿದೆ ಮತ್ತು ಅದರ ಟ್ರೇಡ್‌ಮಾರ್ಕ್‌ಗಳನ್ನು ಉಲ್ಲಂಘಿಸುವ ಯಾವುದೇ ಅನುಮಾನಾಸ್ಪದ ಉತ್ಪನ್ನಗಳ ಕುರಿತು ಮಾಹಿತಿ ತಿಳಿದರೆ ತಕ್ಷಣವೇ ವರದಿ ಮಾಡಲು ತಿಳಿಸಿದೆ. ಮುಂದೆ ಎಲ್ಲಾದರೂ ನಕಲಿ ಅಥವಾ ಅನಧಿಕೃತ ಉತ್ಪನ್ನಗಳು ಕಂಡು ಬಂದರೆ ಕೂಡಲೇ ಗ್ರಾಹಕ ಸೇವಾ ತಂಡಕ್ಕೆ customercare@ozone.inಗೆ ಇಮೇಲ್ ಮಾಡುವ ಮೂಲಕ ಅಥವಾ +91 9310012300ಗೆ ಸಂಪರ್ಕಿಸುವ ಮೂಲಕ ತಿಳಿಸಲು ಕೋರಲಾಗಿದೆ.

# ಕಾರ್ಗಿಲ್ ಯುದ್ಧದಲ್ಲಿ ನಡೆದ ದುರಂತದ ಬಗ್ಗೆ ಸತ್ಯ ಒಪ್ಪಿಕೊಂಡ ಪಾಕಿಸ್ತಾನ

**ಇಸ್ಲಾಮಾಬಾದ್:** 1999ರಲ್ಲಿ ಕಾಶ್ಮೀರದ ಕಾರ್ಗಿಲ್ ವಲಯದಲ್ಲಿ ಭಾರತದ ಮೇಲೆ ಕಳ್ಳರ ರೀತಿ ದಾಳಿ ನಡೆಸಿ ಬಳಿಕ ಹೀನಾಯ ಸೋಲು ಕಂಡಿದ್ದ ಪಾಕಿಸ್ತಾನ, ಇದೇ ಮೊದಲ ಬಾರಿಗೆ ಆ ಯುದ್ಧದಲ್ಲಿ ತನ್ನ ಸೇನೆ ಭಾಗಿಯಾಗಿದ್ದರ ಕುರಿತು ಬಹಿರಂಗವಾಗಿ ಒಪ್ಪಿಕೊಂಡಿದೆ.

ಪಾಕಿಸ್ತಾನ ಸೇನೆಯ ಅಂದಾಜು 4000 ಯೋಧರು ಹತರಾದ ಘಟನೆ ಕುರಿತು ಪಾಕ್ ಸರ್ಕಾರವಾಗಲೀ, ಸೇನೆಯಾಗಲೀ ಇದುವರೆಗೂ ಎಲ್ಲಿಯೂ ಬಹಿರಂಗವಾಗಿ ಒಪ್ಪಿಕೊಂಡಿರಲಿಲ್ಲ.

ಘಟನೆ ಹಿಂದೆ ಮುಜಾಹಿದೀನ್ಗಳು ಅಥವಾ ಸ್ವಾತಂತ್ರ್ಯ ಹೋರಾಟಗಾರರ ಪಾತ್ರವಿತ್ತು ಎಂದೇ ಹೇಳಿಕೊಂಡು ಬಂದಿತ್ತು. ಜೊತೆಗೆ ತನ್ನ ಸೇನೆ ಭಾಗಿಯಾಗಿದ್ದರ ಕುರಿತು ಎಲ್ಲಿಯೂ ಒಪ್ಪಿರಲಿಲ್ಲ.

ಆದರೆ ಶನಿವಾರ ಪಾಕ್ ಸೇನಾ ದಿನದ ಅಂಗವಾಗಿ ರಾವಲ್ಪಿಂಡಿಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಪಾಕಿಸ್ತಾನ ಸೇನಾ ಮುಖ್ಯಸ್ಥ ಜ.ಆಸಿಂ ಮುನೀರ್, '1965, 1971 ಅಥವಾ 1999ರ ಕಾರ್ಗಿಲ್ ಯುದ್ಧವಾಗಲಿ. ನಮ್ಮ ಸಾವಿರಾರು ಯೋಧರು ತಮ್ಮ ಜೀವವನ್ನು ಪಾಕಿಸ್ತಾನ ಮತ್ತು ಇಸ್ಲಾಂಗಾಗಿ ಬಲಿದಾನ ನೀಡಿದ್ದಾರೆ' ಎಂದು ಹೇಳುವ ಮೂಲಕ ಕಾರ್ಗಿಲ್ ಯುದ್ಧದಲ್ಲಿ ಪಾಕ್ ಸೇನೆ ಕೂಡಾ ಸಕ್ರಿಯವಾಗಿ ಭಾಗಿಯಾಗಿತ್ತು ಎಂದು ಒಪ್ಪಿಕೊಂಡಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬಿಗ್‌ಬಾಸ್‌ಗೆ ಸುದೀಪ್ ಬರ್ತಾರೆ ಎಂದು ಕಾದು ಕೂತವರಿಗೆ ಶಾಕ್ ಕೊಟ್ಟ ಕಲರ್ಸ್ ಕನ್ನಡ

'ಬಿಗ್ ಬಾಸ್ ಕನ್ನಡ ಸೀಸನ್ 11' ನೋಡಲು ವೀಕ್ಷಕರು ಕಾದು ಕೂತಿದ್ದಾರೆ. ಈ ಬಾರಿ ಯಾರು ಬಿಗ್ ಬಾಸ್ ನಡೆಸಿಕೊಡುತ್ತಾರೆ ಎನ್ನುವ ಕುತೂಹಲ ಅಭಿಮಾನಿಗಳನ್ನು ಬಲವಾಗಿ ಕಾಡುತ್ತಿದೆ. ಕಿಚ್ಚ ಸುದೀಪ್ ಅವರು ಅಡ್ಡಗೋಡೆಯ ಮೇಲೆ ದೀಪ ಇಟ್ಟಂತೆ ಮಾತನಾಡಿದ್ದರು. ಇನ್ನೂ ಮಾತುಕತೆ ನಡೆಯುತ್ತಿದೆ ಎಂದಿದ್ದರು. ಸುದೀಪ್ ಬರುತ್ತಾರೆ ಎಂದು ಕಾದು ಕೂತವರಿಗೆ ಕಲರ್ಸ್ ಕನ್ನಡ ಶಾಕ್ ಕೊಟ್ಟಿದೆ. ಸುದೀಪ್ ಬರೋದು ಅನುಮಾನವಾ ಎನ್ನುವ ಪ್ರಶ್ನೆಯನ್ನು ಹುಟ್ಟುಹಾಕಿದೆ.

ವಾರದ ಹಿಂದೆ 'ಬಿಗ್ ಬಾಸ್ ಕನ್ನಡ ಸೀಸನ್ 11'ರ ಪ್ರೋಮೋ ರಿಲೀಸ್ ಆಗಿತ್ತು. ಈ ಪ್ರೋಮೋದಲ್ಲಿ ಕೇವಲ ಲೋಗೋ ಇತ್ತು. ಅಲ್ಲದೆ, ಹೊಸ ಸೀಸನ್ ಶೀಘ್ರವೇ ಆರಂಭ ಆಗಲಿದೆ ಎಂದು ಬರೆಯಲಾಗಿತ್ತು. #KichchaSudeep ಎಂದು ಬರೆಯುವ ಮೂಲಕ ಎಲ್ಲರಿಗೂ ಸರ್ ಪ್ರೈಸ್ ನೀಡಲಾಗಿತ್ತು. ಸುದೀಪ್ ಈ ಸೀಸನ್‌ನಲ್ಲಿ ಇರುತ್ತಾರೆ ಅನ್ನೋದು ಬಹುತೇಕ ಖಚಿತವಾಯಿತು. ಆದರೆ, ಈಗ ಈ ಹ್ಯಾಶ್ ಟ್ಯಾಗ್ ತೆಗೆಯಲಾಗಿದೆ.

ಬಿಗ್ ಬಾಸ್ ಪ್ರೋಮೋನ ಕಲರ್ಸ್ ಕನ್ನಡ ವಾಹಿನಿ ಇನ್ ಸ್ಟಾಗ್ರಾಮ್‌ನಲ್ಲಿ ಪಿನ್ ಮಾಡಿ ಇಟ್ಟಿದೆ. ಈ ವಿಡಿಯೋಗೆ ಬರೋಬ್ಬರಿ 2 ಲಕ್ಷಕ್ಕೂ ಅಧಿಕ ಲೈಕ್ಸ್ ಸಿಕ್ಕಿದೆ. ಈಗ ಒಂದು ದಿನದ ಹಿಂದೆ ಈ ಪ್ರೋಮೋದ ಕ್ಯಾಪ್ಶನ್ ಎಡಿಟ್ ಮಾಡಲಾಗಿದ್ದು, ಸುದೀಪ್ ಹ್ಯಾಶ್ ಟ್ಯಾಗ್ ಕಾಣೆಯಾಗಿದೆ.






ಸುದೀಪ್ ಅವರು ಬೇರೆ ಬೇರೆ ಸಿನಿಮಾ ಕೆಲಸಗಳಲ್ಲಿ ತೊಡಗಿಕೊಂಡಿದ್ದಾರೆ. ಒಟ್ಟಿಗೆ ಅವರು ಮೂರ್ನಾಲ್ಕು ಸಿನಿಮಾ ಮಾಡುವ ಭರವಸೆ ನೀಡಿದ್ದಾರೆ. ಇಷ್ಟೊಂದು ಸಿನಿಮಾ ಕೆಲಸಗಳು ಇರುವಾಗ ಅವರಿಗೆ ಬಿಗ್ ಬಾಸ್ ನಿರೂಪಣೆ ಮಾಡಲು ಸಾಧ್ಯವಿಲ್ಲ ಎಂದೆನಿಸಿತೋ ಎನ್ನುವ ಪ್ರಶ್ನೆ ಮೂಡಿದೆ. ಈ ಬಗ್ಗೆ ಕಲರ್ಸ್ ಕನ್ನಡ ವಾಹಿನಿಯಿಂದ ಅಧಿಕೃತ ಮಾಹಿತಿ ಸಿಗಲಿ ಎಂದು ಕಾಯುತ್ತಿದ್ದಾರೆ. ಇತ್ತೀಚೆಗೆ ತಮಿಳು ಬಿಗ್ ಬಾಸ್ ಗೆ ಹೊಸ ನಿರೂಪಕನ ಆಗಮನ ಆಗಿದೆ. ಕಮಲ್ ಹಾಸನ್ ಬದಲು ವಿಜಯ್ ಸೇತುಪತಿ ಅವರು ಆಗಮಿಸಿದ್ದಾರೆ.

# ಜಯಂ ರವಿ ವಿಚ್ಛೇದನ

ತಮಿಳಿನ ಖ್ಯಾತ ನಟ ಜಯಂ ರವಿ ಅವರು ಡಿವೋರ್ಸ್ ಪಡೆದುಕೊಂಡಿದ್ದಾರೆ. ಪತ್ನಿ ಆರತಿ ಜೊತೆಗಿನ ಸಂಸಾರಕ್ಕೆ ಅವರು ಅಂತ್ಯ ಹಾಡಿದ್ದಾರೆ. ಜಯಂ ರವಿ ಮತ್ತು ಆರತಿ ನಡುವಿನ ದಾಂಪತ್ಯ ಜೀವನಕ್ಕೆ ಪೂರ್ಣ ವಿರಾಮ ಬಿದ್ದಿದೆ. 15 ವರ್ಷಗಳ ಹಿಂದೆ ಜಯಂ ರವಿ ಮತ್ತು ಆರತಿ ಅವರು ಮದುವೆ ಆಗಿದ್ದರು. ಈ ಜೋಡಿಗೆ ಇಬ್ಬರು ಗಂಡು ಮಕ್ಕಳು ಇದ್ದಾರೆ. ಇಷ್ಟು ವರ್ಷಗಳ ಬಳಿಕ ರವಿ ಮತ್ತು ಆರತಿ ಅವರು ಡಿವೋರ್ಸ್ ಪಡೆದಿದ್ದು ಅವರ ಅಭಿಮಾನಿಗಳಲ್ಲಿ ಅಚ್ಚರಿ ಮೂಡಿಸಿದೆ. ಸೋಶಿಯಲ್ ಮೀಡಿಯಾ ಮೂಲಕ ತಮ್ಮ ವಿಚ್ಛೇದನದ ಸುದ್ದಿಯನ್ನು ಜಯಂ ರವಿ ತಿಳಿಸಿದ್ದಾರೆ.

'ಹಲವು ಅಧ್ಯಾಯಗಳನ್ನು ಹೊಂದಿದ ಪಯಣವೇ ಜೀವನ. ಎಲ್ಲ ಅಧ್ಯಾಯಕ್ಕೂ ಅದರದ್ದೇ ಆದ ಅವಕಾಶ ಮತ್ತು ಸವಾಲುಗಳು ಇವೆ. ನೀವು ನನ್ನ ತೆರೆ ಮೇಲಿನ ಮತ್ತು ತೆರೆ ಹಿಂದಿನ ಜೀವನವನ್ನು ಗಮನಿಸುತ್ತಾ ಬಂದಿದ್ದೀರಿ. ನಾನು ಯಾವಾಗಲೂ ಅಭಿಮಾನಿಗಳು ಮತ್ತು ಮಾಧ್ಯಮದವರ ಜೊತೆ ಪಾರದರ್ಶಕವಾಗಿ ನಡೆದುಕೊಳ್ಳಲು ಪ್ರಯತ್ನಿಸಿದ್ದೇನೆ. ಇಂದು ನಾನು ಭಾರವಾದ ಮನಸ್ಸಿನಿಂದ ವೈಯಕ್ತಿಕ ಜೀವನದ ಈ ವಿಷಯ ತಿಳಿಸುತ್ತಿದ್ದೇನೆ' ಎಂದು ಜಯಂ ರವಿ ಅವರು ತಮ್ಮ ಬರಹ ಆರಂಭಿಸಿದ್ದಾರೆ.



15 ವರ್ಷಗಳ ದಾಂಪತ್ಯ ಜೀವನಕ್ಕೆ ಅಂತ್ಯ ಹಾಡಿದ ನಟ



'ಸಾಕಷ್ಟು ಯೋಚಿಸಿದ ಬಳಿಕ ಆರತಿ ಜೊತೆ ವಿಚ್ಛೇದನ ಪಡೆಯಲು ನಿರ್ಧರಿಸಿದೆ. ಇದು ಅವಸರದಲ್ಲಿ ತೆಗೆದುಕೊಂಡ ನಿರ್ಧಾರ ಎಲ್ಲ. ಎಲ್ಲರ ಒಳಿತಿಗಾಗಿ ಈ ನಿರ್ಧಾರ. ಈ ಕಷ್ಟದ ಸಂದರ್ಭದಲ್ಲಿ ನನ್ನ ಮತ್ತು ನನ್ನ ಕುಟುಂಬದವರ ಖಾಸಗಿತನವನ್ನು ಗೌರವಿಸಬೇಕು ಎಂದು ನಿಮ್ಮಲ್ಲಿ ವಿನಂತಿಸಿಕೊಳ್ಳುತ್ತೇನೆ. ಈ ವಿಚಾರದಲ್ಲಿ ಯಾವುದೇ ಗಾಸಿಪ್ , ವದಂತಿ, ಊಹಾಪೋಹ, ಆರೋಪ ಮಾಡಬೇಡಿ. ಇದು ಖಾಸಗಿಯಾಗಿಯೇ ಇರಲಿ' ಎಂದು ಜಯಂ ರವಿ ಮನವಿ ಮಾಡಿಕೊಂಡಿದ್ದಾರೆ.

'ಅಭಿಮಾನಿಗಳಿಗೆ ಮನರಂಜನೆ ನೀಡುವುದೇ ನನ್ನ ಮೊದಲ ಆದ್ಯತೆ ಆಗಿರುತ್ತದೆ. ನಾನು ಎಂದೆಂದಿಗೂ ನಿಮ್ಮ ಜಯಂ ರವಿ ಆಗಿರುತ್ತೇನೆ. ನಿಮ್ಮ ಬೆಂಬಲವೇ ನನಗೆ ಸರ್ವಸ್ವ. ಈ ಎಲ್ಲ ವರ್ಷಗಳಲ್ಲಿ ನೀವು ನನಗೆ ನೀಡಿದ ಪ್ರೀತಿಗೆ ಚಿರಋಣಿ. ಅರ್ಥ ಮಾಡಿಕೊಂಡು ಬೆಂಬಲ ಮುಂದುವರಿಸಿದ್ದಕ್ಕೆ ಧನ್ಯವಾದಗಳು' ಎಂದು ಜಯಂ ರವಿ ಅವರು ಬರಹ ಪೂರ್ಣಗೊಳಿಸಿದ್ದಾರೆ.

ಹಲವಾರು ಸಿನಿಮಾಗಳಲ್ಲಿ ನಟಿಸಿ ಜಯಂ ರವಿ ಅವರು ಫೇಮಸ್ ಆಗಿದ್ದಾರೆ. ಕಾಲಿವುಡ್ ನಲ್ಲಿ ಬ್ಯುಸಿ ನಟನಾಗಿ ಅವರು ಸಕ್ರಿಯರಾಗಿದ್ದಾರೆ. ಆರತಿ ಜೊತೆ ಅವರು 2009ರಲ್ಲಿ ಮದುವೆ ಆಗಿದ್ದರು. ಇಂದು (ಸೆಪ್ಟೆಂಬರ್ 9) ಅವರು ತಮ್ಮ ವಿಚ್ಛೇದನವ ವಿಚಾರವನ್ನು ಬಹಿರಂಗಪಡಿಸಿದ್ದಾರೆ.

# ಚಂದನ್ ಶೆಟ್ಟಿ ಬಿಡುಗಡೆ ಮಾಡಿದ ಸಿಂಹರೂಪಿಣಿ ಸಿನಿಮಾ ಹಾಡು

ಕನ್ನಡದಲ್ಲಿ ಭಕ್ತಿ ಪ್ರಧಾನ ಸಿನಿಮಾಗಳು ಗಮನ ಸೆಳೆದಿವೆ. ಈಗ ಶ್ರೀ ಮಾರಮ್ಮ ದೇವಿ ಕುರಿತ ಕಥೆ ಇರುವ 'ಸಿಂಹರೂಪಿಣಿ' ಸಿನಿಮಾ ಮೂಡಿಬರುತ್ತಿದೆ. ಚಿತ್ರತಂಡದ ಪ್ಲ್ಯಾನ್ ಪ್ರಕಾರವೇ ನಿಗದಿತ ಸಮಯದಲ್ಲಿ ಈ ಸಿನಿಮಾದ ಶೂಟಿಂಗ್ ಮುಗಿದಿದೆ ಎಂಬುದು ವಿಶೇಷ. ಜೊತೆ ಜೊತೆಯಲ್ಲಿ ಪ್ರಮೋಷನ್ ಮಾಡಲಾಗುತ್ತಿದೆ. ಸದ್ಯಕ್ಕೆ ಡಬ್ಬಿಂಗ್ ಕೆಲಸ ಭರದಿಂದ ಸಾಗುತ್ತಿದೆ. ಲೂಪ್ ಸ್ಟುಡಿಯೋದಲ್ಲಿ ಕೆಲಸ ನಡೆಯುತ್ತಿದೆ. ಈ ಸಿನಿಮಾ ತಂಡದಿಂದ ಗೌರಿ ಗಣೇಶ ಹಬ್ಬದ ಪ್ರಯುಕ್ತ ಹೊಸ ಹಾಡನ್ನು ಬಿಡುಗಡೆ ಮಾಡಲಾಗಿದೆ. ಚಂದನ್ ಶೆಟ್ಟಿ ಅವರು ಈ ಹಾಡನ್ನು ಬಿಡುಗಡೆ ಮಾಡಿಕೊಟ್ಟಿದ್ದಾರೆ.

'ಸಿಂಹರೂಪಿಣಿ' ಚಿತ್ರತಂಡದ ಬಗ್ಗೆ ಹೇಳುವುದಾದರೆ, 'ಕೆಜಿಎಫ್', 'ಸಲಾರ್' ಮುಂತಾದ ಬ್ಲಾಕ್ ಬಸ್ಟರ್ ಸಿನಿಮಾಗಳ ಹಾಡುಗಳಿಗೆ ಸಾಹಿತ್ಯ ಬರೆದು ಜನಮೆಚ್ಚುಗೆ ಗಳಿಸಿದ ಕಿನ್ನಾಳ್ ರಾಜ್ ಅವರು 'ಸಿಂಹರೂಪಿಣಿ' ಸಿನಿಮಾಗೆ ನಿರ್ದೇಶನ ಮಾಡುತ್ತಿದ್ದಾರೆ. ಅವರೇ ಚಿತ್ರಕಥೆ ಮತ್ತು ಸಾಹಿತ್ಯ ಬರೆದಿದ್ದಾರೆ. ಮಾರಮ್ಮ ದೇವಿಯ ಭಕ್ತರಾದ ಕೆ.ಎಂ. ನಂಜುಂಡೇಶ್ವರ ಅವರು ಈ ಸಿನಿಮಾಗೆ ಕಥೆ ಬರೆದಿದ್ದಾರೆ. ಅಲ್ಲದೇ, 'ಶ್ರೀ ಚಕ್ರ ಫಿಲ್ಮ್ಸ್' ಸಂಸ್ಥೆಯ ಮೂಲಕ ಅವರೇ ನಿರ್ಮಾಣ ಕೂಡ ಮಾಡುತ್ತಿದ್ದಾರೆ.

ಇತ್ತೀಚೆಗೆ 'ಸಿಂಹರೂಪಿಣಿ' ಸಿನಿಮಾದ ಪಾತ್ರಗಳ ಪರಿಚಯದ ಮಾಡಿಕೊಂಡುವ ಟೀಸರ್ ರಿಲೀಸ್ ಮಾಡಲಾಗಿತ್ತು. ಇದರ ಬೆನ್ನಲ್ಲೇ ಹೊಸ ಹಾಡು ಬಂದಿದೆ. 'ಮಾ ರುದ್ರಯಾ ರುದ್ರಾಣಿ, ಶ್ರೀ ಮಹಾಲಕ್ಷೀ ಮಾಂಕಾಳಿ, ಜೈ ಜಯದುರ್ಗೆ ಶಿವದೂತೆ ಸರ್ವಶಕ್ತಿಯೇ ಓಂ ಕಾಳಿ..' ಎಂಬ ಸಾಲುಗಳನ್ನು ಹೊಂದಿರುವ ಈ ಹಾಡನ್ನು ಚಂದನ್ ಶೆಟ್ಟಿ ರಿಲೀಸ್ ಮಾಡಿದ್ದಾರೆ.





ರವಿ ಬಸ್ರೂರು, ಸಂತೋಷ್‌ವೆಂಕಿ ಹಾಗೂ ಸಂಗೀತ ನಿರ್ದೇಶಕ ಆಕಾಶ್ ಪರ್ವ ಅವರು ಈ ಹೊಸ ಹಾಡಿಗೆ ಧ್ವನಿಯಾಗಿದ್ದಾರೆ. ಹಾಡನ್ನು ಬಿಡುಗಡೆ ಮಾಡಿದ ಚಂದನ್ ಶೆಟ್ಟಿ ಅವರು ಚಿತ್ರತಂಡಕ್ಕೆ ಶುಭ ಕೋರಿದ್ದಾರೆ. ಈ ಸಿನಿಮಾದ ಆಡಿಯೋ ಹಕ್ಕುಗಳನ್ನು 'ಮಾಲು ನಿಪ್ನಾಳ್ ಮ್ಯೂಸಿಕ್ ಸಂಸ್ಥೆ' ದೊಡ್ಡ ಮೊತ್ತ ನೀಡಿ ಖರೀದಿಸಿದೆ ಎಂದು ಚಿತ್ರತಂಡ ಮಾಹಿತಿ ಹಂಚಿಕೊಂಡಿದೆ. ಈ ಸಿನಿಮಾದಲ್ಲಿ ನಟಿ ಯಶಸ್ವಿನಿ ಅವರು ಮಾರಮ್ಮ ದೇವಿಯಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಅಂಕಿತಾ ಗೌಡ ನಾಯಕಿಯಾಗಿದ್ದಾರೆ. ಯಶ್ ಶೆಟ್ಟಿ, ದಿವ್ಯಾ ಆಲೂರು, ಸುಮನ್, ಪುನೀತ್ ರುದ್ರನಾಗ್, ದಿನಾ, ನೀನಾಸಂ ಅಶ್ವಥ್, ಹರೀಶ್ ರಾಯ್, ತಬಲಾ ನಾಣಿ, ಭಜರಂಗಿ ಪ್ರಸನ್ನ, ದಿನೇಶ್ ಮಂಗಳೂರು, ವಿಜಯ್ ಚೆಂಡೂರು, ಸಾಗರ್, ವರ್ಧನ್ ತೀರ್ಥಹಳ್ಳಿ, ನವಾಜ್, ಮನಮೋಹನ ರೈ, ಲೋಹಿತ್, ಉಮೇಶ್, ಪಿಳ್ಳಪ್ಪ, ವಿಜಯ್ ಬಸ್ರೂರು, ವೇದಾ ಹಾಸನ್, ರಾಧಾ ರಾಮಚಂದ್ರ, ಸುನಂದಾಕಲ್ಬುರ್ಗಿ, ಯುವರಾಜ್, ಗುರುಮೂರ್ತಿ, ವೈಭವ್ ನಾಗರಾಜ್, ಶಶಿಕುಮಾರ್ ಮುಂತಾದ ಕಲಾವಿದರು ಈ ಸಿನಿಮಾದ ಪಾತ್ರವರ್ಗದಲ್ಲಿ ಇದ್ದಾರೆ.

## ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಸರ್ಕಸ್, ಅಲ್ಲಿ ಕೆಲಸ ಮಾಡೋರು

# ಜೋಕರ್ಸ್: ಯಾಸಿರ್ ಅರಾಫತ್

ಬಾಂಗ್ಲಾದೇಶ್ ವಿರುದ್ಧ ಹೀನಾಯವಾಗಿ ಟೆಸ್ಟ್ ಸರಣಿ ಸೋತಿರುವ ಪಾಕಿಸ್ತಾನ್ ತಂಡದ ವಿರುದ್ಧ ಟೀಕಾಸ್ತ್ರಗಳು ಮುಂದುವರೆದಿದೆ. ಅದರಲ್ಲೂ ಕಳಪೆ ತಂಡವನ್ನು ಆಯ್ಕೆ ಮಾಡಿರುವ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ವಿರುದ್ಧ ಮಾಜಿ ಆಟಗಾರ ಯಾಸಿರ್ ಅರಾಫತ್ ಕಿಡಿಕಾರಿದ್ದಾರೆ. ಅದು ಸಹ ಪಿಸಿಬಿ ಯನ್ನು ಸರ್ಕಸ್ ಅಡ್ಡ ಎನ್ನುವ ಮೂಲಕ ಎಂಬುದೇ ಅಚ್ಚರಿ. ಈ ಬಗ್ಗೆ ಮಾತನಾಡಿರುವ ಯಾಸಿರ್ ಅರಾಫತ್, ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ನಿಜವಾಗಿಯೂ ಸರಿಯಾಗಿ ಕೆಲಸ ಮಾಡುತ್ತಿಲ್ಲ. ಒಂದು ಪಂದ್ಯಾವಳಿಗೆ ಸಮಯ ನಿಗದಿ ಹೇಗೆ ಮಾಡಬೇಕೆಂಬುದು ಸಹ ಅವರಿಗೆ ಗೊತ್ತಿಲ್ಲ. ಇನ್ನೆಲ್ಲಿ ಉತ್ತಮ ತಂಡವನ್ನು ಆಯ್ಕೆ ಮಾಡುತ್ತಾರೆ ಎಂದು ಪ್ರಶ್ನಿಸಿದ್ದಾರೆ.

ಬಾಂಗ್ಲಾದೇಶ್ ವಿರುದ್ಧ ತವರಿನಲ್ಲಿ ಪಿಸಿಬಿ ಕಳಪೆ ತಂಡವನ್ನು ಕಣಕ್ಕಿಳಿಸಿತ್ತು. ಇದೀಗ ಇಂಗ್ಲೆಂಡ್ ವಿರುದ್ಧದ ಸರಣಿಗಾಗಿ ಸಜ್ಜಾಗುತ್ತಿದೆ. ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶ ಎಂದರೆ ಪಾಕಿಸ್ತಾನವು ಮುಂದಿನ ವರ್ಷ ಚಾಂಪಿಯನ್ಸ್ ಟ್ರೋಫಿ ಆಡಲಿದೆ. ಆದರೆ ಈಗ ಕೇವಲ ಟೆಸ್ಟ್ ಸರಣಿಗಳನ್ನು ಆಯೋಜಿಸಲಾಗುತ್ತಿದೆ. ಪಿಸಿಬಿ ಏನು ಮಾಡ್ತಿದೆ ಎಂಬುದೇ ಅರ್ಥವಾಗುತ್ತಿಲ್ಲ ಎಂದು ಯಾಸಿರ್ ಅರಾಫತ್ ಹೇಳಿದ್ದಾರೆ. ಇಲ್ಲಿ ಮತ್ತೊಂದು ಇಂಟ್ರೆಸ್ಟಿಂಗ್ ವಿಷಯ ಎಂದರೆ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಸೆಪ್ಟೆಂಬರ್ 12 ರಿಂದ 29 ರವರೆಗೆ ದೇಶೀಯ ಚಾಂಪಿಯನ್ಸ್ ಏಕದಿನ ಕಪ್ ಟೂರ್ನಿಯನ್ನು ಆಯೋಜಿಸುತ್ತಿದೆ. ಆದರೆ ಇದಾದ ಬಳಿಕ ಪಾಕ್ ತಂಡವು ಇಂಗ್ಲೆಂಡ್ ವಿರುದ್ಧ ಟೆಸ್ಟ್ ಸರಣಿ ಆಡಲಿದೆ. ಅಂದರೆ ಇಲ್ಲಿ ಚಾಂಪಿಯನ್ಸ್ ಏಕದಿನ ಕಪ್ ಟೂರ್ನಿಯನ್ನು ಆಯೋಜಿಸುತ್ತಿರುವ ಉದ್ದೇಶವೇನು? ಈ ಟೂರ್ನಿಯ ಬಳಿಕ ಪಾಕಿಸ್ತಾನ್ ತಂಡ ಟೆಸ್ಟ್ ಆಡುತ್ತಿರುವ ಕಾರಣ ಇಲ್ಲಿ ಏಕದಿನ ಟೂರ್ನಿಯ ಆಯೋಜನೆಯ ಅವಶ್ಯಕತೆ ಇದೆಯೇ ಎಂದು ಯಾಸಿರ್ ಅರಾಫತ್ ಪ್ರಶ್ನಿಸಿದ್ದಾರೆ.



ನನ್ನ ಪ್ರಕಾರ, ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಈಗ ಸರ್ಕಸ್ ಆಗಿ ಮಾರ್ಪಟ್ಟಿದೆ. ಅಲ್ಲಿ ಕೆಲಸ ಮಾಡುತ್ತಿರುವವರೆಲ್ಲರೂ ಜೋಕರ್ಸ್. ಹೀಗಾಗಿಯೇ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಗೂ ಮುನ್ನ ದೇಶೀಯ ಏಕದಿನ ಟೂರ್ನಿಯನ್ನು ಆಯೋಜಿಸುತ್ತಿದೆ. ಪಿಸಿಬಿಯ ಈ ನಿರ್ಧಾರಗಳನ್ನು ನೋಡಿದರೆ ನಿಜಕ್ಕೂ ತಮಾಷೆಯೆನಿಸುತ್ತಿದೆ ಎಂದು ಯಾಸಿರ್ ಅರಾಫತ್ ಹೇಳಿದ್ದಾರೆ.

ಪಾಕಿಸ್ತಾನ್ ತಂಡವು ಬಾಂಗ್ಲಾದೇಶ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ 2-0 ಅಂತರದಿಂದ ಸೋಲನುಭವಿಸಿದೆ. ಇದರ ಬೆನ್ನಲ್ಲೇ ಪಾಕ್ ಕ್ರಿಕೆಟ್ ಮಂಡಳಿ ದೇಶೀಯ ಅಂಗಳದಲ್ಲಿ ಚಾಂಪಿಯನ್ಸ್ ಕಪ್ ಏಕದಿನ ಟೂರ್ನಿಯನ್ನು ಆಯೋಜಿಸಲು ಮುಂದಾಗಿದೆ. ಆದರೆ ಈ ಟೂರ್ನಿಯ ಬಳಿಕ ಪಾಕಿಸ್ತಾನ್ ತಂಡ ಮತ್ತೆ ಟೆಸ್ಟ್ ಸರಣಿಗಳನ್ನು ಆಡಲಿದೆ. ಹೀಗಾಗಿಯೇ ಪಿಸಿಬಿಯ ನಿರ್ಧಾರಗಳನ್ನು ಮಾಜಿ ಕ್ರಿಕೆಟಿಗ ಯಾಸಿರ್ ಅರಾಫತ್ ವ್ಯಂಗ್ಯವಾಡಿದ್ದಾರೆ.

# ಆಪರೇಷನ್ ಕಮಲ ಸಕ್ಸಸ್

## ಚಾಮರಾಜನಗರ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನ ಬಿಜೆಪಿ ಪಾಲು

**ಚಾಮರಾಜನಗರ:** ಇಲ್ಲಿನ ನಗರಸಭೆ ಅಧ್ಯಕ್ಷ - ಉಪಾಧ್ಯಕ್ಷ ಚುನಾವಣೆಯಲ್ಲಿ ಬಿಜೆಪಿ ಪ್ಲ್ಯಾನ್ ಸಕ್ಸಸ್ ಆದ ಪರಿಣಾಮ ಗೆಲುವಿನ ಹೊಸ್ತಿಲಲ್ಲಿದ್ದ ಕಾಂಗ್ರೆಸ್ ಮುಗ್ಗರಿಸಿ ಬಿದ್ದು ಬಿಜೆಪಿ ಮತ್ತೊಮ್ಮೆ ಗೆಲುವಿನ ನಗೆ ಬೀರಿದೆ.

31 ಸದಸ್ಯ ಬಲದ ನಗರಸಭೆಯಲ್ಲಿ ಕಾಂಗ್ರೆಸ್ ನ ಮೂವರು ಸದಸ್ಯರು ಗೈರಾದ ಪರಿಣಾಮ ಅನಾಯಾಸವಾಗಿ ಬಿಜೆಪಿ 2ನೇ ಬಾರಿಗೆ ಗದ್ದುಗೆ ಏರಿತು. ಬಿಜೆಪಿಯ ಸುರೇಶ್ ನಾಯಕ್ ಅಧ್ಯಕ್ಷರಾಗಿ ಆಯ್ಕೆಯಾದರೇ ಉಪಾಧ್ಯಕ್ಷರಾಗಿ ಮಮತಾ ಬಾಲಸುಬ್ರಹ್ಮಣ್ಯ ಆಯ್ಕೆಯಾದರು.

ಬಿಜೆಪಿ ಆಪರೇಷನ್ ರಿವರ್ಸ್ ಪ್ಲ್ಯಾನ್ ಮಾಡಲು ಶಾಸಕ ಸಿ.ಪುಟ್ಟರಂಗಶೆಟ್ಟಿ ವಿಫಲರಾದ ಹಿನ್ನಲೆ ಕಾಂಗ್ರೆಸ್ ಪಕ್ಷ ಕೊನೇ ಘಳಿಗೆಯಲ್ಲಿ ಅಧಿಕಾರ ಕಳೆದುಕೊಂಡಿತು. ನಗರಸಭೆಯ 31 ಸದಸ್ಯರು ಹಾಗೂ ಸಂಸದ, ಶಾಸಕರ ಬಲದೊಂದಿಗೆ 33 ಸದಸ್ಯರ ಬಲವನ್ನು ಹೊಂದಿತ್ತು. ಓರ್ವ ಬಿಎಸ್ಪಿ ಸದಸ್ಯ ಹೆಚ್ಚು ಸಭೆಗೆ ಗೈರಾದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಸದಸ್ಯತ್ವ ರದ್ದುಗೊಳಿಸಿದ್ದರು.

32 ಮಂದಿ ಸದಸ್ಯರ ಬಲ ಹೊಂದಿರುವ ನಗರಸಭೆಗೆ ನಡೆದ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯಲ್ಲಿ ಬಿಜೆಪಿಯಿಂದ ಸುರೇಶ್, ಮಮತಾ ಹಾಗೂ ಕಾಂಗ್ರೆಸ್ ಪಕ್ಷದಿಂದ ಆರ್. ಎಂ ರಾಜಪ್ಪ, ಅಬ್ರಾರ್ ಅಹಮದ್ ನಾಮಪತ್ರ ಸಲ್ಲಿಸಿದ್ದರು. ಬಳಿಕ ನಡೆದ ಚುನಾವಣೆಯಲ್ಲಿ ಅಧ್ಯಕ್ಷ-ಉಪಾಧ್ಯಕ್ಷ ಆಯ್ಕೆಯ ಪ್ರಕ್ರಿಯೆಯಲ್ಲಿ ಸದಸ್ಯರು ಕೈ ಎತ್ತುವ ತಮ್ಮ ಮತ ಸೂಚಿಸಿದರು. ನಂತರ ಚುನಾವಣಾಧಿಕಾರಿಯಾಗಿದ್ದ ಉಪವಿಭಾಗಾಧಿಕಾರಿ ಮಹೇಶ್ ಅಧಿಕೃತವಾಗಿ ಘೋಷಣೆ ಮಾಡಿದರು.



ಬಿಜೆಪಿಯ ಸುರೇಶ್ ಹಾಗೂ ಮಮತಾ 15 ಮತಗಳನ್ನು ಪಡೆದು ಅಧ್ಯಕ್ಷ-ಉಪಾಧ್ಯಕ್ಷರಾದರೆ, ಕಾಂಗ್ರೆಸ್ ನಿಂದ ಸ್ಪರ್ಧಿಸಿದ್ದ ಆರ್.ಎಂ ರಾಜಪ್ಪ, ಎಸ್‌ಡಿಪಿಐ ಅಭ್ಯರ್ಥಿ ಅಬ್ರಾರ್ ಅಹಮದ್ ತಲಾ 14 ಮತಗಳನ್ನು ಪಡೆದು ಪರಾಜಿತರಾದರು.

ಮೂವರು ಕಾಂಗ್ರೆಸ್ ಸದಸ್ಯರಾದ ಆರ್.ಪಿ ನಂಜುಂಡಸ್ವಾಮಿ, ನೀಲಮ್ಮ, ಭಾಗ್ಯಮ್ಮ ಸಭೆಗೆ ಗೈರಾಗಿದ್ದು, ಮತ್ತೋರ್ವ ಕಾಂಗ್ರೆಸ್ ಸದಸ್ಯೆ ಚಂದ್ರಕಲಾ ಸಭೆಗೆ ಆಗಮಿಸಿ, ಬಿಜೆಪಿ ಪರವಾಗಿ ಕೈ ಎತ್ತಿದರು. ಬಿಜೆಪಿ ಸದಸ್ಯ ಮಹದೇವಯ್ಯ ಕಾಂಗ್ರೆಸ್ ಪರವಾಗಿ ಕೈ ಎತ್ತುವ ಮೂಲಕ ಕ್ರಾಸ್ ಓಟ್ ಮಾಡಿದರು.

# ಜಮ್ಮು ಕಾಶ್ಮೀರದ ಯುವ ವೇಗಿಗೆ ಟೀಮ್ ಇಂಡಿಯಾದಿಂದ ಬುಲಾವ್

ಜಮ್ಮು ಕಾಶ್ಮೀರದ ಯುವ ವೇಗಿ ಯುಧ್ವೀರ್ ಸಿಂಗ್ ಚರಕ್ ಅವರನ್ನು ಭಾರತ ತಂಡದ ಕ್ಯಾಂಪ್‌ಗೆ ಆಯ್ಕೆ ಮಾಡಲಾಗಿದೆ. ಮುಂಬರುವ ಬಾಂಗ್ಲಾದೇಶ್ ವಿರುದ್ಧದ ಟೆಸ್ಟ್ ಸರಣಿಗೂ ಮುನ್ನ ನೆಟ್ ಬೌಲರ್ ಆಗಿ ಭಾರತ ತಂಡದ ಶಿಬಿರವನ್ನು ಕೂಡಿಕೊಳ್ಳುವಂತೆ ಆಯ್ಕೆ ಸಮಿತಿ ಯುಧ್ವೀರ್‌ಗೆ ತಿಳಿಸಿದೆ.

ಅದರಂತೆ ಸೆಪ್ಟೆಂಬರ್ 12 ರಿಂದ ಆರಂಭವಾಗಲಿರುವ ಟೀಮ್ ಇಂಡಿಯಾ ಶಿಬಿರದಲ್ಲಿ ಜಮ್ಮು ಕಾಶ್ಮೀರದ ವೇಗಿ ಕೂಡ ಕಾಣಿಸಿಕೊಳ್ಳಲಿದ್ದಾರೆ.

ಯುಧ್ವೀರ್ ಸಿಂಗ್ ಚರಕ್ ಅತ್ಯುತ್ತಮ ವೇಗದ ಬೌಲಿಂಗ್ ಮೂಲಕ ಗಮನ ಸೆಳೆಯುತ್ತಿದ್ದಾರೆ. ಇತ್ತೀಚೆಗೆ ನಡೆದ ಬುಚ್ಚಿ ಬಾಬು ಟೂರ್ನಿ, ರಣಜಿ ಟ್ರೋಫಿ, ವಿಜಯ್ ಹಜಾರೆ ಟ್ರೋಫಿ, ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಲ್ಲಿ ಪ್ರಭಾವಶಾಲಿ ಪ್ರದರ್ಶನ ನೀಡಿದ್ದರು. ಹೀಗಾಗಿ ಟೀಮ್ ಇಂಡಿಯಾ ಆಯ್ಕೆ ಸಮಿತಿ ಇದೀಗ ಯುವ ವೇಗಿಯನ್ನು ನೆಟ್ ಬೌಲರ್ ಆಗಿ ಆಯ್ಕೆ ಮಾಡಿಕೊಂಡಿದೆ.



**ಯುಧ್ವೀರ್ ಸಿಂಗ್ ಚರಕ್:** ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡದ ಭಾಗವಾಗಿರುವ ಯುಧ್ವೀರ್ ಕಳೆದ ಸೀಸನ್‌ನಲ್ಲಿ 5 ಪಂದ್ಯಗಳನ್ನಾಡಿದ್ದರು. ಈ ವೇಳೆ 4 ವಿಕೆಟ್ ಕಬಳಿಸಿದ್ದರು. ಇದೇ ವೇಳೆ ಉತ್ತಮ ವೇಗದ ಬೌಲಿಂಗ್‌ನೊಂದಿಗೆ ಗಮನ ಸೆಳೆದಿದ್ದರು. ಇದೀಗ ಯುವ ವೇಗಿಯನ್ನು ನೆಟ್ ಬೌಲರ್ ಆಗಿ ಆಯ್ಕೆ ಮಾಡಲಾಗಿದ್ದು, ಈ ಮೂಲಕ ಅನುಭವಿ ಆಟಗಾರರೊಂದಿಗೆ ಬೆರೆಯಲು ಅವಕಾಶ ಕಲ್ಪಿಸಲಾಗಿದೆ.

**ಭಾರತ-ಬಾಂಗ್ಲಾದೇಶ್ ಟೆಸ್ಟ್ ಸರಣಿ:** ಭಾರತ ಮತ್ತು ಬಾಂಗ್ಲಾದೇಶ್ ನಡುವಣ ಟೆಸ್ಟ್ ಸರಣಿಯು ಸೆಪ್ಟೆಂಬರ್ 19 ರಿಂದ ಶುರುವಾಗಲಿದೆ. ಚೆನ್ನೈನ ಚೆಪಾಕ್ ಮೈದಾನದಲ್ಲಿ ನಡೆಯಲಿರುವ ಮೊದಲ ಟೆಸ್ಟ್ ಪಂದ್ಯಕ್ಕಾಗಿ 16 ಸದಸ್ಯರ ಭಾರತ ತಂಡವನ್ನು ಪ್ರಕಟಿಸಲಾಗಿದೆ. ಈ ತಂಡದಲ್ಲಿ ಹೊಸಮುಖವಾಗಿ ಎಡಗೈ ವೇಗಿ ಯಶ್ ದಯಾಳ್ ಆಯ್ಕೆಯಾಗಿದ್ದು, ಇವರ ಜೊತೆ ಸರ್ಫರಾಝ್ ಖಾನ್ ಹಾಗೂ ಆಕಾಶ್ ದೀಪ್ ಸಹ ತಂಡದಲ್ಲಿ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಹಾಗೆಯೇ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಿಂದ ಹೊರಗುಳಿದಿದ್ದ ವಿರಾಟ್ ಕೊಹ್ಲಿ, ರಿಷಭ್ ಪಂತ್ ಹಾಗೂ ಕೆಎಲ್ ರಾಹುಲ್ ಈ ಸರಣಿಯೊಂದಿಗೆ ಟೆಸ್ಟ್ ಕ್ರಿಕೆಟ್‌ಗೆ ಮರಳಲಿದ್ದಾರೆ.

**ಭಾರತ ಟೆಸ್ಟ್ ತಂಡ:** ರೋಹಿತ್ ಶರ್ಮಾ (ನಾಯಕ), ಯಶಸ್ವಿ ಜೈಸ್ವಾಲ್, ಶುಭ್‌ಮನ್ ಗಿಲ್, ವಿರಾಟ್ ಕೊಹ್ಲಿ, ಸರ್ಫರಾಝ್ ಖಾನ್, ಕೆಎಲ್ ರಾಹುಲ್, ರಿಷಭ್ ಪಂತ್ (ವಿಕೆಟ್ ಕೀಪರ್), ಧ್ರುವ್ ಜುರೆಲ್ (ವಿಕೆಟ್ ಕೀಪರ್), ರವಿಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ, ಕುಲ್ದೀಪ್ ಯಾದವ್, ಅಕ್ಷರ್ ಪಟೇಲ್, ಮೊಹಮ್ಮದ್ ಸಿರಾಜ್, ಜಸ್‌ಪ್ರೀತ್ ಬುಮ್ರಾ , ಆಕಾಶ್ ದೀಪ್ ಮತ್ತು ಯಶ್ ದಯಾಳ್.

## ಈ ವರ್ಷದ ಅಂತ್ಯಕ್ಕಿಲ್ಲ ಯೆಲ್ಲೋ ಲೈನ್ ಮೆಟ್ರೋ

# 14 ದಿನಗಳ ಕಾಲ ಟೆಕ್ನಿಕಲ್ ಟೆಸ್ಟ್

**ಬೆಂಗಳೂರು:** ಬೆಂಗಳೂರು ನಮ್ಮ ಮೆಟ್ರೋ ಯೆಲ್ಲೋ ಲೈನ್ ನಿರ್ಮಾಣ ಕಾರ್ಯಗಳು ಪೂರ್ಣಗೊಂಡಿದ್ದು, ಇಂದಿನಿಂದ 14 ದಿನಗಳ ಕಾಲ ಆರ್‌ಡಿಎಸ್‌ಓ ರೈಲ್ವೆ ಅಧಿಕಾರಗಳಿಂದ ಟೆಕ್ನಿಕಲ್ ಟೆಸ್ಟ್ ಆರಂಭಿಸಿದ್ದಾರೆ.

ಇದಕ್ಕೂ ಮುನ್ನ ಈ ವರ್ಷದ ಅಂತ್ಯದಲ್ಲಿ ಯೆಲ್ಲೋ ಲೈನ್ ಕಾರ್ಯಾರಂಭಿಸುವ ಕುರಿತು ಮಾಹಿತಿ ನೀಡಿದ್ದ ಬಿಎಂಆರ್‌ಸಿಎಲ್, ನಿರೀಕ್ಷೆ ಇಟ್ಟಿದ್ದ ಜನರಲ್ಲಿ ನಿರಾಸೆಯನ್ನುಂಟು ಮಾಡಿದೆ.

ಆರ್‌ವಿ ರಸ್ತೆಯಿಂದ ಬೊಮ್ಮಸಂದ್ರವರೆಗೆ ಹಳದಿ ಮಾರ್ಗದ ನಿರ್ಮಾಣ ಕಾರ್ಯಗಳು ಈಗಾಗಲೇ ಪೂರ್ಣಗೊಂಡಿವೆ. ಆದರೆ ಹಲವಾರು ಟೆಕ್ನಿಕಲ್ ಕೆಲಸಗಳು ಬಾಕಿ ಇರುವ ಕಾರಣ ಇಂದಿನಿಂದ ಸುಮಾರು 14 ದಿನಗಳ ಕಾಲ ಪ್ರಾಯೋಗಿಕ ಟೆಸ್ಟ್ ನಡೆಯಲಿದೆ. ಈಗಾಗಲೇ ಆರ್‌ಡಿಎಸ್‌ಓ ರೈಲ್ವೆ ಆರ್ಗನೈಸೇಷನ್ ಅಧಿಕಾರಿಗಳು ಟೆಕ್ನಿಕಲ್ ಟೆಸ್ಟ್ ಆರಂಭಿಸಿದ್ದಾರೆ.

ಆರ್‌ಡಿಎಸ್‌ಓ ಅಧಿಕಾರಿಗಳು, ಇಂದಿನಿಂದ ರೀಚ್ 5 ಮಾರ್ಗದಲ್ಲಿಬೊಮ್ಮನಹಳ್ಳಿಯಿಂದ ಆರ್‌ವಿ-ರಸ್ತೆ ನಡುವೆ, ಆಸಿಲೇಷನ್ ಮತ್ತುಇಬಿಡಿ ಪ್ರಯೋಗಗಳನ್ನ ಪ್ರಾರಂಭಿಸಿ, ಸುಮಾರು 12-14 ದಿನಗಳವರೆಗೆನಡೆಸಲಾಗುವುದು. ಆರ್ಡಿಎಸ್‌ಓ ಪ್ರಾಯೋಗಿಕ ವರದಿಯನ್ನುಸಲ್ಲಿಸಿದ ನಂತರ ರೈಲ್ವೆ ಮಂಡಳಿಯಿಂದ ತಾಂತ್ರಿಕ ಮಂಜೂರಾತಿಪಡೆಯಲಾಗುವುದು.



ಇದಾದ ಬಳಿಕ ರೈಲ್ವೆ ಮಂಡಳಿಗೆ ಟೆಕ್ನಿಕಲ್ ರಿಪೋರ್ಟ್ ಸಲ್ಲಿಸಬೇಕು. ರಿಪೋರ್ಟ್‌ನ ಪರಿಶೀಲನೆ ನಡೆಸಿ, ಮಂಡಳಿಯು ತಾಂತ್ರಿಕ ಮಂಜೂರಾತಿಯನ್ನು ನೀಡುತ್ತದೆ. ಆ ಮೂಲಕ ಯೆಲ್ಲೋ ಲೈನ್ ಮೆಟ್ರೋ ಆರಂಭದ ಕುರಿತು ಬಿಎಂಆರ್ ಸಿಎಲ್ ತಿಳಿಸುತ್ತದೆ. ಟೆಕ್ನಿಕಲ್ ಕೆಲಸಗಳು ಇರುವ ಕಾರಣ ಮುಂದಿನ ವರ್ಷ 2025 ಜನವರಿ ಅಥವಾ ಫೆಬ್ರವರಿಗೆ ಆರಂಭ ಆಗುವ ಸಾಧ್ಯತೆ ಇದೆ.

**ಯಾವೆಲ್ಲಾ ಟೆಸ್ಟ್‌ಗಳು ನಡೆಯಲಿವೆ?:** ಸ್ಪೀಡ್ ಟೆಸ್ಟ್, ಬ್ರೇಕ್ ಟೆಸ್ಟ್, ಮರಳಿನ ಮೂಟೆಗಳನ್ನು ಹಾಕಿ ತೂಕದ ಟೆಸ್ಟ್, ಹೆಚ್ಚು ತೂಕ ಇದ್ದಾಗ ಸ್ಪೀಡ್ ಟೆಸ್ಟ್, ಕಡಿಮೆ ತೂಕ ಇದ್ದಾಗ ಸ್ಪೀಡ್ ಟೆಸ್ಟ್, ಟೆಕ್ನಿಕಲ್ ತಾಂತ್ರಿಕ ಪ್ರಯೋಗ ಪರೀಕ್ಷೆ , ಮೆಟ್ರೋ ಸ್ಟೇಷನ್ ಬಳಿ ಸ್ಟಾಪ್ ಪ್ರಮಾಣ ಟೆಸ್ಟ್ ನಡೆಯಲಿದೆ

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com